SRIDEVI LAKE VIEW
PREMIUM RESIDENTIAL LAYOUT
OFF T. NARSIPURA ROAD MYSURU
ALLIANCE SQUARE | Safe Wheels | 0821-2541100 www.alliancesquare.com

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಜೂನ್ 12 ಗುರುವಾರ 2025

ಸಂಪುಟ: 46 | ಸಂಚಿಕೆ: 57 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಸ್ಪೆಕ್‌ಟ್ರಾ ಕನ್ವೆನ್ಷನ್ ಸೆಂಟರ್

Hunsur Road, MYSORE
Ph: 0821-2416419 / 95354 91919

ಆಷಾಢ ಶುಕ್ರವಾರ: 2,000 ರೂ. ವಿಶೇಷ ದರ್ಶನ ಪ್ಯಾಕೇಜ್

■ ಜೂ.27, ಜು.4, 11, 18 ಆಷಾಢ ಶುಕ್ರವಾರ ದರ್ಶನ ■ ವಿಶೇಷ ದರ್ಶನಕ್ಕೆ ಎಸಿ ಬಸ್, ಪ್ರತ್ಯೇಕ ಸಾಲು, ಪ್ರಸಾದ, ಗಂಡಭೇರುಂಡ ವಿಗ್ರಹದ ಕಿಟ್ ■ ವಾರಾಂತ್ಯದ ಶುಕ್ರವಾರ, ಶನಿವಾರ, ಭಾನುವಾರದಂದು ಚಾ.ಬೆಟ್ಟಕ್ಕೆ ಖಾಸಗಿ ವಾಹನಗಳ ಪ್ರವೇಶ ನಿರ್ಬಂಧ ■ ಸ್ವಚ್ಛತೆ, ಕುಡಿಯುವ ನೀರು, ಶೌಚಾಲಯ, ವಾಹನ ಪಾರ್ಕಿಂಗ್ ವ್ಯವಸ್ಥೆ ■ ಎಂದಿನಂತೆ ಭಕ್ತರಿಗೆ ಲಲಿತಮಹಲ್ ಹೆಲಿಪ್ಯಾಡ್‌ನಿಂದ ಉಚಿತ ಬಸ್



ಮೈಸೂರು,ಜೂ.11(ಆರ್‌ಕೆ)–ಈ ಬಾರಿ ಆಷಾಢ ಮಾಸದ ಶುಕ್ರವಾರದ ದರ್ಶನದ ಹಿನ್ನೆಲೆಯಲ್ಲಿ ವಾರಾಂತ್ಯದ ಶುಕ್ರವಾರ, ಶನಿವಾರ ಮತ್ತು ಭಾನುವಾರಗಳಂದು ಚಾಮುಂಡಿಬೆಟ್ಟಕ್ಕೆ ಖಾಸಗಿ ವಾಹನಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ.

ಚಾಮುಂಡಿಬೆಟ್ಟದ ಶ್ರೀ ಚಾಮುಂಡೇಶ್ವರಿ ದೇಗುಲದಲ್ಲಿ ಜೂ.27, ಜು.4, 11 ಮತ್ತು 18ರಂದು ದೇವರ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ಜು.17ರಂದು ಶ್ರೀ ಚಾಮುಂಡೇಶ್ವರಿ ಅಮ್ಮನವರ ವರ್ಧಂತ್ಯುತ್ಸವ ನಡೆಯಲಿದ್ದು, ಚಾಮುಂಡೇಶ್ವರಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರ, ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಸಹಯೋಗದಲ್ಲಿ ದೇವರ ದರ್ಶನಕ್ಕೆ ಸರ್ವ ಸಿದ್ಧತೆ ನಡೆಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ತಿಳಿಸಿದ್ದಾರೆ.

ಮೈಸೂರಿನ ಜಿಲ್ಲಾ ಪಂಚಾಯ್ತಿ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಆಷಾಢ ಶುಕ್ರವಾರ ಸಂಬಂಧ ಪೂರ್ವಭಾವಿ ಸಭೆ ನಡೆಸಿದ ಬಳಿಕ ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು, ಚಾಮುಂಡಿಬೆಟ್ಟದಲ್ಲಿ ನೂಕು–ನುಗ್ಗಲನ್ನು ತಡೆಯುವ ಸಲುವಾಗಿ ವಾರಾಂತ್ಯದ ಶುಕ್ರವಾರ, ಶನಿವಾರ ಮತ್ತು ಭಾನುವಾರಗಳಂದು ಚಾಮುಂಡಿಬೆಟ್ಟಕ್ಕೆ ಖಾಸಗಿ ವಾಹನಗಳ ಪ್ರವೇಶ ನಿರ್ಬಂಧಿಸಲಾಗಿದ್ದು, ಲಲಿತಮಹಲ್ ಹೆಲಿಪ್ಯಾಡ್‌ನಿಂದ 2,000 ರೂ. ವಿಶೇಷ ದರ್ಶನದ ಟಿಕೆಟ್ ಪಡೆಯುವ ಭಕ್ತರಿಗಾಗಿ ಪ್ರತ್ಯೇಕ ಎಸಿ ಬಸ್‌ಗಳನ್ನು ವ್ಯವಸ್ಥೆ ಮಾಡಿರುವುದು ಈ ಬಾರಿಯ ವಿಶೇಷವಾಗಿದೆ. ಈ ಪ್ಯಾಕೇಜ್‌ನಲ್ಲಿ ತೆರಳುವ ಭಕ್ತರಿಗೆ ಪ್ರತ್ಯೇಕ ಸರತಿ ಸಾಲಿನಲ್ಲಿ ನಿಂತು ದೇವಿಯ ದರ್ಶನ ಮಾಡಬಹುದಾಗಿದ್ದು, ಅಂತಹ ಭಕ್ತರಿಗೆ ಲಾಡು ಪ್ರಸಾದ, ಗಂಡಭೇರುಂಡ ವಿಗ್ರಹ, ಕುಂಕುಮ, ಕೈ ದಾರವುಳ್ಳ ಕಿಟ್ ಅನ್ನು ನೀಡಲಾಗುವುದು. ಅದೇ ರೀತಿ 300 ರೂಗಳ ಟಿಕೆಟ್ ದರ್ಶನದ ಸರತಿ ಸಾಲು ಹಾಗೂ ಉಚಿತ ದರ್ಶನದ ಸರತಿ ಸಾಲಿನ ವ್ಯವಸ್ಥೆಯೂ ಇರುತ್ತದೆ ಎಂದರು. ಲಲಿತಮಹಲ್ ಮೈದಾನದಲ್ಲಿ 2000 ರೂ. ವಿಶೇಷ ▶ 6ನೇ ಪುಟಕ್ಕೆ

> "ಜೂನ್ 27ರಿಂದ ಜುಲೈ 18ರವರೆಗೆ ನಾಲ್ಕು ಶುಕ್ರವಾರಗಳಂದು ಆಷಾಢ ಮಾಸಾಚರಣೆ ಇರುವುದರಿಂದ ಲಕ್ಷಾಂತರ ಭಕ್ತರು ಅಧಿದೇವತೆ ತಾಯಿ ಶ್ರೀ ಚಾಮುಂಡೇಶ್ವರಿ ಅಮ್ಮನವರ ದರ್ಶನ ಪಡೆಯಲು ಬರುವುದರಿಂದ ಸರ್ವ ರೀತಿಯಲ್ಲಿ ಸಿದ್ಧತೆ ಮಾಡಿಕೊಳ್ಳಲಾಗಿದೆ.
> –ಡಾ.ಹೆಚ್.ಸಿ.ಮಹದೇವಪ್ಪ, ಸಚಿವ



ಕೋವಿಡ್ ಪರಿಸ್ಥಿತಿ ಕುರಿತು ಸಿಎಂ ಸಭೆ

ಬೆಂಗಳೂರು, ಜೂ.11– ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ರಾಜ್ಯದಲ್ಲಿ ಕೋವಿಡ್ ಪರಿಸ್ಥಿತಿ ಕುರಿತು ಸಚಿವರು ಮತ್ತು ಅಧಿಕಾರಿಗಳ ಸಭೆ ನಡೆಸಿ, ಕೋವಿಡ್ ನಿಯಂತ್ರಣಕ್ಕೆ ಕೆಲವು ಸೂಚನೆಗಳನ್ನು ನೀಡಿದರು.



ಕೋವಿಡ್ ಬಗ್ಗೆ ಜನರು ಯಾವುದೇ ಆತಂಕ ಪಡುವ ಅಗತ್ಯವಿಲ್ಲ. ಆದರೂ ಮುಂಜಾಗರೂಕತಾ ಕ್ರಮಗಳನ್ನು ಅನುಸರಿಸಬೇಕು. ರಾಜ್ಯದಲ್ಲಿ ಮೇ ತಿಂಗಳ ಬಳಿಕ ಕೋವಿಡ್ ಪರೀಕ್ಷೆ ಹೆಚ್ಚಿಸಲಾಗಿದೆ. ಈ ತಿಂಗಳು ಪ್ರತಿದಿನ ಸರಾಸರಿ 500 ಪರೀಕ್ಷೆ ನಡೆಸುತ್ತಿದ್ದೇವೆ. ಕಳೆದ 10 ದಿನಗಳಲ್ಲಿ 5 ಸಾವಿರ ಪರೀಕ್ಷೆ ನಡೆಸಲಾಗಿದ್ದು, 862 ಪಾಸಿಟಿವ್ ▶ 6ನೇ ಪುಟಕ್ಕೆ

ಬೆಂಗಳೂರು ಕಾಲ್ತುಳಿತ ಪ್ರಕರಣ

ವಿಚಾರಣೆಗೆ ಹಾಜರಾಗುವಂತೆ ದಯಾನಂದ್‌ಗೆ ನೋಟಿಸ್

ಬೆಂಗಳೂರು: ಚಿನ್ನಸ್ವಾಮಿ ಸ್ಟೇಡಿಯಂ ಬಳಿ ನಡೆದ ಕಾಲ್ತುಳಿತ ಪ್ರಕರಣದ ವಿಚಾರಣೆಗೆ ಹಾಜರಾಗುವಂತೆ ನಿರ್ಗಮಿತ ಪೊಲೀಸ್ ಆಯುಕ್ತ ಬಿ.ದಯಾನಂದ ಅವರಿಗೆ ನೋಟಿಸ್ ಜಾರಿಗೊಳಿಸಲಾಗಿದೆ



ಕಾಲ್ತುಳಿತಕ್ಕೆ ಕಾರಣ ಪತ್ತೆಹಚ್ಚಲು ಮ್ಯಾಜಿಸ್ಟೀರಿಯಲ್ ತನಿಖೆ ನಡೆಸುತ್ತಿರುವ ನಗರ ಜಿಲ್ಲಾಧಿಕಾರಿ ಜಿ.ಜಗದೀಶ್, ಘಟನೆಗೆ ಸಂಬಂಧಿಸಿದಂತೆ ಜೂ.13ರಂದು ವಿಚಾರಣೆಗೆ ಹಾಜರಾಗುವಂತೆ ನಿರ್ಗಮಿತ ಪೊಲೀಸ್ ಆಯುಕ್ತ ದಯಾನಂದ ಅವರಿಗೆ ನೋಟಿಸ್ ಜಾರಿಗೊಳಿಸಿದ್ದಾರೆ. ಅಂದು ಕ್ರೀಡಾಂಗಣದ ಬಳಿಕ ಕೈಗೊಂಡಿದ್ದ ▶ 6ನೇ ಪುಟಕ್ಕೆ

ವಾಲ್ಮೀಕಿ ಹಗರಣ: ಕಾಂಗ್ರೆಸ್ ಸಂಸದ ತುಕಾರಾಂ, ಶಾಸಕರಾದ ಭರತ್‌ರೆಡ್ಡಿ, ನಾಗೇಂದ್ರ, ಕಂಪ್ಲಿ ಗಣೇಶ್, ಎನ್.ಟಿ.ಶ್ರೀನಿವಾಸ್ ಮನೆ, ಕಚೇರಿಗಳ ಮೇಲೆ

ಇಡಿ ದಾಳಿ


ಇ.ತುಕಾರಾಂ


ಭರತ್ ರೆಡ್ಡಿ


ನಾಗೇಂದ್ರ


ಕಂಪ್ಲಿ ಗಣೇಶ್


ಎನ್.ಟಿ.ಶ್ರೀನಿವಾಸ್

ಬೆಂಗಳೂರು, ಜೂ.11–ಮಹರ್ಷಿ ವಾಲ್ಮೀಕಿ ಬುಡಕಟ್ಟು ಕಲ್ಯಾಣ ಮಂಡಳಿ ಹಗರಣಕ್ಕೆ ಸಂಬಂಧಿಸಿದಂತೆ ಬುಧವಾರ ಜಾರಿ ನಿರ್ದೇಶನಾಲಯದ (ಇಡಿ) 60 ಅಧಿಕಾರಿಗಳ ತಂಡ ಬಳ್ಳಾರಿ ಜಿಲ್ಲೆ ಮತ್ತು ಬೆಂಗಳೂರಿನಲ್ಲಿ ನಾಲ್ವರು ಕಾಂಗ್ರೆಸ್ ಶಾಸಕರು ಹಾಗೂ ಓರ್ವ ಸಂಸದನ ಮನೆ ಮತ್ತು ಕಚೇರಿಗಳ ಮೇಲೆ ದಾಳಿ ನಡೆಸಿದೆ.



ಇಂದು ಬೆಳಗ್ಗೆಯೆ ಬಳ್ಳಾರಿಯಲ್ಲಿ ಐದು ಮತ್ತು ಬೆಂಗಳೂರು ನಗರದಲ್ಲಿ ಮೂರು ಸೇರಿ ಎಂಟು ಸ್ಥಳಗಳಲ್ಲಿ ಏಕಕಾಲದಲ್ಲಿ ದಾಳಿ ನಡೆಸಿದ್ದು ಪರಿಶೀಲನೆ ನಡೆಸಿದೆ.

ಇಡಿ ಮೂಲಗಳ ಪ್ರಕಾರ ಪ್ರಸ್ತುತ ಕಾಂಗ್ರೆಸ್ ಬಳ್ಳಾರಿ ಸಂಸದ ಇ.ತುಕಾರಾಂ ಮತ್ತು ಕಾಂಗ್ರೆಸ್ ಶಾಸಕರಾದ ನಾ.ರಾ.ಭರತ್ ರೆಡ್ಡಿ, ನಾಗೇಂದ್ರ, ಕಂಪ್ಲಿ ಗಣೇಶ್ ಮತ್ತು ಎನ್.ಟಿ.ಶ್ರೀನಿವಾಸ್ ಅವರ ನಿವಾಸಗಳು ಮತ್ತು ಕಚೇರಿಗಳ ಮೇಲೆ ದಾಳಿ ನಡೆದಿದೆ. ಇದೇ ವೇಳೆ ಮಾಜಿ ಸಚಿವ ಮತ್ತು ಕಾಂಗ್ರೆಸ್ ಶಾಸಕ ನಾಗೇಂದ್ರ ಅವರ ಬೆಂಗಳೂರಿನ ಕಚೇರಿ ಹಾಗೂ ನಾಗೇಂದ್ರರ ಆಪ್ತ ಸಹಾಯಕ ಗೋವರ್ಧನ್ ನಿವಾಸದ ಮೇಲೂ ದಾಳಿ ನಡೆಸಲಾಗಿದೆ. ಕಾಂಗ್ರೆಸ್ ಬಳ್ಳಾರಿ ನಗರದ ಶಾಸಕ ಭರತ್ ರೆಡ್ಡಿ ಅವರನ್ನು ಅವರ ನಿವಾಸದಲ್ಲಿ ಇಡಿ ಅಧಿಕಾರಿಗಳು ಪ್ರಶ್ನಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ಕಂಪ್ಲಿ ಪಟ್ಟಣದ ಹೊರವಲಯದಲ್ಲಿರುವ ಶಾಸಕ ▶ 6ನೇ ಪುಟಕ್ಕೆ

> "ತಪ್ಪಿತಸ್ಥರು ಯಾರೇ ಆಗಿರಲಿ ಅವರ ವಿರುದ್ಧ ಕ್ರಮ ಕೈಗೊಳ್ಳಲಿ. ಈ ವಿಷಯದಲ್ಲಿ ನಾನು ತಪ್ಪಿತಸ್ಥರನ್ನು ಬೆಂಬಲಿಸುವುದಿಲ್ಲ. ತನಿಖೆ ನಡೆಸಲಾಗುತ್ತಿದೆ ಮತ್ತು ಸತ್ಯ ಹೊರಬರಲಿ. ಆದರೆ, ಕಾಂಗ್ರೆಸ್ ನಾಯಕರನ್ನು ಮಾತ್ರ ಗುರಿಯಾಗಿಸಿಕೊಂಡು ದಾಳಿ ಮಾಡುತ್ತಿರುವುದು ಸರಿಯಲ್ಲ. ರಾಜ್ಯ ಸರ್ಕಾರವೇ ತನಿಖೆ ನಡೆಸುತ್ತಿದೆ. ಕಾಂಗ್ರೆಸ್ ನಾಯಕರು ಮತ್ತು ಜನಪ್ರತಿನಿಧಿಗಳಲ್ಲಿ ಭಯ ಹುಟ್ಟಿಸಲು ದಾಳಿ ನಡೆಸಲಾಗುತ್ತಿದೆ. ಇತ್ತೀಚಿನ ದಿನಗಳಲ್ಲಿ ಬಿಜೆಪಿ ದ್ವೇಷದ ರಾಜಕೀಯ ಮಾಡುತ್ತಿದೆ. –ಸಿದ್ದರಾಮಯ್ಯ, ಸಿಎಂ

> "ಇವತ್ತಿನ ಇಡಿ ದಾಳಿಯಿಂದ ಹಲವಾರು ನಾಯಕರ ಮುಖವಾಡ ಕಳಚಿ ಬೀಳಬೇಕಾಗಿದೆ. ಈ ಹಗರಣದ ಹಿಂದೆ ಯಾವ ಮಹಾನಾಯಕ ಇದ್ದಾರೆ ಎಂದು ತಿಳಿಯಬೇಕಿದೆ. ಪರಿಶಿಷ್ಟ ಜಾತಿ ಮತ್ತು ಪಂಗಡ ಮಕ್ಕಳ ವಿದ್ಯಾರ್ಥಿಗಳ ಪ್ರೋತ್ಸಾಹ ಧನ, ಸ್ಕಾಲರ್‌ಶಿಪ್ ಹಣ, ಗಂಗಾ ಕಲ್ಯಾಣ ಯೋಜನೆ ಹಣ, ಬಡವರಿಗೆ ನೀಡಬೇಕಾದ ಯೋಜನೆ ಹಣವನ್ನು ಇವರು ನುಂಗಿ ನೀರನ್ನು ಕುಡಿದಿದ್ದಾರೆ ಎಂದು ಮಾಜಿ ಸಚಿವ ಶ್ರೀರಾಮುಲು ಆರೋಪಿಸಿದ್ದಾರೆ. ಮುಖ್ಯಮಂತ್ರಿಗಳು ಮತ್ತೊಮ್ಮೆ ನಾಗೇಂದ್ರ ಅವರಿಗೆ ಸಚಿವ ಸ್ಥಾನ ನೀಡುವುದಾಗಿ ಹೇಳುತ್ತಿದ್ದಾರೆ. ಅವರಿಗೆ ಮಂತ್ರಿ ಸ್ಥಾನ ನೀಡಿ, ನಮ್ಮ ಆಕ್ಷೇಪವಿಲ್ಲ. ಆದರೆ ನೂರಾರು ಕೋಟಿ ಭ್ರಷ್ಟಾಚಾರ ಮಾಡಿರುವ ಹಣದ ವಸೂಲಿಗೆ ಸರ್ಕಾರ ಕ್ರಮ ತೆಗೆದುಕೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.




ಎಂಡಿಎ ಕಚೇರಿಯಲ್ಲಿ ಇ–ಆಫೀಸ್ ಆರಂಭ


ಮೈಸೂರು ಅಭಿವೃದ್ಧಿ ಪ್ರಾಧಿಕಾರದ ಕಚೇರಿಯಲ್ಲಿ ಇ–ಆಫೀಸ್ ವ್ಯವಸ್ಥೆ ಸಂಬಂಧ ಅಧಿಕಾರಿಗಳಿಗೆ ಮಾಹಿತಿ ನೀಡುತ್ತಿರುವುದು.

ಮೈಸೂರು, ಜೂ.11(ಆರ್‌ಕೆ)–ಮೈಸೂರು ಅಭಿವೃದ್ಧಿ ಪ್ರಾಧಿಕಾರದ ಕಚೇರಿಯಲ್ಲಿ ಇದೇ ಪ್ರಥಮ ಬಾರಿಗೆ ಕಾಗದರಹಿತ ಇ–ಆಫೀಸ್ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. ನಗರ ಅಭಿವೃದ್ಧಿ ವಿಶ್ವಸ್ಥ ಮಂಡಳಿ (ಸಿಐಟಿಬಿ) ಮತ್ತು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಆಡಳಿತ ವ್ಯವಸ್ಥೆಯನ್ನು ಮ್ಯಾನ್ಯುಯಲ್ ಆಗಿ ನಡೆಸಲಾಗುತ್ತಿತ್ತು. ಸರ್ಕಾರ 2021ರ ಜನವರಿ 18ರಂದು ಹೊರಡಿಸಿದ ಆದೇಶದಲ್ಲಿ ರಾಜ್ಯದ ಜಿಲ್ಲಾ ಸರ್ಕಾರಿ ಕಚೇರಿಗಳಲ್ಲಿ ಇ–ಆಫೀಸ್ ವ್ಯವಸ್ಥೆಯನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಬೇಕೆಂದು ನಿರ್ದೇಶನ ನೀಡಿದ್ದರೂ ಮುಡಾ ಬದಲಾವಣೆಗೆ ಒಗ್ಗಿರಲಿಲ್ಲ. ಇದೀಗ ಮೈಸೂರು ಅಭಿವೃದ್ಧಿ ಪ್ರಾಧಿಕಾರ ಎಂದು ಬದಲಾದ ನಂತರ ಹಾಗೂ ಇತ್ತೀಚೆಗಷ್ಟೇ ಎಂಡಿಎ ಆಯುಕ್ತರಾಗಿ ಅಧಿಕಾರ ವಹಿಸಿಕೊಂಡ ಕೆ.ಆರ್.ರಕ್ಷಿತ್ ಅವರು ಕಾಗದರಹಿತ ಕಚೇರಿ ಆಡಳಿತ ನಡೆಸಲು ಮುಂದಾಗಿದ್ದಾರೆ. ಅದಕ್ಕಾಗಿ ಪ್ರಾಧಿಕಾರದ ವಲಯಾಧಿಕಾರಿ ▶ 6ನೇ ಪುಟಕ್ಕೆ

ಜನಾರ್ಧನ ರೆಡ್ಡಿ ಜೈಲು ಶಿಕ್ಷೆಗೆ ತಾತ್ಕಾಲಿಕ ತಡೆ

ಬೆಂಗಳೂರು, ಜೂ.11– ಓಬಳಾಪುರಂ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಶಾಸಕ ಗಾಲಿ ಜನಾರ್ಧನ ರೆಡ್ಡಿ ಅವರಿಗೆ ತೆಲಂಗಾಣ ಹೈಕೋರ್ಟ್‌ನಿಂದ ತಾತ್ಕಾಲಿಕ ರಿಲೀಫ್ ಸಿಕ್ಕಿದ್ದು, ವಿಶೇಷ ಸಿಬಿಐ ನ್ಯಾಯಾಲಯ ಇತ್ತೀಚೆಗೆ ವಿಧಿಸಿದ್ದ ಏಳು ವರ್ಷಗಳ ಜೈಲು ಶಿಕ್ಷೆಯನ್ನು ಈ ಹಂತದಲ್ಲಿ ಜಾರಿಗೊಳಿಸುವ ಅಗತ್ಯವಿಲ್ಲ ಎಂದು ಹೈಕೋರ್ಟ್ ತೀರ್ಪು ನೀಡಿ, ಜನಾರ್ಧನ ರೆಡ್ಡಿಗೆ ಷರತ್ತುಬದ್ಧ ಜಾಮೀನು ನೀಡಿದೆ.



ರೆಡ್ಡಿಗೆ ಷರತ್ತುಬದ್ಧ ಜಾಮೀನು ನೀಡಿರುವ ಕೋರ್ಟ್, ತಲಾ 10 ಲಕ್ಷ ಮೌಲ್ಯದ ಇಬ್ಬರು ಶ್ಯೂರಿಟಿಗಳನ್ನು ಸಲ್ಲಿಸುವಂತೆ ಸೂಚನೆ ನೀಡಿದೆ. ಅಲ್ಲದೇ, ಭಾರತ ಬಿಟ್ಟು ಹೋಗಲು ಅನುಮತಿ ಇರುವುದಿಲ್ಲ. ಗಾಲಿ ಜನಾರ್ಧನ ರೆಡ್ಡಿ ಅವರ ಪಾಸ್‌ಪೋರ್ಟ್ ಒಪ್ಪಿಸುವಂತೆಯೂ ಆದೇಶಿಸಿದೆ. ಕಳೆದ ತಿಂಗಳು (ಮೇ 6) ಓಬಳಾಪುರಂ ಮೈನಿಂಗ್ ಕಂಪನಿಗೆ ▶ 6ನೇ ಪುಟಕ್ಕೆ



ಅಶೋಕ ರಸ್ತೆ, ಮೈಸೂರು. ಫೋ: 0821–2521926, ದೇವಸ್ಥಾನದ ರಸ್ತೆ, ವಿ.ವಿ.ಮೊಹಲ್ಲಾ, ಮೈಸೂರು. ಫೋ: 0821–2411926
ಎಂಜಿಎಸ್ ರಸ್ತೆ, ಬಸ್‌ಸ್ಟ್ಯಾಂಡ್ ಎದುರು, ನಂಜನಗೂಡು. ಫೋ: 08221–200926

ಬೇಕಾಗಿದ್ದಾರೆ
ಮೈಸೂರಿನ ಖಾಸಗಿ ಕಂಪನಿಗೆ, Fortuner ಮತ್ತು Automatic ಕಾರು ಓಡಿಸುವ ಡ್ರೈವರ್ಸ್‌ಗಳು ಬೇಕಾಗಿದ್ದಾರೆ.
ಸಂಬಳ: 25,000
ಮತ್ತು ಟೆಲಿಕಾಲಿಂಗ್ ಕಛೇರಿಯ ಕೆಲಸ ಮಾಡಲು ಹುಡುಗಿಯರು ಬೇಕಾಗಿದ್ದಾರೆ.
8548089469/9164946160



ಜಾತಿ ಜನಗಣತಿ ಮರು ಸಮೀಕ್ಷೆ ನನ್ನ ತೀರ್ಮಾನವಲ್ಲ, ಹೈಕಮಾಂಡ್ ನಿರ್ಧಾರ

ಕಾಂತರಾಜ್, ಜಯಪ್ರಕಾಶ್ ಹೆಗಡೆ ವರದಿ ಪೂರ್ಣವಾಗಿ ತಿರಸ್ಕರಿಸುತ್ತಿಲ್ಲ, ಕೆಲವು ಬದಲಾವಣೆಗಳೊಂದಿಗೆ ಮರು ಸಮೀಕ್ಷೆ ಮಾಡುತ್ತಿದ್ದೇವೆ: ಸಿಎಂ

ಬೆಂಗಳೂರು,ಜೂ.11(ಕೆಎಂಶಿ)– ಜಾತಿ ಜನಗಣತಿ ಮರು ಸಮೀಕ್ಷೆ ನಡೆಸುವುದು ನನ್ನ ತೀರ್ಮಾನವಲ್ಲ ಎಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಪಕ್ಷದ ವರಿಷ್ಠರು ತೆಗೆದುಕೊಂಡಿರುವ ನಿರ್ಧಾರದಂತೆ ಸಮೀಕ್ಷೆ ನಡೆಯಲಿದೆ ಎಂದಿದ್ದಾರೆ. ಹತ್ತು ವರ್ಷಗಳ ಹಿಂದೆ ನಡೆದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಹಳೆಯದಾಗಿದ್ದು, ಅದನ್ನು ಮರುಸಮೀಕ್ಷೆ ನಡೆಸುವಂತೆ ನಮ್ಮ ಸರ್ಕಾರಕ್ಕೆ ವರಿಷ್ಠರು ಆದೇಶಿಸಿದ್ದಾರೆ ಎಂದರು.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂತರಾಜ್ ಹಾಗೂ ಜಯಪ್ರಕಾಶ್ ಹೆಗಡೆ ವರದಿಯನ್ನು ನಾವು ಪೂರ್ಣವಾಗಿ ತಿರಸ್ಕರಿಸುತ್ತಿಲ್ಲ, ಕೆಲವು ಬದಲಾವಣೆಗಳೊಂದಿಗೆ ಮರು ಸಮೀಕ್ಷೆ ಮಾಡುತ್ತಿದ್ದೇವೆ. ಜಾತಿಗಣತಿ ವರದಿ ಅನುಷ್ಠಾನ ಸಂಬಂಧ ನಾಳೆ (ಜೂ.12) ಕರೆದಿರುವ ವಿಶೇಷ ಸಂಪುಟ ಸಭೆಯಲ್ಲಿ ಹೊಸದಾಗಿ ಗಣತಿ ನಡೆಸುವ, ಅದರ ನೇತೃತ್ವ ಯಾರದಿರಬೇಕು, ಎಷ್ಟು ದಿನಗಳಲ್ಲಿ ವರದಿ ಪಡೆಯಬೇಕು ಎಂಬೆಲ್ಲ ಕುರಿತು ತೀರ್ಮಾನ ಕೈಗೊಳ್ಳಲಾಗುವುದು ಎಂದರು.

ಮಹರ್ಷಿ ವಾಲ್ಮೀಕಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ತಮ್ಮ ಸಂಸದರು ಮತ್ತು ಶಾಸಕರ ಮನೆ, ಕಚೇರಿಗಳ ಮೇಲೆ ಜಾರಿ ನಿರ್ದೇಶನಾಲಯ (ಇ.ಡಿ.) ದಾಳಿ ಬಿಜೆಪಿಯ ರಾಜಕೀಯಪ್ರೇರಿತ ಎಂದು ಕಿಡಿಕಾರಿದರು. ▶ 6ನೇ ಪುಟಕ್ಕೆ

> "ರಾಜ್ಯದ ಆರ್ಥಿಕ ಪರಿಸ್ಥಿತಿ ಚೆನ್ನಾಗಿದೆ. ಗ್ಯಾರಂಟಿ ಯೋಜನೆ ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳಿಗೂ ಅನುದಾನ ಒದಗಿಸಲಾಗಿದೆ. ಕಳೆದ ವರ್ಷ 52,000 ಕೋಟಿ ರೂ. ಬಂಡವಾಳ ವೆಚ್ಚ ಇತ್ತು. ಈ ವರ್ಷ 83 ಸಾವಿರ ಕೋಟಿ ರೂ.ಗಳಾಗಿದೆ. ಒಂದು ವರ್ಷದಲ್ಲಿ ಬಂಡವಾಳ ವೆಚ್ಚ 31,000 ಕೋಟಿ ರೂ.ಗಳಿಗೆ ಹೆಚ್ಚಳವಾಗಿದೆ. ಗ್ಯಾರಂಟಿ ಯೋಜನೆಗಳಿಗೆ 50 ಸಾವಿರ ಕೋಟಿ ರೂ.ಗಳಿಗೂ ಹೆಚ್ಚು ಅನುದಾನ ಒದಗಿಸಲಾಗಿದೆ. ನಮ್ಮ ಸರ್ಕಾರ 2 ವರ್ಷಗಳಲ್ಲಿ 593 ಭರವಸೆಗಳಲ್ಲಿ 242 ಭರವಸೆಗಳನ್ನು ಈಡೇರಿಸಿದ್ದು, ಕೇಂದ್ರ ಸರ್ಕಾರ 600 ಭರವಸೆಗಳಲ್ಲಿ ಶೇ.10 ರಷ್ಟನ್ನೂ ಅನುಷ್ಠಾನ ಮಾಡಿಲ್ಲ.
> –ಸಿದ್ದರಾಮಯ್ಯ, ಮುಖ್ಯಮಂತ್ರಿ

ಸಾರ್ವಜನಿಕ ಚರ್ಚೆ ನಡೆಸಿ, ಸರ್ವಪಕ್ಷ ಸಭೆ ಕರೆದು ಮರು ಸಮೀಕ್ಷೆ ತೀರ್ಮಾನ ಕೈಗೊಳ್ಳಿ

ಬೆಂಗಳೂರು, ಜೂ. 11(ಕೆಎಂಶಿ)–ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ಜಾತಿ ಜನಗಣತಿ ನಡೆಸುವ ಬದ್ಧತೆ ಮತ್ತು ಪ್ರಾಮಾಣಿಕತೆ ನಿಜಕ್ಕೂ ಇದ್ದರೆ, ಸಮೀಕ್ಷೆ ಹೇಗಿರಬೇಕು ಎಂಬ ಬಗ್ಗೆ ಸಾರ್ವಜನಿಕ ಚರ್ಚೆ ನಡೆಸಿ, ಸರ್ವಪಕ್ಷಗಳ ಸಭೆ ಕರೆದು ಎಲ್ಲರ ಅಭಿಪ್ರಾಯ ಆಲಿಸಿ ತೀರ್ಮಾನ ಕೈಗೊಳ್ಳಬೇಕು ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಆಗ್ರಹಿಸಿದ್ದಾರೆ.



90 ದಿನಗಳ ಕಾಲಮಿತಿಯಲ್ಲಿ ಜಾತಿ ಜನಗಣತಿ ಸಮೀಕ್ಷೆ ನಡೆಸುವ ಕುರಿತು ಹಲವು ಗಂಭೀರ ಪ್ರಶ್ನೆಗಳು ಎದುರಾಗಿವೆ. ಪ್ರಸ್ತುತ ಸನ್ನಿವೇಶದಲ್ಲಿ ಸಮೀಕ್ಷೆ ಹೇಗೆ ಸಾಧ್ಯ, ಶಾಲೆಗಳು ಈಗಾಗಲೇ ಆರಂಭವಾಗಿವೆ. ಸಮೀಕ್ಷಾ ಕಾರ್ಯಕ್ಕೆ ಶಿಕ್ಷಕರನ್ನು ಬಳಸಿದರೆ, ಶೈಕ್ಷಣಿಕ ಚಟುವಟಿಕೆಗಳು ಬುಡಮೇಲಾಗುತ್ತವೆ. ಇದು ಮಕ್ಕಳ ಭವಿಷ್ಯದ ಮೇಲೆ ನೇರ ಪರಿಣಾಮ ಬೀರಲಿದೆ. ಪರಿಸ್ಥಿತಿ ಹೀಗಿರುವಾಗ 90 ದಿನಗಳಲ್ಲಿ ಸಮೀಕ್ಷೆ ನಡೆಸಲು ಸರ್ಕಾರ ಯಾರನ್ನು ▶ 6ನೇ ಪುಟಕ್ಕೆ



ವಿಮಾನ ನಿಲ್ದಾಣದ ರನ್‌ವೇಗೆ ಶೀಘ್ರ ಭೂಮಿ ಹಸ್ತಾಂತರ

ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ


ಡಾ.ಮಹದೇವಪ್ಪ



ಮೈಸೂರು, ಜೂ.11(ಆರ್‌ಕೆ)– ಬೆಂಗಳೂರು ಹಾಗೂ ನೆರೆ ರಾಜ್ಯಗಳಿಗೆ ಸಂಪರ್ಕ ಕಲ್ಪಿಸುವ ಮೈಸೂರು ವಿಮಾನ ನಿಲ್ದಾಣಕ್ಕೆ ಅಗತ್ಯವಿರುವ ಭೂಮಿ ಸ್ವಾಧೀನಪಡಿಸಿಕೊಂಡು ಶೀಘ್ರ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರಕ್ಕೆ ಹಸ್ತಾಂತರಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ತಿಳಿಸಿದ್ದಾರೆ.

ಮೈಸೂರಿನ ಜಿಲ್ಲಾ ಪಂಚಾಯಿತಿ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 360 ಆಸನ ಸಾಮರ್ಥ್ಯದ ವಿಮಾನಗಳ ಹಾರಾಟಕ್ಕೆ ಅನುವಾಗುವಂತೆ ವಿಮಾನ ನಿಲ್ದಾಣದ ರನ್‌ವೇ ವಿಸ್ತರಿಸಬೇಕಾಗಿದ್ದು, ಅದಕ್ಕಾಗಿ ಬೇಕಾಗಿರುವ 240 ಎಕರೆ ಪೈಕಿ ಈಗಾಗಲೇ 230 ಎಕರೆ ಭೂಮಿಯನ್ನು ಹಸ್ತಾಂತರಿಸಲಾಗಿದೆ. ಉಳಿದ 10 ಎಕರೆ ಭೂಸ್ವಾಧೀನ ಪ್ರಕ್ರಿಯೆ ಮುಗಿದಿದ್ದು, ಪರಿಹಾರ ನೀಡಿದ ನಂತರ ಭೂಮಿಯನ್ನು ಪ್ರಾಧಿಕಾರಕ್ಕೆ ಹಸ್ತಾಂತರಿಸಲಾಗುವುದು ಎಂದರು.

ರನ್‌ವೇ ಹಾದು ಹೋಗುವ ಕಡೆಗಳಲ್ಲಿರುವ ವಿದ್ಯುತ್ ಮಾರ್ಗ, ನಾಲೆಗಳನ್ನು ಸ್ಥಳಾಂತರಿಸುವ ಬಗ್ಗೆ ಚರ್ಚಿಸಲಾಯಿತಾದರೂ, ಎಎಐ ಅದರ ಜವಾಬ್ದಾರಿಯನ್ನು ರಾಜ್ಯ ಸರ್ಕಾರವೇ ಹೊರಬೇಕೆಂದು ಕೋರಿದ ಕಾರಣ 100 ಕೋಟಿ ರೂ. ವ್ಯಯಿಸಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ. ಆ ಅನುದಾನದಲ್ಲಿ ವಿದ್ಯುತ್ ಹೈಟೆನ್ಷನ್ ಮಾರ್ಗ ಬದಲಾವಣೆ, ಅಂಡರ್‌ಬ್ರಿಡ್ಜ್ ಬಾಕ್ಸ್ ನಿರ್ಮಾಣ ಮಾಡಲಾಗುವುದು ಎಂದು ಅವರು ತಿಳಿಸಿದರು.

ಈ ಯೋಜನೆಗಾಗಿ ಮೈಸೂರು–ನಂಜನಗೂಡು ರಾಷ್ಟ್ರೀಯ ಹೆದ್ದಾರಿ ಮಾರ್ಗ ಬದಲಿಸಬೇಕಿದ್ದು, ಚಿಕ್ಕೇಗೌಡನ ಹುಂಡಿ, ಕಡಕೊಳ ಟೋಲ್‌ವರೆಗೆ ಹೊಸ ರಸ್ತೆ ನಿರ್ಮಿಸಬೇಕು. ಮೈಸೂರು–ನಂಜನಗೂಡು–ಗುಂಡ್ಲುಪೇಟೆ ಹೆದ್ದಾರಿ ಮಾರ್ಗವನ್ನು 6 ಪಥದ ರಸ್ತೆಯನ್ನಾಗಿ ವಿಸ್ತರಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದ ಡಾ.ಮಹದೇವಪ್ಪ ಅದಕ್ಕೆ ಕೇಂದ್ರ ಸಚಿವ ನಿತಿನ್ ಗಡ್ಕರಿ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಹೇಳಿದರು.

ಕಬಿನಿ ಹಿನ್ನೀರಿನಲ್ಲಿ ಜಲಸಾಹಸ ಕ್ರೀಡೆ ನಡೆಸಲು ಅನುಮತಿ ನೀಡಲಾಗಿದೆ. ಅದರಿಂದ ಪ್ರವಾಸೋದ್ಯಮ ಅಭಿವೃದ್ಧಿಯಾಗಲಿದ್ದು, ಈ ಯೋಜನೆಗೆ ಜಿಲ್ಲಾಡಳಿತ, ಪ್ರವಾಸೋದ್ಯಮ ಇಲಾಖೆ, ನೀರಾವರಿ ಇಲಾಖೆ ಸಹಯೋಗದಲ್ಲಿ ಅಡ್ವೆಂಚರ್ ಸ್ಪೋರ್ಟ್ಸ್ ನಡೆಸಲು ಕ್ರಮ ವಹಿಸಲಾಗಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಡೀಮ್ಡ್ ಫಾರೆಸ್ಟ್ ಪ್ರದೇಶ ಗುರ್ತಿಸಲು ಮರು ಜಂಟಿ ಸರ್ವೆ

ಮೈಸೂರು, ಜೂ.11(ಆರ್‌ಕೆ)– ಮೈಸೂರು ಜಿಲ್ಲೆಯಲ್ಲಿ ಡೀಮ್ಡ್ ಫಾರೆಸ್ಟ್ ಪ್ರದೇಶವೆಂದು ಗುರ್ತಿಸಲಾಗಿರುವ ಜಮೀನುಗಳನ್ನು ನಿಯಮಾನುಸಾರ ಡಿಕ್ಲೇರ್ ಮಾಡಲಾಗಿದೆಯೇ ಎಂಬುದನ್ನು ಪರಿಶೀಲಿಸಲು ಅರಣ್ಯ ಮತ್ತು ಕಂದಾಯ ಇಲಾಖೆಯಿಂದ ಜಂಟಿಯಾಗಿ ಮರು ಸರ್ವೆ ಮಾಡಿ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಇಂದಿಲ್ಲಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡುತ್ತಿದ್ದ ಅವರು, 1 ಎಕರೆ ಪ್ರದೇಶದಲ್ಲಿ 30 ಸೆಂ.ಮೀ. ಸುತ್ತಳತೆಯುಳ್ಳ 50ಕ್ಕಿಂತ ಹೆಚ್ಚು ಮರಗಳನ್ನು ಬೆಳೆದಿರುವ ಪ್ರದೇಶಗಳನ್ನು ಡೀಮ್ಡ್ ಫಾರೆಸ್ಟ್ ಎಂದು ಘೋಷಣೆ ಮಾಡಲಾಗಿದೆ. ಈ ಜಮೀನುಗಳಲ್ಲಿ ರೈತರು ವ್ಯವಸಾಯ ಮಾಡುತ್ತಿದ್ದು, ಕೆಲವರು ಅಕ್ರಮವಾಗಿ ತಮ್ಮದೆಂದು ಹೇಳಿಕೊಂಡು ಉಳುಮೆ ಮಾಡುತ್ತಿದ್ದಾರೆ. ಒಂದು ವೇಳೆ ಅರಣ್ಯ ಇಲಾಖೆ ಮಾರ್ಗಸೂಚಿ ಪ್ರಕಾರ ಘೋಷಣೆ ಮಾಡದಿದ್ದಲ್ಲಿ ಅಂತಹ ಭೂಮಿಯನ್ನು ಸರ್ಕಾರಕ್ಕೆ ವಾಪಸ್ ಪಡೆಯುವುದು ಅಥವಾ ರೈತರಿಗೆ ಬಿಟ್ಟುಕೊಡುವ ಬಗ್ಗೆ ತೀರ್ಮಾನ ಮಾಡಬೇಕಾಗಿರುವುದರಿಂದ ಅದನ್ನು ಮರು ಪರಿಶೀಲನೆ ಮಾಡಿ ವರದಿ ನೀಡಲು ಸೂಚಿಸಿದ್ದೇನೆ ಎಂದರು.

ಕಂದಾಯ ಮತ್ತು ಅರಣ್ಯ ಇಲಾಖೆ ಅಧಿಕಾರಿಗಳು ಈ ರೀತಿಯ ಸುಮಾರು 6000 ಎಕರೆ ಪ್ರದೇಶವನ್ನು ಜಂಟಿಯಾಗಿ ಸರ್ವೆ ಮಾಡಬೇಕಾಗಿದ್ದು, ಈಗಾಗಲೇ 5100 ಎಕರೆ ಪ್ರದೇಶವನ್ನು ಸರ್ವೆ ಮಾಡಲಾಗಿದ್ದು, ಉಳಿದ ಭೂಮಿಯನ್ನು ಪರಿಶೀಲಿಸಿ, ಅದು ಯಾವ ಸ್ಥಿತಿಯಲ್ಲಿದೆ ಎಂಬುದರ ಬಗ್ಗೆ ಸಮಗ್ರ ವರದಿ ನೀಡಬೇಕೆಂದು ನಿರ್ದೇಶನ ನೀಡಿದ್ದೇನೆ. ಒಂದು ವೇಳೆ ಅದು ನಿಜವಾಗಲೂ ರೈತರ ಸ್ವತ್ತಾಗಿದ್ದಲ್ಲಿ ಅವರು ಬೆಳೆಸಿರುವ ಮರಗಳನ್ನು ಕತ್ತರಿಸಲು ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಈ ಸಮೀಕ್ಷೆ ಅತ್ಯಂತ ಪ್ರಮುಖವಾಗಿದೆ ಎಂದು ಅವರು ನುಡಿದರು.

ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗೆ ಕ್ರಮ

“ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಫಲಿತಾಂಶ ಕುಸಿದಿರುವ ಕಾರಣ ಅನುತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ಮತ್ತೆ ಎರಡು ಬಾರಿ ಅವಕಾಶ ನೀಡಿ ಪಾಸಾಗುವಂತೆ ಮಾಡಬೇಕಾಗಿದೆ. ಅನುತ್ತೀರ್ಣರಾದವರು ಮತ್ತೆ ವಿದ್ಯಾಭ್ಯಾಸ ಮುಂದುವರೆಸದೆ ಶಾಲೆಯಿಂದ ದೂರ ಉಳಿಯುವ ಸಾಧ್ಯತೆ ಇರುವ ಕಾರಣ ಅಂತಹ ವಿದ್ಯಾರ್ಥಿಗಳಿಗೆ ಹೆಚ್ಚಿನ ಅವಕಾಶ ನೀಡಿ ಫಲಿತಾಂಶ ಸುಧಾರಣೆಗೆ ಕ್ರಮ ಕೈಗೊಳ್ಳಿ, ಮುಂದಿನ ಸಾಲಿನಲ್ಲಿ ಗುಣಮಟ್ಟದ ಶಿಕ್ಷಣ ನೀಡಿ, ಎಸ್‌ಎಸ್‌ಎಲ್‌ಸಿಯಲ್ಲಿ ಹೆಚ್ಚಿನ ಮಕ್ಕಳು ಪಾಸಾಗುವಂತೆ ವಿಶೇಷ ಆಸಕ್ತಿ ತೋರಬೇಕು. **-ಡಾ.ಮಹದೇವಪ್ಪ**


ಚಿತ್ರನಗರಿಗೆ ಉಂಟಾಗಿರುವ ತೊಡಕು ನಿವಾರಣೆಗೆ ಕ್ರಮ

ಮೈಸೂರು, ಜೂ.11(ಆರ್‌ಕೆ)– ಮೈಸೂರು ಜಿಲ್ಲೆ ಇಮ್ಮಾವು ಬಳಿ ನಿರ್ಮಿಸಲುದ್ದೇಶಿಸಿರುವ ಬಹು ನಿರೀಕ್ಷಿತ ಚಿತ್ರನಗರಿ (ಫಿಲಂ ಸಿಟಿ) ಯೋಜನೆಗೆ ಉಂಟಾಗಿರುವ ಅಡೆತಡೆಗಳನ್ನು ನಿವಾರಿಸಲು ಜಿಲ್ಲಾಡಳಿತ ಕ್ರಮ ಕೈಗೊಂಡಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡುತ್ತಿದ್ದ ಅವರು, ಸರ್ಕಾರದ ಈ ಮಹತ್ವಾಕಾಂಕ್ಷೆ ಯೋಜನೆಗಾಗಿ ಇಮ್ಮಾವು ಬಳಿ ಈಗಾಗಲೇ ಜಾಗ ಗುರ್ತಿಸಿ ಭೂ ಸ್ವಾಧೀನ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗಿದೆ. ಕೆಐಎಡಿಬಿ ವತಿಯಿಂದ ಸ್ವಾಧೀನಪಡಿಸಿಕೊಂಡಿರುವ ಭೂಮಿಯಲ್ಲಿ ಚಿತ್ರನಗರಿ ನಿರ್ಮಾಣಕ್ಕಾಗಿ ಕೋಚನಹಳ್ಳಿ ಕೈಗಾರಿಕಾ ಪ್ರದೇಶದ ಇಮ್ಮಾವು ಜಾಗದಲ್ಲಿ ಕಾಂಪೌಂಡ್ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗಿದೆಯಾದರೂ, ಕೆಲವು ರೈತರು ಅಲ್ಲಿ ಅನಧಿಕೃತವಾಗಿ ಭೂಮಿಯನ್ನು ಉಳುಮೆ ಮಾಡುತ್ತಿದ್ದು, ಯಾವುದೇ ಆಧಾರವಿಲ್ಲದಿದ್ದರೂ, ಆ ಜಾಗ ತಮಗೇ ಸೇರಬೇಕೆಂದು ಹೇಳಿ ಪ್ರತಿಭಟನೆ ನಡೆಸುತ್ತಿದ್ದಾರೆ. ಆದ್ದರಿಂದ ಅವರಿಗೆ ಮಾನವೀಯತೆ ಆಧಾರದಲ್ಲಿ ಕಾರ್ಖಾನೆಗಳಲ್ಲಿ ಕೆಲಸ ಹಾಗೂ ಸ್ವಲ್ಪ ಪ್ರಮಾಣದ ಧನ ಸಹಾಯ ಮಾಡಲು ಹೇಳಿದ್ದೇವೆ. ಮುಂದೆ ಈ ಸಮಸ್ಯೆ ಪರಿಹರಿಸಿ ಕಾಮಗಾರಿಯನ್ನು ಮುಂದುವರೆಸಲಾಗುವುದು ಎಂದರು.

ಕೋಚನಹಳ್ಳಿ ಭೂಮಿ ವಿಚಾರದಲ್ಲಿ ಗಾಲ್ಫ್‌ನವರಿಗೆ ರೈತರು ಕಡಿಮೆ ಬೆಲೆಯಲ್ಲಿ ಜಮೀನು ಕೊಟ್ಟಿದ್ದು, ತದನಂತರ ಗಾಲ್ಫ್‌ನವರು ಕೆಐಎಡಿಬಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡಿದ್ದಾರೆ. ಈ ವಿಚಾರ ತಿಳಿದ ಕೆಲವರು ಹೆಚ್ಚಿನ ಪರಿಹಾರಕ್ಕೆ ಒತ್ತಾಯಿಸುತ್ತಿದ್ದು, ಈ ಸಮಸ್ಯೆ ನಿವಾರಿಸಲು ತಾವು ಸದರಿ ಪ್ರದೇಶದ 10 ಎಕರೆ ಜಾಗದಲ್ಲಿ ಮನೆ ನಿರ್ಮಿಸಿಕೊಡಬಹುದೇ? ಅಥವಾ ಇನ್ನಾವುದೇ ರೀತಿಯಲ್ಲಿ ಪರಿಹಾರ ಸೂಚಿಸಲು ಸಾಧ್ಯವೇ? ಎಂಬುದರ ಬಗ್ಗೆ ವಿಚಾರ ಮಾಡುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದು ಸಚಿವರು ನುಡಿದರು.

ನಿಧನ



ಗುಲಾಮ್–ಇ–ಅಹಮದ್

ಮೈಸೂರು,ಜೂ.11–ಮೈಸೂರಿನ ಕೆಎಸ್‌ಆರ್‌ಟಿಸಿ ಬ್ಲಾಕ್, ಬನ್ನಿಮಂಟಪ ಬಡಾವಣೆ ನಿವಾಸಿ ಗುಲಾಮ್–ಇ–ಅಹಮದ್ ಅಲಿಯಾಸ್ ಚಾಂದ್ ಭಾಯ್ (85) ಬುಧವಾರ ಮುಂಜಾನೆ ಅನಾರೋಗ್ಯದಿಂದ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರಿಯರು, ಓರ್ವ ಪುತ್ರ, ಮೊಮ್ಮಕ್ಕಳು ಹಾಗೂ ಅಪಾರ ಬಂಧುವರ್ಗ ಅಗಲಿದ್ದಾರೆ. ಈ ಸಂಬಂಧ ಬುಧವಾರದಂದು ಜ಼ೊಹರ್ ಪ್ರಾರ್ಥನೆಯ ನಂತರ, ಮೈಸೂರಿನ ಟಿಪ್ಪು ಸರ್ಕಲ್ ಹಿಂಭಾಗದಲ್ಲಿರುವ ಮುಸ್ಲಿಮರ ರುದ್ರಭೂಮಿ ರೋಡ್ ನಂ.5ರಲ್ಲಿ ಮೃತರ ಅಂತ್ಯಸಂಸ್ಕಾರ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ನಿಯಮ ಉಲ್ಲಂಘಿಸಿದರೆ ಶಾಲಾ ವಾಹನಗಳಿಗೆ ಬೀಳುತ್ತೆ ಕೇಸ್

ಬುಧವಾರ ಚಾಲಕರಿಗೆ ಜಾಗೃತಿ ಮೂಡಿಸಿ ಎಚ್ಚರಿಕೆ ನೀಡಿದ ಮೈಸೂರು ಸಂಚಾರ ಪೊಲೀಸರು


ಸಂಚಾರ ಪೊಲೀಸರು ಮೈಸೂರು ನಗರದಾದ್ಯಂತ ಶಾಲಾ–ಕಾಲೇಜು ವಾಹನಗಳ ಚಾಲಕರಿಗೆ ಬುಧವಾರ ಜಾಗೃತಿ ಮೂಡಿಸಿದರು.

ಮೈಸೂರು, ಜೂ.11(ಆರ್‌ಕೆ)– ಮಕ್ಕಳ ಸುರಕ್ಷತೆ ಬದಿಗೊತ್ತಿ ಸಂಚಾರ ನಿಯಮ ಮತ್ತು ಮೋಟಾರು ವಾಹನ ಕಾಯ್ದೆ ಉಲ್ಲಂಘಿಸಿ ಶಾಲಾ–ಕಾಲೇಜು ವಾಹನ ಚಾಲನೆ ಮಾಡಿದರೆ ಸಂಚಾರ ಠಾಣೆ ಪೊಲೀಸರು ನಾಳೆ (ಜೂ. 12)ಯಿಂದ ನಿರ್ದಾಕ್ಷಿಣ್ಯವಾಗಿ ಪ್ರಕರಣ ದಾಖಲಿಸುವರು.

ಶಾಲಾ ವಾಹನಗಳ ವಿರುದ್ಧ ಇಂದು ಮೈಸೂರು ನಗರದಾದ್ಯಂತ ಕಾರ್ಯಾಚರಣೆ ನಡೆಸಿದ ಸಂಚಾರ ಪೊಲೀಸರು, ಚಾಲಕರಿಗೆ ಸಂಚಾರ ನಿಯಮ ಪಾಲನೆ, ಮೋಟಾರು ವಾಹನ ಕಾಯ್ದೆಯನ್ವಯ ಅನುಸರಿಸಬೇಕಾದ ಕ್ರಮಗಳ ಬಗ್ಗೆ ತಿಳುವಳಿಕೆ ಹೇಳಿದರಲ್ಲದೆ, ತಪ್ಪಿದರೆ ನಾಳೆ (ಗುರುವಾರ)ಯಿಂದ ಅಂತಹ ವಾಹನಗಳ ವಿರುದ್ಧ ಪ್ರಕರಣ ದಾಖಲಿಸಿ ದಂಡ ವಿಧಿಸಲಾಗುವುದು ಎಂದು ಪೊಲೀಸರು ಎಚ್ಚರಿಕೆ ನೀಡಿದ್ದಾರೆ.

ಆಟೋ, ವ್ಯಾನ್, ಮಾರುತಿ ಓಮ್ನಿ, ಮಿನಿ ಬಸ್ ಮತ್ತು ಬಸ್‌ಗಳಲ್ಲಿ ಸಾಮಾನ್ಯವಾಗಿ ನಿಗದಿತ ಆಸನ ಸಾಮರ್ಥ್ಯಕ್ಕಿಂತ ಹೆಚ್ಚು ಶಾಲಾ ಮಕ್ಕಳು, ಕಾಲೇಜು ವಿದ್ಯಾರ್ಥಿಗಳನ್ನು ಕೊಂಡೊಯ್ಯಲಾಗುತ್ತದೆ. ಆಟೋ, ವ್ಯಾನ್‌ಗಳಲ್ಲಿ ಪುಸ್ತಕದ ಬ್ಯಾಗ್‌ಗಳನ್ನು ಹೊರಕ್ಕೆ ನೇತುಹಾಕಿ ಕನ್ನಡಿಯಲ್ಲಿ ಹಿಂಬದಿ ವಾಹನಗಳು ಕಾಣದಂತಹ ಸ್ಥಿತಿಯಲ್ಲಿ ವಾಹನ ಚಾಲನೆ, ಅತೀ ವೇಗ ಅಜಾಗರೂಕತೆ ಚಾಲನೆ, ವಾಹನ ದುಸ್ಥಿತಿಯಲ್ಲಿಲ್ಲದಿರುವುದು, ಸರಿಯಾಗಿ ಇನ್ಶೂರೆನ್ಸ್, ಡಿಎಲ್, ಆರ್‌ಸಿ, ಎಫ್‌ಸಿ ಮುಂತಾದ ದಾಖಲೆಗಳಿಲ್ಲದಿರುವುದು ತಪಾಸಣೆ ವೇಳೆ ಕಂಡುಬಂದಿದೆ. ಪರ್ಮಿಟ್ ಇಲ್ಲದಿದ್ದರೂ ವಾಹನ ಓಡಿಸುವುದು, ಮಕ್ಕಳ ಸುರಕ್ಷತಾ ಕ್ರಮ ವಹಿಸದಿರುವುದು, ಶಾಲಾ ವಾಹನಗಳು ಕೈಗೊಳ್ಳಬೇಕಾದ ಕ್ರಮ ಕೈಗೊಳ್ಳದೆ ಮಕ್ಕಳನ್ನು ಕರೆದೊಯ್ಯುವುದರಿಂದ ಅಪಘಾತಗಳು ಸಂಭವಿಸುತ್ತವೆ ಎಂಬುದರ ಬಗ್ಗೆ ಸಂಚಾರ ಪೊಲೀಸರು ಚಾಲಕರಿಗೆ ತಿಳುವಳಿಕೆ ಮೂಡಿಸಿದರು.

ಮಕ್ಕಳ ಸುರಕ್ಷತೆಯಿಂದ ವಾಹನ ಚಾಲಕರಿಗೆ ಜಾಗೃತಿ ಮೂಡಿಸಿ ಎಂದು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ನಿರ್ದೇಶನದಂತೆ ಸಂಚಾರ ವಿಭಾಗದ ಎಸಿಪಿ ಎಂ.ಶಿವಶಂಕರ್ ನೇತೃತ್ವದಲ್ಲಿ ಎಲ್ಲಾ ಸಂಚಾರ ಠಾಣೆ ಇನ್‌ಸ್ಪೆಕ್ಟರ್, ಸಬ್ ಇನ್‌ಸ್ಪೆಕ್ಟರ್ ಸೇರಿದಂತೆ ಸಿಬ್ಬಂದಿಗಳು ತಪಾಸಣಾ ಕಾರ್ಯಾಚರಣೆ ನಡೆಸುತ್ತಿದ್ದಾರೆ.

ಡಾ.ನೀಗೂ ರಮೇಶ್‌ರವರ ಗಾಂಧೀಮರ–ಕಾವ್ಯಾವಲೋಕನ

ಮೈಸೂರು,ಜೂ.11–ಮೈಸೂರಿನ ಶ್ರೀ ಬಸವೇಶ್ವರ ಸಾಮಾಜಿಕ ಪರಿಷ್ಕರಣೆ, ಸಂಶೋಧನೆ–ವಿಸ್ತರಣಾ ಕೇಂದ್ರ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ಹಾಗೂ ಲಗೋರಿ ಸಾಂಸ್ಕೃತಿಕ ಬಳಗ ಸಂಯುಕ್ತಾಶ್ರಯದಲ್ಲಿ ಡಾ.ನೀಗೂ ರಮೇಶ್‌ರವರ ಗಾಂಧೀಮರ: ಕಾವ್ಯಾವಲೋಕನ ಕಾರ್ಯಕ್ರಮವನ್ನು ಮಾನಸಗಂಗೋತ್ರಿಯ ಬಸವಪೀಠ ಸಭಾಂಗಣದಲ್ಲಿ ಜೂ. 14ರಂದು ಬೆಳಗ್ಗೆ 10.30 ಗಂಟೆಗೆ ಏರ್ಪಡಿಸಲಾಗಿದೆ. ಸಮಾರಂಭದಲ್ಲಿ ಬಸವಪೀಠದ ಸಂದರ್ಶಕ ಪ್ರಾಧ್ಯಾಪಕ ಪ್ರೊ.ಅರವಿಂದ ಮಾಲಗತ್ತಿ ಭಾಗವಹಿಸಲಿದ್ದಾರೆ. ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕಿ ಪ್ರೊ.ಎನ್.ಕೆ.ಲೋಲಾಕ್ಷಿ ಅಧ್ಯಕ್ಷತೆ ವಹಿಸಲಿದ್ದಾರೆ. ನಂತರ ಗಾಂಧೀಮರ–ಕಾವ್ಯಾವಲೋಕನ ವಿಚಾರಗೋಷ್ಠಿ ಏರ್ಪಡಿಸಲಾಗಿದೆ. ಭಾರತೀಯ ಭಾಷಾ ಸಂಸ್ಥಾನದ ಯೋಜನಾ ನಿರ್ದೇಶಕ ಡಾ.ನೀಲಗಿರಿ ತಳವಾರ ಅಧ್ಯಕ್ಷತೆ ವಹಿಸಲಿದ್ದಾರೆ. ಡಾ.ವಿನೋದಾ–ಗಾಂಧೀಮರ ಪರಿಸರ ಪ್ರಜ್ಞೆ, ಡಾ.ಶಿವಕುಮಾರ ಕಾರೇಪುರ–ಗಾಂಧೀ ಚಿಂತನೆಗಳು, ಡಾ.ಮಾಲಿನಿ ಅಭ್ಯಂಕರ್– ಗ್ರಾಮೀಣ ಪ್ರಜ್ಞೆ, ಮಾರುತಿ ಪ್ರಸನ್ನ–ಮಾನವೀಯ ಮೌಲ್ಯಗಳು, ಪರಮೇಶ್.ಕೆ ಉತ್ತನಹಳ್ಳಿ–ಸಾಮಾಜಿಕ ಪ್ರಜ್ಞೆ, ಕೀರ್ತಿ ಬೈಂದೂರ್–ಮಹಿಳಾ ಸಂವೇದನೆ, ಕುಮಾರಿ ಅನಿತಾ ಹೆಚ್.ಬಿ–ಗಾಂಧೀಮರದಲ್ಲಿನ ವ್ಯಕ್ತಿ ಚಿತ್ರಗಳ ಕುರಿತು ವಿಚಾರ ಮಂಡಿಸಲಿದ್ದಾರೆ.

ಶ್ರೀಮತಿ ದೇವಿ ಅವರಿಂದ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ



ಮೈಸೂರು, ಜೂ.11–ಮೈಸೂರಿನ ಗಾನಸಭಾ ವತಿಯಿಂದ ಜೂ.22ರಂದು ಸಂಜೆ 5.30ಕ್ಕೆ ಜ್ಞಾನಭಾರತಿ ಸಭಾಂಗಣದಲ್ಲಿ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಕಾರ್ಯಕ್ರಮನ್ನು ಆಯೋಜಿಸಿದ್ದು, ಗಾಯನ ವಾಚನವನ್ನು ಮೈಸೂರಿನ ಶ್ರೀಮತಿ ದೇವಿ ನಡೆಸಿಕೊಡಲಿದ್ದಾರೆ. ಅವರಿಗೆ ಸುಮತ್ ನಾಯಕ್ ತಬಲ, ಹಾರ್ಮೋನಿಯಂನಲ್ಲಿ ತೇಜಸ್ ಸಾಥ್ ನೀಡಲಿದ್ದಾರೆ.

ಬೆಂಗಳೂರು ಪೊಲೀಸ್ ಆಯುಕ್ತ ದಯಾನಂದ್ ಅಮಾನತಿಗೆ ನಾಯಕರ ಯುವಸೇನೆ ಖಂಡನೆ

ಮೈಸೂರು, ಜೂ.11(ಜಿಎ)–ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆರ್‌ಸಿಬಿ ಕ್ರಿಕೆಟ್ ತಂಡದ ವಿಜಯೋತ್ಸವದಲ್ಲಿ ನಡೆದ ಕಾಲ್ತುಳಿತ ಪ್ರಕರಣದಲ್ಲಿ ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್ ಅವರನ್ನು ಅಮಾನತು ಮಾಡಿರುವುದನ್ನು ಖಂಡಿಸಿರುವ ಕರ್ನಾಟಕ ರಾಜ್ಯ ನಾಯಕರ ಯುವಸೇನೆ ಈ ಸಂಬಂಧ ಜೂ.13ರಂದು ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ನಾಯಕರ ಯುವಸೇನೆ ಅಧ್ಯಕ್ಷ ದೇವರಾಜ್ ಟಿ.ಕಾಟೂರು ಮಾತನಾಡಿ, ರಾಜ್ಯ ಸರ್ಕಾರ ಯಾವುದೇ ಪೂರ್ವ ಸಿದ್ಧತೆ ಮಾಡಿಕೊಳ್ಳದೆ ಆತುರದಲ್ಲಿ ವಿಜಯೋತ್ಸವವನ್ನು ಆಯೋಜಿಸಿತು. ಆದ್ದರಿಂದ ಲಕ್ಷಾಂತರ ಅಭಿಮಾನಿಗಳು ಕ್ರೀಡಾಂಗಣವನ್ನು ಪ್ರವೇಶಿಸಿದ್ದರ ಪರಿಣಾಮವಾಗಿ ಕಾಲ್ತುಳಿತ ಸಂಭವಿಸಿತ್ತು. ಇದಕ್ಕೆ ಸರ್ಕಾರದ ನಿರ್ಲಕ್ಷ್ಯವೇ ಕಾರಣ ವಿನಾ ಪೊಲೀಸ್ ಅಧಿಕಾರಿಗಳದಲ್ಲ ಎಂದು ತಿಳಿಸಿದರು.

ಒಂದು ದಿನವೂ ರಜೆ ತೆಗೆದುಕೊಳ್ಳದೇ ಬಿ.ದಯಾನಂದ್ ಅವರು ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿದ್ದಾರೆ. ಬೆಂಗಳೂರು ಪೊಲೀಸ್ ಆಯುಕ್ತರಾಗಿ ಯಾವುದೇ ಗಲಾಟೆ, ಗುಂಪು ಘರ್ಷಣೆ, ಕೋಮು ಗಲಭೆ ನಡೆಯದಂತೆ ನಿಯಂತ್ರಿಸಿದ್ದಾರೆ. ಯಾವುದೇ ಮಠಾಧೀಶರು, ರೌಡಿಗಳು, ರಾಜಕಾರಣಿಗಳು, ರಿಯಲ್‌ಎಸ್ಟೇಟ್ ಕುಳಗಳನ್ನೂ ತಮ್ಮ ಹತ್ತಿರ ಸುಳಿಯಲು ಬಿಟ್ಟಿಲ್ಲ. ತಮ್ಮನ್ನು ಭೇಟಿಯಾಗಲು ಬರುವ ಸಾರ್ವಜನಿಕರನ್ನು ಗಂಟೆಗಟ್ಟಲೆ ಕಾಯಿಸಿಲ್ಲ. ಇಂತಹ ದಕ್ಷ ಮತ್ತು ಪ್ರಾಮಾಣಿಕ ಪೊಲೀಸ್ ಅಧಿಕಾರಿಯನ್ನು ಅಮಾನತ್ತುಗೊಳಿಸಿರುವುದು ರಾಜ್ಯ ಸರ್ಕಾರಕ್ಕೆ ಶೋಭೆಯಲ್ಲ ಎಂದರು.

ವಾಲ್ಮೀಕಿ ನಾಯಕ ಸಮುದಾಯ ವಿಧಾನಸಭೆ, ಲೋಕಸಭೆ ಚುನಾವಣೆಯಲ್ಲಿ ನಿರ್ಣಾಯಕ ಮತಗಳನ್ನು ನೀಡಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಕಾರಣವಾಗಿದೆ. ಆದರೆ, ವಾಲ್ಮೀಕಿ ನಾಯಕ ಸಮಾಜಕ್ಕೆ ಸೇರಿದ ಬಿ.ದಯಾನಂದ್ ಅವರನ್ನು ಅಮಾನತುಗೊಳಿಸಿರುವುದು ಸಮಾಜಕ್ಕೆ ಮಾಡಿದ ಅನ್ಯಾಯವಾಗಿದೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದಯಾನಂದ್ ಅವರ ಅಮಾನತು ಆದೇಶವನ್ನು ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ಈ ಸಂಬಂಧ ಜೂ.13 ರಂದು ಬೆಳಿಗ್ಗೆ 11ಗಂಟೆಗೆ ಬಿ.ದಯಾನಂದ್ ಅವರನ್ನು ಮತ್ತೆ ಸೇವೆಗೆ ನೇಮಕ ಮಾಡಿಕೊಳ್ಳುವಂತೆ ಪಕ್ಷಾತೀತವಾಗಿ ಎಲ್ಲಾ ಮುಖಂಡರು, ಸಂಘ–ಸಂಸ್ಥೆಗಳ ಅಧ್ಯಕ್ಷರು ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸುತ್ತೇವೆ. ರಾಜ್ಯ ಸರ್ಕಾರ ನಮ್ಮ ಮನವಿಗೆ ಸ್ಪಂದಿಸದಿದ್ದಲ್ಲಿ ಸಮಾಜದ ವತಿಯಿಂದ ಬೃಹತ್ ಹೋರಾಟವನ್ನು ಮಾಡುತ್ತೇವೆ ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಉಪಾಧ್ಯಕ್ಷ ಶಿವಕುಮಾರ್‌ಸ್ವಾಮಿ, ಜಿಲ್ಲಾಧ್ಯಕ್ಷ ಉದ್ಬೂರು ಎಂ.ಸೋಮಣ್ಣ, ಮಹರ್ಷಿ ವಾಲ್ಮೀಕಿ ಪತ್ತಿನ ಸಹಕಾರ ಸಂಘದ ನಿರ್ದೇಶಕರಾದ ಹಿನಕಲ್ ಸಿ.ಸ್ವಾಮಿ, ವಿಜಯಕುಮಾರ್ ಉಪಸ್ಥಿತರಿದ್ದರು.

ಎಂಎಲ್‌ಸಿ ಡಾ.ಡಿ.ತಿಮ್ಮಯ್ಯ ವಿರುದ್ಧ ಅವಹೇಳನಕಾರಿ ಪೋಸ್ಟ್

ಡಾ.ತಿಮ್ಮಯ್ಯ ಒಳ ಮೀಸಲಾತಿ, ಮಾದಿಗ ಸಮಾಜದ ವಿರೋಧಿಯಲ್ಲ: ಆರೋಪ ಸರಿಯಲ್ಲ

ಮೈಸೂರು, ಜೂ.11(ಜಿಎ)–ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಅವರು ಕಳೆದ 30 ವರ್ಷಗಳಿಂದ ಒಳ ಮೀಸಲಾತಿ ಜಾರಿಗಾಗಿ ಹೋರಾಡುತ್ತಿದ್ದಾರೆ. ಆದರೆ, ಅವರ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ಒಳ ಮೀಸಲಾತಿ ಮತ್ತು ಮಾದಿಗ ಸಮಾಜದ ವಿರೋಧಿ ಎಂದು ಕೆಲವರು ಬಿಂಬಿಸುವ ಮೂಲಕ ಅವಹೇಳಕಾರಿ ಪೋಸ್ಟ್ ಹಾಕುತ್ತಿದ್ದಾರೆ ಎಂದು ಆದಿಜಾಂಬವ ಸಮುದಾಯದ ಮುಖಂಡರ ಒಕ್ಕೂಟದ ವಿಭಾಗೀಯ ಅಧ್ಯಕ್ಷ ಎಡತೊರೆ ನಿಂಗರಾಜು ವಿಷಾದ ವ್ಯಕ್ತಪಡಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಳ ಮೀಸಲಾತಿ ಜಾರಿಯಾಗಬೇಕು ಎಂದು ಮೈಸೂರಿನಿಂದ ಆರಂಭವಾದ ಹೋರಾಟಕ್ಕೆ ಡಾ.ಡಿ.ತಿಮ್ಮಯ್ಯ ಸಾಥ್ ನೀಡಿ, ಹೋರಾಟಕ್ಕೆ ಧುಮಿಕ್ಕಿದರು. ಆದರೆ ಇತ್ತೀಚೆಗೆ ಬಿಜೆಪಿ, ಜೆಡಿಎಸ್‌ನಲ್ಲಿ ಉದ್ಭವವಾದ ಕೆಲವರು ತಾವೇ ಒಳ ಮೀಸಲಾತಿ ಹೋರಾಟವನ್ನು ಆರಂಭಿಸಿದ್ದೇವೆ ಎಂಬಂತೆ ವರ್ತಿಸುತ್ತಿದ್ದು, ಡಾ.ಡಿ.ತಿಮ್ಮಯ್ಯ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ಅವಹೇಳಕಾರಿ ಪೋಸ್ಟ್ ಹಾಕುತ್ತಿದ್ದಾರೆ ಎಂದರು.

ದಲಿತರ ಮೇಲೆ ದೌರ್ಜನ್ಯ ನಡೆದಾಗ ಡಾ.ಡಿ.ತಿಮ್ಮಯ್ಯ ಅವರು ತಾವೇ ಮುಂದೆ ನಿಂತು ನ್ಯಾಯ ದೊರಕಿಸಿಕೊಟ್ಟಿದ್ದಾರೆ. ಸಮಾಜದ ಉದ್ಧಾರಕ್ಕಾಗಿ ಅನೇಕ ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ. ಶಿಕ್ಷಣ, ಸಾಹಿತ್ಯ, ಸಾಮಾಜಿಕ, ಧಾರ್ಮಿಕ ಕ್ಷೇತ್ರಗಳಿಗೆ ಅಪಾರವಾದ ಕೊಡುಗೆ ನೀಡಿದ್ದಾರೆ. ಹೀಗೆ ಎಲ್ಲರ ಕಷ್ಟಗಳಿಗೂ ಸ್ಪಂದಿಸುತ್ತಿರುವ ಸರಳ ಸಜ್ಜನಿಕೆಯ ರಾಜಕಾರಣಿ ಡಾ.ಡಿ.ತಿಮ್ಮಯ್ಯ ಅವರ ಕೊಡುಗೆಗಳನ್ನು ಅರಿಯದೇ ವೃಥಾ ಆರೋಪ ಮಾಡುವುದು ಸರಿಯಲ್ಲ ಎಂದರು.

ಒಳ ಮೀಸಲಾತಿಯನ್ನು ಜಾರಿಗೆ ತರಲು ಮುಖ್ಯಮಂತ್ರಿ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಉತ್ಸುಕರಾಗಿದ್ದಾರೆ. ಅದಕ್ಕಾಗಿ ಪರಿಶಿಷ್ಟ ಸಮುದಾಯಗಳ ನಿಖರವಾದ ಅಂಕಿ–ಅಂಶಗಳನ್ನು ಪಡೆಯಲು ಜಾತಿ ಗಣತಿಯನ್ನು ನಡೆಸುತ್ತಿದ್ದಾರೆ. ಎರಡು ತಿಂಗಳ ಒಳಗೆ ಒಳಮೀಸಲಾತಿ ಜಾರಿಯಾಗಲಿದೆ. ಒಳ ಮೀಸಲಾತಿ ಜಾರಿಯಾಗುವ ಹಂತದಲ್ಲಿರುವಾಗ ಕೆಲವರು ಹೋರಾಟ, ಪಾದಯಾತ್ರೆ ಮಾಡುತ್ತಿರುವುದರ ಅಗತ್ಯವಾದರೂ ಏನಿತ್ತು? ಎಂದು ಪ್ರಶ್ನಿಸಿದರು.

ಸುದ್ದಿಗೋಷ್ಠಿಯಲ್ಲಿ ಆದಿಜಾಂಬವ ಸಮುದಾಯದ ಮುಖಂಡರ ಒಕ್ಕೂಟದ ವಿಭಾಗೀಯ ಉಪಾಧ್ಯಕ್ಷ ಸೀಗೂರು ವಿಜಯಕುಮಾರ್, ಸಮಾಜದ ಹಿರಿಯ ಮುಖಂಡ ರಾಚಯ್ಯ, ಪೌರ ಕಾರ್ಮಿಕರ ಸಂಘದ ಅಧ್ಯಕ್ಷ ಡಿ.ಆರ್.ರಾಜು, ಸಮಾಜದ ಮುಖಂಡರಾದ ನಂಜನಗೂಡು ಸ್ವಾಮಿ, ನಂಜನಗೂಡು ದೇವರಾಜು, ಎಂ.ಎಸ್.ಮಹಾದೇವಸ್ವಾಮಿ, ಪ್ರಕಾಶ್ ಕೋಟೆ ಮತ್ತಿತರರು ಉಪಸ್ಥಿತರಿದ್ದರು.

ಜೂ.25ರಂದು ಜನಸ್ಪಂದನ ಕಾರ್ಯಕ್ರಮ

ಮೈಸೂರು,ಜೂ.11–ಜಿಲ್ಲಾ ಮಟ್ಟದಲ್ಲಿ ಸಾರ್ವಜನಿಕರ ಅಹವಾಲುಗಳಿಗೆ ಸೂಕ್ತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಪ್ರತಿ ಜಿಲ್ಲೆಯಲ್ಲಿಯೂ ಪ್ರತಿ ತಿಂಗಳು ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಂಡು ಸಾರ್ವಜನಿಕ ಸಮಸ್ಯೆಗಳಿಗೆ ಪರಿಹಾರೋಪಾಯಗಳನ್ನು ಒದಗಿಸುವ ಸಂಬಂಧ ಜೂ.25ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತ್ ಆವರಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಜನತಾ ದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರಿಗೆ ಜೂ.25ರಂದು ತಮ್ಮ ಅಹವಾಲು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಲಕ್ಷ್ಮಿಕಾಂತ್ ರೆಡ್ಡಿ ತಿಳಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

12.06.2025 ಗುರುವಾರ, ಮಳೆ ನಕ್ಷತ್ರ: ಮೃಗಶಿರ, 08.06.2025 ರಿಂದ 21.06.2025
ವಿಶ್ವವಸು ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಕೃಷ್ಣ ಪಕ್ಷ,
ತಿಥಿ: ಪಾಡ್ಯ, ನಕ್ಷತ್ರ: ಮೂಲ, ರಾಹುಕಾಲ: ಮಧ್ಯಾಹ್ನ 1.30 ರಿಂದ 3 ಗಂಟೆಯವರೆಗೆ

■ **ಅವಧೂತ ದತ್ತ ಪೀಠ, ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ:** ವಿಶ್ವದ ಮೊಟ್ಟ ಮೊದಲ ವಿಶಿಷ್ಟ ಕಾರ್ಯಕ್ರಮ ವನ ದುರ್ಗಾ ವೃಕ್ಷಶಾಂತಿ ಮಹಾಯಜ್ಞ, ಸಹಸ್ರ ಚಂಡೀಯಾಗ, ಸ್ಥಳ: ಅವಧೂತ ದತ್ತ ಪೀಠ, ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ, ಊಟಿ ರಸ್ತೆ, ಬೆಳಗ್ಗೆಯಿಂದ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಸಂಧಿವಾತಕ್ಕೆ ಚಿಕಿತ್ಸಾ ಶಿಬಿರ, ಗರ್ಭಾಶಯ ಮುಖದಲ್ಲಿ ಹುಣ್ಣು (ಸರ್ವೈಕಲ್ ಎರೋಷನ್) ಶಿಬಿರ, ದೇಹ ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ (ಬೆಳಗ್ಗೆ 6.30ರಿಂದ 7 ರವರೆಗೆ), ಕಾರ್ನಿಯಲ್ ಒಪೇಸಿಟಿ (ಕಾರ್ನಿಯಾದ ಅಪಾರದರ್ಶಕತೆ, ಕಣ್ಣಿನ ಹೂ)ಗೆ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಆಲನಹಳ್ಳಿ, ಬೆಳಗ್ಗೆ 9 ರಿಂದ.

■ **ಕಾವೇರಿ ಆಯುರ್ವೇದ ಆಸ್ಪತ್ರೆ:** ಉತ್ತಮ ನಿದ್ರೆ ಅಭ್ಯಾಸ ಮತ್ತು ನಿದ್ರೆ ಸಮಸ್ಯೆ ನಿವಾರಣೆಯ ಶಿಬಿರ, ವೆರಿಕೋಸ್ ವೇನ್ಸ್, ಉಬ್ಬಿದ ರಕ್ತನಾಳ, ಹಸಿರುಂಬು, ಇಸಬು ರೋಗ, ಬಂಗು, ಅಲರ್ಜಿ ಚರ್ಮರೋಗ ತಪಾಸಣಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10 ಗಂಟೆಯಿಂದ.

■ **ಪ್ರೀತಿ ಕ್ಯಾನ್ಸರ್ ಸೆಂಟರ್:** ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ, ಸ್ಥಳ: ಪ್ರೀತಿ ಕ್ಯಾನ್ಸರ್ ಸೆಂಟರ್, ಲಕ್ಷ್ಮೀಪುರಂ, ಬೆಳಗ್ಗೆ 10 ರಿಂದ.

■ **ಮೈಸೂರು ಜಿಲ್ಲಾ ಪ್ರಾಕೃತಿಕ ಚಿಕಿತ್ಸಾ ಪರಿಷತ್:** ಆಕ್ಯೂಪ್ರೆಶರ್, ಸು–ಜೋಕ್ ಮತ್ತು ಆಕ್ಯೂ ಡಿಜಿಟಲ್ ಫಿಶಿಯೋ ಥೆರಪಿ ಚಿಕಿತ್ಸಾ ಶಿಬಿರ, ಸ್ಥಳ: ಇನ್ನರ್‌ವ್ಹೀಲ್, ರೋಟರಿ ಭವನ, ವಿಜಯನಗರ, ರೈಲ್ವೆ ಬಡಾವಣೆ, ಬೆಳಗ್ಗೆ 10.30ಕ್ಕೆ.

■ **ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಕಾರ್ಮಿಕ ಇಲಾಖೆ, ಜಿಲ್ಲಾ ಕಾರ್ಮಿಕ ಯೋಜನಾ ಸೊಸೈಟಿ, ಮಕ್ಕಳ ಸಹಾಯವಾಣಿ :** ಬೆಳಗ್ಗೆ 9.30ಕ್ಕೆ ನಗರ ಬಸ್ ನಿಲ್ದಾಣದಿಂದ ಶಾಲಾ ಮಕ್ಕಳಿಂದ ಜಾಥಾ ಕಾರ್ಯಕ್ರಮ, ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನ ಆಚರಣೆ, ಉದ್ಘಾಟನೆ : ಹಿರಿಯ ಸಿವಿಲ್ ನ್ಯಾಯಾಧೀಶ ಕೆ.ಕೆ. ಅಮರ್‌ನಾಥ್, ಅಧ್ಯಕ್ಷತೆ : ಜಿಲ್ಲಾಧಿಕಾರಿ ಹಾಗೂ ಬಾಲ ಕಾರ್ಮಿಕ ಯೋಜನಾ ಸೊಸೈಟಿ ಅಧ್ಯಕ್ಷ ಲಕ್ಷ್ಮೀಕಾಂತರೆಡ್ಡಿ, ಮುಖ್ಯ ಅತಿಥಿಗಳು : ಪೊಲೀಸ್ ಆಯುಕ್ತರಾದ ಶ್ರೀಮತಿ ಸೀಮಾ ಲಾಟ್ಕರ್, ಪೊಲೀಸ್ ಅಧೀಕ್ಷಕ ಎನ್. ವಿಷ್ಣುವರ್ಧನ್, ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಯುಕೇಶ್‌ಕುಮಾರ್, ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸೀಫ್, ಅಪರ ಜಿಲ್ಲಾಧಿಕಾರಿ ಡಾ. ಪಿ. ಶಿವರಾಜು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಆಯುಕ್ತ ಕೆ.ಆರ್. ರಕ್ಷಿತ್, ಸ್ಥಳ: ಮಹಾರಾಜ ಸರ್ಕಾರಿ ಪದವಿಪೂರ್ವ ಕಾಲೇಜು ಆವರಣ, ಬೆಳಗ್ಗೆ 11ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ :** ವಿಶೇಷ ಉಪನ್ಯಾಸ ಕಾರ್ಯಕ್ರಮ, ಪ್ರೊ. ಮಾಲಿನಿ ಸುತ್ತೂರು ಅವರಿಂದ ಮಾನಸಿಕ ಆರೋಗ್ಯ : ಒತ್ತಡ ನಿರ್ವಹಣೆ ಕುರಿತು ಉಪನ್ಯಾಸ, ಅಧ್ಯಕ್ಷತೆ : ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ನಿರ್ದೇಶಕರಾದ ಪ್ರೊ. ಎನ್.ಕೆ. ಲೋಲಾಕ್ಷಿ, ಸ್ಥಳ: ಎಂ.ಎ. ತರಗತಿ ಕೊಠಡಿ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಮಧ್ಯಾಹ್ನ 2.30ಕ್ಕೆ.

■ **ಸುರಭಿ ಗಾನ ಕಲಾಮಂದಿರ ಚಾರಿಟಬಲ್ ಟ್ರಸ್ಟ್:** ಕರ್ನಾಟಕ ಶಾಸ್ತ್ರೀಯ ಸಂಗೀತ ಅಧ್ಯಯನ ಶಿಬಿರ–2025, ಸ್ಥಳ: #510, 13ನೇ ಮುಖ್ಯ ರಸ್ತೆ, ಸರಸ್ವತಿಪುರಂ, ಸಂಜೆ 4.30ರಿಂದ.

■ **ಎ ಸ್ಟಾರ್ ಮ್ಯೂಸಿಕಲ್ ಗ್ರೂಪ್ :** ಎಸ್.ಪಿ. ಬಾಲಸುಬ್ರಹ್ಮಣ್ಯಂ ನೆನಪಿನ ಗೀತ ಗಾಯನ, ಸ್ಥಳ: ನಾದಬ್ರಹ್ಮ ಸಂಗೀತ ಸಭಾಂಗಣ, ಸಂಜೆ 4.30ಕ್ಕೆ.

■ **ಡಾ. ಜಯಪ್ಪ ಹೊನ್ನಾಳಿ ಅಭಿಮಾನಿಗಳ ಬಳಗ :** ಜಯಕವಿ 60–ಗಾನಾಭಿನಂದನ, ಉದ್ಘಾಟನೆ : ವಿಧಾನ ಪರಿಷತ್ ಸದಸ್ಯ ಡಾ. ಡಿ. ತಿಮ್ಮಯ್ಯ, ಅಭಿನಂದನಾ ನುಡಿ : ವಾಗ್ಮಿ ಪ್ರೊ. ಎಂ. ಕೃಷ್ಣೇಗೌಡ, ಅಧ್ಯಕ್ಷತೆ : ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಮುಖ್ಯ ಅತಿಥಿಗಳು : ಜಿಲ್ಲಾ ಕಸಾಪ ನಿಕಟಪೂರ್ವ ಅಧ್ಯಕ್ಷ ಡಾ. ವೈ.ಡಿ. ರಾಜಣ್ಣ, ಸಾಹಿತಿ ಡಾ. ನಿಂಗಪ್ಪ ಚಳಗೇರಿ, ರಂಗನಾಥ್ ಮೈಸೂರು, ಶ್ರೀಮತಿ ಎ. ಹೇಮಗಂಗಾ, ಎಂ. ಚಂದ್ರಶೇಖರ್, ಸ್ಥಳ: ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಭವನ, ಜೆಎಸ್‌ಎಸ್ ಆಸ್ಪತ್ರೆ ಆವರಣ, ಸಂಜೆ 5.30ಕ್ಕೆ.

■ **ಶ್ರೀ ರಾಮಕೃಷ್ಣ ಆಶ್ರಮ :** ಸ್ವಾಮಿ ಜ್ಞಾನಯೋಗಾನಂದ ಅವರಿಂದ ಶ್ರೀ ಮದ್ಭಗವದ್ಗೀತಾ ಕುರಿತು ಉಪನ್ಯಾಸ, ಸ್ಥಳ: ಸ್ವಾಮಿ ಶಾಂಭವಾನಂದಜೀ ಸ್ಮಾರಕ ಸಭಾಂಗಣ, ಯಾದವಗಿರಿ, ಸಂಜೆ 6 ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಹೆಣ್ಣು ಮನಸು ಮಾಡಿದರೆ ಸಾಧಕ ಮಹಿಳೆಯರ ಪರಿಚಯ ಮಾಲಿಕೆ, ಪ್ರಸ್ತುತಿ : ಪ್ರೊಫೆಸರ್. ಸಿ. ನಾಗಣ್ಣ, ನಿರ್ಮಾಣ–ಜಾಂಪಣ್ಣ ಆಶೀಹಾಳ್, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ: ಕೆ.ಟಿ. ಉದಯ ಕಿರಣ್, ವ್ಯಾಖ್ಯಾನ : ಡಾ. ಬಿ.ವಿ. ವಸಂತಕುಮಾರ್, 6.50 ರೈತರಿಗೆ ಸಲಹೆ, 7.15 ಹಸಿರು ಹೊನ್ನು, 8.30 ಯೋಗ ಕುರಿತ ವಿಶೇಷ ಸರಣಿ ಮಹಾಯೋಗ, 8.35 ಯೋಗದತ್ತ ಜಗತ್ತು–ಯೋಗ ಕುರಿತ ವಿಶೇಷ ಕಾರ್ಯಕ್ರಮ ಸರಣಿ, 8.50 ಕನ್ನಡ ಚಿತ್ರಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಎನ್. ರವಿಕಿರಣ್– ಚಿತ್ರವೀಣಾ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಕಾಡಿನಲ್ಲಿನ ಕಥೆಗಳು, ಪ್ರಸ್ತುತಿ : ಜಿ. ಶಾಂತಕುಮಾರ್

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಚಿತ್ರಗೀತೆಗಳು, 1.00 ಪ್ರಗತಿ ಪಥ– ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು –ಕೆ.ಎಸ್. ಸುರೇಖಾ, 2.40 ಕನ್ನಡ ಚಿತ್ರಗೀತೆಗಳು, 3.00 ಹಿಂದಿ ಚಿತ್ರಗೀತೆಗಳು, 4.00 ಹಳ್ಳಿಹಾಡು, ಭಾಗವಹಿಸುತ್ತಾರೆ–ಚಾಮರಾಜನಗರ ಜಿಲ್ಲೆ ದೊಡ್ಡಮೋಳೆಯ ದೊಡ್ಡಗವಿಬಸಪ್ಪ, ಇವರೊಂದಿಗೆ ಭಾಗವಹಿಸುತ್ತಾರೆ–ಡಾ. ಮೈಸೂರು ಉಮೇಶ, 4.30 ರಸಮಂಜರಿ, 6.50 ಕೃಷಿರಂಗ–ಕಿಸಾನ್‌ವಾಣಿ – ಪ್ರಾಯೋಜಕರು : ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ನಂ ಕಂಪನಿ ರೈತ ಉತ್ಪಾದಕ ಸಂಸ್ಥೆಗಳ ಸಬಲೀಕರಣ ಕುರಿತ ಬಾನುಲಿ ಸರಣಿ, ತರಕಾರಿ ಬೇಸಾಯ ಮತ್ತು ಮಾರಾಟ ಈ ಕುರಿತು ಹುಣಸೂರು ತಾಲೂಕು ಬನ್ನಿಕುಪ್ಪೆ ಸಾವಯವ ರೈತ ಬಂಧು ಉತ್ಪಾದಕರ ಕಂಪನಿಯ ವ್ಯವಸ್ಥಾಪಕ ನಿರ್ದೇಶಕರಾದ ಎಂ.ಸಿ. ಚಂದ್ರಶೇಖರ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್. ಕೇಶವಮೂರ್ತಿ, 7.45 ಕನ್ನಡ ಚಿತ್ರಗೀತೆಗಳು, 8.00 ಯುವವಾಣಿ, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ, 10.00 ನಾಟಕ–ಮಹಾಕಲ್ಯಾಣ, ರಚನೆ–ಎಸ್.ವಿ. ಕೃಷ್ಣಶರ್ಮ, ನಿರ್ಮಾಣ–ಉಮೇಶ್ ಎಸ್. ಎಸ್.

ಅಂಬೇಡ್ಕರ್ ಭಾವಚಿತ್ರವುಳ್ಳ ಬ್ಯಾನರ್ ತೆರವು ಖಂಡಿಸಿ ಮೈಸೂರು ವಿವಿ ವಿದ್ಯಾರ್ಥಿಗಳ ಪ್ರತಿಭಟನೆ

ತಪ್ಪಿತಸ್ಥರ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಆಗ್ರಹ

ಮೈಸೂರು, ಜೂ.11(ಪಿಎಂ)– ಮಾನಸ ಗಂಗೋತ್ರಿಯ ಕ್ಲಾಕ್ ಟವರ್ ಸಮೀಪದ ಬಸ್ ಪ್ರಯಾಣಿಕರ ತಂಗುದಾಣದ ಎದುರಿನ ಫಲಕದಲ್ಲಿದ್ದ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರವುಳ್ಳ ಬ್ಯಾನರ್ ಅನ್ನು ದುರುದ್ದೇಶಪೂರ್ವಕವಾಗಿ ತೆರವುಗೊಳಿಸಲಾಗಿದೆ ಎಂದು ಆರೋಪಿಸಿ, ತಪ್ಪಿತಸ್ಥರನ್ನು ಅಮಾನತು ಮಾಡಿ, ಅವರ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಆಗ್ರಹಿಸಿ ವಿವಿಯ ವಿದ್ಯಾರ್ಥಿಗಳು ಸದರಿ ಸ್ಥಳದಲ್ಲಿ ಬುಧವಾರ ದಿಢೀರ್ ಪ್ರತಿಭಟನೆ ನಡೆಸಿದರು.

ಮೈಸೂರು ವಿವಿ ಸಂಶೋಧಕರ ಸಂಘ ಹಾಗೂ ದಲಿತ ವಿದ್ಯಾರ್ಥಿ ಒಕ್ಕೂಟದ ನೇತೃತ್ವದಲ್ಲಿ ಜಮಾಯಿಸಿದ ವಿದ್ಯಾರ್ಥಿಗಳು, ಅಂಬೇಡ್ಕರ್ ಭಾವಚಿತ್ರವುಳ್ಳ ಬ್ಯಾನರನ್ನು ಏಕಾಏಕಿ ತೆರವುಗೊಳಿಸಿರುವ ಮೈಸೂರು ವಿಶ್ವವಿದ್ಯಾನಿಲಯದ ಆಡಳಿತ ವರ್ಗಕ್ಕೆ ಧಿಕ್ಕಾರ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇದೇ ವೇಳೆ ಮಾತನಾಡಿದ ಮೈಸೂರು ವಿವಿ ಸಂಶೋಧಕರ ಸಂಘದ ಅಧ್ಯಕ್ಷ ಶಿವಶಂಕರ್, ಕುಲಸಚಿವರು ಏಕಾಏಕಿ ಎಓಗೆ ಫೋನ್ ಮಾಡಿ ತೆರವುಗೊಳಿಸಲು ಸೂಚಿಸಿದ್ದಾರೆ. ಸಂಶೋಧಕರ ಸಂಘದಿಂದ ಅಂಬೇಡ್ಕರ್ ಅವರ ಜಯಂತಿಯ ಶುಭಾಶಯ ಕೋರಿದ್ದ ಬ್ಯಾನರ್ ಅದು. ಸಂಘದ ಗಮನಕ್ಕೂ ತಾರದೇ, ನೋಟಿಸ್ ಸಹ ನೀಡದೇ ಏಕಾಏಕಿ ತೆರವುಗೊಳಿಸಲಾಗಿದೆ. ಏಕಾಏಕಿ ತೆರವುಗೊಳಿಸಲು ಕಾರಣರಾದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸಂಶೋಧಕರ ಸಂಘದ ಉಪಾಧ್ಯಕ್ಷ ಮಹೇಶ್ ಮಾತನಾಡಿ, ದುರುದ್ದೇಶಪೂರ್ವಕವಾಗಿಯೇ ತೆರವುಗೊಳಿಸಲಾಗಿದೆ. ಬ್ಯಾನರ್ ಅನ್ನು ಹರಿದು ಹಾಕಿದ್ದಾರೆ. ಇದಕ್ಕೆ ಕಾರಣರಾದವರನ್ನು ಅಮಾನತು ಮಾಡಬೇಕು ಎಂದು ಆಗ್ರಹಿಸಿದರು. ಸ್ಥಳಕ್ಕೆ ಭೇಟಿ ನೀಡಿದ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಜನಾರ್ಧನ್ ಅವರಿಗೆ ಘಟನೆ ಬಗ್ಗೆ ವಿವರಿಸಿದ ಸಂಶೋಧಕರ ಸಂಘದ ಅಧ್ಯಕ್ಷ ಶಿವಶಂಕರ್, ಅಂಬೇಡ್ಕರ್ ಅವರಿಗೆ ಅಪಮಾನ ಮಾಡಿರುವುದು ವಿವಿ ಆಡಳಿತಾಧಿಕಾರಿಗಳು (ಎಓ) ಎಂದು ದೂರಿದರು.

ಬಳಿಕ ಮಾತನಾಡಿದ ಜನಾರ್ಧನ್, ಎಓ ಅವರೊಂದಿಗೆ ಫೋನ್‌ನಲ್ಲಿ ಮಾತನಾಡಿದ್ದು, ಸಿಂಡಿಕೇಟ್‌ನಲ್ಲಿ ಎಲ್ಲಾ ಬ್ಯಾನರ್‌ಗಳನ್ನು ಸುರಕ್ಷಿತವಾಗಿ ತೆರವು ಮಾಡಿ, ಬಳಿಕ ಎಲ್ಲೆಲ್ಲಿ ಹಾಕಲು ಅವಕಾಶ ನೀಡಬೇಕೆಂದು ನಿರ್ಧರಿಸುವ ತೀರ್ಮಾನವಾಗಿದೆ. ಹಾಗಾಗಿ ಅಂಬೇಡ್ಕರ್ ಭಾವಚಿತ್ರ ಹೊಂದಿದ್ದ ಬ್ಯಾನರ್ ಅನ್ನು ಸುರಕ್ಷಿತವಾಗಿ ತೆರವು ಮಾಡಿ, ಇಟ್ಟಿದ್ದೇವೆ. ಯಾವುದೇ ರೀತಿ ಅಪಮಾನ ಮಾಡಿಲ್ಲ ಎಂದಿದ್ದಾರೆ ಎಂದು ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ವಿದ್ಯಾರ್ಥಿಗಳು, ತೆರವುಗೊಳಿಸಿದವರನ್ನು ಅಮಾನತು ಮಾಡಲೇಬೇಕೆಂದು ಆಗ್ರಹಿಸಿದರು.

ನಂತರ ಸ್ಥಳಕ್ಕೆ ಬಂದ ಡೀನ್ ಗುರುಸಿದ್ದಯ್ಯ ಮಾತನಾಡಿ, ಬ್ಯಾನರ್ ಸಂಬಂಧ ವಿವಿಧ ಸಂಘಟನೆಗಳು ನಮ್ಮ ಬ್ಯಾನರ್ ಹಾಕಲು ಅವಕಾಶ ಕೊಡಿ ಎಂದು ಬೇಡಿಕೆ ಇಟ್ಟ ಹಿನ್ನೆಲೆಯಲ್ಲಿ ಗೊಂದಲ ಆಗಬಾರದೆಂಬ ಕಾರಣಕ್ಕೆ ತೆರವು ಮಾಡಿದ್ದಾರೆ. ನಾಳೆ ಬೆಳಗ್ಗೆ ಮತ್ತೆ ಬ್ಯಾನರ್ ಹಾಕಿಸಲು ಕ್ರಮ ವಹಿಸುವುದು. ಪ್ರತಿಭಟನೆ ಕೈಬಿಡಿ ಎಂದು ಮನವಿ ಮಾಡಿದರು. ಇದಕ್ಕೆ ಒಪ್ಪದ ವಿದ್ಯಾರ್ಥಿಗಳು, ತೆರವುಗೊಳಿಸಲು ಕಾರಣರಾದವರ ವಿರುದ್ಧ ಕ್ರಮ ಆಗಬೇಕು. ಸ್ಥಳಕ್ಕೆ ಕುಲಪತಿಗಳೇ ಬರಲೇಬೇಕು ಎಂದು ಪಟ್ಟು ಹಿಡಿದರಲ್ಲದೆ, ಅಂಬೇಡ್ಕರ್ ಭಾವಚಿತ್ರ ಇಲ್ಲಿ ಇರಬಾರದು ಎಂಬ ಉದ್ದೇಶದಿಂದ ತೆರವು ಮಾಡಿಸಿದ್ದಾರೆ. ಅಲ್ಲದೆ, ಪ್ರತಿಭಟನೆ ಮಾಡುತ್ತಾರೆ ಎಂದು ವಿದ್ಯುತ್ ದೀಪಗಳನ್ನು ಆಫ್ ಮಾಡಿಸಿದ್ದಾರೆ ಎಂದು ದೂರಿದರು.

ವಿಸಿ ಮನವೊಲಿಕೆ ವಿಫಲ: ಆ ನಂತರ ಸ್ಥಳಕ್ಕೆ ಭೇಟಿ ನೀಡಿದ ಕುಲಪತಿ ಡಾ.ಎನ್.ಕೆ. ಲೋಕನಾಥ್, ತೆರವು ಮಾಡಿದವರಿಗೆ ನಾಳೆ ಬೆಳಗ್ಗೆಯೊಳಗೆ ಮತ್ತೆ ಬ್ಯಾನರ್ ಹಾಕುವಂತೆ ಸೂಚನೆ ನೀಡುತ್ತೇನೆ ಎಂದು ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ವಿದ್ಯಾರ್ಥಿಗಳು ತೆರವು ಮಾಡಿದವರನ್ನು ಈ ಕೂಡಲೇ ಅಮಾನತು ಮಾಡಲೇಬೇಕು ಎಂದು ಒತ್ತಾಯಿಸಿದರು.

ಯಾರು ತೆರವು ಮಾಡಿದ್ದು ಎಂಬುದು ನನಗೆ ಗೊತ್ತಿಲ್ಲ ಎಂದು ಕುಲಪತಿಗಳು ಹೇಳಿದಾಗ, ವಿದ್ಯಾರ್ಥಿಗಳು, ಕುಲಪತಿ ಅವರಿಗೂ ತಿಳಿಸದೇ ತೆರವು ಮಾಡಿದ್ದಾರೆ. ಪೊಲೀಸರು ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು. ರಾಷ್ಟ್ರನಾಯಕರಿಗೆ ಅಪಮಾನ ಮಾಡಲಾಗಿದೆ. ಹಾಗಾಗಿ ನೀವೇ ದೂರು ಕೊಟ್ಟು ಪ್ರಕರಣ ದಾಖಲಿಸಿ ಎಂದು ಕುಲಪತಿಗಳನ್ನು ಆಗ್ರಹಿಸಿದರು.

ಸ್ಥಳದಲ್ಲಿದ್ದ ಪೊಲೀಸರು ವಿದ್ಯಾರ್ಥಿಗಳನ್ನು ಸಮಾಧಾನಗೊಳಿಸಿದ ಬಳಿಕ ಮತ್ತೆ ಮಾತನಾಡಿದ ಕುಲಪತಿಗಳು, ಎಓ ಅವರಿಗೆ ಕರೆ ಮಾಡಿದ್ದೆ. ಅವರು ಫೋನ್ ತೆಗೆಯುತ್ತಿಲ್ಲ. ಯಾರು ತೆರವು ಮಾಡಿದ್ದಾರೆ ಎಂದು ಪರಿಶೀಲನೆ ಮಾಡಿ, ನಾಳೆ ಅವರ ವಿರುದ್ಧ ಕ್ರಮ ವಹಿಸಲಾಗುವುದು ಎಂದರು. ಆದರೆ ವಿದ್ಯಾರ್ಥಿಗಳು ಇದಕ್ಕೆ ಒಪ್ಪದೇ ಪ್ರತಿಭಟನೆ ಮುಂದುವರೆಸಿದರು.

ಸಿಂಡಿಕೇಟ್‌ನಲ್ಲಿ ಚರ್ಚಿಸಿಲ್ಲ: ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ನಟರಾಜ್ ಶಿವಣ್ಣ ಮಾತನಾಡಿ, ತೆರವು ಮಾಡಿರುವುದು ತಪ್ಪು. ಸರಿಪಡಿಸಲು ಒಪ್ಪಿದ್ದಾರೆ. ಸಿಂಡಿಕೇಟ್ ಸದಸ್ಯನಾಗಿ ನಮ್ಮ ವಿವಿ ಪರವಾಗಿ ಕ್ಷಮೆ ಕೇಳುತ್ತೇನೆ. ಅಮಾನತು ಸಂಬಂಧ ಸಿಂಡಿಕೇಟ್‌ನಲ್ಲಿ ಸಹ ಚರ್ಚೆ ಮಾಡಬೇಕಾಗುತ್ತದೆ. ನಾನೇ ಆ ಬಗ್ಗೆ ಮಾತನಾಡುತ್ತೇನೆ. ನಿಮ್ಮ ಬೇಡಿಕೆ ಈಡೇರಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಬ್ಯಾನರ್ ತೆಗೆಯುವ ವಿಷಯ ಸಿಂಡಿಕೇಟ್ ಸಭೆಯಲ್ಲಿ ಯಾವುದೇ ಚರ್ಚೆಯೇ ಆಗಿಲ್ಲ. ಇದು ಸುಳ್ಳು ಎಂದು ತಿಳಿಸಿದರು. ನಂತರ ಕುಲಪತಿಗಳು ದೂರು ಕೊಟ್ಟು ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ಮಾಡಿಸಬೇಕೆಂದು ವಿದ್ಯಾರ್ಥಿಗಳು ಬೇಡಿಕೆ ಇಟ್ಟಾಗ, ಗಂಭೀರ ವಿಷಯವಾದ ಹಿನ್ನೆಲೆಯಲ್ಲಿ ಆದಷ್ಟು ಶೀಘ್ರದಲ್ಲಿ ಕ್ರಮ ವಹಿಸುತ್ತೇವೆ ಸಮಯ ಕೊಡಿ ಎಂದು ಕುಲಪತಿಗಳು ಹೇಳಿದರು. ಆದರೆ ಇದಕ್ಕೊಪ್ಪದ ವಿದ್ಯಾರ್ಥಿಗಳು ಪ್ರತಿಭಟನೆ ಮುಂದುವರೆಸಿದರು.



ಮೈಸೂರಿನ ಮಾನಸ ಗಂಗೋತ್ರಿಯ ಬಸ್ ಪ್ರಯಾಣಿಕರ ತಂಗುದಾಣದ ಬಳಿ ಮೈಸೂರು ವಿವಿಯ ವಿದ್ಯಾರ್ಥಿಗಳು ಬುಧವಾರ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ತಡರಾತ್ರಿವರೆಗೂ ನಡೆದ ಪ್ರತಿಭಟನೆ

ತೆರವು ಮಾಡಿರುವ ಸಂಬಂಧ ಎಫ್‌ಐಆರ್ ಮಾಡಬೇಕು. ಬ್ಯಾನರ್ ತೆರವುಗೊಳಿಸಿದವರನ್ನು ಅಮಾನತು ಮಾಡಬೇಕೆಂದು ಪಟ್ಟು ಹಿಡಿದು ತಡರಾತ್ರಿವರೆಗೂ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದರು. ಈ ಸಂಬಂಧ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಸಂಶೋಧಕರ ಸಂಘದ ಅಧ್ಯಕ್ಷ ಶಿವಶಂಕರ್, ಡಿಸಿಪಿ ಅವರು ಬಂದು ಈ ಘಟನೆ ಸಂಬಂಧ ಎಫ್‌ಐಆರ್ ದಾಖಲಿಸುವ ಭರವಸೆ ನೀಡಿದ್ದಾರೆ. ಹಾಗಾಗಿ ತಾತ್ಕಾಲಿಕವಾಗಿ ಪ್ರತಿಭಟನೆಯನ್ನು ಕೈಬಿಟ್ಟಿದ್ದೇವೆ. ಜೊತೆಗೆ ತೆರವುಗೊಳಿಸಿದವರನ್ನು ಅಮಾನತು ಮಾಡಬೇಕು ಎಂಬುದು ನಮ್ಮ ಮತ್ತೊಂದು ಬೇಡಿಕೆ. ನಮ್ಮ ಬೇಡಿಕೆ ಈಡೇರಿಸದೇ ಇದ್ದರೆ, ಗಂಗೋತ್ರಿ ಬಂದ್‌ಗೆ ಕರೆ ನೀಡಲಾಗುವುದು. ನಾಳೆ ಕ್ರಾಫರ್ಡ್ ಭವನದ ಎದುರು ಎಓ ಅಮಾನತು ಮಾಡುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಲಿದ್ದೇವೆ ಎಂದು ತಿಳಿಸಿದರು.

ಬಾಕಿ ಉಳಿದಿದ್ದ ಜಿಲ್ಲಾ ಘಟಕಗಳಿಗೆ ಅಧ್ಯಕ್ಷರನ್ನು ನೇಮಿಸಿದ ಬಿಜೆಪಿ

ಮೈಸೂರು ಗ್ರಾಮಾಂತರಕ್ಕೆ ಕೆ.ಎನ್.ಸುಬ್ಬಣ್ಣ, ಕೊಡಗಿಗೆ ರವಿ ಕಾಳಪ್ಪ, ಹಾಸನಕ್ಕೆ ಸಿದ್ದೇಶ್ ನಾಗೇಂದ್ರ

ಬೆಂಗಳೂರು, ಜೂ. 11– ಬಾಕಿ ಇರುವ ಜಿಲ್ಲಾ ಘಟಕಗಳಿಗೆ ಬಿಜೆಪಿ ಅಧ್ಯಕ್ಷರನ್ನು ನೇಮಕ ಮಾಡಲಾಗಿದೆ. 10 ಜಿಲ್ಲಾ ಘಟಕಗಳಿಗೆ ಜಿಲ್ಲಾಧ್ಯಕ್ಷರನ್ನು ನೇಮಿಸಿ ರಾಜ್ಯ ಚುನಾವಣಾಧಿಕಾರಿ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ ಅವರು ಇಂದು (ಜೂನ್ 11) ಆದೇಶ ಹೊರಡಿಸಿದ್ದಾರೆ. ಮೈಸೂರು ಗ್ರಾಮಾಂತರ, ಹಾಸನ, ಕೊಡಗು, ಉಡುಪಿ ಸೇರಿದಂತೆ ವಿವಿಧ ಜಿಲ್ಲೆಗಳಿಗೆ ಅಧ್ಯಕ್ಷರನ್ನು ನೇಮಿಸಲಾಗಿದ್ದು, ಪಕ್ಷದ ಸಂಘಟನೆಯನ್ನು ಸದೃಢಗೊಳಿಸುತ್ತಾ, ಮುಂಬರುವ ಎಲ್ಲಾ ರೀತಿಯ ಸವಾಲುಗಳನ್ನು ಎದುರಿಸುವ ಶಕ್ತಿ, ಪಕ್ಷ ವರ್ಚಸ್ಸು ಹೆಚ್ಚಿಸುವಲ್ಲಿ ಶ್ರಮಿಸುವಿರಿ ಎಂದು ಗಣೇಶ್ ಕಾರ್ಣಿಕ್ ಅವರು ನೂತನ ಜಿಲ್ಲಾಧ್ಯಕ್ಷರುಗಳಿಗೆ ಶುಭ ಹಾರೈಸಿದ್ದಾರೆ.



ಕೆ.ಎನ್.ಸುಬ್ಬಣ್ಣ

ಈ ಹಿಂದೆ 23 ಜಿಲ್ಲಾ ಘಟಕಗಳಿಗೆ ಅಧ್ಯಕ್ಷರನ್ನು ನೇಮಕ ಮಾಡಲಾಗಿತ್ತು. ಆದ್ರೆ, ಇದೀಗ ದೇಶದಾದ್ಯಂತ ಪಕ್ಷದ ಸಂಘಟನಾ ಪರ್ವ 2024–25 ನಡೆಯುತ್ತಿದ್ದು, ಇದರ ಅಂಗವಾಗಿ ರಾಜ್ಯದಲ್ಲಿ ಎರಡನೇ ಹಂತದಲ್ಲಿ ಉಳಿದಿರುವ 10 ಸಂಘಟನಾತ್ಮಕ ಜಿಲ್ಲಾ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆಯನ್ನು ಮುಗಿಸಲಾಗಿದೆ.

ಜನವರಿಯಲ್ಲಿ 23 ಜಿಲ್ಲೆಗಳಿಗೆ ಬಿಜೆಪಿ ಜಿಲ್ಲಾಧ್ಯಕ್ಷರ ನೇಮಕ ಮಾಡಲಾಗಿತ್ತು. ಆದ್ರೆ, ಕೆಲ ಗೊಂದಲ, ಆಂತರಿಕ ಕಚ್ಚಾಟದಿಂದ 10 ಜಿಲ್ಲಾ ಘಟಕಗಳಿಗೆ ಅಧ್ಯಕ್ಷರನ್ನು ನೇಮಕ ಮಾಡಿರಲಿಲ್ಲ. ಇದೀಗ ಬಾಕಿ ಇದ್ದ ಜಿಲ್ಲಾಧ್ಯಕ್ಷರನ್ನು ಸಹ ನೇಮಿಸಲಾಗಿದೆ. ಅದರಲ್ಲೂ ಮುಖ್ಯವಾಗಿ ಚಿಕ್ಕಬಳ್ಳಾಪುರ ಜಿಲ್ಲಾಧ್ಯಕ್ಷರನ್ನಾಗಿ ಸಂದೀಪ್ ರೆಡ್ಡಿ ಅವರನ್ನು ಮೊದಲ ಪಟ್ಟಿಯಲ್ಲೇ ನೇಮಿಕ ಮಾಡಲಾಗಿತ್ತು. ಆದ್ರೆ, ಇದಕ್ಕೆ ಸಂಸದ ಡಾ ಕೆ ಸುಧಾಕರ್ ಅವರು ಆಕ್ಷೇಪ ವ್ಯಕ್ತಪಡಿಸಿದ್ದರು. ಯಾರನ್ನು ಕೇಳಿ ಮಾಡಿದ್ದೀರಿ ಎಂದು ರಾಜ್ಯಾಧ್ಯಕ್ಷ ವಿಜಯೇಂದ್ರ ವಿರುದ್ಧವೇ ಬಹಿರಂಗವಾಗಿ ಪ್ರಶ್ನಿಸಿದ್ದರು. ಇದರ ಬೆನ್ನಲ್ಲೇ ರಾಷ್ಟ್ರೀಯ ಅಧ್ಯಕ್ಷರ ಸೂಚನೆ ಮೇರೆಗೆ ಚಿಕ್ಕಬಳ್ಳಾಪುರ ಬಿಜೆಪಿ ಜಿಲ್ಲಾಧ್ಯಕ್ಷ ಆಯ್ಕೆ ತಡೆಹಿಡಿಯಲಾಗಿತ್ತು. ಈಗ ಚಿಕ್ಕಬಳ್ಳಾಪುರ ಜಿಲ್ಲಾಧ್ಯಕ್ಷರನ್ನಾಗಿ ಎಸ್.ವಿ. ರಾಮಚಂದ್ರ ಗೌಡ ಅವರನ್ನು ನೇಮಕ ಮಾಡಲಾಗಿದೆ.



ರವಿ ಕಾಳಪ್ಪ

ಬಿಜೆಪಿ ನೂತನ ಜಿಲ್ಲಾಧ್ಯಕ್ಷರ ಪಟ್ಟಿ

ಮೈಸೂರು ಗ್ರಾಮಾಂತರ – ಕೆ.ಎನ್.ಸುಬ್ಬಣ್ಣ.
ಹಾಸನ – ಸಿದ್ದೇಶ್ ನಾಗೇಂದ್ರ.
ಕೊಡಗು – ರವಿ ಕಾಳಪ್ಪ
ಉಡುಪಿ– ಕುತ್ಯಾರು ನವೀನ್ ಶೆಟ್ಟಿ
ದಾವಣಗೆರೆ – ಎನ್ ರಾಜಶೇಖರ
ಹಾವೇರಿ – ವಿರೂಪಾಕ್ಷಪ್ಪ ಬಳ್ಳಾರಿ
ಚಿತ್ರದುರ್ಗ – ಕೆ.ಟಿ. ಕುಮಾರಸ್ವಾಮಿ
ತುಮಕೂರು – ಎಚ್.ಎಸ್. ರವಿಕುಮಾರ್ (ಹೆಬ್ಬಾಕ)
ಮಧುಗಿರಿ – ಚಿದಾನಂದ ಗೌಡ
ಚಿಕ್ಕಬಳ್ಳಾಪುರ – ಎಸ್.ವಿ. ರಾಮಚಂದ್ರಗೌಡ (ಸೀಕಲ್)

ಸದ್ಯಕ್ಕೆ ಸಂಪುಟ ಪುನಾರಚನೆ ಇಲ್ಲ

ಕಲಬುರಗಿ: ರಾಜ್ಯದಲ್ಲಿ ಸದ್ಯಕ್ಕೆ ಸಚಿವ ಸಂಪುಟ ಪುನಾರಚನೆ ಅಥವಾ ಕೆಪಿಸಿಸಿ ಅಧ್ಯಕ್ಷರ ಬದಲಾವಣೆಗೆ ಎಐಸಿಸಿ ಮುಂದೆ ಯಾವುದೇ ಪ್ರಸ್ತಾವನೆ ಇಲ್ಲ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದರು.



ತಮ್ಮ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಂಗಳವಾರ ನವದೆಹಲಿಯಲ್ಲಿ ತಮ್ಮನ್ನು ಹಾಗೂ ಎಐಸಿಸಿ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಅವರನ್ನು ಭೇಟಿಯಾದಾಗ ಕರ್ನಾಟಕದಲ್ಲಿನ ಸಚಿವ ಸಂಪುಟ ಪುನಾರಚನೆ ಅಥವಾ ಕೆಪಿಸಿಸಿ ಅಧ್ಯಕ್ಷ ಸ್ಥಾನ ಬದಲಾವಣೆ ಕುರಿತು ಯಾವುದೇ ಮಾತುಕತೆ ನಡೆಸಿಲ್ಲ ಎಂದು ಸ್ಪಷ್ಟಪಡಿಸಿದರು. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತ ಹಾಗೂ ಜಾತಿ ಸಮೀಕ್ಷೆ ಕುರಿತು ಸಭೆಯಲ್ಲಿ ಚರ್ಚಿಸಿದೆವು.

ಕಾಲ್ತುಳಿತದ ಘಟನೆ ಕಾಂಗ್ರೆಸ್ ಸೇರಿದಂತೆ ಎಲ್ಲರನ್ನೂ ಆಘಾತಕ್ಕೀಡು ಮಾಡಿದೆ. ಹೀಗಾಗ ಬಾರದಿತ್ತು. ಇಂತಹ ಘಟನೆಗಳು ನಡೆಯದಂತೆ ಮುಂದಿನ ದಿನಗಳಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ಸೂಚಿಸಿದ್ದೇವೆ. ಪೊಲೀಸ್ ಅಧಿಕಾರಿಗಳ ಅಮಾನತು, ಮ್ಯಾಜಿಸ್ಟ್ರೇಟ್ ತನಿಖೆ ಮತ್ತು ನ್ಯಾಯಾಂಗ ತನಿಖೆಗೆ ಆದೇಶ ಮತ್ತು ನೊಂದವರಿಗೆ ಪರಿಹಾರ ಮತ್ತಿತರ ಕ್ರಮಗಳ ಬಗ್ಗೆ ಸಿಎಂ ಮತ್ತು ಉಪ ಮುಖ್ಯಮಂತ್ರಿ ವಿವರಿಸಿ ದ್ದಾರೆ ಎಂದು ಹೇಳಿದರು.

ಜಾತಿ ಗಣತಿ ಮರು ಸಮೀಕ್ಷೆ: ಕಾಂತರಾಜ್ ಆಯೋಗ ನೀಡಿರುವ ಸಮೀಕ್ಷಾ ವರದಿಯನ್ನು ತಿರಸ್ಕರಿಸದೆ ಮರು ಸಮೀಕ್ಷೆ ನಡೆಸುವಂತೆ ಸಿಎಂ ಹಾಗೂ ಡಿಸಿಎಂಗೆ ಸೂಚಿಸಿದ್ದೇವೆ ಎಂದರು.

ಜೂ. 26ಕ್ಕೆ ಎಂಸಿಡಿಸಿಸಿ ಬ್ಯಾಂಕ್ ಚುನಾವಣೆ

• ನಾಮಪತ್ರ ಸಲ್ಲಿಸಲು ಜೂ.18 ಕೊನೆ ದಿನ • ಜೂ.19ಕ್ಕೆ ನಾಮಪತ್ರ ಪರಿಶೀಲನೆ • ಹಿಂಪಡೆಯಲು ಜೂ.20 ಅಂತಿಮ ದಿನ



ಮೈಸೂರು, ಜೂ.11– ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್(ಎಂಸಿಡಿಸಿಸಿ ಬ್ಯಾಂಕ್) ಆಡಳಿತ ಮಂಡಳಿ ನಿರ್ದೇಶಕರ ಸ್ಥಾನಗಳ ಚುನಾವಣೆಗೆ ಕೊನೆಗೂ ದಿನಾಂಕ ನಿಗದಿಯಾಗಿದ್ದು, ಜೂ.26 ರಂದು ಮತದಾನ ನಡೆಯಲಿದೆ.

ನಾನಾ ಕಾರಣಗಳಿಂದಾಗಿ ಹಲವು ತಿಂಗಳುಗಳಿಂದ ಮುಂದೂಡುತ್ತಲೇ ಬಂದಿದ್ದ ಎಂಸಿಡಿಸಿಸಿ ಬ್ಯಾಂಕ್ ಚುನಾವಣೆಯನ್ನು ಜೂನ್ ತಿಂಗಳೊಳಗೆ ನಡೆಸುವಂತೆ ಹೈಕೋರ್ಟ್ ನೀಡುರುವ ಸೂಚನೆಯಂತೆ ದಿನಾಂಕ ನಿಗದಿಪಡಿಸಲಾಗಿದ್ದು, ನ್ಯಾಯಾಲಯದಲ್ಲಿರುವ 3 ಕ್ಷೇತ್ರಗಳನ್ನು ಹೊರತುಪಡಿಸಿ, ಉಳಿದ 13 ಕ್ಷೇತ್ರಗಳ ನಿರ್ದೇಶಕರ ಸ್ಥಾನಗಳಿಗೆ ಚುನಾವಣೆ ನಡೆಯಲಿದೆ.

ನಾಮಪತ್ರ ಸಲ್ಲಿಕೆಗೆ ಜೂ.18 ಕೊನೆಯ ದಿನವಾಗಿದ್ದು, ಜೂ.19 ರಂದು ನಾಮಪತ್ರ ಪರಿಶೀಲನೆ ನಡೆಯಲಿದೆ. ಜೂ.20 ರಂದು ನಾಮಪತ್ರ ವಾಪಸ್ ಪಡೆಯಲು ಅವಕಾಶ ನೀಡಿದ್ದು, ಜೂ.26 ರಂದು ಮತದಾನ ನಡೆಯಲಿದೆ. ಆಡಳಿತ ಮಂಡಳಿಯ 16 ನಿರ್ದೇಶಕರ ಸ್ಥಾನಗಳಲ್ಲಿ 3 ಕ್ಷೇತ್ರಗಳು (ಮೈಸೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಪರವಾಗಿ ಆಯ್ಕೆಯಾಗುವ 2 ಕ್ಷೇತ್ರಗಳು, ತಾಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘದ ಕ್ಷೇತ್ರದಿಂದ ಆಯ್ಕೆಯಾಗಬೇಕಾದ ಒಂದು ಕ್ಷೇತ್ರ) ಹೊರತುಪಡಿಸಿ ಉಳಿದ 13 ಸ್ಥಾನಗಳಿಗೆ ಮತದಾನ ನಡೆಯಲಿದೆ.

ಜಿಲ್ಲೆಯ 11 ತಾಲೂಕುಗಳಿಂದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಂದ ಆಯ್ಕೆ ಮಾಡಬೇಕಾದ 11 ಕ್ಷೇತ್ರಗಳು, ಗೃಹ ನಿರ್ಮಾಣ ಸಹಕಾರ ಕ್ಷೇತ್ರದಿಂದ ಒಂದು, ಇತರೆ ಕ್ಷೇತ್ರಗಳಿಂದ ಒಂದು ಸ್ಥಾನಕ್ಕೆ ಮತದಾನ ನಡೆಯಲಿದೆ.

ವಿಳಂಬಕ್ಕೆ ಕಾರಣ: ಎಂಸಿಡಿಸಿಸಿ ಬ್ಯಾಂಕ್‌ನ ಆಡಳಿತ ಮಂಡಳಿಯ ನಿರ್ದೇಶಕರ ಅಧಿಕಾರ ಅವಧಿ ಮುಗಿದ ಮೇಲೆ ಸರ್ಕಾರ ಚುನಾವಣೆ ನಡೆಸದೆ ಆಡಳಿತಾಧಿಕಾರಿಯನ್ನು ನಿಯೋಜಿಸಿ ಚುನಾವಣೆಯನ್ನು ಮುಂದೂಡಿತ್ತು. ಸರ್ಕಾರದ ಈ ಕ್ರಮವನ್ನು ಪ್ರಶ್ನಿಸಿ ಹೈಕೋರ್ಟ್ ಮೊರೆ ಹೋಗಿದ್ದರಿಂದ ಕಳೆದ ಜನವರಿಯಲ್ಲೇ ಚುನಾವಣೆ ನಡೆಸುವಂತೆ ಹೈಕೋರ್ಟ್ ಆದೇಶ ನೀಡಿತ್ತು. ಆದರೆ, ಈ ಆದೇಶವನ್ನು ಪಾಲಿಸುವ ಬದಲಿಗೆ ಸಹಕಾರ ಕ್ಷೇತ್ರದಲ್ಲಿರುವ ಪರಮಾಧಿಕಾರವನ್ನು ಬಳಸಿ 6 ತಿಂಗಳ ಕಾಲ ಚುನಾವಣೆ ಮುಂದೂಡಲಾಗಿತ್ತು.

ಹೀಗಾಗಿ ಅರ್ಜಿದಾರರು ನ್ಯಾಯಾಂಗ ನಿಂದನೆ ಅರ್ಜಿ ಸಲ್ಲಿಸಿದ ಪರಿಣಾಮವಾಗಿ ಜೂ.15 ರೊಳಗೆ ಚುನಾವಣಾ ಪ್ರಕ್ರಿಯೆ ಮುಗಿಸುವಂತೆ ಕೋರ್ಟ್ ಆದೇಶ ನೀಡಿತ್ತು. ಇದರಿಂದ ಚುನಾವಣೆ ನಡೆಸಲು ಜಿಲ್ಲಾಧಿಕಾರಿಗಳು ಆಗಿರುವ ಜಿಲ್ಲಾ ಫೆಡರಲ್ ಸಹಕಾರ ಸಂಘಗಳ ಚುನಾವಣಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಅಧಿಸೂಚನೆ ಹೊರಡಿಸಿದ್ದರು.

ನಂತರ ಕೆಲವರು ಎಂಸಿಡಿಸಿಸಿ ಬ್ಯಾಂಕ್‌ನ ಹಳೇ ಬೈಲಾವನ್ನು ತಿದ್ದುಪಡಿ ಮಾಡಿ ಹೊಸ ಬೈಲಾ ನಿಯಮ ಪ್ರಕಾರ 3 ಕ್ಷೇತ್ರಗಳಲ್ಲಿ ವ್ಯತ್ಯಾಸವಾಗಿದೆ ಎನ್ನುವುದನ್ನು ಮುಂದಿಟ್ಟುಕೊಂಡು ನ್ಯಾಯಾಲಯದ ಮೊರೆ ಹೋಗಿದ್ದರಿಂದ ನ್ಯಾಯಾಲಯ ಮಧ್ಯಂತರ ತಡೆ ನೀಡಿತ್ತು. ಆದರೆ, ಈಗ ನ್ಯಾಯಾಲಯದಲ್ಲಿರುವ 3 ಕ್ಷೇತ್ರಗಳನ್ನು ಹೊರತುಪಡಿಸಿ ಉಳಿದ 13 ನಿರ್ದೇಶಕರ ಕ್ಷೇತ್ರ ಗಳಿಗೆ ಚುನಾವಣೆ ನಡೆಸಲು ದಿನಾಂಕ ಪ್ರಕಟಿಸಿ ಅಧಿಸೂಚನೆ ಹೊರಡಿಸಲಾಗಿದೆ.

ಹಳೇ ಎಪಿಎಂಸಿ ಮಾರುಕಟ್ಟೆಯಲ್ಲಿ ಕಸ ವಿಲೇವಾರಿ ಚುರುಕು

'ಮೈಸೂರು ಮಿತ್ರ' ಫಲಶೃತಿ

ಮೈಸೂರು, ಜೂ. 11(ಎಂಕೆ)– ಮೈಸೂರು ಬಂಬೂಬಜಾರ್‌ನ ಹಳೇ ಎಪಿಎಂಸಿ ಹಣ್ಣುಗಳ ಸಗಟು ಮಾರುಕಟ್ಟೆ(ಉಪ ಪ್ರಾಂಗಣ)ಯಲ್ಲಿ ಕಸ ವಿಲೇವಾರಿ ಚುರುಕುಗೊಳಿಸಲಾಗಿದೆ.

'ಮೈಸೂರು ಮಿತ್ರ'ನಲ್ಲಿ ಜೂ.3 ರಂದು **'ಬಂಬೂ ಬಜಾರ್ ಹಳೇ ಎಪಿಎಂಸಿಯಲ್ಲಿ ರಾಶಿ ರಾಶಿ ಕಸ; ಸಾಂಕ್ರಾಮಿಕ ರೋಗ ಹರಡುವ ಭೀತಿಯಲ್ಲಿ ವ್ಯಾಪಾರಿಗಳು'** ಶೀರ್ಷಿಕೆಯಡಿ ಸುದ್ದಿ ಪ್ರಕಟಗೊಂಡ ಬಳಿಕ ಎಚ್ಚೆತ್ತ ಎಪಿಎಂಸಿ ಅಧಿಕಾರಿ ಹಾಗೂ ಗುತ್ತಿಗೆದಾರರು ಕಸ ವಿಲೇವಾರಿಯನ್ನು ಚುರುಕುಗೊಳಿಸಿದ್ದಾರೆ.

ಮಾವಿನ ಸೀಸನ್ ಆಗಿರುವುದರಿಂದ ಕಸದ ರಾಶಿ ಹೆಚ್ಚಾಗುವುದು ಸಾಮಾನ್ಯವಾಗಿದ್ದು, ಬೆಳಗ್ಗೆಯಿಂದ ಸಂಜೆಯವರೆಗೆ ಮೂರು ಟ್ರ್ಯಾಕ್ಟರ್ ಲೋಡ್ ಕಸವನ್ನು ವಿಲೇವಾರಿ ಮಾಡುತ್ತಿದ್ದೇವೆ. ಇಡೀ ದಿನ ಕಸ ವಿಲೇವಾರಿ ನಡೆಯಲಿದ್ದು, ಈಗಿರುವ 7 ಮಂದಿ ಜೊತೆಗೆ ಹೆಚ್ಚುವರಿ ಸಿಬ್ಬಂದಿ ನಿಯೋಜನೆಗೆ ಅಧಿಕಾರಿಗಳಿಗೆ ಮನವಿ ಮಾಡಿರುವುದಾಗಿ ಗುತ್ತಿಗೆದಾರರಾದ ರಾಘವೇಂದ್ರ, ನಾಗರಾಜು 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ಮಳೆಯಲ್ಲೂ ಕಸ ವಿಲೇವಾರಿ: ಸುರಿಯುತ್ತಿದ್ದ ಮಳೆಯ ನಡುವೆಯೂ ಎಪಿಎಂಸಿ ಮಾರುಕಟ್ಟೆ ಸಿಬ್ಬಂದಿ ಕಸ ವಿಲೇವಾರಿಯಲ್ಲಿ ತೊಡಗಿದ್ದರು. ಸಿಬ್ಬಂದಿಗಳು ರೈನ್‌ಕೋಟ್ ಧರಿಸದೆ ಕೊಳೆತ ಹಣ್ಣುಗಳ ರಾಶಿ ಕಸವನ್ನು ಲೋಡ್ ಮಾಡುತ್ತಿರುವುದನ್ನು ಗಮನಿಸಿದ ಕೆಲ ವ್ಯಾಪಾರಿಗಳು ಮರುಕ ವ್ಯಕ್ತಪಡಿಸಿದರು.



ಹಣ್ಣಿನ ಕಸ ಲೋಡ್ ಮಾಡುತ್ತಿರುವ ಸಿಬ್ಬಂದಿ.

ಅಧಿಕಾರಿಗಳ ನಿರ್ಲಕ್ಷ್ಯತೆ...

ಸುಮಾರು 150ಕ್ಕೂ ಹೆಚ್ಚು ಮಳಿಗೆಗಳಿರುವ ಹಳೇ ಎಪಿಎಂಸಿ ಹಣ್ಣುಗಳ ಸಗಟು ಮಾರುಕಟ್ಟೆ ನಿರ್ವಹಣೆಯಲ್ಲಿ ಅಧಿಕಾರಿಗಳ ನಿರ್ಲಕ್ಷ್ಯತೆ, ಅಸಡ್ಡೆಯಿಂದ ತೊಂದರೆಗಳಾಗುತ್ತಿವೆ. ದೊಡ್ಡ ಮೋರಿ ಕುಸಿದು ತಿಂಗಳಾದರೂ ಯಾವುದೇ ಸುರಕ್ಷತಾ ಕ್ರಮ ಕೈಗೊಂಡಿಲ್ಲ. ಏನಾದರೂ ಸಮಸ್ಯೆ ಹೇಳಿಕೊಳ್ಳುವುದಕ್ಕೂ ಕಚೇರಿಯಲ್ಲಿ ಅಧಿಕಾರಿಗಳೇ ಇರುವುದಿಲ್ಲ ಎಂದು ಕೆಲ ವ್ಯಾಪಾರಸ್ಥರು ದೂರಿದ್ದಾರೆ.

'ದಕ್ಷಿಣ ಭಾರತ ಬುದ್ಧಗಯಾ ಸ್ಮಾರಕ ನಿರ್ಮಾಣ'ಕ್ಕಾಗಿ

ಧಮ್ಮ ಸಂಕಲ್ಪ ಜಾಗೃತಿ ಸಮಾವೇಶ

ಮೈಸೂರು, ಜೂ.11(ಎಂಕೆ)– ಅಯೋಧ್ಯೆ ಬಾಲರಾಮನ ಕೆತ್ತನೆಗೆ ಕಲ್ಲು(ಶಿಲೆ) ದೊರೆತ ಸ್ಥಳದಲ್ಲಿ 'ದಕ್ಷಿಣ ಭಾರತ ಬುದ್ಧಗಯಾ ಸ್ಮಾರಕ ನಿರ್ಮಾಣ'ಕ್ಕಾಗಿ ಬುಧವಾರ ಧಮ್ಮ ಸಂಕಲ್ಪ ಜಾಗೃತಿ ಸಮಾವೇಶ ನಡೆಸಲಾಯಿತು.

ಮೈಸೂರು ತಾಲೂಕು ಜಯಪುರ ಹೋಬಳಿ ಹಾರೋಹಳ್ಳಿ ಗ್ರಾಮದಲ್ಲಿ ಬೌದ್ಧ ಅನುಯಾಯಿಗಳು, ಭೀಮ ಬಂಧುಗಳು, ದಲಿತ ಸಂಘಟನೆಗಳು ಹಾಗೂ ಪ್ರಗತಿಪರ ಚಿಂತಕರು ಆಯೋಜಿಸಿದ್ದ ಧಮ್ಮ ಸಂಕಲ್ಪ ಜಾಗೃತಿ ಸಮಾವೇಶದಲ್ಲಿ ಅಯೋಧ್ಯೆ ಬಾಲರಾಮನ ಕೆತ್ತನೆಗೆ ಕಲ್ಲು ದೊರೆತ ಸ್ಥಳದಲ್ಲಿ 'ದಕ್ಷಿಣ ಭಾರತ ಬುದ್ಧಗಯಾ ಸ್ಮಾರಕ ನಿರ್ಮಾಣ'ಕ್ಕೆ ತೀರ್ಮಾನಿಸಲಾಯಿತು.

ಸಮಾವೇಶದ ಆರಂಭಕ್ಕೂ ಮುನ್ನ ಹಾರೋಹಳ್ಳಿ ಗ್ರಾಮದ ಗೇಟ್‌ನಿಂದ ಸ್ಮಾರಕ ನಿರ್ಮಾಣದ ನಿಯೋಜಿತ ಸ್ಥಳದವರೆಗೆ ಭಗವಾನ್ ಬುದ್ಧನ ಮೂರ್ತಿಯ ಮೆರವಣಿಗೆ ನಡೆಸಲಾಯಿತು. ಬಳಿಕ ಬೋಧಿವೃಕ್ಷ ನೆಟ್ಟು ನೀರೆರೆದು, ಸ್ಮಾರಕದ ನಾಮಫಲಕ ಅಳವಡಿಸಲಾಯಿತು. ಮೆರವಣಿಗೆಯಲ್ಲಿ ನೂರಾರು ಸಂಖ್ಯೆಯ ಬೌದ್ಧ ಅನುಯಾಯಿಗಳು, ಅಂಬೇಡ್ಕರ್ ಅನುಯಾಯಿಗಳು, ದಲಿತ ಸಂಘಟನೆಯ ಮುಖಂಡರು ಹಾಗೂ ಪ್ರಗತಿಪರ ಚಿಂತಕರು ಭಾಗವಹಿಸಿದ್ದರು.



ಅಯೋಧ್ಯೆ ಬಾಲರಾಮನ ಕೆತ್ತನೆಗೆ ಕಲ್ಲು(ಶಿಲೆ) ದೊರೆತ ಸ್ಥಳದಲ್ಲಿ 'ದಕ್ಷಿಣ ಭಾರತ ಬುದ್ಧಗಯಾ ಸ್ಮಾರಕ ನಿರ್ಮಾಣ'ಕ್ಕಾಗಿ ಬುಧವಾರ ವಿವಿಧ ಸಂಘಟನೆಗಳಿಂದ ಧಮ್ಮ ಸಂಕಲ್ಪ ಜಾಗೃತಿ ಸಮಾವೇಶಕ್ಕೂ ಮುನ್ನ ಮೆರವಣಿಗೆ ನಡೆಸಲಾಯಿತು.

ನಂತರ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಮಾಜಿ ಮೇಯರ್ ಪುರುಷೋತ್ತಮ್ ಮಾತನಾಡಿ, ಉತ್ತರ ಭಾರತದಲ್ಲಿರುವ ಬೌದ್ಧ ವಿಹಾರಗಳನ್ನು ಕುರುಹು ಸಿಗದಂತೆ ನೆಲಸಮಗೊಳಿಸಿರುವ ಮನುವಾದಿಗಳನ್ನು ನೆಲಸಮಗೊಳಿಸುವುದೇ ನಮ್ಮ ಕರ್ತವ್ಯವಾಗಿದೆ. ಅಂಬೇಡ್ಕರ್ ವಿರುದ್ಧ ಧ್ವನಿ ಎತ್ತುವವರರನ್ನು ದಮನ ಮಾಡುವುದೇ ನಮ್ಮ ಗುರಿಯಾಗಿದೆ ಎಂದರಲ್ಲದೆ, ದಕ್ಷಿಣ ಅಯೋಧ್ಯೆ ನಿರ್ಮಾಣ ಮಾಡುವ ಹುನ್ನಾರ ನಡೆಸಿದ್ದ ಮನುವಾದಿಗಳ ಪ್ರಯತ್ನ ಫಲಿಸಲಿಲ್ಲ. ಅದಕ್ಕೆ ಪ್ರತಿಯಾಗಿ ನಾವು 'ದಕ್ಷಿಣ ಭಾರತ ಬುದ್ಧಗಯಾ' ಸ್ಮಾರಕ ನಿರ್ಮಿಸಿ, ಶೈಕ್ಷಣಿಕ ಸಂಸ್ಥೆಯೊಂದನ್ನು ಕಟ್ಟುತ್ತೇವೆ ಎಂದರು.


ಲೋಕೋದ್ಧಾರಕ್ಕಾಗಿ ಭಗವಾನ್ ಬುದ್ಧರು ಉಪದೇಶಿಸಿದ ಪಂಚಶೀಲವನ್ನು ಅಳವಡಿಸಿಕೊಳ್ಳಬೇಕು. ದಕ್ಷಿಣ ಬುದ್ಧಗಯಾ ನಿರ್ಮಾಣಕ್ಕೆ ಹಾರೋಹಳ್ಳಿ ಗ್ರಾಮದಲ್ಲಿ ಡಿ.ರಾಜು ಮತ್ತು ರಾಜಮ್ಮ ದಂಪತಿ ಒಂದು ಎಕರೆ ಸ್ವಂತ ಭೂಮಿ ಧಾನವಾಗಿ ನೀಡಿದ್ದು, ಸ್ಮಾರಕ ನಿರ್ಮಾಣಕ್ಕೆ ಭಗವಾನ್ ಬುದ್ಧರ ಮತ್ತು ಅಂಬೇಡ್ಕರ್ ಅವರ ಅನುಯಾಯಿಗಳು ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಸುಘಾತಪಾಲ ಬಂತೇಜಿ, ಗೌತಮಿ ಬಂತೇಜಿ, ಡಾ.ಕಲ್ಯಾಣಸಿರಿ ಬಂತೇಜಿ, ಮುಖಂಡರಾದ ಆರ್.ಮಹದೇವಪ್ಪ, ಬೆಟ್ಟಯ್ಯ ಕೋಟೆ, ಹರಿಹರ ಆನಂದ ಸ್ವಾಮಿ, ಹೆಚ್.ಆರ್ ಸುರೇಶ್ ಕುಮಾರ್, ನಟರಾಜು, ಕಾಂಗ್ರೆಸ್ ಮುಖಂಡ ಸಿ. ನರೇಂದ್ರ, ಹಾರೋಹಳ್ಳಿ ಗ್ರಾಮದ ಮುಖಂಡ ಚೆಲುವರಾಜು, ಸಮಾಜ ಸೇವಕರಾದ ಎಸ್.ಶ್ರೀಕಾಂತ್, ಬೆಳವಾಡಿ ಶಿವಕುಮಾರ್, ಚೋರನಹಳ್ಳಿ ಶಿವಣ್ಣ ಮತ್ತಿತರರಿದ್ದರು.

ದಕ್ಷಿಣ ಅಯೋಧ್ಯೆಗೆ ಅನುಮತಿ ನೀಡಿಲ್ಲ...

ದಲಿತ ಸಮುದಾಯ ಸಹೋದರರ ಭಾವನೆ ವಿರುದ್ಧವಾಗಿ ದಕ್ಷಿಣ ಅಯೋಧ್ಯೆ ರಾಮಮಂದಿರ ನಿರ್ಮಾಣಕ್ಕೆ ನಾವು ಅನುಮತಿ ನೀಡಿಲ್ಲ ಎಂದು ದಕ್ಷಿಣ ಅಯೋಧ್ಯೆ ರಾಮಮಂದಿರ ನಿರ್ಮಾಣಕ್ಕೆ ಜಮೀನು ನೀಡಲು ಉದ್ದೇಶಿಸಿದ ರಾಮದಾಸ್ ಅವರ ಪುತ್ರ ಕೃಷ್ಣದಾಸ್ ಸ್ಪಷ್ಟಪಡಿಸಿದರು.

ನಾವು ಅಂಬೇಡ್ಕರ್ ಸಂತತಿ ಮಕ್ಕಳು. ನಾವು ಕೂಡ ಬುದ್ಧಗಯಾ ಶೈಕ್ಷಣಿಕ ಸಂಸ್ಥೆ ನಿರ್ಮಾಣಕ್ಕೆ ನಾಲ್ಕು ಗುಂಟೆ ಜಾಗ ನೀಡಿ, ದಕ್ಷಿಣ ಬುದ್ಧಗಯಾ ಸ್ಮಾರಕ ನಿರ್ಮಾಣಕ್ಕೆ ಕೈಜೋಡಿಸುತ್ತೇವೆ. ದಕ್ಷಿಣ ಅಯೋಧ್ಯೆ ಕಟ್ಟಲು ನಮ್ಮ ಜಮೀನಿನಲ್ಲಿ ಯಾರಿಗೂ ಜಾಗ ನೀಡುವುದಿಲ್ಲ ಎಂದು ಹೇಳಿದರು.



ನಕ್ಕರೆ ಅದೇ ಸ್ವರ್ಗ

ತರ್ಲೆ ತಿಮ್ಮಪ್ಪ : ಡಾಕ್ಟ್ರೇ ನೀವೆಷ್ಟು ಬುದ್ಧಿವಂತ ಅಂತ ಈಗ ಗೊತ್ತಾಗುತ್ತೆ ನೋಡಿ!

ಡಾಕ್ಟರ್ : ಏನಪ್ಪಾ ನಿನ್ನ ಪ್ರಶ್ನೆ

ತರ್ಲೆ ತಿಮ್ಮಪ್ಪ : ಹಲ್ಲಿಲ್ಲದ ನಾಯಿ ಕಚ್ಚಿದ್ರೆ ಏನು ಮಾಡ್ತೀರಾ?

ಡಾಕ್ಟರ್ : ಸೂಜಿ ಇಲ್ಲದ ಸಿರಿಂಜ್‌ನಿಂದ ಇಂಜೆಕ್ಷನ್ ಕೊಡ್ತೀನಿ!

ಮೈಸೂರು ಮಿತ್ರ

ಗುರುವಾರ, 12 ಜೂನ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ..........

ದುರ್ಜನ ಮತ್ತು ಸರ್ಪದ ಆಯ್ಕೆ ಬಂದಾಗ ಸರ್ಪದ ಆಯ್ಕೆ ಮಾಡಿಕೊಳ್ಳಬೇಕು. ಏಕೆಂದರೆ ಸರ್ಪವು ತನ್ನ ರಕ್ಷಣೆಗೆ ಮಾತ್ರ ಕಚ್ಚುತ್ತದೆ. ಆದರೆ ದುರ್ಜನರು ಯಾವಾಗಲೂ ವಿಷ ಕಾರುತ್ತಿರುತ್ತಾರೆ. –ಚಾಣಕ್ಯ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಅಡಿಕೆಗೆ ಹೋದ ಮಾನ ಆನೆ ಕೊಟ್ಟರೂ ಬರಲ್ಲ.

ನಿಮ್ಮ ಪತ್ರಗಳು


■ ಕೆಆರ್‌ಎಸ್‌ನಲ್ಲಿ ಕಾವೇರಿ ಆರತಿ, ಅಮ್ಯೂಸ್‌ಮೆಂಟ್ ಪಾರ್ಕ್ ಬೇಕೆ?

ಮಾನ್ಯರೆ,

ರೈತನ ಪ್ರೇರಣೆಯಿಂದ ನಮ್ಮ ಪ್ರಭುಗಳಾದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಕನ್ನಂಬಾಡಿ ಕಟ್ಟೆ ನಿರ್ಮಾಣ ಮಾಡಿದ ಉದ್ದೇಶ ಏನು ಎಂದು ಇಂದಿನ ರಾಜಕಾರಣಿಗಳಿಗೆ ತಿಳಿಯುತ್ತಿಲ್ಲವೇನೋ ಅಂತ ಅನ್ನಿಸದೇ ಇರಲಾರದು. ಕೆಆರ್‌ಎಸ್‌ನಲ್ಲಿ ಕಾವೇರಿ ಆರತಿ ಹಾಗೂ ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಾಣ ಮಾಡಲು ತುದಿಗಾಲಿನಲ್ಲಿ ನಿಂತಿರುವ ಕಾಂಗ್ರೆಸ್ ಸರ್ಕಾರ ಅದರ ಆಗುಹೋಗುಗಳ ಬಗ್ಗೆ ಕೆಆರ್‌ಎಸ್ ಅಚ್ಚುಕಟ್ಟಿನ ರೈತರ ಜೊತೆಯಲ್ಲಿ ಸಭೆಗಳನ್ನು ಮಾಡಿ ತೀರ್ಮಾನ ಕೈಗೊಳ್ಳಬೇಕಾಗಿತ್ತು. ಮದ್ದೂರು ಮತ್ತು ಮಳವಳ್ಳಿ ತಾಲೂಕಿನ ಕೊನೆ ಅಂಚಿನ ಭೂಮಿಗೆ ಈಗಲೂ ಬೇಸಿಗೆ ಬೆಳೆಗೆ ಸರಿಯಾಗಿ ನೀರನ್ನು ಒದಗಿಸಲು ಸಾಧ್ಯವಾಗುತ್ತಿಲ್ಲ ಎಂಬುದು ಪ್ರತಿಯೊಬ್ಬರಿಗೂ ಗೊತ್ತಿರುವ ಸಂಗತಿ. ಕಾವೇರಿ ಆರತಿಗೆ 92 ಕೋಟಿ ರೂ (ಅಂದಾಜು ವೆಚ್ಚ) ಖರ್ಚು ಮಾಡುವ ಬದಲು ಜಿಲ್ಲೆಯ ಕೆರೆಗಳ ಹೂಳನ್ನು ತೆಗೆಸಿ, ಕಾಲುವೆಗಳನ್ನು ಸರಿಪಡಿಸಿ ಗದ್ದೆಗಳಿಗೆ ನೀರು ಸರಾಗವಾಗಿ ಹರಿಯಲು ಗಮನಹರಿಸುವುದು ಸೂಕ್ತ. ಅಣೆಕಟ್ಟೆಯ ಸುರಕ್ಷತೆಗೆ ಧಕ್ಕೆ ತರುವಂತಹ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಯಾವುದೇ ಕಾರಣಕ್ಕೂ ಬಿಡುವುದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿರುವ ಮಂಡ್ಯ ಜಿಲ್ಲೆಯ ರೈತರ ನಡೆ ಶ್ಲಾಘನೀಯ.

–ಬೆಸಗರಹಳ್ಳಿ ರವಿ ಪ್ರಸಾದ್, ಮೈಸೂರು.

■ ರಜತ್ ಪಾಟಿದಾರ್‌ರಿಂದ ಆರ್‌ಸಿಬಿಗೆ ರಜತ ಮಹೋತ್ಸವ



ಮಾನ್ಯರೇ,

ಅಂತೂ ಈ ವರ್ಷ ಆರ್‌ಸಿಬಿ ತಂಡ ಐಪಿಎಲ್ ಪಂದ್ಯಾವಳಿಯ ನೂತನ ಚಾಂಪಿಯನ್ ಆಗಿ ಹೊರಹೊಮ್ಮಿರುವುದು ಅತ್ಯಂತ ಸಂತೋಷದ ಸಂಗತಿ. 8 ವರ್ಷಕ್ಕೆ ಮಗ ದಂಟು ಎಂದನಂತೆ!! 18 ವರ್ಷಗಳ ವನವಾಸಕ್ಕೆ ಈಗ ಇತಿಶ್ರೀ ಹಾಡಲಾಗಿದೆ. ಶ್ರೀರಾಮಚಂದ್ರ 12 ವರ್ಷ, ಸೀತಾದೇವಿ 14 ವರ್ಷಗಳ ವನವಾಸ ಮಾಡಿದ್ದರು. ಇದೀಗ ಆರ್‌ಸಿಬಿ ತಂಡಕ್ಕೆ 18ನೇ ವರ್ಷದ ಕನಸು ನನಸಾಗಿದೆ. ಈ ಬಾರಿ ಆರ್‌ಸಿಬಿ ತಂಡ ಪ್ರತಿ ವರ್ಷಕ್ಕಿಂತ ಸಮತೋಲನದಿಂದ ಕೂಡಿದ್ದು ಯಾರೊಬ್ಬರ ಮೇಲೆ ಅವಲಂಬಿತರಾಗದೇ ಪ್ರತಿಯೊಬ್ಬರೂ ತಮ್ಮ ತಮ್ಮ ಕಾಣಿಕೆ ಸಲ್ಲಿಸಿದರು. ಇದರ ಸಮರ್ಪಣೆ ಕಿಂಗ್ ಕೊಹ್ಲಿಗೆ ಸಲ್ಲುತ್ತದೆ. ಇದಕ್ಕಿಂತ ಉತ್ತಮ ವಿದಾಯ ಅವರಿಗೆ ಸಿಗುವುದಿಲ್ಲ. ನಾಯಕ ರಜತ್ ಪಾಟಿದಾರ್ ಉತ್ತಮ ನಾಯಕತ್ವವನ್ನು ನಿರ್ವಹಿಸಿದರು. ಎಲ್ಲೂ ಎದೆಗುಂದದೇ ಚಾಣಾಕ್ಷತನದಿಂದ ಬೌಲಿಂಗ್ ಬದಲಾವಣೆ ಮಾಡುತ್ತಾ, ಎದುರಾಳಿಗೆ ನಡುಕ ಹುಟ್ಟಿಸಿದರು. ಆರ್‌ಸಿಬಿ ಚಾಂಪಿಯನ್ ಆಗುತ್ತಿದ್ದಂತೆ ಬರೀ ನಮ್ಮ ರಾಜ್ಯವಲ್ಲ, ಇಡೀ ಪ್ರಪಂಚವೇ ಹರ್ಷೋದ್ಗಾರ ವ್ಯಕ್ತಪಡಿಸಿತು. ನೂತನ ಐಪಿಎಲ್ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಹೃದಯ ಪೂರ್ವಕ ಅಭಿನಂದನೆಗಳು.

– ಜಿ.ಪಿ.ಹರೀಶ್, ವಿ.ವಿ.ಮೊಹಲ್ಲಾ, ಮೈಸೂರು

■ ಟೆನಿಸ್‌ನ ರೋಚಕ ಪಂದ್ಯಕ್ಕೆ ಸಾಕ್ಷಿಯಾದ ಫ್ರೆಂಚ್ ಓಪನ್

ಮಾನ್ಯರೆ,

8.6.25ರ ಭಾನುವಾರ ರಾತ್ರಿ ಪ್ಯಾರಿಸ್‌ನ ರೋಲ್ಯಾಂಡ್ ಗ್ಯಾರೋಸ್‌ನಲ್ಲಿ ನಡೆದ ಫ್ರೆಂಚ್ ಓಪನ್ ಟೆನಿಸ್ ಪಂದ್ಯ ದಾಖಲೆಯ 5 ಗಂಟೆ 29 ನಿಮಿಷ ನಡೆದು ಪ್ರೇಕ್ಷಕರ ರೋಚಕ ಕ್ಷಣಗಳಿಗೆ ಸಾಕ್ಷಿಯಾಗಿತ್ತು. ಆರಂಭದಲ್ಲಿ ಇಟಲಿಯ ಸಿನ್ನರ್ 2 ಸೆಟ್‌ಗಳನ್ನು ಗೆದ್ದು ಗೆಲುವಿನ ಹೊಸ್ತಿಲಲ್ಲಿದ್ದರು. ಆದರೆ ತೀವ್ರ ಪೈಪೋಟಿ ನೀಡಿದ ಸ್ಪೇನ್‌ನ ಅಲ್ಕರಾಜ್ ಏರಿಳಿತಗಳ ನಡುವೆ ಕೊನೆಗೂ ಟ್ರೋಫಿಗೆ 4–6,6–7,(4–7),6–4,7–6(7–3),7–6(10–2) ಮುತ್ತಿಕ್ಕಿದ್ದಾರೆ.ಇಬ್ಬರ ಹೋರಾಟದಲ್ಲಿ ಯಾರೂ ಕಡಿಮೆಯಲ್ಲ ಎಂದು ಗೋಚರವಾಯಿತು. ಸಮ ವಯಸ್ಸಿನ, ಸಮಬಲದ ಹೋರಾಟ ಟೆನಿಸ್ ಪ್ರಿಯರಿಗೆ ರಸದೌತಣ ನೀಡಿತು. ಅಲ್ಲದೆ ವೀಕ್ಷಕ ವಿವರಣೆ ಕೂಡ ಕ್ರಿಕೆಟ್‌ನಲ್ಲಿನ ಕಿರುಚಾಟ, ಅರುಚಾಟಗಳಿಲ್ಲದೆ ಸೌಮ್ಯವಾಗಿತ್ತು. ಹಾಗೂ ಅತಿ ಕಡಿಮೆ ಅವಧಿಯ ಜಾಹೀರಾತುಗಳು ಟೆನಿಸ್ ಪಂದ್ಯ ಪ್ರಸಾರದಲ್ಲಿದ್ದರೆ ಪ್ರತಿ ಬಾಲ್‌ನ ನಂತರ ಒಂದು ಜಾಹೀರಾತು ತೋರಿಸಿ ಕಿರಿಕಿರಿ ಉಂಟು ಮಾಡುವ ಕ್ರಿಕೆಟ್ ನೇರ ಪ್ರಸಾರಕ್ಕಿಂತ ಉತ್ತಮವಾಗಿತ್ತು. (ಕ್ರಿಕೆಟ್‌ನ ನೇರ ಪ್ರಸಾರ ವಾಸ್ತವವಾಗಿ 7 ಸೆಕೆಂಡ್ ತಡವಾಗಿ ಪ್ರಸಾರವಾಗುತ್ತಿದ್ದು (ಡೆಫರ್ಡ್ ಲೈವ್)ಬೆಟ್ಟಿಂಗ್ ಬುಕ್ಕಿಗಳಿಗೆ ನೆರವಾಗುತ್ತಿದೆ ಎಂಬ ಆಪಾದನೆಗಳಿವೆ.)

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.


■ ಪೊಲೀಸರ ಆತ್ಮಸ್ಥೈರ್ಯ ಕುಗ್ಗಿಸುವ ಕೆಲಸ ಸರಿಯಲ್ಲ

ಮಾನ್ಯರೆ,

ಇತ್ತೀಚೆಗೆ ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಆರ್‌ಸಿಬಿ ವಿಜಯೋತ್ಸವದ ಸಂಭ್ರಮಾಚರಣೆಯಲ್ಲಿ ಉಂಟಾದ ಕಾಲ್ತುಳಿತದಿಂದ 11 ಜನರು ಮರಣ ಹೊಂದಿ, ನೂರಾರು ಜನರಿಗೆ ತೀವ್ರ ಸ್ವರೂಪದ ಗಾಯಗಳುಂಟಾದ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ, ಬೆಂಗಳೂರಿನ ಪೊಲೀಸ್ ಆಯುಕ್ತರು ಸೇರಿದಂತೆ ಕೆಲವು ಹಿರಿಯ ಪೊಲೀಸ್ ಅಧಿಕಾರಿಗಳನ್ನು ಅಮಾನತ್ತಿನಲ್ಲಿಟ್ಟಿರುವುದರ ವಿರುದ್ಧ ಸಾಕಷ್ಟು ಟೀಕೆಗಳು ವ್ಯಕ್ತವಾಗುತ್ತಿವೆ. ಪೊಲೀಸ್ ವಲಯದಲ್ಲಿ ಕೂಡ ಇದರ ವಿರುದ್ಧ ಅಸಮಾಧಾನದ ಹೊಗೆ ಭುಗಿಲೆದ್ದಿದೆ. ಬೆಂಗಳೂರು ಪೊಲೀಸ್ ಕಮಿಷನರ್ ದಯಾನಂದ ಉತ್ತಮ ಸೇವಾ ದಾಖಲೆ ಹೊಂದಿದ್ದು, ಅವರ ಅಮಾನತ್ತನ್ನು ಸಾಮಾನ್ಯ ಜನರು ಕೂಡ ವಿರೋಧಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಬಲಿಪಶು ಮಾಡಲಾಗಿರುವ ಪೊಲೀಸ್ ಅಧಿಕಾರಿಗಳ ಅಮಾನತ್ತನ್ನು ಹಿಂದಕ್ಕೆ ಪಡೆಯಬೇಕೆಂದು ಈ ಮೂಲಕ ಮನವಿ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು.

ಕಾವೇರಿ ಸಮಸ್ಯೆಗಳು 'ಕಾವೇರಿ'ಸುತ್ತದೆ





ಮಿರ್ಲೆ ಚಂದ್ರಶೇಖರ್

ಮೊ. 99161 29654

ಉದ್ಭವಿಸುವ ಕಾವೇರಿ ನದಿಯ ಸಮಸ್ಯೆಗಳಿಗೆ ಬೇರೆ ಯಾರನ್ನೋ ದೂಷಿಸುವ ಬದಲು ನಮಗೆ ನಾವೇ ಪ್ರಶ್ನಿಸಿಕೊಳ್ಳಬೇಕಾಗಿದೆ. ಪ್ರಕಾಶ್ ರೈ ಅವರ 'ಇರುವುದೆಲ್ಲವ ಬಿಟ್ಟು...' ಕೃತಿಯಲ್ಲಿ ಒಂದು ಲೇಖನದ ಶೀರ್ಷಿಕೆ 'ಕಾವೇರಿದ ಸಮಸ್ಯೆಗಳಿಗೆ ನಾವೇರಿ ಕಾರಣ' ಎನ್ನುವುದು. ನಡೆಯುತ್ತಿರುವ ಬೆಳವಣಿಗೆಯನ್ನು ಪರಾಂಬರಿಸಿದರೆ ಸಂಪೂರ್ಣವಾಗಿ ಒಪ್ಪಿತವಾಗಿದೆ. ಇದಕ್ಕೆ ಪೂರಕ ಎಂಬಂತೆ ಕಾವೇರಿ ಆರತಿ ಮತ್ತು ಅಮ್ಯೂಸ್‌ಮೆಂಟ್ ಪಾರ್ಕ್ ಯೋಜನೆಗಳ ಸದ್ದು ಕೃಷ್ಣರಾಜಸಾಗರ ಜಲಾಶಯದ ಬಳಿ ಮೊಳಗಲಾರಂಭಿಸಿವೆ.

ಸರ್ಕಾರವು ಕೈಗೊಳ್ಳುವ ಅಭಿವೃದ್ಧಿ ಕಾರ್ಯಗಳಲ್ಲಿ 'ಸರ್ವೇ ಜನಾಃ ಸುಖಿನೋ ಭವಂತು' ಎನ್ನುವ ಮೂಲಮಂತ್ರವು ಅಡಗಿರುತ್ತದೆ. ಯೋಜನೆಗಳ ಉದ್ದೇಶವೂ ಅದೇ ಅಲ್ಲವೇ? ಕೈಗೊಳ್ಳುವ ಅಭಿವೃದ್ಧಿ ಕೆಲಸಗಳಿಂದ ಹಲವು ಕ್ಷೇತ್ರಗಳು ಆರ್ಥಿಕವಾಗಿ ಸಬಲಗೊಳ್ಳುತ್ತವೆ. ಅದರಲ್ಲೂ ಅನವಶ್ಯಕ ಅಭಿವೃದ್ಧಿ ಯೋಜನೆಗಳಿಂದ ಸುಖವನ್ನೂ ಮೀರಿದ ಪರಮಾನಂದವನ್ನು ಕೆಲವರು ಪಡೆಯುತ್ತಾರೆ. ಆನಂದ ಹೊಂದುವಲ್ಲಿ ಅಧಿಕಾರವು ಯಾರದ್ದೇ ಇರಲಿ ಪೈಪೋಟಿಯಲ್ಲಿ ನಿಲ್ಲುತ್ತಾರೆ. ಪೈಪೋಟಿಯಿಂದಾಗಿಯೇ 40% ಹಾಗೂ 60% ಎಂಬ ಪಾಪದ ಕೂಸುಗಳು ರಾಜ್ಯದಲ್ಲಿ ಹುಟ್ಟಿಕೊಂಡಿದ್ದು.

ಲೂಟಿ ಆಗುವುದರಲ್ಲಿ ಸತ್ಯವಿದೆ. ಯಾಕೆಂದರೆ ಅಧಿಕಾರ ನಡೆಸಿ ವಿರೋಧ ಸ್ಥಾನದಲ್ಲಿ ಕುಳಿತ ಮಾಜಿ ಮಂತ್ರಿಮಹೋದಯರೇ ಭ್ರಷ್ಟಾಚಾರವನ್ನು ಬಯಲಿಗೆಳೆಯುವಾಗ ಹೇಳುತ್ತಾರಲ್ಲ, ಅವನು ಇಷ್ಟು ತಿಂದ, ಅಷ್ಟು ತಿಂದನೆಂದು. ಪುಷ್ಟೀಕರಿಸುವಂತೆ ಅವರ ಆಸ್ತಿಗಳು ಸಹ ಅಲ್ಪ ಕಾಲದಲ್ಲೇ ಭಾರಿ ಪ್ರಮಾಣದಲ್ಲಿ ಏರಿಕೆಯಾಗಿರುತ್ತದೆ. ಮತದಾರ ಮಾತ್ರ ಮೂಕಪ್ರೇಕ್ಷಕನಾಗಿ ಅವರ ಬೆಳವಣಿಗೆಯನ್ನು ನೋಡುತ್ತಿರುತ್ತಾನೆ. ಅವನಿಗೆ ಬೇರೆ ಆಯ್ಕೆಗಳಿಲ್ಲದೆ ಇಬ್ಬರಲ್ಲಿ ಒಬ್ಬರಿಗೆ ಮತ್ತೆ ಮತ್ತೇ ಮತ ಚಲಾಯಿಸುತ್ತಾನೆ. ಯಾರೇ ಗೆದ್ದರೂ ಮೇಯುವ ಕೆಲಸವು ನಿರಂತರವಾಗಿ ನಡೆಯುತ್ತಿರುತ್ತದೆ. ಹಾಗಾದರೆ ನಿಯಂತ್ರಣದ ಬಗೆ ಹೇಗೆ, ಸತ್ಯವಾಗಿಯೂ ಸತ್ಯವನ್ನೇ ನಂಬಿದವನು ನಾನು. ಆ ತಿಳುವಳಿಕೆಯಿಂದ ಹೇಳಬಯಸುತ್ತೇನೆ. ಆ ಭಗವಂತ ಬಂದರೂ ನಡೆಯುತ್ತಿರುವ ದುಸ್ಥಿತಿಯನ್ನು ಸುಸ್ಥಿತಿಗೆ ತರುವುದಕ್ಕೆ ಸಾಧ್ಯವಾಗದು!. ಆದರೂ ಆಗಬಹುದು, ಆದ ಪಕ್ಷದಲ್ಲಿ ಅದೊಂದು ಮಿರಾಕಲ್!, ನಂಬಿಕೆ ಇಡೋಣ. ಬಸವಣ್ಣನವರು ಹೇಳಿದಂತೆ 'ನಂಬರು, ನೆಚ್ಚರು, ಬರಿದೆ ಕರೆವರು, ನಂಬಲರಿಯರೀ ಲೋಕದ ಮನುಜರು, ನಂಬಿ ಕರೆದೊಡೆ ಓ ಎನ್ನನೆ ಶಿವನು' ಕರೆದರೆ ಶಿವನು ಬಂದರೂ ಬರಬಹುದು!.

ಸಂಸ್ಕೃತಿಯ ಪ್ರತೀಕವಾಗಿ ಕೆಆರ್‌ಎಸ್‌ನಲ್ಲಿ ಮುಂದಿನ ದಸರಾ ವೇಳೆ 92 ಕೋಟಿ ಅನುದಾನದಲ್ಲಿ ಕಾವೇರಿ ಆರತಿ ಕಾರ್ಯಕ್ರಮಕ್ಕೆ ಸರ್ಕಾರವು ಕಾತುರವಾಗಿದೆ. ಇದರ ಜೊತೆಗೆ 2600 ಕೋಟಿ ಭಾರಿ ಮೊತ್ತದ ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಾಣಕ್ಕೆ ಯೋಜನೆ ರೂಪಿಸುತ್ತಿದೆ. ಪ್ರಯಾಗರಾಜ್‌ನ ಕುಂಭಮೇಳದಂತೆ ಕಾವೇರಿ ಆರತಿ ಕಾರ್ಯಕ್ರಮದಿಂದ ಸರ್ಕಾರಕ್ಕೆ ಸಾವಿರಾರು ಕೋಟಿ ಆದಾಯ ಬರುವ ನಿರೀಕ್ಷೆ ಇದ್ದರೆ ಇದೊಂದು ಅದ್ಭುತ ಕಾರ್ಯಕ್ರಮವಾಗುವುದು. ಖಂಡಿತ ಇದರಿಂದ ಯಾವುದೇ ಆರ್ಥಿಕ ಲಾಭವಾಗದು. ಕೆಲವು ದಿನಗಳು ಸ್ಥಳೀಯ ವ್ಯಾಪಾರಸ್ಥರಿಗೆ ತಿಂಡಿ–ತಿನಿಸುಗಳ ಮಾರಾಟ ಭರ್ಜರಿಯಾಗಿ ನಡೆಯಬಹುದು, ಅದರ ಹೊರತಾಗಿ ಅಣೆಕಟ್ಟೆಯ ಭದ್ರತೆಗೂ ಧಕ್ಕೆ, ಪರಿಸರ ಮಾಲಿನ್ಯಕ್ಕೂ ಕಾರಣವಾಗುತ್ತದೆ. ಬದಲಾಗಿ ಅದೇ ಮೊತ್ತವನ್ನು ಜಲಾನಯನ ಪ್ರದೇಶದಲ್ಲಿ ಭೂಸವಕಳಿ ಆಗದಂತೆ ಮರಗಳನ್ನು ಬೆಳೆಸುವುದಕ್ಕೆ ಹಾಗೂ ಹೂಳು ನಿರ್ವಹಣೆಗೆ ಖರ್ಚು ಮಾಡಿದರೆ ನೀರಿನ ಶೇಖರಣಾ ಸಾಮರ್ಥ್ಯವಾದರೂ ಹೆಚ್ಚುವುದು. ಜಲಾಶಯ ಬರಿದಾಗಿರುವ ಸಂದರ್ಭದಲ್ಲಿ ಜಲಾಶಯದ ಅಂಗಳದಲ್ಲಿ ಶೇಖರವಾಗಿರುವ ಹೂಳನ್ನು ಸಹಾಯಧನ ಕೊಟ್ಟು ತಮ್ಮ ಜಮೀನುಗಳಿಗೆ ತೆಗೆದುಕೊಂಡು ಹೋಗುವಂತೆ ರೈತರನ್ನು ಪ್ರೇರೇಪಿಸಿದರೆ, ಅಂದಾಜು 2.34 ಟಿಎಂಸಿ ಹೂಳಿನಲ್ಲಿ ಒಂದಷ್ಟು ಪ್ರಮಾಣ ಕಡಿಮೆ ಆಗುವುದಲ್ಲದೇ ಹಾಗೂ ಜೌಗು ಬಿದ್ದಿರುವ ರೈತರ ಜಮೀನು ಸಹ ಫಲವತ್ತಾಗುವುದು. ಮಂಡ್ಯದ ರೈತರು ಬದುಕಿನ ಜೀವನಾಡಿ ಆಗಿರುವ ಕನ್ನಂಬಾಡಿ ಅಣೆಕಟ್ಟೆಯ ಸಂರಕ್ಷಣೆಗೆ ಯಾವಾಗಲೂ ಮುಂಚೂಣಿಯಲ್ಲಿ ನಿಲ್ಲುತ್ತಾರೆ.

ಮಂಡ್ಯ ರೈತರು ಯಾವುದೇ ಭಿನ್ನಾಭಿಪ್ರಾಯಗಳಿಲ್ಲದೆ ಎರಡೂ ಯೋಜನೆಗಳನ್ನು ಸಾರಾಸಗಟಾಗಿ ತಿರಸ್ಕರಿಸಿರುವುದನ್ನು ಮೊನ್ನೆ ನಡೆದ ಜಿಲ್ಲಾ ಮಂತ್ರಿಗಳೊಂದಿಗಿನ ಸಭೆಯಲ್ಲಿ ಕಾಣಲಾಗಿದೆ. ಅನ್ನದಾತನ ನಾಡಿಮಿಡಿತವನ್ನು ಪರೀಕ್ಷಿಸಲು ಹೋಗಬಾರದು. ಹೋದರೆ ಅವನ ಮಿಡಿತಕ್ಕೆ ಅನುಗುಣವಾಗಿ ಸ್ಪಂದಿಸುವುದು ಸೂಕ್ತ. ದುಡುಕಿನಿಂದ ಕ್ಷಿಪ್ರಗತಿಯಲ್ಲಿ ಕೈಗೊಂಡ ಕೆಟ್ಟ ನಿರ್ಣಯದಿಂದ ನಡೆದ ದುಷ್ಪರಿಣಾಮವನ್ನು ಮೊನ್ನೆ ತಾನೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಅನುಭವಿಸಿದ್ದೇವೆ. ಇನ್ನೂ ಆ ನೋವಿನಿಂದ ಹೊರಬರಲಾಗಿಲ್ಲ. ರಾಜ್ಯದಲ್ಲಿ ಮುಂದೆ ಎಂದಿಗೂ ಇಂಥ ದುರ್ಘಟನೆಗಳು ನಡೆಯದಿರಲಿ.

ಕೆಲವು ತಿಂಗಳುಗಳ ಹಿಂದೆ ಕಾವೇರಿ, ಕಪಿಲ ಹಾಗೂ ಗುಪ್ತಗಾಮಿನಿ ಸ್ಫಟಿಕಾ ನದಿಗಳ ಸಂಗಮ ಸ್ಥಳವಾದ ಮೈಸೂರು ಜಿಲ್ಲೆ, ತಿ.ನರಸೀಪುರದ ತ್ರಿವೇಣಿ ಸಂಗಮದಲ್ಲಿ ಕುಂಭಮೇಳ ನಡೆಯಿತು. ದೊಡ್ಡಮಟ್ಟದಲ್ಲಿ ಪ್ರಚಾರ ಇಲ್ಲದೆ ಸಾಧಾರಣ ಒಂದು ಪುಟ್ಟ ಜಾತ್ರೆಯ ಹಾಗೆ ನಡೆಯಿತು. ರಾಜಕೀಯ ದುರುದ್ದೇಶಗಳಿಗೆ ಕೆಆರ್‌ಎಸ್‌ನಲ್ಲಿ ಕಾವೇರಿ ಆರತಿ ಮಾಡುವ ಬದಲು ತಿ.ನರಸೀಪುರದ ತ್ರಿವೇಣಿ ಸಂಗಮವು ಅತ್ಯಂತ ಪುಣ್ಯಸ್ಥಳವು ಹೌದು. ಮೂರು ನದಿಗಳ ಸಂಗಮವೆಂದರೆ ಪ್ರಯಾಗ್‌ರಾಜ್‌ನಷ್ಟೇ ಪಾವಿತ್ರ್ಯತೆಯುಳ್ಳ ಐತಿಹಾಸಿಕ ಸ್ಥಳವಾಗಿದೆ. ಅಗಸ್ತ್ಯೇಶ್ವರ ಹಾಗೂ ಗುಂಜಾ ನರಸಿಂಹಸ್ವಾಮಿ ದೇವಾಲಯಗಳಿರುವ ಇಲ್ಲಿಗೆ ಪ್ರಾಮುಖ್ಯತೆ ನೀಡಿದರೆ ಪ್ರಯಾಗ್‌ರಾಜ್ ಮಟ್ಟಕ್ಕೆ ಅಲ್ಲದಿದ್ದರೂ ಒಂದು ಹಂತಕ್ಕೆ ಬೆಳೆಯುವುದರಿಂದ ಪ್ರವಾಸೋದ್ಯಮ ಹಾಗೂ ಆ ಭಾಗದ ವ್ಯಾಪಾರ ವಹಿವಾಟುಗಳು ಅಭಿವೃದ್ಧಿಗೊಂಡು ಸರ್ಕಾರಕ್ಕೆ ರೆವಿನ್ಯೂ ಬರುವುದಲ್ಲದೆ ಕನ್ನಂಬಾಡಿ ಅಣೆಕಟ್ಟೆಯ ಸುರಕ್ಷತೆಗೂ ಧಕ್ಕೆಯಾಗದು.

ಮನುಷ್ಯನ ಕೀಳು ಮನಸ್ಥಿತಿ ಹಾಗೂ ಮೌಢ್ಯತೆಯಿಂದಾಗಿ ಸದ್ಯ ನದಿಗಳು ತ್ಯಾಜ್ಯ ಶೇಖರಣೆಯಾಗುವ ಮುನ್ಸಿಪಾಲಿಟಿಗಳ ಡಂಪಿಂಗ್ ಯಾರ್ಡ್‌ಗಳಾಗಿವೆ. ಕಾವೇರಿ ನದಿಯು ಉಗಮ ಸ್ಥಾನದಿಂದ ಸಮುದ್ರ ಸೇರಲು 808 ಕಿ.ಮೀ ಉದ್ದ ಹರಿಯುವುದು. ನದಿಯ ಇಕ್ಕೆಲಗಳಲ್ಲಿ ಬಹಳಷ್ಟು ಕಾರ್ಖಾನೆಗಳಿವೆ. ಕಾರ್ಖಾನೆಗಳ ಮಲಿನ ನೀರು ಹಾಗೂ ನದಿ ಉದ್ದಕ್ಕೂ ಸಮೀಪದಲ್ಲಿರುವ ಊರುಗಳ ಕೊಳಚೆ ನೀರು ನದಿಗೇ ಬಂದು ಸೇರುತ್ತದೆ. ಮನೆಗಳ ತ್ಯಾಜ್ಯ ಹಾಗೂ ಹೊಲ ಗದ್ದೆಗಳ ಮೇಲ್ಮೈನಿಂದ ಮಳೆಯು ತೊಯ್ದು ತರುವ ಮಡ್ಡಿ ನೀರು ಎಲ್ಲವನ್ನು ಕಾವೇರಮ್ಮ ತನ್ನ ತೆಕ್ಕೆಯಲ್ಲಿ ಸೆಳೆದು ಕುಡಿಯಲು ಯೋಗ್ಯವಲ್ಲದ ನೀರಾಗಿ ಹರಿಯುವಳು. ಇದರಿಂದ ಜಲಚರ ಜೀವಿಗಳಿಗೂ ಮಾರಕವಾಗುತ್ತಿರುವ ಕಾವೇರಿ ನದಿಯ ಸ್ವಚ್ಛತೆಗೆ ಮೊದಲು ಆದ್ಯತೆ ನೀಡಬೇಕು.

ಕೆಲವು ತಿಂಗಳುಗಳ ಹಿಂದೆ ಸದ್ಗುರು ಜಗ್ಗಿ ವಾಸುದೇವ್ ಅವರು ಜಲಮೂಲಗಳನ್ನು ಪುನರುಜ್ಜೀವನಗೊಳಿಸುವ ಗುರಿಯನ್ನು ಇಟ್ಟುಕೊಂಡು 'ರ್‍ಯಾಲಿ ಫಾರ್ ರಿವರ್ಸ್' ಥೀಮ್‌ನೊಂದಿಗೆ ನದಿಗಳನ್ನು ಪುನಶ್ಚೇತನಗೊಳಿಸಿ, ನದಿಗಳ ಎರಡೂ ಬದಿಗಳಲ್ಲಿ ಮರಗಳನ್ನು ಬೆಳೆಸಿ ಭೂಸವಕಳಿ ಆಗದಂತೆ ತಡೆಯುವುದು ಹಾಗೂ ನೀರು ಮಾಲಿನ್ಯಗೊಳ್ಳದಂತೆ ತಡೆಯಲು ಜನಾಂದೋಲನ ನಡೆಸಿದರು. ಅವರ ಉದ್ದೇಶವು ಪ್ರಕೃತಿಗೆ ಪೂರಕವಾಗಿತ್ತು. ಆದರೆ ಯಾಕೋ ಅದರ ಸದ್ದು ಈಗ ಕೇಳುತ್ತಿಲ್ಲ. ಯೋಜನೆಯು ರಿವರ್ಸ್ ಆದಂತಿದೆ. ಒಳ್ಳೆಯ ಕೆಲಸಗಳಿಗೆ ಯಾವಾಗಲೂ ನೂರೆಂಟು ವಿಘ್ನಗಳು, ಕೆಟ್ಟ ಕೆಲಸಗಳು ಬೇಗನೆ ಟೇಕಾಫ್ ಆಗಿಬಿಡುತ್ತವೆ.

ನಗರದ ರಸ್ತೆಗಳಿಗೆ ವೈಟ್ ಟಾಪಿಂಗ್‌ಗಾಗಿ ಪ್ರತೀ ವರ್ಷವು ಸಾವಿರಾರು ಕೋಟಿ ಹಣವನ್ನು ನೀಡುತ್ತಾ ಬಂದಿದೆ. ಹಾಗೆಯೇ ನೀರಾವರಿ ನಾಲೆಗಳಿಗೆ ಲೈನಿಂಗ್ ಮಾಡಿಸಲು ವಿನಿಯೋಗಿಸುವ ಹಣವೂ ಸಹ ನೀರಿನಲ್ಲಿ ಹುಣಸೆಹಣ್ಣು ತೇಯ್ದಂತೆಯೇ ಆಗಿದೆ. ನಿರ್ಮಾಣವಾದ ಕೆಲವೇ ವರ್ಷಗಳಲ್ಲಿ ಹಾಳಾಗಿರುತ್ತದೆ. ರಸ್ತೆಗಳಿಗೆ ವೈಟ್ ಟಾಪಿಂಗ್, ಪಾದಚಾರಿ ಮಾರ್ಗಗಳನ್ನು ಕಾಂಕ್ರೀಟ್‌ನಿಂದ ಮುಚ್ಚುವುದರಿಂದ ಹಾಗೂ ನಾಲೆಗಳಲ್ಲಿ ಹಿಂದೆ ಇದ್ದ ಕಲ್ಲು ರಿವೆಟ್‌ಮೆಂಟ್‌ಗೆ ಬದಲಾಗಿ ಕಾಂಕ್ರೀಟ್ ಲೈನಿಂಗ್ ಮಾಡಿಸುತ್ತಿರುವುದರಿಂದ ನೀರು ಅಂತರ್ಜಲಕ್ಕೆ ಸೇರುತ್ತಿಲ್ಲ. ಇದರಿಂದ ಅಂತರ್ಜಲವು ಪಾತಾಳಕ್ಕೆ ಇಳಿದಿದೆ. ಪ್ರಸ್ತುತ ಬೆಂಗಳೂರಿನ ರಸ್ತೆಗಳಿಗೆ ವೈಟ್ ಟಾಪಿಂಗ್, ಕಾಂಕ್ರೀಟ್ ಪಾದಚಾರಿ ಮಾರ್ಗ ಹಾಗೂ ಅವೈಜ್ಞಾನಿಕವಾಗಿ ನಿರ್ಮಾಣವಾಗಿರುವ ರಾಜಕಾಲುವೆ ಮತ್ತು ಒಳಚರಂಡಿಗಳಿಂದಾಗಿ ಯಾವಾಗಲೂ ಮಳೆಗಾಲದಲ್ಲಿ ರಸ್ತೆಗಳು ನದಿಗಳಾಗಿಬಿಡುತ್ತವೆ ಹಾಗೂ ಮಳೆ ನೀರು ಭೂಮಿಗೆ ಇಂಗುತ್ತಿಲ್ಲವಾದ್ದರಿಂದ ಕೊಳವೆ ಬಾವಿಗಳನ್ನು ಆಶ್ರಯಿಸಿರುವ ನಗರವಾಸಿಗಳಿಗೆ ಕುಡಿಯುವ ನೀರಿಗೆ ಕೊರತೆಯಾಗುತ್ತಿದೆ.

ಪ್ರಸ್ತಾಪಿಸಿರುವುದು ಒಂದೆರಡು ಯೋಜನೆಗಳು ಮಾತ್ರ. ನಮ್ಮಲ್ಲಿ ಎಲ್ಲಾ ಕ್ಷೇತ್ರದಲ್ಲೂ ಶ್ರೇಷ್ಠ ಪರಿಣತರಿದ್ದಾರೆ. ಬಜೆಟ್ ಹಣವನ್ನು ಆಯಾ ವರ್ಷಗಳಲ್ಲೇ ಖರ್ಚು ಮಾಡಲೆಂದೇ ಯೋಜನೆಗಳು ರೂಪುಗೊಳ್ಳುವುದರಿಂದ ಅವರ ಬುದ್ಧಿವಂತಿಕೆಯನ್ನು ಬಳಸಿಕೊಳ್ಳುತ್ತಿಲ್ಲ. ಒಟ್ಟಿನಲ್ಲಿ ಆರ್ಥಿಕ ಪ್ರೋಗ್ರೆಸ್ ಒಂದೇ ಅಭಿವೃದ್ಧಿಯ ಮಾನದಂಡವಾಗಿದೆ.

By failing to prepare, you are preparing to fail.-Benjamin Franklin ತಯಾರಿ ಮಾಡಲು ವಿಫಲರಾಗುವ ಮೂಲಕ ನೀವು ವಿಫಲರಾಗಲು ತಯಾರಿ ನಡೆಸುತ್ತಿದ್ದೀರಿ ಎಂಬುದಾಗಿ ಚಿಂತಕ ಬೆಂಜಮಿನ್ ಫ್ರ್ಯಾಂಕ್ಲಿನ್ ಹೇಳಿರುವುದು ಇವತ್ತಿಗೂ ಪ್ರಸ್ತುತ.

ನದಿಗಳು ಜೀವಂತ ಇದ್ದರೆ ನಮ್ಮ ಬದುಕು, ಅವುಗಳನ್ನು ಸುಸ್ಥಿತಿಯಲ್ಲಿ ಉಳಿಸಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯ. ನದಿಗಳು ಕಲುಷಿತಗೊಳ್ಳುವುದಕ್ಕೆ ನಾವೇ ಕಾರಣರಾಗುತ್ತಿದ್ದೇವೆ. ಇಲ್ಲಿ ಯಾರೂ ಯಾರನ್ನೂ ದೂಷಿಸುವಂತಿಲ್ಲ, ಇದರಲ್ಲಿ ಭಾಗಿಯಾಗಿರುವುದು ಫಲಾನುಭವಿಗಳಾದ ನಾವುಗಳು, ನಮ್ಮ ನಡುವೆ ಮತಕ್ಕೆ ಹಣ ಪಡೆದಿರುವವರು ಇದ್ದಾರೆ ಹಾಗೂ ಬೇಡವೆನ್ನದೆ ಉಚಿತವೆಂದು ಗ್ಯಾರಂಟಿ ಸೌಲಭ್ಯಗಳನ್ನು ಪಡೆದಿದ್ದೇವೆ. ಹಾಗಾಗಿ ಜನಪ್ರತಿನಿಧಿಗಳ ತಪ್ಪುಗಳನ್ನು ಎತ್ತಿ ತೋರಿಸುವ ಬೆರಳುಗಳೆಲ್ಲವೂ ನಮ್ಮ ಕಡೆಗೇ ತಿರುಗಿ ಹೇಳುತ್ತಿವೆ, ಎಲ್ಲದಕ್ಕೂ ಕಾರಣ ನೀನೇ ಎಂದು!.

> "
> ನದಿಗಳು ಜೀವಂತ ಇದ್ದರೆ ನಮ್ಮ ಬದುಕು. ಅವುಗಳನ್ನು ಸುಸ್ಥಿತಿಯಲ್ಲಿ ಉಳಿಸಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯ. ನದಿಗಳು ಕಲುಷಿತಗೊಳ್ಳುವುದಕ್ಕೆ ನಾವೇ ಕಾರಣರಾಗುತ್ತಿದ್ದೇವೆ. ಇಲ್ಲಿ ಯಾರೂ ಯಾರನ್ನೂ ದೂಷಿಸುವಂತಿಲ್ಲ. ಇದರಲ್ಲಿ ಭಾಗಿಯಾಗಿರುವುದು ಫಲಾನುಭವಿಗಳಾದ ನಾವುಗಳು. ನಮ್ಮ ನಡುವೆ ಮತಕ್ಕೆ ಹಣ ಪಡೆದಿರುವವರು ಇದ್ದಾರೆ ಹಾಗೂ ಬೇಡವೆನ್ನದೆ ಉಚಿತವೆಂದು ಗ್ಯಾರಂಟಿ ಸೌಲಭ್ಯಗಳನ್ನು ಪಡೆದಿದ್ದೇವೆ. ಹಾಗಾಗಿ ಜನಪ್ರತಿನಿಧಿಗಳ ತಪ್ಪುಗಳನ್ನು ಎತ್ತಿ ತೋರಿಸುವ ಬೆರಳುಗಳೆಲ್ಲವೂ ನಮ್ಮ ಕಡೆಗೇ ತಿರುಗಿ ಹೇಳುತ್ತಿವೆ, ಎಲ್ಲದಕ್ಕೂ ಕಾರಣ ನೀನೇ ಎಂದು!.

ಎಂಟು ವರ್ಷದಿಂದ ಮುಚ್ಚಿರುವ ವಿವಿ ಮೊಹಲ್ಲಾ ಸರ್ಕಾರಿ ಶಾಲೆ

● ಅಕ್ರಮ ಚಟುವಟಿಕೆಗಳ ತಾಣವಾಗಿರುವ ಕಟ್ಟಡ ● ಕಣ್ಮುಚ್ಚಿ ಕುಳಿತಿರುವ ಶಿಕ್ಷಣ ಇಲಾಖೆ

ಬೇರೆ ಶೈಕ್ಷಣಿಕ ಚಟುವಟಿಕೆಗೆ ಬಳಸಲು ಮೈಸೂರು ಗ್ರಾಹಕ ಪರಿಷತ್ ಒತ್ತಾಯ



ಮೈಸೂರಿನ ವಿವಿ ಮೊಹಲ್ಲಾ ಹಿರಿಯ ಪ್ರಾಥಮಿಕ ಶಾಲೆ ಮುಚ್ಚಿರುವ ದೃಶ್ಯ.



ಶಾಲಾ ಆವರಣದಲ್ಲಿ ಗಿಡ–ಗಂಟಿಗಳು ಬೆಳೆದು ನಿಂತಿರುವುದು.

> ವಿವಿ ಮೊಹಲ್ಲಾ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯು ಕಳೆದ 8 ವರ್ಷಗಳಿಂದ ಮುಚ್ಚಿದೆ. ಈ ಶಾಲೆಯಲ್ಲಿ ಶೈಕ್ಷಣಿಕ ಗುಣಮಟ್ಟದ ಪ್ರಸ್ತುತ ಸನ್ನಿವೇಶಕ್ಕೆ ಹೊಂದಿಕೆಯಾಗದ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿ ವರ್ಷದಿಂದ ವರ್ಷಕ್ಕೆ ಕುಸಿದು ಶಾಲೆ ಮುಚ್ಚಲು ಕಾರಣವಾಗಿದೆ.
> –ವಾಸುದೇವ, ವಿವಿ ಮೊಹಲ್ಲಾ ನಿವಾಸಿ

> ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಶೈಕ್ಷಣಿಕ ಗುಣಮಟ್ಟ ಕಾಪಾಡಿಕೊಳ್ಳಲು ಶಿಕ್ಷಣ ಇಲಾಖೆ ವಿಫಲವಾಗಿದೆ. ಈ ವೈಫಲ್ಯಕ್ಕೆ ಯಾರನ್ನು ದೂಷಿಸಬೇಕು ಎಂಬುದನ್ನು ಸಮಾಜ ನಿರ್ಧರಿಸಲಿ. ಇದಕ್ಕೆ ವಿವಿ ಮೊಹಲ್ಲಾ ಶಾಲೆಯು ಹೊರತಲ್ಲ. ಈ ಆವರಣದಲ್ಲಿ ದಿವ್ಯಾಂಗ ವಿದ್ಯಾರ್ಥಿಗಳ ಶಿಕ್ಷಣ, ತರಬೇತಿ, ಥೆರಪಿ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳಲು ಈ ಜಾಗ ಉಪಯುಕ್ತ. –ಭಾಮೀ ವಿ.ಶೆಣೈ

ಮೈಸೂರು, ಜೂ.11 (ಎಸ್‌ಪಿಎನ್)– ದಾಖಲಾತಿ ಕೊರತೆಯಿಂದ ಮುಚ್ಚಿರುವ ವಿ.ವಿ.ಮೊಹಲ್ಲಾ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಕಟ್ಟಡ ಅಕ್ರಮ ಚಟುವಟಿಕೆಗಳ ತಾಣವಾಗಿದೆ. ಇದಕ್ಕೆ ಕಡಿವಾಣ ಹಾಕಲು ಈ ಕಟ್ಟಡ ಬೇರೆ ಶೈಕ್ಷಣಿಕ ಕಾರ್ಯಕ್ಕೆ ಬಳಸಲು ಶಾಲಾ ಶಿಕ್ಷಣ ಇಲಾಖೆ ಮುಂದಾಗಬೇಕು ಎಂದು ಮೈಸೂರು ಗ್ರಾಹಕ ಪರಿಷತ್(ಮೈಗ್ರಾಪ) ಒತ್ತಾಯಿಸಿದೆ.

ಬದಲಾವಣೆ ಜಗದ ನಿಯಮ. ಜಗತ್ತಿನ ಬದಲಾವಣೆಗೆ ತಕ್ಕಂತೆ ನಮ್ಮ ಶಿಕ್ಷಣದ ಕೌಶಲಗಳು ಬದಲಾಗಬೇಕು. ಆದರೆ, ನಮ್ಮ ಶೈಕ್ಷಣಿಕ ವ್ಯವಸ್ಥೆಯು ಬದಲಾವಣೆಗೆ ಹೊಂದಿಕೊಳ್ಳದ ಪರಿಣಾಮ ಸರ್ಕಾರಿ ಶಾಲೆಗಳು ದಾಖಲಾತಿ ಕೊರತೆಯಿಂದ ಮುಚ್ಚುತ್ತಿವೆ. ಇದರ ಅಂಗವಾಗಿ ನಗರ ಪ್ರದೇಶದ ಸರ್ಕಾರಿ ಶಾಲೆಗಳು ಮುಚ್ಚುವ ಹಂತ ತಲುಪಿವೆ. ಬದಲಾಗುತ್ತಿರುವ ಜಗತ್ತಿಗೆ ನಮ್ಮ ಶೈಕ್ಷಣಿಕ ವ್ಯವಸ್ಥೆಗಳನ್ನು ಬದಲಿಸಿಕೊಂಡು ಇಂದಿನ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಬೇಕು. ಆದರೆ, ಭಾರತದಲ್ಲಿ ಅದು ಸಾಧ್ಯವಾಗುತ್ತಿಲ್ಲ ಎಂದು ಮೈಗ್ರಾಪ ಸದಸ್ಯ ಭಾಮೀ ವಿ.ಶೆಣೈ ವಿಷಾದ ವ್ಯಕ್ತಪಡಿಸಿದ್ದಾರೆ.

ಈ ಹಿಂದೆ ಮೈಸೂರಿನ ವಿವಿ ಮೊಹಲ್ಲಾ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಶ್ರೀಮಂತರು, ಮಧ್ಯಮ ವರ್ಗ ಹಾಗೂ ಉದ್ಯಮಿಗಳ ಮಕ್ಕಳೇ ದಾಖಲಾಗಿ ಶಿಕ್ಷಣ ಪಡೆಯುತ್ತಿದ್ದರು. ಕಾಲ ಬದಲಾದಂತೆ ಇಂಗ್ಲಿಷ್ ಶಿಕ್ಷಣದ ಅನಿವಾರ್ಯತೆಗೆ ಜೋತು ಬಿದ್ದ ಪೋಷಕರು, ಖಾಸಗಿ ಶಿಕ್ಷಣ ಸಂಸ್ಥೆಗಳತ್ತ ಹೊರಳಿದರು. ಇದರಿಂದ ಸರ್ಕಾರಿ ಶಾಲೆಗಳಿಗೆ ಎಷ್ಟೇ ಮೂಲಸೌಕರ್ಯ ಕೊಟ್ಟರೂ ಪ್ರವೇಶಾತಿ ಪಡೆಯಲು ಯಾರೂ ಮುಂದೆ ಬರುತ್ತಿಲ್ಲ. ಇದರಿಂದ ಅನೇಕ ಕಡೆ ಶೂನ್ಯ ದಾಖಲಾತಿ ಹೊಂದಿವೆ ಇಲಾಖೆ ಅಂತಹ ಶಾಲೆಗಳನ್ನು ಶಾಶ್ವತವಾಗಿ ಮುಚ್ಚಲಾಗುತ್ತಿದೆ. ಈ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಈ ವಿಷಯ ಕುರಿತು ಸದಸ್ಯರೊಬ್ಬರು ಮೈಗ್ರಾಪ ಸಾಮಾನ್ಯ ಸಭೆಯಲ್ಲಿ ಪ್ರಸ್ತಾಪಿಸಿದ್ದರು. ಕಳೆದ 8 ವರ್ಷಗಳಿಂದ ಶಾಲೆ ಮುಚ್ಚಿರುವುದರಿಂದ ಆ ಜಾಗ ಇದೀಗ ಅನೈತಿಕ ಚಟುವಟಿಕೆಗಳ ತಾಣವಾಗುತ್ತಿದೆ. ಈ ಕಟ್ಟಡದಲ್ಲಿ ಶಾಲೆ ನಡೆಸಲು ಸಾಧ್ಯವಾಗದಿದ್ದರೆ, ಬೇರೆ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸಲು ಶಿಕ್ಷಣ ಇಲಾಖೆ ಚಿಂತನೆ ಮಾಡಬೇಕು ಎಂದು ಸಭೆಯಲ್ಲಿ ಭಾಗವಹಿಸಿದ್ದ ಶಿಕ್ಷಣಾಧಿಕಾರಿ ಜಿ.ವೆಂಕಟಾಚಲ ಅವರಲ್ಲಿ ಮನವಿ ಮಾಡಿದ್ದ ಪ್ರಸಂಗವನ್ನು ನೆನೆದರು.

ದ್ವಿಭಾಷಾ ನೀತಿ ಜಾರಿಗೊಳಿಸಬೇಕು: ರಾಷ್ಟ್ರೀಯ ಶಿಕ್ಷಣ ನೀತಿ–2020ರ ಪ್ರಕಾರ, ದ್ವಿಭಾಷಾ(ಕನ್ನಡ ಮತ್ತು ಇಂಗ್ಲಿಷ್ ಮಾಧ್ಯಮ) ಶಿಕ್ಷಣ ನೀತಿ ಜಾರಿ ಗೊಳಿಸಿ, ನಗರ ಪ್ರದೇಶದಲ್ಲಿನ ಸರ್ಕಾರಿ ಶಾಲೆಗಳನ್ನು ಮತ್ತೆ ಶೈಕ್ಷಣಿಕವಾಗಿ ಪುನಶ್ಚೇತನಗೊಳಿಸಬಹುದು. ಇದಕ್ಕೆ ಶಿಕ್ಷಣ ಇಲಾಖೆ ಮನಸ್ಸು ಮಾಡಬೇಕು. ಅದೂ ಸಾಧ್ಯವಾಗದಿದ್ದರೆ, ವಿಶೇಷಚೇತನ ಮಕ್ಕಳ ಶಿಕ್ಷಣ, ಥೆರಪಿಗೆ ಈ ಕಟ್ಟಡವನ್ನು ಬಳಸಿಕೊಳ್ಳಬಹುದು. ದಾಖಲಾತಿ ಕೊರತೆ ನೆಪವೊಡ್ಡಿ ಶಾಲಾ ಕಟ್ಟಡವನ್ನು ಪಾಳು ಬೀಡುವುದು ಎಷ್ಟು ಸರಿ? ಹಾಗೂ ಇಂತಹ ನಿರ್ಧಾರ ಈ ಕಟ್ಟಡದ ಸುತ್ತಮುತ್ತ ವಾಸಿಸುವ ನಿವಾಸಿಗಳಿಗೆ ತೊಂದರೆ ಅಲ್ಲವೆ ಎಂದು ಪ್ರಶ್ನಿಸಿದ್ದರು.

'ಸರ್ವರಿಗೂ ಶಿಕ್ಷಣ' ಎಂಬುದು ಸಂವಿಧಾನ ಬದ್ಧ ಹಕ್ಕು. ವಿಶೇಷ ಅಗತ್ಯವುಳ್ಳ ಮಕ್ಕಳಿಗೆ ಎಲ್ಲಾ ಮಕ್ಕಳಂತೆ ಸಹಜವಾಗಿ ಕಲಿಯಲು ನ್ಯೂನತೆಗಳು ಕಾರಣವಾಗಿರಬಹುದು. ಈ ನ್ಯೂನತೆಗಳೆಂದರೆ ದೃಷ್ಟಿದೋಷ, ಶ್ರವಣದೋಷ, ಬುದ್ಧಿದೋಷ, ದೈಹಿಕದೋಷ, ಮತ್ತು ಕಲಿಕಾದೋಷ ಇತ್ಯಾದಿಗಳಿರಬಹುದು. ಹಾಗಾಗಿ ಈ ಕಟ್ಟಡವನ್ನು ಅಂತಹ ಮಕ್ಕಳ ಉಪಯೋಗಕ್ಕಾದರೂ ಬಳಕೆ ಮಾಡಿಕೊಳ್ಳಲು ಶಿಕ್ಷಣ ಇಲಾಖೆ ಮುಂದಾಗಬೇಕು ಎಂದು ಭಾಮೀ ವಿ.ಶೆಣೈ ಒತ್ತಾಯಿಸಿದ್ದಾರೆ.

ಕಲಿಕೆಯಲ್ಲಿ ಹಿಂದಿರುವ ವಿಶೇಷ ಅಗತ್ಯವುಳ್ಳ ಮಕ್ಕಳನ್ನು ಇತರೆ ಮಕ್ಕಳ ಜೊತೆಯಲ್ಲಿ ಸೇರಿಸಿ ನಿರೀಕ್ಷಿತ ಮಟ್ಟದಲ್ಲಿ ಕಲಿಸಬೇಕು. ಕರ್ನಾಟಕದಲ್ಲಿ ಅಂಕಿ–ಅಂಶಗಳ ಪ್ರಕಾರ 1,47,999 ವಿಶೇಷ ಅಗತ್ಯವುಳ್ಳ ಮಕ್ಕಳನ್ನು ಗುರುತಿಸಲಾಗಿದೆ. ಕರ್ನಾಟಕದಲ್ಲಿ 202 ಶೈಕ್ಷಣಿಕ ಬ್ಲಾಕ್‌ಗಳಿದ್ದು, ಪ್ರತಿ ಬ್ಲಾಕ್‌ಗೆ 3 ಜನರಂತೆ 606 ಜನ ಸಂಪನ್ಮೂಲ ವ್ಯಕ್ತಿಗಳು, ಹಾಗೂ ಪ್ರತಿ ಬ್ಲಾಕ್‌ಗೆ ಇಬ್ಬರಂತೆ 404 ಜನ ವಿಶೇಷ ಶಿಕ್ಷಕರು ಸಮನ್ವಯ ಶಿಕ್ಷಣದಲ್ಲಿ ಭಾಗಿಯಾಗಿದ್ದಾರೆ. ಅಲ್ಲದೇ 34 ಶೈಕ್ಷಣಿಕ ಜಿಲ್ಲೆಗೂ ಒಬ್ಬೊಬ್ಬ ಜಿಲ್ಲಾ ಸಂಯೋಜಕರು ಈ ಕಾರ್ಯದಲ್ಲಿ ನಿರತರಾಗಿದ್ದಾರೆ ಎಂಬ ಮಾಹಿತಿ ವಿಶೇಷಚೇತನರ ವೆಬ್‌ಸೈಟ್‌ನಲ್ಲಿ ಸರ್ಕಾರವೇ ದಾಖಲಿಸಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No.114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರಲ್ಲಿ ಧಾರಾಕಾರ ಮಳೆ; ಮುರಿದು ಬಿದ್ದ ಮರದ ಕೊಂಬೆ

ಮೈಸೂರು, ಜೂ.11(ಎಂಕೆ)– ಕೆಲ ದಿನಗಳು ಬಿಡುವು ನೀಡಿದ್ದ ಮಳೆ ಮತ್ತೆ ಅಬ್ಬರಿಸಲು ಶುರುಮಾಡಿದ್ದು, ಮೈಸೂರಿನೆಲ್ಲೆಡೆ ಬುಧವಾರ ಧಾರಾಕಾರ ಮಳೆಯಾಯಿತು.

ಮಧ್ಯಾಹ್ನ 2 ಗಂಟೆ ಸುಮಾರಿಗೆ ಆರಂಭವಾದ ಮಳೆ ಗಂಟೆಗೂ ಹೆಚ್ಚು ಕಾಲ ಧಾರಾಕಾರವಾಗಿ ಸುರಿಯಿತು. ಇಲವಾಲ, ಹಿನಕಲ್, ಬೋಗಾದಿ, ಶಾರದಾದೇವಿನಗರ, ಕುವೆಂಪುನಗರ, ಟಿ.ಕೆ.ಬಡಾವಣೆ, ಮಾನಸಗಂಗೋತ್ರಿ ಭಾಗದಲ್ಲಿ ಮಳೆ ಅಬ್ಬರ ಜೋರಾಗಿತ್ತು.

ಗಾಳಿ–ಮಳೆಗೆ ಗೋಕುಲಂ ಹಾಗೂ ಗಾಯತ್ರಿಪುರಂನ ವಲಯ ಕಚೇರಿ–9ರ ಸಮೀಪದಲ್ಲಿ ಬೃಹತ್‌ಗಳ ಕೊಂಬೆಗಳು ಮುರಿದು ಬಿದ್ದಿದ್ದು, ಸಂಚಾರಕ್ಕೆ ತೀವ್ರ ತೊಂದರೆಯಾಯಿತು. ಮಾನಸ ಗಂಗೋತ್ರಿ ಕ್ಯಾಂಪಸ್ ಎದುರಿನ ಬೋಗಾದಿ ಮುಖ್ಯ ರಸ್ತೆ ನೀರಿನಿಂದ ಆವೃತವಾಗಿ ವಾಹನ ಸವಾರರು ಪರದಾಡುವಂತಾಯಿತು.

ಸಂಜೆಯಾಗುತ್ತಿದ್ದಂತೆ ನಗರದೆಲ್ಲೆಡೆ ಆವರಿಸಿದ ಮಳೆ ಬಹುತೇಕ ಭಾಗಗಳಲ್ಲಿ ಜೋರಾಗಿ ಸುರಿದರೆ, ಬನ್ನಿಮಂಟಪ, ಹುನುಮಂತನಗರ, ಮೈಸೂರು–ಬೆಂಗಳೂರು ರಸ್ತೆ ಭಾಗದಲ್ಲಿ ಸಾಧಾರಣ ಮಳೆಯಾಯಿತು. ಪರಿಣಾಮ ದ್ವಿಚಕ್ರ ವಾಹನ ಸವಾರರು, ಪಾದಚಾರಿಗಳು ಪರದಾಡುವಂತಾಯಿತು. ಪ್ರಮುಖ ರಸ್ತೆ, ಚರಂಡಿಗಳು ನೀರಿನಿಂದ ಆವೃತವಾಗಿದ್ದವು. ಮನೆಗಳಿಗೆ ನೀರು ನುಗ್ಗಿರುವುದು, ವಿದ್ಯುತ್ ಕಂಬಗಳು ಮುರಿದು ಬಿದ್ದಿರುವ ಮಾಹಿತಿ ಇಲ್ಲ ಎಂದು ನಗರಪಾಲಿಕೆ ಕಂಟ್ರೋಲ್ ರೂಂ ಸಿಬ್ಬಂದಿ 'ಮೈಸೂರು ಮಿತ್ರ'ನಿಗೆ ತಿಳಿಸಿದರು.


ಗಾಳಿ–ಮಳೆಗೆ ಗಾಯತ್ರಿಪುರಂನಲ್ಲಿ ಮರದ ಕೊಂಬೆ ಮುರಿದು ಬಿದ್ದಿರುವುದು.

ಶೇ.25 ರಷ್ಟು ಹೆಚ್ಚು ಮಳೆ: ಪ್ರಸಕ್ತ ವರ್ಷದಲ್ಲಿ ಇಲ್ಲಿಯವರೆಗೆ ಜಿಲ್ಲೆಯಾದ್ಯಂತ ವಾಡಿಕೆಗಿಂತ ಶೇ.25 ರಷ್ಟು ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗಿದೆ. 234.5 ಮೀ.ಮಿ ವಾಡಿಕೆ ಮಳೆಗಿಂತ 292 ಮೀ.ಮಿ ಮಳೆ ಬಿದ್ದಿದೆ ಎಂದು ಕೃಷಿ ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

13 ಜಿಲ್ಲೆಗಳಲ್ಲಿ ಜೂ.14ರವರೆಗೂ ಭಾರಿ ಮಳೆ ಸಾಧ್ಯತೆ

ಬೆಂಗಳೂರು, ಜೂ.11– ಕರ್ನಾಟಕದಲ್ಲಿ ಬಿಡುವು ಪಡೆದಿದ್ದ ಮಳೆರಾಯ ಮತ್ತೆ ಸಕ್ರಿಯವಾಗಿದ್ದು ಜೂನ್ 14ರವರೆಗೂ ರಾಜ್ಯಾದ್ಯಂತ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಕೇಂದ್ರ ಹವಾಮಾನ ಇಲಾಖೆ ತಿಳಿಸಿದೆ. ಕರ್ನಾಟಕದಲ್ಲಿ ಮುಂದಿನ 48 ಗಂಟೆಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದ್ದು, ಕರ್ನಾಟಕದ ಕರಾವಳಿ ಸೇರಿ 13 ಜಿಲ್ಲೆಗಳಲ್ಲಿ ಜೂನ್ 14ರವರೆಗೂ ಭಾರಿ ಮಳೆ ಸಾಧ್ಯತೆ ಎಂದು ಕೇಂದ್ರ ಹವಾಮಾನ ಇಲಾಖೆ ಮಾಹಿತಿ ನೀಡಿದೆ.

ಈ ಪೈಕಿ 9 ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಲಾಗಿದ್ದು, ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಬೆಳಗಾವಿ, ಧಾರವಾಡ, ಹಾವೇರಿ, ಚಿಕ್ಕಮಗಳೂರು, ಕೊಡಗು, ಶಿವಮೊಗ್ಗ ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಲಾಗಿದೆ. ವಿಜಯನಗರ, ಮೈಸೂರು, ಹಾಸನ, ದಾವಣಗೆರೆ, ಕೊಪ್ಪಳ, ರಾಯಚೂರು, ಗದಗ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದ್ದು, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ಕೋಲಾರ, ಮಂಡ್ಯ, ರಾಮನಗರ, ತುಮಕೂರು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಪಂಡಿತ್ ರಾಜೀವ್ ತಾರಾನಾಥ್ ಗುರುಗಳನ್ನೇ ದೇವರೆಂದು ಪೂಜಿಸುತ್ತಿದ್ದರು

ಪಂಡಿತ್ ಉದಯ್‌ರಾಜ್ ಕರ್ಪೂರ್ ಮಾಹಿತಿ

ಮೈಸೂರು, ಜೂ.11(ಎಸ್‌ಪಿಎನ್)– ಖ್ಯಾತ ಸರೋದ್ ವಾದಕ ಪಂಡಿತ್ ರಾಜೀವ್ ತಾರಾನಾಥ್ ದೇವರನ್ನು ಪೂಜಿಸುತ್ತಿದ್ದರೋ ಇಲ್ಲವೋ ತಿಳಿಯದು. ಆದರೆ, ಅವರ ಗುರುಗಳನ್ನೇ ದೇವರೆಂದು ತಿಳಿದು ಕೊನೆಯವರೆಗೂ ಮನೆಯಲ್ಲಿ ಅವರ ಭಾವಚಿತ್ರವಿಟ್ಟು ಪೂಜಿಸುತ್ತಿದ್ದರು ಎಂದು ಪಂಡಿತ್ ಉದಯ್‌ರಾಜ್ ಕರ್ಪೂರ್ ಮಾಹಿತಿ ನೀಡಿದರು.

ಮೈಸೂರು ಕುವೆಂಪುನಗರ ಗಾನಭಾರತೀ ಸಭಾಂಗಣದಲ್ಲಿ ಪಂಡಿತ್ ರಾಜೀವ್ ತಾರಾನಾಥ್ ಮೆಮೋರಿಯಲ್ ಟ್ರಸ್ಟ್ ವತಿಯಿಂದ ಪಂಡಿತ್ ರಾಜೀವ್ ತಾರಾನಾಥ್ ಸ್ಮರಣಾರ್ಥ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಪಂಡಿತ್ ರಾಜೀವ್ ತಾರಾನಾಥ್ ತಮ್ಮ ತಂದೆ ಅವರಿಂದ ಸಂಗೀತ, ತಬಲಾ ಹಾಗೂ ಆಯುರ್ವೇದ ಬಳುವಳಿಯಾಗಿ ಬಂದಿದೆ. ಸಾವನೂರು ಕೃಷ್ಣಚಾರ್ಯ, ವೆಂಕಟರಾವ್ ರಾಮದುರ್ಗಕರ್, ಪಂಚಾಕ್ಷರಿ ಗವಾಯಿ ಹಾಗೂ ಗ್ವಾಲಿಯರ್ ಘರಾನಾದ ಶಂಕರ್‌ರಾವ್ ದೇವಗಿರಿ ಅವರಿಂದ ಹಿಂದೂಸ್ತಾನಿ ಶಾಸ್ತ್ರೀಯ ಗಾಯನ ಕಲಿತುಕೊಂಡಿದ್ದರು. ನಂತರ 1953ರಲ್ಲಿ ಬೆಂಗಳೂರಿನ ಟೌನ್‌ಹಾಲ್‌ನಲ್ಲಿ ಸರೋದ್ ಗುರು ಉಸ್ತಾದ್ ಅಲಿ ಅಕ್ಬರ್‌ಖಾನ್ ಅವರ ಸಂಗೀತ ಕಛೇರಿ ಕೇಳಿ, ಅವರಿಂದ ಸರೋದ್ ಕಲಿಯಲು ಆಸಕ್ತಿ ತೋರುತ್ತಾರೆ. ಕೋಲ್ಕತ್ತಾದಲ್ಲಿ ಅಲಿ ಅಕ್ಬರ್ ಖಾನ್ ಕಾಲೇಜು ಆಫ್ ಮ್ಯೂಸಿಕ್‌ನಲ್ಲಿ ಅನ್ನಪೂರ್ಣದೇವಿ ಅವರಿಂದ ಸರೋದ್ ವಾದನ ಕಲಿತುಕೊಂಡ ಪ್ರಸಂಗವನ್ನು ವಿವರಿಸಿದರು.


ಪಂಡಿತ್ ರಾಜೀವ್ ತಾರಾನಾಥ್ ಸ್ಮರಣಾರ್ಥ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸುಮಂಗಲಾ ಮಾತನಾಡುತ್ತಿರುವುದು.


ನಂತರ ಅಲಿ ಅಕ್ಬರ್ ಖಾನ್ ಅವರೊಂದಿಗೆ ಹಲವಾರು ಚಿತ್ರಗಳಿಗೆ ಸಂಗೀತ ಸಂಯೋಜನೆ ಮಾಡಿದ್ದಾರೆ. 1975ರಲ್ಲಿ ಪಲ್ಲವಿ ಸಿನಿಮಾಕ್ಕೆ ಸಂಗೀತ ಸಂಯೋಜನೆ ಮಾಡಿದ್ದಕ್ಕೆ ರಾಷ್ಟ್ರೀಯ ಅತ್ಯುತ್ತಮ ಸಂಗೀತ ನಿರ್ದೇಶನ ಪ್ರಶಸ್ತಿ ಇವರಿಗೆ ಲಭಿಸುತ್ತದೆ. ಯೆಮನ್‌ನ ಏಡನ್‌ನಲ್ಲಿ ಇಂಗ್ಲಿಷ್ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿದ್ದರು.

ಅಮೆರಿಕಾದ ಲಾಸ್ ಏಂಜಲೀಸ್ ಕ್ಯಾಲಿಫೋರ್ನಿಯಾ ಇನ್‌ಸ್ಟಿಟ್ಯೂಟ್ ಆಫ್ ದಿ ಪರ್ಫಾಮಿಂಗ್ ಆರ್ಟ್‌ನಲ್ಲಿ ಸಂಗೀತ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಾರೆ. 1982ರಲ್ಲಿ ಎಲ್ಲಾ ಪ್ರಾಧ್ಯಾಪಕ ಹುದ್ದೆಗಳಿಗೆ ರಾಜೀನಾಮೆ ಸಲ್ಲಿಸಿ, ಸರೋದ್ ವಾದನಕ್ಕೆ ತಮ್ಮ ತಾವು ಸಂಪೂರ್ಣ ಸಮರ್ಪಣೆ ಮಾಡಿಕೊಳ್ಳುತ್ತಾರೆ. ಅಲ್ಲಿಂದ ಅವರು ಎಂದಿಗೂ ಹಿಂದಿರುಗಿ ನೋಡಲೇ ಇಲ್ಲ. ಸರೋದ್ ವಾದನದಲ್ಲಿ ಹಲವು ಮಟ್ಟುಗಳನ್ನು ಕೇಳುವುದೇ ಚೆಂದ. ಸರೋದ್ ವಾದನದ ಝುಲಕ್ ಸರ್‌ಪ್ರೈಜ್ ಆಗಿರುತ್ತಿದ್ದವು ಎಂದು ಕೆಲ ರಾಗದ ಮಟ್ಟುಗಳನ್ನು ಹೇಳಿ, ವಿವರಿಸಿದರು.

ಪಂಡಿತ್ ರಾಜೀವ್ ತಾರಾನಾಥ್ ಅವರು, ತಾವು ಬೆಳೆಯುವುದರ ಜೊತೆಗೆ ಅವರ ಜೊತೆಗಿದ್ದ ಶಿಷ್ಯರನ್ನು ಬೆಳೆಸಿದರು. ಎಲ್ಲಾ ಕಲಾವಿದರನ್ನು ಒಂದಿಲ್ಲೊಂದು ವೇದಿಕೆಯಲ್ಲಿ ಅವಕಾಶ ಕಲ್ಪಿಸಿ, ಅವರಿಗೂ ಸಂಗೀತ ಕಛೇರಿಗಳನ್ನು ಭಾಗವಹಿಸಲು ಅವಕಾಶ ಮಾಡಿಕೊಟ್ಟರು. ತಮ್ಮ ಜೊತೆಗಿದ್ದ ಎಲ್ಲಾ ಕಲಾವಿದರಿಗೂ ಒಂದಿಲ್ಲೊಂದು ರೂಪದಲ್ಲಿ ಆರ್ಥಿಕ ನೆರವು ಸೇರಿದಂತೆ ಎಲ್ಲಾ ರೀತಿ ಸಹಾಯ ಮಾಡಿದ್ದಾರೆ. ಅವರಿಂದ ನೆರವು ಪಡೆದವರಲ್ಲಿ ನಾನೂ ಕೂಡ ಒಬ್ಬ. ಒಮ್ಮೆ ಪಂಡಿತ್ ರಾಜೀವ್ ಅವರು, ಅಮೆರಿಕಾ ಪ್ರವಾಸ ಕೈಗೊಂಡಿದ್ದರು. ಆ ವೇಳೆ ಅವರಿಗೆ ಪರಿಚಯವಿದ್ದ ಕಲಾವಿದರಿಗೆ ಅಲ್ಲಿಂದಲೇ 3 ಲಕ್ಷ ಹಣವನ್ನು ಅವರ ಬ್ಯಾಂಕ್ ಖಾತೆಗೆ ವರ್ಗಾಯಿಸಿದ್ದ ಪ್ರಸಂಗವನ್ನ ವಿವರಿಸಿದರು.

ಇಂಗ್ಲಿಷ್ ಪ್ರಾಧ್ಯಾಪಕರಾಗಿದ್ದ ಅವರು ಸರೋದ್ ವಾದನಕ್ಕೆ ಬಂದಿದ್ದೇ ರೋಚಕ. ಆ ಕ್ಷೇತ್ರದಲ್ಲಿ ಅವರಿಗಿದ್ದ ಹಿಡಿತ ಬೇರೆ ಕಲಾವಿದರಿಗೆ ಇರಲಿಲ್ಲ. ಒಂದು ಸರೋದ್ ವಾದನದಲ್ಲಿ ಒಂದು ಸಣ್ಣ ಝುಲಕ್ ಅನ್ನು ಬಿಡದೇ ನುಡಿಸುತ್ತಿದ್ದರು. ಅವರು ಬದುಕಿದ್ದ ಕಾಲಘಟ್ಟದಲ್ಲಿ ನಾವು ಬದುಕಿದ್ದೇವು ಎಂಬುದೇ ನಮಗೆ–ನಿಮಗೆ ಹೆಮ್ಮೆಯ ವಿಷಯ ಎಂದರು. ಪಂಡಿತ್ ರಾಜೀವ್ ತಾರಾನಾಥ್ ಸಂಸ್ಮರಣಾರ್ಥ ಸಂಗೀತ ಕಾರ್ಯಕ್ರಮ ಜರುಗಿತು. ಇದರಲ್ಲಿ ವಿದುಷಿ ಎಸ್.ವಿ. ಸಹನಾ ವೀಣೆ, ವಿದ್ವಾನ್ ಕೆ.ಯು.ಜಯಚಂದ್ರಾವ್ ಮೃದಂಗ, ವಿದ್ವಾನ್ ಜಿ.ಎಸ್. ರಾಮಾನುಜನ್ ಘಟಂ ನುಡಿಸಿ ಸಂಗೀತ ಕಛೇರಿಗೆ ಮೆರಗು ತಂದರು. ಈ ವೇಳೆ ಸುಮಂಗಲಾ, ಕೃಷ್ಣಮನವಲ್ಲಿ, ಇಂದಿರಾ ನಾಯರ್ ಉಪಸ್ಥಿತರಿದ್ದರು.

ಸುತ್ತೂರು ಮಠದಲ್ಲಿ ಬೆಳದಿಂಗಳ ಗಾಯನ


ಮೈಸೂರು ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಶ್ರೀ ಸುತ್ತೂರು ಮಠದಲ್ಲಿ ಬುಧವಾರ ನಡೆದ 280ನೇ ಬೆಳದಿಂಗಳ ಸಂಗೀತ ಕಾರ್ಯಕ್ರಮದಲ್ಲಿ ವಿದುಷಿ ರಂಜನಿ ವಾಸುಕಿ ಗಾಯನ ನಡೆಸಿಕೊಟ್ಟರು. ಪಕ್ಕವಾದ್ಯದಲ್ಲಿ ವಿದ್ವಾನ್ ಫಣೀಂದ್ರ ಭಾಸ್ಕರ, ವಿದ್ವಾನ್ ಶರತ್ ಕೌಶಿಕ್ ಹಾಗೂ ವಿದ್ವಾನ್ ಜಿ. ವೆಂಕಟೇಶ್ ಜೋಸ್ಯರ್ ಇದ್ದರು.

ಸಿಎಂ ಕುರ್ಚಿ ಎಂದಿಗೂ ಅಲ್ಲಾಡಲ್ಲ: ಡಾ.ಹೆಚ್.ಸಿ.ಮಹದೇವಪ್ಪ

ಮೈಸೂರು,ಜೂ.11(ಎಂಟಿವೈ)– ರಾಜ್ಯದಲ್ಲಿ ಸಿಎಂ ಕುರ್ಚಿ ಹಾಗೂ ಕುರ್ಚಿಯ ಮೇಲೆ ಕುಳಿತಿರುವವರು ಬಿಗಿಯಾಗಿದ್ದು, ಸಿಎಂ ಕುರ್ಚಿ ಎಂದಿಗೂ ಅಲ್ಲಾಡಿಲ್ಲ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ತಿಳಿಸಿದ್ದಾರೆ.

ಮೈಸೂರಲ್ಲಿ ಪತ್ರಕರ್ತರು ಮುಂದಿನ ಎರಡೂವರೆ ವರ್ಷ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ ಮುಂದುವರೆಯುತ್ತಾರಾ ಎಂದು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಇಂದಿನ ಪ್ರಕರಣದಲ್ಲೂ ಅಲ್ಲಾಡುವ ಪ್ರಶ್ನೆಯೇ ಬರುವುದಿಲ್ಲ. ಸಿಎಂ ಕುರ್ಚಿ ಗಟ್ಟಿ ಇರುತ್ತದೆ. ಅದರ ಮೇಲೆ ಕುಳಿತಿರುವವರು ಸಹ ಗಟ್ಟಿ ಇರುತ್ತಾರೆ ಎಂದರು. ಜಾತಿ ಗಣತಿ ವಿಚಾರ,




ಪ್ರಸಕ್ತ ವಿಚಾರಗಳ ಬಗ್ಗೆ ಮಾತನಾಡಲು ಸಿಎಂ ಹೋಗಿದ್ದಾರೆ. ಅದಕ್ಕೆ ವಿಶೇಷ ಅರ್ಥಗಳೇನು ಇಲ್ಲ. ಪ್ರಮುಖವಾಗಿ ಜಾತಿ ಗಣತಿಯ ವಿಚಾರದ ಬಗ್ಗೆ ಸಿಎಂ ಚರ್ಚೆ ಮಾಡಿದ್ದಾರೆ. ನಾಳೆ ಜಾತಿಗಣತಿಯ ಬಗ್ಗೆ ಸಚಿವ ಸಂಪುಟದಲ್ಲಿ ಚರ್ಚೆ ಮಾಡುತ್ತೇವೆ ಎಂದು ತಿಳಿಸಿದರು.

ಬೆಂಗಳೂರು ಕಾಲ್ತುಳಿತ ಪ್ರಕರಣದ ಬಗ್ಗೆ ನಮಗೆಲ್ಲರಿಗೂ ನೋವಾಗಿದೆ. ನಾನು ವಿಚಾರವನ್ನು ಬೇರೆ ರಾಜ್ಯಗಳ ಘಟನೆಗೆ ಹೋಲಿಕೆ ಮಾಡುವುದಿಲ್ಲ. ಆದರೂ ಹೇಳುತ್ತೇನೆ, ಅಲ್ಲಿ ಘಟನೆಗಳು ಆದಾಗ ಯಾರಾದರೂ ರಾಜೀನಾಮೆ ಕೊಟ್ರಾ?. ಬಿಜೆಪಿ ವಿರೋಧ ಪಕ್ಷವಾಗಿ ಎಲ್ಲದಕ್ಕೂ ವಿರೋಧ ಮಾಡಬೇಕು, ಮಾಡುತ್ತಿದೆ ಅಷ್ಟೇ. ಹೋರಾಟ ಮಾಡುವುದು ಅವರ ಹಕ್ಕು, ಮಾಡಲಿ ಬಿಡಿ. ನಾವಂತು ಪ್ರಕರಣವನ್ನ ನ್ಯಾಯ ಸಮ್ಮತವಾಗಿ ತನಿಖೆ ಮಾಡಿಸುತ್ತಿದ್ದೇವೆ. ತನಿಖೆ ಹಿನ್ನಲೆಯಲ್ಲಿ ನಾನು ಈ ಬಗ್ಗೆ ಹೆಚ್ಚು ಮಾತನಾಡುವುದಿಲ್ಲ.

ಐದು ವರ್ಷವೂ ಸಿದ್ದರಾಮಯ್ಯ ಅವರೇ ಸಿಎಂ: ಎಂಎಲ್‌ಸಿ ಡಾ. ಯತೀಂದ್ರ ಪುನರುಚ್ಚಾರ

ಮೈಸೂರು, ಜೂ.11(ಎಂಟಿವೈ)– ರಾಜ್ಯದಲ್ಲಿ ಮುಖ್ಯಮಂತ್ರಿ ಸ್ಥಾನ ಖಾಲಿಯಿಲ್ಲ. ಐದು ವರ್ಷವೂ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಅವರೇ ಮುಂದುವರೆಯುತ್ತಾರೆ ಎಂದು ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಪುನರುಚ್ಚರಿಸಿದ್ದಾರೆ.



ದೆಹಲಿಯಲ್ಲಿ ಹೈಕಮಾಂಡ್ ಭೇಟಿಯಿಂದಾಗಿ ರಾಜ್ಯದಲ್ಲಿ ಸಿಎಂ ಬದಲಾಗುತ್ತಾರಾ ಎಂದು ಮೈಸೂರಲ್ಲಿ ಪತ್ರಕರ್ತರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಸಿಎಂ ಕುರ್ಚಿಗೆ ಯಾವುದೇ ಗಂಡಾಂತರವಿಲ್ಲ. 5 ವರ್ಷವೂ ಸಿದ್ದರಾಮಯ್ಯ ಅವರೇ ಸಿಎಂ ಆಗಿರುತ್ತಾರೆ. ಹೈಕಮಾಂಡ್ ಸಿಎಂ ಸಿದ್ದರಾಮಯ್ಯಗೆ ಯಾವುದೇ ಗಡುವು ನೀಡಿಲ್ಲ ಎಂದು ಸ್ಪಷ್ಟಪಡಿಸಿದರು. ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಆರ್‌ಸಿಬಿ ವಿಜಯೋತ್ಸವ ಕಾರ್ಯಕ್ರಮಕ್ಕೆ ಅನುಮತಿ ಪಡೆದಿಲ್ಲ. ಅನುಮತಿ ಪಡೆಯದೇ ಕಾರ್ಯಕ್ರಮ ಮಾಡಿದ್ದು ತಪ್ಪು. ಅಲ್ಲಿ ಭದ್ರತಾ ಲೋಪ ಆಗಿದೆ. ಇದಕ್ಕೆ ಸಿಎಂ ಹಾಗೂ ಡಿಸಿಎಂ ಹೇಗೆ ಹೊಣೆಗಾರರಾಗುತ್ತಾರೆ. ಬಿಜೆಪಿ ಯಾವ ನೈತಿಕತೆಯ ಆಧಾರದ ಮೇಲೆ ಸಿಎಂ ಮತ್ತು ಡಿಸಿಎಂ ರಾಜೀನಾಮೆ ಕೇಳುತ್ತಿದೆ. ಉತ್ತರ ಪ್ರದೇಶದಲ್ಲಿ ಕಾಲ್ತುಳಿತ ಆಗಿ ಹಲವು ಮಂದಿ ಮೃತಪಟ್ಟರು. ಅಲ್ಲಿನ ಸಿಎಂ ರಾಜೀನಾಮೆ ನೀಡಿದ್ದಾರಾ? ಮಹಾರಾಷ್ಟ್ರದಲ್ಲಿ ಕಾಲ್ತುಳಿತ ಪ್ರಕರಣಕ್ಕೆ ಅಲ್ಲಿನ ಸಿಎಂ ರಾಜೀನಾಮೆ ಕೊಟ್ಟಿದ್ದಾರಾ?. ಬಿಜೆಪಿಯವರು ಅಲ್ಲಿನ ಸಿಎಂ ಮನೆಗಳಿಗೆ ಹೋಗಿ ಮುತ್ತಿಗೆ ಹಾಕಿದ್ರಾ?. ಬಿಜೆಪಿ ಯಾವ ಆಧಾರದ ಮೇಲೆ ಪ್ರತಿಭಟನೆ ಮಾಡುತ್ತಿದೆ. ಸಿಎಂ ಡಿಸಿಎಂ ಯಾವ ತಪ್ಪು ಮಾಡಿಲ್ಲ ಎಂದು ಸ್ಪಷ್ಟಪಡಿಸಿದರು.

ನಾಟಕಕಾರ ಷೇಕ್‌ಪಿಯರ್ ಪರಕೀಯನಾಗಿ ಉಳಿಯದೇ ನಮ್ಮ ಪರಂಪರೆಯ ಒಂದು ಭಾಗವೇ ಆಗಿದ್ದಾನೆ

ಸಾಹಿತಿ ಸಿ.ನಾಗಣ್ಣ ಅಭಿಮತ

ಮೈಸೂರು, ಜೂ.11(ಎಂಕೆ)– ಜಗತ್ತಿನ ಅಪ್ರತಿಮ ನಾಟಕಕಾರ ವಿಲಿಯಂ ಷೇಕ್ಸ್‌ಪಿಯರ್ ಪರಕೀಯನಾಗಿ ಉಳಿಯದೇ ನಮ್ಮ ಪರಂಪರೆಯ ಒಂದು ಭಾಗವೇ ಆಗಿದ್ದಾನೆ ಎಂದು ಸಾಹಿತಿ ಡಾ.ಸಿ.ನಾಗಣ್ಣ ತಿಳಿಸಿದರು.

ಮೈಸೂರು ವಿವಿ ಮಾನಸಗಂಗೋತ್ರಿ ಮಾಳವಿಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರದಲ್ಲಿ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ವತಿಯಿಂದ ಆಯೋಜಿಸಿರುವ 52ನೇ ಕನ್ನಡ ಪುನಶ್ಚೇತನ ಶಿಬಿರದಲ್ಲಿ 'ಷೇಕ್ಸ್‌ಪಿಯರ್: ಅವನ ಮನಸ್ಸು ಮತ್ತು ಕಲೆ, ಭಾಷಾಂತರ: ಒಂದು ಚಾರಿತ್ರಿಕ ನೋಟ' ವಿಷಯ ಮಂಡಿಸಿದ ಅವರು, ಪಂಪ, ರನ್ನ, ಕುಮಾರವ್ಯಾಸ, ಲಕ್ಷ್ಮೀಶ, ವಚನಕಾರರು, ಹರಿದಾಸರು ಸೇರಿದಂತೆ ಕನ್ನಡದ ಅಭಿಜಾತ ಕವಿಗಳನ್ನು ಜತನದಿಂದ ಕಾಪಿಟ್ಟುಕೊಳ್ಳುವ ರೀತಿಯಲ್ಲೇ ಷೇಕ್ಸ್‌ಪಿಯರ್, ಮಿಲ್ಟನ್, ಗಯಾಟೆ ಸೇರಿದಂತೆ ಪಾಶ್ಚಾತ್ಯ ಕವಿಗಳನ್ನು ಕಾಪಿಟ್ಟುಕೊಳ್ಳಬೇಕು. ಇದರಿಂದ ನಮ್ಮ ಸಾಂಸ್ಕೃತಿಕ ಯೋಗಕ್ಷೇಮ ಹೆಚ್ಚುತ್ತದೆ ಎಂದರು.

ಷೇಕ್ಸ್‌ಪಿಯರ್ ಅತಿಮಾನುಷ ಎನ್ನಬಹುದಾದ ಉತ್ಕಟತೆಯನ್ನು ಹೊಂದಿದ್ದ ಮನುಷ್ಯ. ಹರ್ಷದಲ್ಲೂ, ಸಂಕಟದಲ್ಲೂ ಅತಿಯನ್ನೂ ಆಹ್ವಾನಿಸುವಲ್ಲಿ ಸಿದ್ಧ. ಆತ ಅಸದೃಶ ಮೇಧಾಶಕ್ತಿಯ ಅಪ ರೂಪದ ವ್ಯಕ್ತಿ. ಷೇಕ್ಸ್‌ಪಿಯರ್ ನಾಟಕಗಳು ಹಾಗೂ ಅವನ ಕಾವ್ಯದ ಓದಿನಿಂದ ಧೈರ್ಯ ಮತ್ತು ಬಲ ಪ್ರಾಪ್ತಿಯಾಗುತ್ತದೆ ಎಂದು ಹೇಳಿದರು.


52ನೇ ಕನ್ನಡ ಪುನಶ್ಚೇತನ ಶಿಬಿರದಲ್ಲಿ ಸಾಹಿತಿ ಪ್ರೊ.ಸಿ.ನಾಗಣ್ಣ ಮಾತನಾಡಿದರು.

ಭಾಷಾಂತರ ಜ್ಞಾನದ ಶಾಖೆ: ಭಾಷಾಂತರದ ಚರಿತ್ರೆ ಇಲ್ಲದೆ ಜಗತ್ತಿನ ಚರಿತ್ರೆಯನ್ನು ಊಹಿಸಿಕೊಳ್ಳಲಾಗದು. ತತ್ವಶಾಸ್ತ್ರದಿಂದ ಹಿಡಿದು ಭೌತಶಾಸ್ತ್ರದವರೆಗೆ ಎಲ್ಲ ಜ್ಞಾನ ಶಾಖೆಗಳೂ ಭಾಷಾಂತರದ ಮೂಲಕ ತಮ್ಮ ಬೆಳವಣಿಗೆಯನ್ನು ಸಾಧಿಸಿವೆ. ಭಾಷಾಂತರ ಮಾನವನ ಸರ್ವ ಸಾಮರ್ಥ್ಯವನ್ನು ಕುರಿತ ಚರಿತ್ರೆಯೇ ಆಗಿದೆ. ನಾವೇನಾದರೂ ಸಾಹಿತ್ಯ, ವಿಜ್ಞಾನ ಅಥವಾ ಸಮಾಜ ವಿಜ್ಞಾನಗಳ ಭಾಷಾಂತರ ಚರಿತ್ರೆಯನ್ನು ರಚಿಸಲು ಪ್ರಯತ್ನಿಸಿದರೆ ಜ್ಞಾನದ ಎಲ್ಲ ಶಾಖೆಗಳನ್ನು ಒಳಗೊಂಡಂತೆ ಆಗುತ್ತದೆ ಎಂದು ನುಡಿದರು.

ಶಿಬಿರದ ಸಂಯೋಜಕರೂ ಆದ ಮೈಸೂರು ವಿವಿ ಪ್ರಸಾರಾಂಗದ ನಿರ್ದೇಶಕ ಡಾ.ನಂಜಯ್ಯ ಎಂ.ಹೊಂಗನೂರು, ಮಾಳವಿಯ ಮಿಷನ್ ಶಿಕ್ಷಕ ತರಬೇತಿ ಕೇಂದ್ರ ನಿರ್ದೇಶಕಿ ಪ್ರೊ.ಹೆಚ್.ಜ್ಯೋತಿ, ಸಹಾಯಕ ಪ್ರಾಧ್ಯಾಪಕ ಡಾ.ಎಲ್.ನಂಜುಂಡಸ್ವಾಮಿ, ಶಿಬಿರಾರ್ಥಿಗಳು ಹಾಜರಿದ್ದರು.

ಸೈನ್ಸ್ ಸಂಜೆ ಕಾರ್ಯಕ್ರಮ

ಮೈಸೂರು: ಮೈಸೂರಿನ ಕಲಾ ಸುರುಚಿ, ಕುತೂಹಲಿ–ಕನ್ನಡ, ಸುರುಚಿ ರಂಗಮನೆ ವತಿಯಿಂದ ಜೂ.14ರಂದು ಸಂಜೆ 6.30 ರಿಂದ 7.30 ರವರೆಗೆ ಭಾರತ ಸರ್ಕಾರದ ಜೈವಿಕ ತಂತ್ರಜ್ಞಾನದ ಪೂರ್ವ ಹಿರಿಯ ಸಲಹೆಗಾರ ಡಾ. ಎಸ್. ನಟೇಶ್ ಅವರಿಂದ ಗಡಿಗಲ್ಲನ್ನು ನುಂಗಿದ ಮರ ಮತ್ತು ಇತರೆ ಕಣ್ಮಣಿ ಮರಗಳು ಕುರಿತು ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ಭಾಷಣ ಮಾಡಲಿದ್ದಾರೆ.

ಯೋಗಾಭ್ಯಾಸ ಪೋಸ್ಟರ್ ಬಿಡುಗಡೆ



ಮೈಸೂರಿನ ಸರ್ಕಾರಿ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಸ್ವಸ್ಥವೃತ್ತ ಯೋಗ ವಿಭಾಗದ ವತಿಯಿಂದ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಯೋಗಾಭ್ಯಾಸದ ಪೋಸ್ಟರ್ ಅನ್ನು ಬಿಡುಗಡೆ ಮಾಡಲಾಯಿತು. ನಗರಪಾಲಿಕೆ ಮಾಜಿ ಸದಸ್ಯ ಎಸ್‌ಬಿಎಂ ಮಂಜು, ಬಿಜೆಪಿ ಯುವ ಮುಖಂಡ ದಿನೇಶ್‌ಗೌಡ, ಡಾ.ಲಕ್ಷ್ಮಿ ಪ್ರಿಯಾ, ಯೋಗ ಶಿಕ್ಷಕರಾದ ವಿಜಯ ರಮೇಶ್, ಚಂದ್ರಕಲಾ, ಮಂಜುಳಾ, ಡಾ.ಲೀಲಾ ಮತ್ತಿತರರಿದ್ದರು.

ಜುಲೈ 1ರಿಂದ ತತ್ಕಾಲ್ ರೈಲು ಟಿಕೆಟ್ ಬುಕ್ ಮಾಡಲು ಆಧಾರ್ ಕಡ್ಡಾಯ

ನವದೆಹಲಿ, ಜೂ.11– ತತ್ಕಾಲ್ ಟಿಕೆಟ್‌ಗಳಿಗೆ ನ್ಯಾಯಯುತ ಮತ್ತು ಪಾರದರ್ಶಕ ಪ್ರವೇಶವನ್ನು ಖಚಿತಪಡಿಸಿಕೊಳ್ಳಲು ಮತ್ತು ನಿಜವಾದ ಪ್ರಯಾಣಿಕರ ಹಿತಾಸಕ್ತಿಗಳನ್ನು ಕಾಪಾಡುವ ಉದ್ದೇಶದಿಂದ, ಭಾರತೀಯ ರೈಲ್ವೆ ತತ್ಕಾಲ್ ಟಿಕೆಟ್ ಬುಕಿಂಗ್ ವ್ಯವಸ್ಥೆಯಲ್ಲಿ ಕೆಲವು ಪ್ರಮುಖ ಮಾರ್ಪಾಡುಗಳನ್ನು ಮಾಡಿದೆ.

ಜುಲೈ 1 ರಿಂದ ತತ್ಕಾಲ್ ಟಿಕೆಟ್ ಬುಕ್ ಮಾಡಲು ಆಧಾರ್ ಕಡ್ಡಾಯಗೊಳಿಸಿದ್ದು, ಆಧಾರ್ ದೃಢೀಕೃತ ಬಳಕೆದಾರರು ಮಾತ್ರ ತತ್ಕಾಲ್ ಯೋಜನೆ ಅಡಿಯಲ್ಲಿ ರೈಲು ಟಿಕೆಟ್ ಬುಕ್ ಮಾಡಬಹುದು ಎಂದು ರೈಲ್ವೆ ಸಚಿವಾಲಯ ಪ್ರಕಟಣೆಯಲ್ಲಿ ತಿಳಿಸಿದೆ.

ಐಆರ್‌ಸಿಟಿಸಿಯ ಅಧಿಕೃತ ವೆಬ್‌ಸೈಟ್ ಮತ್ತು ಮೊಬೈಲ್ ಅಪ್ಲಿಕೇಶನ್ ಮೂಲಕ ಬುಕ್ ಮಾಡಲಾದ ತತ್ಕಾಲ್ ಟಿಕೆಟ್‌ಗಳು ಆಧಾರ್‌ನೊಂದಿಗೆ ದೃಢೀಕರಿಸಿದ ಬಳಕೆದಾರರಿಗೆ ಮಾತ್ರ ಲಭ್ಯವಿರುತ್ತವೆ ಎಂದು ರೈಲ್ವೆ ಸಚಿವಾಲಯ ಹೇಳಿದೆ. ಇದಲ್ಲದೆ ಜುಲೈ 15 ರಿಂದ ಆನ್‌ಲೈನ್‌ನಲ್ಲಿ ಮಾಡುವ ತತ್ಕಾಲ್ ಬುಕಿಂಗ್‌ಗಳಿಗೆ ಆಧಾರ್ ಆಧಾರಿತ ಓಟಿಪಿ ದೃಢೀಕರಣ ಕಡ್ಡಾಯ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ.



ಗಣಕೀಕೃತ ಪ್ಯಾಸೆಂಜರ್ ರಿಸರ್ವೇಶನ್ ಸಿಸ್ಟಮ್ ಕೌಂಟರ್‌ಗಳಲ್ಲಿ ಮತ್ತು ಅಧಿಕೃತ ಏಜೆಂಟ್‌ಗಳ ಮೂಲಕ ಬುಕ್ ಮಾಡಲಾದ ತತ್ಕಾಲ್ ಟಿಕೆಟ್‌ಗಳು ಬುಕಿಂಗ್ ಸಮಯದಲ್ಲಿ ಬಳಕೆದಾರರು ಒದಗಿಸಿದ ಮೊಬೈಲ್ ಸಂಖ್ಯೆಗೆ ಓಟಿಪಿ ದೃಢೀಕರಣವನ್ನು ಕಳುಹಿಸಬೇಕಾಗುತ್ತದೆ.

ತತ್ಕಾಲ್ ರೈಲು ಟಿಕೆಟ್ ಅನ್ನು ಭಾರತೀಯ ರೈಲ್ವೆ/ಅಧಿಕೃತ ಏಜೆಂಟ್‌ಗಳ ಗಣಕೀಕೃತ ಪಿಆರ್‌ಎಸ್(ಪ್ರಯಾಣಿಕರ ಕಾಯ್ದಿರಿಸುವ ವ್ಯವಸ್ಥೆ) ಕೌಂಟರ್ ಮೂಲಕ ಬುಕ್ ಮಾಡಲು ಲಭ್ಯವಿರುತ್ತದೆ. ಆದರೆ, ಟಿಕೆಟ್ ಬುಕ್ ಮಾಡುವ ಸಮಯದಲ್ಲಿ ಬಳಕೆದಾರರು ಒದಗಿಸಿದ ಮೊಬೈಲ್ ಸಂಖ್ಯೆಗೆ ಕಳುಹಿಸಲಾಗುವ ಒಟಿಪಿಯನ್ನು ದೃಢೀಕರಿಸಿದ ಬಳಿಕ ಮಾತ್ರವೇ ಟಿಕೆಟ್ ಬುಕ್ ಮಾಡಲು ಸಾಧ್ಯ. ಇದನ್ನು ಜುಲೈ 15ರಿಂದ ಅನುಷ್ಠಾನಗೊಳಿಸಲಾಗುವುದು ಎಂದು ಸಚಿವಾಲಯ ತಿಳಿಸಿದೆ

ನಟಿ ರನ್ಯಾರಾವ್ ಗೋಲ್ಡ್ ಸ್ಮಗ್ಲಿಂಗ್ ಪ್ರಕರಣ; ಐಟಿ ಇಲಾಖೆ 3 ದಿನಗಳ ವಿಚಾರಣೆಗೆ ಕೋರ್ಟ್ ಅನುಮತಿ

ಬೆಂಗಳೂರು, ಜೂ. 11– ಚಂದನವನದ ನಟಿ ರನ್ಯಾ ರಾವ್ ವಿರುದ್ಧದ 14 ಕೆಜಿ ಗೋಲ್ಡ್ ಸ್ಮಗ್ಲಿಂಗ್ ಪ್ರಕರಣ ಹೊಸ ತಿರುವು ಪಡೆದುಕೊಂಡಿದ್ದು, ಆರ್ಥಿಕ ಅಪರಾಧಗಳ ವಿಶೇಷ ನ್ಯಾಯಾಲಯ ಆಕೆಯ ವಿಚಾರಣೆಗೆ ಆದೇಶ ನೀಡಿದೆ. ಐಟಿ (ಆದಾಯ ತೆರಿಗೆ) ಇಲಾಖೆ ಸಲ್ಲಿಸಿದ್ದ ಅರ್ಜಿಗೆ ಕೋರ್ಟ್ ಅನುಮತಿ ನೀಡಿದ್ದು, ಜೂನ್ 11 ರಿಂದ 13ರ ತನಕ ಪ್ರತಿದಿನ ಬೆಳಗ್ಗೆ 10ರಿಂದ ಸಂಜೆ 5 ಗಂಟೆಯವರೆಗೆ ವಿಚಾರಣೆ ನಡೆಸಲು ಕಾನೂನು ಹಸಿರು ನಿಶಾನೆ ತೋರಿದೆ. ಗೋಲ್ಡ್ ಸ್ಮಗ್ಲಿಂಗ್ ಪ್ರಕರಣದಲ್ಲಿ ನಟಿ ರನ್ಯಾ ರಾವ್ ಏರ್‌ಪೋರ್ಟ್‌ನಲ್ಲಿ ಡಿಆರ್‌ಐ ಅಧಿಕಾರಿಗಳಿಗೆ ಸಿಕ್ಕಿಬಿದ್ದಿದ್ದು, ಆಕೆಯ ಬಳಿ ಸುಮಾರು 14 ಕೆಜಿ ತೂಕದ, ಸುಮಾರು 12 ಕೋಟಿ ಮೌಲ್ಯದ ಬಂಗಾರವನ್ನು ಅಕ್ರಮವಾಗಿ ಸಾಗಿಸುತ್ತಿದ್ದುದಾಗಿ ಆರೋಪಿಸಲಾಗಿದೆ. ಈ ಸಂಬಂಧ ತನಿಖೆ ಮುಂದುವರಿಸುತ್ತಿರುವ ಐಟಿ ಇಲಾಖೆ, ಬಂಗಾರದ ಖರೀದಿಗೆ ಬಳಸಲಾದ ಹಣದ ಮೂಲಗಳ ಕುರಿತು ನಟಿಯನ್ನ ಪ್ರಶ್ನಿಸಲು ಕೋರ್ಟ್ ಅನುಮತಿ ಪಡೆದಿದೆ



ಕಾಲ್ತುಳಿತ ಪ್ರಕರಣ: ಮಧ್ಯಂತರ ಆದೇಶ ಕಾಯ್ದಿರಿಸಿದ ಹೈಕೋರ್ಟ್

ಆರ್‌ಸಿಬಿ-ಡಿಎನ್‌ಎ ಪದಾಧಿಕಾರಿಗಳ ಬಿಡುಗಡೆ ಕೋರಿಕೆ ಅರ್ಜಿ

ಬೆಂಗಳೂರು, ಜೂ.11– ಆರ್‌ಸಿಬಿ ವಿಜಯೋತ್ಸವದ ವೇಳೆ ಚಿನ್ನಸ್ವಾಮಿ ಸ್ಟೇಡಿಯಂ ಬಳಿ ಉಂಟಾದ ಕಾಲ್ತುಳಿತದಲ್ಲಿ 11 ಮಂದಿ ಸಾವಿಗೀಡಾದ ಘಟನೆಗೆ ಸಂಬಂಧಿಸಿದಂತೆ ಬಂಧಿಸಲಾಗಿರುವ ನಮ್ಮನ್ನು ಬಿಡುಗಡೆ ಮಾಡಲು ನಿರ್ದೇಶಿಸಬೇಕು ಎಂದು ಕೋರಿ ಆರ್‌ಸಿಬಿ ಮತ್ತು ಡಿಎನ್‌ಎ ಪದಾಧಿಕಾರಿಗಳು ಸಲ್ಲಿಸಿರುವ ಅರ್ಜಿಯ ಮೇಲಿನ ಮಧ್ಯಂತರ ಆದೇಶವನ್ನು ಹೈಕೋರ್ಟ್ ಕಾಯ್ದಿರಿಸಿದೆ.

ಆರ್‌ಸಿಬಿ ಮಾರುಕಟ್ಟೆ ವಿಭಾಗದ ಮುಖ್ಯಸ್ಥ ನಿಖಿಲ್ ಸೋಸಲೆ ಪರ ಅವರ ಪತ್ನಿ ಮಾಳವಿಕಾ ನಾಯಕ್, ಡಿಎನ್‌ಎ ಎಂಟರ್‌ಟೈನ್‌ಮೆಂಟ್ ನೆಟ್‌ವರ್ಕ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿ ನಿರ್ದೇಶಕ ಆರ್.ಸುನಿಲ್ ಮ್ಯಾಥ್ಯೂ ಪರವಾಗಿ ಅವರ ಪತ್ನಿ ರೋಶನಿ ಸುನಿಲ್, ಎಸ್.ಕಿರಣ್ ಕುಮಾರ್ ಪರವಾಗಿ ಅವರ ಪತ್ನಿ ಕೆ.ನಂದಿನಿ ಮತ್ತು ಎನ್.ಪಿ. ಶಮಂತ್ ಅವರ ತಾಯಿ ನಿರ್ಮಲಾ ಸಲ್ಲಿಸಿರುವ ರಿಟ್ ಅರ್ಜಿಗಳನ್ನು ನ್ಯಾಯಮೂರ್ತಿ ಎಸ್.ಆರ್.ಕೃಷ್ಣಕುಮಾರ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಬುಧವಾರ ವಿಚಾರಣೆ ನಡೆಸಿತು.

ವಿಚಾರಣೆ ವೇಳೆ ರಾಜ್ಯ ಸರ್ಕಾರದ ಪರವಾದ ಮಂಡಿಸಿದ ಅಡ್ವೋಕೇಟ್ ಜನರಲ್ ಕೆ.ಶಶಿಕಿರಣ ಶೆಟ್ಟಿ ಅವರು, ಆರ್‌ಸಿಬಿ ಮತ್ತು ಡಿಎನ್‌ಎ ಅಂದು ಜನಸಂದಣಿಯನ್ನು ಸೂಕ್ತವಾಗಿ ನಿರ್ವಹಣೆ ಮಾಡಿಲ್ಲ. ತಮ್ಮ ಕಂಪನಿಗಳ ಪ್ರಚಾರಕ್ಕಾಗಿ, ಬ್ರ್ಯಾಂಡ್ ಮೌಲ್ಯ ಹೆಚ್ಚಿಸಲು ಇವರೆಲ್ಲಾ ಜನರ ಪ್ರಾಣಕ್ಕೆ ಕುತ್ತು ತಂದಿದ್ದಾರೆ ಎಂದು ಆರೋಪಿಸಿದರು.

ಎಫ್‌ಐಆರ್ ದಾಖಲಾಗುತ್ತಿದ್ದಂತೆಯೇ ನಿಖಿಲ್ ಸೋಸಲೆ ಪಲಾಯನ ಮಾಡಲು ಯತ್ನಿಸಿದಾಗ ಬಂಧಿಸಲಾಗಿದೆ. ಅವರು ಜೂನ್ 5ರ ರಾತ್ರಿ 10.56ಕ್ಕೆ ವಿಮಾನದ ಟಿಕೆಟ್ ಕಾಯ್ದಿರಿಸಿ, ಬೆಳಗಿನ ಜಾವ 4.30ಕ್ಕೆ ವಿಮಾನ ನಿಲ್ದಾಣದಲ್ಲಿದ್ದಾಗ ಸಿಸಿಬಿ



ಪೊಲೀಸರು ಅವರನ್ನು ವಶಕ್ಕೆ ಪಡೆದಿದ್ದಾರೆ. ನಿಖಿಲ್ ಸೋಸಲೆಯನ್ನು ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಯ ಉಸ್ತುವಾರಿ ಇನ್‌ಸ್ಪೆಕ್ಟರ್ ರವಿ ಬಂಧಿಸಿದ್ದಾರೆಯೇ ಹೊರತು ಸಿಸಿಬಿ ಅಧಿಕಾರಿಗಳಲ್ಲ ಎಂದರು.

ಬಂಧಿತರೆಲ್ಲರಿಗೂ 10 ಗಂಟೆಯ ಒಳಗೆಯೇ ಬಂಧನದ ಸೂಚನೆ, ಕಾರಣ, ಆಧಾರ ಸೇರಿದಂತೆ ಎಲ್ಲ ದಾಖಲೆಗಳನ್ನು ಒದಗಿಸುವ ಮೂಲಕ ಕಾನೂನಾತ್ಮಕ ನಡೆಯನ್ನು ಚಾಚೂ ತಪ್ಪದೆ ಅನುಸರಿಸಲಾಗಿದೆ. ಬಂಧನದಲ್ಲಿ ಯಾವುದೇ ರೀತಿಯ ಅಕ್ರಮ ನಡೆದಿಲ್ಲ. ಆದ್ದರಿಂದ, ಅರ್ಜಿದಾರರ ಬಿಡುಗಡೆಗೆ ಆದೇಶ ಮಾಡಬಾರದು ಎಂದು ನ್ಯಾಯಪೀಠಕ್ಕೆ ಮನವಿ ಮಾಡಿದರು.

ಅರ್ಜಿದಾರರ ಪರ ವಾದ ಮಂಡಿಸಿದ ಪದಾಂಕಿತ ಹಿರಿಯ ವಕೀಲ ಸಂದೇಶ್ ಜೆ.ಚೌಟ, ಮುಖ್ಯಮಂತ್ರಿ ಸೂಚನೆ ಮೇರೆಗೆ ಅರ್ಜಿದಾರರನ್ನು ಬಂಧಿಸಲಾಗಿದೆ. ಮುಖ್ಯಮಂತ್ರಿ ಸೂಚನೆ ನೀಡಿದ್ದಾರೆ ಎಂಬುದನ್ನು ಅಡ್ವೋಕೇಟ್ ಜನರಲ್ ಎಲ್ಲೂ ನಿರಾಕರಿಸಿಲ್ಲ. ಬಂಧಿಸುವಾಗಲೇ ಬಂಧನದ ಕಾರಣ ನೀಡಬೇಕು. ಆದರೆ, ನೀಡಿಲ್ಲ. ಹೀಗಾಗಿ, ಬಂಧನ ಕಾನೂನುಬಾಹಿರ ಎಂದು ಪ್ರತಿಪಾದಿಸಿದರು. ಸುದೀರ್ಘ ವಾದ–ಪ್ರತಿವಾದ ಆಲಿಸಿದ ನ್ಯಾಯಪೀಠ ಮಧ್ಯಂತರ ಆದೇಶವನ್ನು ಗುರುವಾರ (ಜೂನ್ 12) ಪ್ರಕಟಿಸುವುದಾಗಿ ತಿಳಿಸಿತು.

ಆಹ್ವಾನ ನೀಡಿದ್ದು ಸಿಎಂ–ಡಿಸಿಎಂ: ಅರ್ಜಿದಾರರ ಪರ ಪದಾಂಕಿತ ಹಿರಿಯ ವಕೀಲ ಸಂದೇಶ್ ಜೆ.ಚೌಟ ವಿಜಯೋತ್ಸವ ಆಚರಣೆ ಮಾಡುತ್ತೇವೆ ಬನ್ನಿ ಎಂದು ಮುಖ್ಯಮಂತ್ರಿ (ಸಿಎಂ) ಹಾಗೂ ಉಪಮುಖ್ಯಮಂತ್ರಿ (ಡಿಸಿಎಂ) ಸಾರ್ವಜನಿಕರನ್ನು ಮುಕ್ತವಾಗಿ ಆಹ್ವಾನಿಸಿದ್ದಾರೆ. ಆದರೆ ಪೊಲೀಸರು ಅವರ ವಿರುದ್ಧ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆಕ್ಷೇಪಿಸಿದರು.

ಈ ಪ್ರಕರಣದಲ್ಲಿ ಪೊಲೀಸ್ ಆಯುಕ್ತರು ಅಧಿಕಾರಿಗಳನ್ನು ಅಮಾನತು ಮಾಡಲಾಗಿದೆ. ಆದರೆ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗುಪ್ತಚರ ವಿಭಾಗದ ಮುಖ್ಯಸ್ಥರನ್ನು ಕೈಬಿಡಲಾಗಿದೆ. ಇವರಲ್ಲಿ ಯಾರನ್ನೂ ಬಂಧಿಸಿಲ್ಲ ಎಂದು ದೂರಿದರು.

ಇದನ್ನು ಬಲವಾಗಿ ಆಕ್ಷೇಪಿಸಿದ ಅಡ್ವೋಕೇಟ್ ಜನರಲ್ ಕೆ.ಶಶಿಕಿರಣ ಶೆಟ್ಟಿ, ವಿಧಾನಸೌಧದಿಂದ ಚಿನ್ನಸ್ವಾಮಿ ಕ್ರೀಡಾಂಗಣದವರೆಗೆ ವಿಜಯೋತ್ಸವ ಆಚರಿಸಲಾಗುವುದು. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸೇರಬೇಕು ಎಂದು ಆರ್‌ಸಿಬಿ ಟ್ವೀಟ್ ಮಾಡಿದೆ. ಆದರೆ ಇದಕ್ಕೆ ಸಕ್ಷಮ ಪ್ರಾಧಿಕಾರದಿಂದ ಸೂಕ್ತ ಅನುಮತಿ ಪಡೆದಿರಲಿಲ್ಲ. ಅಂದು ಮಧ್ಯಾಹ್ನ ಕ್ರೀಡಾಂಗಣದ ಮುಂಭಾಗ ಅಂದಾಜು 4 ಲಕ್ಷ ಜನ ನೆರೆದಿದ್ದರೂ 21 ಗೇಟ್‌ಗಳ ಪೈಕಿ ಕೇವಲ 3 ಗೇಟ್‌ಗಳನ್ನು ಮಾತ್ರ ತೆರೆಯಲಾಗಿತ್ತು. ಆದ್ದರಿಂದ ದುರ್ಘಟನೆಗೆ ಆರ್‌ಸಿಬಿ ಡಿಎನ್‌ಎ ಮತ್ತು ಕೆಎಸ್‌ಸಿಎ ಕಾರಣ ಎಂದು ಪ್ರತಿಯಾಗಿ ದೂರಿದರು.

ಕಾವೇರಿ ಆರತಿ, ಅಮ್ಯೂಸ್‌ಮೆಂಟ್ ಪಾರ್ಕಿಗೆ ಭಾರಿ ವಿರೋಧ

ಕೆಆರ್‌ಎಸ್‌ನಲ್ಲಿ ವಿವಿಧ ಸಂಘಟನೆಗಳಿಂದ ಪ್ರತಿಭಟನೆ, ವಾಗ್ದಾಳಿ




ಕಾವೇರಿ ಅರತಿ ಮತ್ತು ಅಮ್ಯೂಸ್‌ಮೆಂಟ್ ಪಾರ್ಕ್ ವಿರೋಧಿಸಿ ಜಿಲ್ಲಾ ರೈತ ಹಿತರಕ್ಷಣಾ ಸಮಿತಿ ನೇತೃತ್ವದಲ್ಲಿ ವಿವಿಧ ಸಂಘಟನೆಗಳು ಕೆಆರ್‌ಎಸ್ ಬಳಿ ಪ್ರತಿಭಟನೆ ನಡೆಸಿದವು(ಎಡ ಚಿತ್ರ). ಈ ವೇಳೆ ಕೆಆರ್‌ಎಸ್ ಸುತ್ತಮುತ್ತ ಬಿಗಿ ಪೊಲೀಸ್ ಬಂದೋಬಸ್ತ್ ನಿಯೋಜಿಸಿದ್ದನ್ನು ಬಲಚಿತ್ರದಲ್ಲಿ ಕಾಣಬಹುದು.

ಶ್ರೀರಂಗಪಟ್ಟಣ, ಜೂ.11– ತಾಲೂಕಿನ ಕೆಆರ್‌ಎಸ್‌ನಲ್ಲಿ ರಾಜ್ಯ ಸರ್ಕಾರ ನಡೆಸಲು ಉದ್ದೇಶಿಸಿರುವ ಕಾವೇರಿ ಆರತಿ ಮತ್ತು ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಾಣಕ್ಕೆ ವಿವಿಧ ಸಂಘಟನೆಗಳು ತೀವ್ರ ವಿರೋಧ ವ್ಯಕ್ತಪಡಿಸಿ ಅಣೆಕಟ್ಟೆ ಬಳಿ ಪ್ರತಿಭಟನೆ ನಡೆಸಿದವು.

ಜಿಲ್ಲಾ ರೈತ ಹಿತರಕ್ಷಣಾ ಸಮಿತಿ ನೇತೃತ್ವದಲ್ಲಿ ರೈತಸಂಘ, ದಲಿತ ಸಂಘ, ಜಯ ಕರ್ನಾಟಕ ಸಂಘಟನೆ, ಕರ್ನಾಟಕ ರಕ್ಷಣಾ ವೇದಿಕೆ ಸೇರಿದಂತೆ ವಿವಿಧ ಪ್ರಗತಿಪರ ಸಂಘಟನೆಗಳ ಮುಖಂಡರು ಹಾಗೂ ಕಾರ್ಯಕರ್ತರು ಕೆಆರ್‌ಎಸ್ ಬಳಿ ಪ್ರತಿಭಟನೆ ನಡೆಸಿ, ಕನ್ನಂಬಾಡಿ ಅಣೆಕಟ್ಟೆ ಬಳಿ ನಡೆಸಲು ಉದ್ದೇಶಿಸಿರುವ ಕಾವೇರಿ ಆರತಿ ಹಾಗೂ ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಾಣವನ್ನು ಕೈಬಿಡಬೇಕು ಎಂದು ಒತ್ತಾಯಿಸಿದರು.

ರೈತ ನಾಯಕಿ ಸುನಂದ ಜಯರಾಂ ಮಾತನಾಡಿ, ಸಭೆಯಲ್ಲಿ ಸಚಿವರು ನುಡಿದಂತೆ ನಡೆದುಕೊಳ್ಳಬೇಕು. ಇಷ್ಟೆಲ್ಲಾ ವಿರೋಧದ ನಡುವೆಯೂ ಅಣೆಕಟ್ಟೆಯ ಭದ್ರತೆಗೆ ಧಕ್ಕೆಯುಂಟು ಮಾಡುವ ಯೋಜನೆಗಳನ್ನು ಏಕೆ ಮಾಡುತ್ತಿದ್ದೀರಿ ಎಂದು ಪ್ರಶ್ನಿಸಿದರು. ಸರ್ಕಾರ ಆಡಿದ್ದೇ ಆಟವಾಗಿದೆ, ಇವರಿಗೆ ಹೇಳುವವರು ಕೇಳುವವರೇ ಇಲ್ಲ ಎಂಬಂತೆ ಆಟವಾಡುತ್ತಿದ್ದಾರೆ. ಐಪಿಎಲ್ ಸಮಾರಂಭದಲ್ಲಿ 11 ಮಂದಿ ಸಾವಿಗೆ ಕಾರಣರಾಗಿ, ನಂತರ ಅಧಿಕಾರಿಗಳನ್ನು ಬಲಿಪಶುವನ್ನಾಗಿ ಮಾಡಿದ್ದಾರೆ ಎಂದು ಕಿಡಿಕಾರಿದರು.

ರೈತ ಸಂಘಟನೆಯ ಕೆಂಪೂಗೌಡ ಮಾತನಾಡಿ, ಈ ಹಿಂದೆ ಅಣೆಕಟ್ಟೆಗೆ ಕಲ್ಲು ಗಣಿಗಾರಿಕೆಯಿಂದ ಅಪಾಯ ಎದುರಾಗಿತ್ತು. ನಮ್ಮೆಲ್ಲರ ಹೋರಾಟದಿಂದ ಕಲ್ಲು ಗಣಿಗಾರಿಕೆ ನಿಂತಿದೆ. ಇದೀಗ ಸಾವಿರಾರು ಕೋಟಿ ರೂ. ವ್ಯಯಿಸಿ ಅಣೆಕಟ್ಟೆ ಬಳಿ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ಅಣೆಕಟ್ಟೆಯ ಹಿತದೃಷ್ಟಿಯಿಂದ ಈ ಯೋಜನೆಯನ್ನು ಕೈ ಬಿಟ್ಟು ಬೇರೆಡೆಗೆ ಸ್ಥಳಾಂತರ ಮಾಡಿಕೊಳ್ಳಬೇಕು. ಈ ಹಿಂದೆ ಸರ್ಕಾರ ಡಿಸ್ನಿ ಲ್ಯಾಂಡ್ ಮಾಡುವುದಾಗಿ ಹೇಳಿತ್ತು, ಇದೀಗ ಅಮ್ಯೂಸ್‌ಮೆಂಟ್ ಪಾರ್ಕ್ ಎಂದು ಹೆಸರು ಬದಲಾಯಿಸಿ, ಹಣ ಲೂಟಿ ಮಾಡಲು ಮುಂದಾಗಿದೆ ಎಂದು ಆರೋಪಿಸಿದ್ದಾರೆ.

ಖ್ಯಾತ ಸಾಹಿತಿ ಹರಿಹರ ಪ್ರಿಯ ಮಾತನಾಡಿ, ಕಾಲ್ತುಳಿತ ಪ್ರಕರಣಕ್ಕೆ ಸಿಎಂ, ಡಿಸಿಎಂ ಕಾರಣ. ಸಹೋದರ ಸೋತಿದ್ದರಿಂದ ಡಿ.ಕೆ. ಶಿವಕುಮಾರ್ ಅವರಿಗೆ ಹುಚ್ಚು ಬಂದಿದೆ. 30 ವರ್ಷ ರಜೆಯನ್ನೇ ಹಾಕದ ಐಪಿಎಸ್ ಅಧಿಕಾರಿ ದಯಾನಂದ್ ಅವರನ್ನ ಸಸ್ಪೆಂಡ್ ಮಾಡ್ತೀರಾ. ನಿಮ್ಮ ವಂಶಗಳೆಲ್ಲ ನಿರ್ನಾಮವಾಗುತ್ತೆ ಎಂದು ರಾಜಕಾರಣಿಗಳ ವಿರುದ್ಧ ವಾಗ್ದಾಳಿ ನಡೆಸಿದರು.

ಪೊಲೀಸರ ಸರ್ಪಗಾವಲು: ಪ್ರತಿಭಟನಾ ನಿರತ ಸ್ಥಳದಲ್ಲಿ ಹೆಚ್ಚುವರಿ ಪೋಲೀಸ್ ವರಿಷ್ಠಾಧಿಕಾರಿ ಸಿ.ಇ.ತಿಮ್ಮಯ್ಯ ನೇತೃತ್ವದಲ್ಲಿ ಪೊಲೀಸ್ ಬಿಗಿ ಬಂದೋಬಸ್ತ್ ಮಾಡಲಾಗಿತ್ತು. ಈ ವೇಳೆ ಹೋರಾಟಗಾರರಾದ ಎಂ.ಬಿ.ನಾಗಣ್ಣಗೌಡ, ಜಯರಾಮ್, ಆರ್.ಟಿ.ಐ ಕಾರ್ಯಕರ್ತ ಕೆ.ಆರ್.ರವೀಂದ್ರ, ಮಂಜೇಶ್ ಗೌಡ, ಕೆಆರ್.ಎಸ್ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಜಯಂತಿ, ಸದಸ್ಯ ಮಂಜುನಾಥ್ ಸೇರಿದಂತೆ ಇತರರು ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದರು.

ಪ್ರಧಾನಿ ಮೋದಿಯಿಂದ ರಾಷ್ಟ್ರದಲ್ಲಿ ಅತ್ಯದ್ಭುತ ಸಾಧನೆ



ಮಂಡ್ಯ: ಕಳೆದ 11 ವರ್ಷಗಳಲ್ಲಿ ಪ್ರಧಾನಿ ಮೋದಿಯವರು ರಾಷ್ಟ್ರದಲ್ಲಿ ಅತ್ಯದ್ಭುತ ಸಾಧನೆಗಳನ್ನು ಮಾಡಿದ್ದಾರೆ. ಮುಖ್ಯವಾಗಿ ವಿಕಸಿತ ಭಾರತ, ಪಜಾತಿ, ವರ್ಗ, ಮಹಿಳಾ ಕಲ್ಯಾಣ, 370ನೇ ವಿಧಿ ರದ್ಧತಿಯಂತಹ ಪ್ರಮುಖ ಸಾಧನೆಗಳನ್ನು ಪ್ರಧಾನಿ ಮಾಡಿದ್ದಾರೆ ಎಂದು ಬಿಜೆಪಿ ಮಾಜಿ ಅಧ್ಯಕ್ಷ ಕೆ.ಜೆ. ವಿಜಯಕುಮಾರ್ ಬಣ್ಣಿಸಿದ್ದಾರೆ.

ದೇಶದ ಆರ್ಥಿಕ ಬಲವರ್ಧನೆ, ಒಬಿಸಿ, ಮತ್ತು ಮಹಿಳಾ ಕಲ್ಯಾಣ, ಬಡತನ ನಿವಾರಣೆಯೊಂದಿಗೆ ಬಡವರ್ಗದ ಏಳಿಗೆ, ರಾಜಕೀಯ ಸಂಸ್ಕೃತಿಯಲ್ಲೇ ಮಾರ್ಪಾಡು, ಕೋವಿಡ್‌ನಂತರ ಕ್ಲಿಷ್ಟ ಪರಿಸ್ಥಿತಿಯಲ್ಲೂ ಭಾರತವನ್ನು ಸಮರ್ಥವಾಗಿ ಮುನ್ನಡೆಸಿದ ಕೀರ್ತಿ ಮೋದಿಯವರಿಗೆ ಸಲ್ಲುತ್ತದೆ ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಕಾಶ್ಮೀರದಲ್ಲಿದ್ದ 370ನೇ ವಿಧಿಯನ್ನು ರದ್ದುಪಡಿಸಿ ಎಲ್ಲ ರಾಜ್ಯಗಳಂತೆ ಕಾಶ್ಮೀರದ ಅಭಿವೃದ್ಧಿಗೆ ವಿಶೇಷ ಒತ್ತು ನೀಡಿದ್ದಾರೆ. ದಕ್ಷ ಆಡಳಿತಗಾರನಾಗಿ, 11 ವರ್ಷಗಳನ್ನು ಪೂರೈಸಿದ ಮೋದಿಯವರ ಸಾಧನೆ ದೇಶಾದ್ಯಂತ ಹತ್ತು ಹಲವು ಅಭಿವೃದ್ಧಿ ಕಾರ್ಯಗಳನ್ನು ಮಾಡಿದೆ ಎಂದು ತಿಳಿಸಿದ್ದಾರೆ.

11 ವರ್ಷಗಳಲ್ಲಿ ಸಬ್‌ಕಾ ಸಾಥ್, ಸಬ್‌ಕಾ ವಿಕಾಸ್, ಸಬ್‌ಕಾ ವಿಶ್ವಾಸ್, ಸಬ್‌ಕಾ ಪ್ರಯಾಸ್ ಧ್ಯೇಯಮಂತ್ರದೊಂದಿಗೆ ಮುನ್ನುಡಿ ಇರಿಸಿದ ಮೋದಿಯವರು, ಅತ್ಯುತ್ಕೃಷ್ಟ ಉಪಕ್ರಮಗಳ ಮೂಲ ನಮೋ ಸರ್ಕಾರ ಅಭಿವೃದ್ಧಿ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ. ಪರಿವರ್ತನೆ ಮತ್ತು ಸುಧಾರಣೆಗಳಿಗೆ ನಮ್ಮ ಸರ್ಕಾರ ವಿಶೇಷ ಪ್ರಾಶಸ್ತ್ಯ ನೀಡಿದೆ ಎಂದು ತಿಳಿಸಿದ್ದಾರೆ.

ಅಯೋಧ್ಯೆಯಲ್ಲಿ ಭವ್ಯ ರಾಮಮಂದಿರ, ಕಾಶಿಯಲ್ಲಿ ವಿಶ್ವನಾಥ ಕಾರಿಡಾರ್, ಉಜ್ಜಯನಿಯಲ್ಲಿ ಮಹಾಕಾಳ್ ಲೋಕ್ ಸೇರಿದಂತೆ ಸಾಂಸ್ಕೃತಿಕ ತಾಣಗಳ ಅಭಿವೃದ್ಧಿ, ಪ್ರಸಾದ ಯೋಜನೆಯಡಿ ಸಾಂಸ್ಕೃತಿಕ ತಾಣಗಳ ಅಭಿವೃದ್ಧಿಗೆ 1900 ಕೋಟಿ ಹೂಡಿಕೆ ಮಾಡಲಾಗಿದೆ. ವಕ್ಫ್ ತಿದ್ದುಪಡಿ ಕಾಯ್ದೆ ಮೂಲಕ ವಕ್ಫ್ ಆಸ್ತಿಗಳಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆಗೆ ಉತ್ತೇಜನ ನೀಡಿದ್ದಾರೆ ಎಂದು ತಿಳಿಸಿದ್ದಾರೆ.

ಆಪರೇಷನ್ ಸಿಂಧೂರ್ ಕಾರ್ಯಾಚರಣೆಯಡಿಯಲ್ಲಿ ಎಲ್‌ಒಸಿ ಆಚೆ 9 ಭಯೋತ್ಪಾದಕ ಕೇಂದ್ರಗಳ ನಾಶ, ಮಿಲಿಟರಿ ಸ್ವಾವಲಂಬನೆ ಸಾಧಿಸಿದ್ದಾರೆ ಎಂದು ತಿಳಿಸಿದ್ದಾರೆ.

ಮಂಡ್ಯ ವಿವಿ ಘಟಿಕೋತ್ಸವ

ಮಂಡ್ಯ: ಮಂಡ್ಯ ವಿಶ್ವವಿದ್ಯಾನಿಲಯದ ಕುಲಪತಿಗಳು ಸಿಂಡಿಕೇಟ್ ಮತ್ತು ವಿದ್ಯಾ ವಿಷಯಕ ಪರಿಷತ್ ಸದಸ್ಯರುಗಳಿಂದ ಜೂ.14 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಮಂಡ್ಯ ವಿಶ್ವವಿದ್ಯಾನಿಲಯದ ಮೂರನೇ ವಾರ್ಷಿಕ ಘಟಿಕೋತ್ಸವ ಹಮ್ಮಿಕೊಳ್ಳಲಾಗಿದೆ.

ಇಂದು ಅಕ್ಷರಾಭ್ಯಾಸ, ಸಾಧಕರಿಗೆ ಸನ್ಮಾನ

ಪಾಂಡವಪುರ, ಜೂ.11– ತಾಲೂಕಿನ ಜಯಂತಿನಗರದ ಶ್ರೀಶಂಭುಲಿಂಗೇಶ್ವರ ಶಿಕ್ಷಣ ಸಂಸ್ಥೆಯ ವತಿಯಿಂದ ಜೂನ್ 12ರಂದು ಬೆಳಿಗ್ಗೆ 9.30ಕ್ಕೆ ಅಕ್ಷರಅಭ್ಯಾಸ ಮತ್ತು ಸಾಧಕರಿಗೆ ಸನ್ಮಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆಯ ಮ್ಯಾನೇಜಿಂಗ್ ಟ್ರಸ್ಟಿ ಪ್ರೊ.ಎಂ. ಪಂಚಲಿಂಗೇಗೌಡ ಹೇಳಿದರು.

ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ಆದಿಚುಂಚನಗಿರಿ ಕ್ಷೇತ್ರದ ಪೀಠಾಧ್ಯಕ್ಷ ಡಾ.ಶ್ರೀ ನಿರ್ಮಲಾನಂದನಾಥಸ್ವಾಮೀಜಿ ವಹಿಸಲಿದ್ದಾರೆ. ಶಾಸಕ ದರ್ಶನ್‌ಪುಟ್ಟಣ್ಣಯ್ಯ ಅಧ್ಯಕ್ಷತೆ ವಹಿಸಲಿದ್ದಾರೆ. ಪು.ತಿ.ನ.ಟ್ರಸ್ಟ್ ಅಧ್ಯಕ್ಷ, ವಾಗ್ಮಿ ಡಾ.ಕೃಷ್ಣೇಗೌಡ, ಉಪವಿಭಾಗಾಧಿಕಾರಿ ಕೆ.ಆರ್.ಶ್ರೀನಿವಾಸ್, ತಹಸೀಲ್ದಾರ್ ಸಂತೋಷ್, ಬಿಇಓ ಎಸ್.ರವಿಕುಮಾರ್, ಎಸ್‌ಎಸ್‌ಇಟಿ ಸಂಸ್ಥೆಯ ಅಧ್ಯಕ್ಷ ಪಿ.ಹೊನ್ನರಾಜು ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಭಾರತ ತಂಡ ಖೋ–ಖೋ ವಿಶ್ವಕಪ್ ಆಟಗಾರ್ತಿ ಕಾಲೇಜಿನ ವಿದ್ಯಾರ್ಥಿನಿ ಬಿ.ಚೈತ್ರ, ವಿದ್ಯಾರ್ಥಿ ಎಂ.ಕೆ. ಗೌತಮ್, ತರಬೇತುದಾರ ಮಂಜುನಾಥ್, ಖೋಖೋ ವಿಶ್ವಕಪ್ ತೀರ್ಪುಗಾರರಾದ ಕೆ.ಎಸ್.ಅಮೂಲ್ಯ ಹಾಗೂ ರಾಷ್ಟ್ರಮಟ್ಟ ಹಾಗೂ ಅಂತರರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಿದವರನ್ನು ಅಭಿನಂದಿಸಲಾಗುವುದು.

ಅಮ್ಯೂಸ್ಮೆಂಟ್ ಪಾರ್ಕ್, ಕಾವೇರಿ ಆರತಿಗೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ವಿರೋಧ



ಮಂಡ್ಯ, ಜೂ.11– ಜಿಲ್ಲೆಯ ಕೃಷ್ಣರಾಜ ಸಾಗರ ಅಣೆಕಟ್ಟೆ ಬಳಿ ರಾಜ್ಯ ಸರ್ಕಾರ ನಿರ್ಮಿಸಲು ಹೊರಟಿರುವ ಅಮ್ಯೂಸ್ಮೆಂಟ್ ಪಾರ್ಕ್‌ನಿಂದ ಸ್ಥಳೀಯರಿಗೆ ಅನುಕೂಲಕ್ಕಿಂತ ಅನಾನುಕೂಲವೇ ಹೆಚ್ಚಿದ್ದು, ಪಾರ್ಕ್ ನಿರ್ಮಾಣ ಹಾಗೂ ಕಾವೇರಿ ಆರತಿಗೆ ನನ್ನ ವಿರೋಧವಿದೆ ಎಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ಅಸಮಾಧಾನ ವ್ಯಕ್ತಪಡಿಸಿದರು.

ಬುಧವಾರ ನಗರದ ಜಿಲ್ಲಾ ಪಂಚಾಯತ್ ಆವರಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಹಿತಿ ನೀಡದೇ ಕಾವೇರಿ ಆರತಿಗೆ ಸರ್ಕಾರ ಮುಂದಾಗಿದೆ. ಈ ಬಗ್ಗೆ ರೈತರು ನಡೆಸುತ್ತಿರುವ ಹೋರಾಟಕ್ಕೆ ನನ್ನ ಬೆಂಬಲವಿದೆ. ಇಂದು ಕೆಆರ್‌ಎಸ್ ಬಳಿ ಸಹ ರೈತರು ಈ ಎರಡು ವಿಚಾರ ಖಂಡಿಸಿ ಪ್ರತಿಭಟನೆ ನಡೆಸಿದ್ದಾರೆ. ಇತ್ತೀಚೆಗೆ ಸಚಿವ ಚಲುವರಾಯಸ್ವಾಮಿ ನೇತೃತ್ವದಲ್ಲಿ ಸಭೆ ನಡೆದಿದೆ ಆ ಸಭೆಯಲ್ಲೂ ಸಹ ರೈತರು ವಿರೋಧ ವ್ಯಕ್ತಪಡಿಸಿದ್ದಾರೆ ಎಂದು ಹೇಳಿದರು.

ಅಮ್ಯೂಸ್ಮೆಂಟ್ ಪಾರ್ಕ್ ಹಾಗೂ ಕಾವೇರಿ ಆರತಿಗೆ ಆರಂಭದಿಂದಲೂ ವಿರೋಧ ಇದೆ. ಕಾವೇರಿ ಆರತಿ ಬಗ್ಗೆ ರೈತ ಹೋರಾಟಗಾರರು ಹಾಗೂ ಸ್ಥಳೀಯರಿಗೆ ಸರ್ಕಾರ ಮನವರಿಕೆ ಮಾಡಿಕೊಡಬೇಕಿತ್ತು. ಅನುಕೂಲ, ಅನಾನುಕೂಲದ ಬಗ್ಗೆ ಮಾಹಿತಿ ಕೊಡಬೇಕಿತ್ತು ನಾನು ಸೇರಿದಂತೆ ಸರ್ಕಾರ ಈ ಕೆಲಸ ಮಾಡಿಲ್ಲ. ಈ ನಿಟ್ಟಿನಲ್ಲಿ ಕರೆದಿದ್ದ ಸಭೆಯಲ್ಲಿ ತೀವ್ರ ವಿರೋಧ ವ್ಯಕ್ತವಾಗಿದೆ ಎಂದು ತಿಳಿಸಿದರು.

ಈಗಾಗಲೇ ಕೆಆರ್‌ಎಸ್ ಬಳಿ ಕಾವೇರಿ ಆರತಿ ಮತ್ತು ಅಮ್ಯೂಸ್ಮೆಂಟ್ ಪಾರ್ಕ್ ಕಾಮಗಾರಿ ನಿಲ್ಲಿಸಿದ್ದಾರೆ. ಯೋಜನೆ ಬಗ್ಗೆ ಏನಾಗುತ್ತಿದೆ ಅನ್ನೋದು ಗೊತ್ತಾಗುತ್ತಿಲ್ಲ. ಮಂಡ್ಯ ಜಿಲ್ಲೆಯ ಕೊನೆಯ ಭಾಗದ ರೈತರಿಗೆ ಕೆಆರ್‌ಎಸ್ ಮೂಲಕ ನಾಲೆಗಳಲ್ಲಿ ಹರಿದು ಹೋಗುವ ನೀರು ಸಿಗುತ್ತಿಲ್ಲ. ಡ್ಯಾಂ ಸುರಕ್ಷತೆ ಬಗ್ಗೆ ಎಲ್ಲರಿಗೂ ಕಾಳಜಿ ಇದೆ. ಡ್ಯಾಂ ಇದ್ದರೆ ಮಾತ್ರ ಮಂಡ್ಯ ಜಿಲ್ಲೆಯವರು ಮತ್ತು ಬೆಂಗಳೂರಿನವರು ಬದುಕಲು ಸಾಧ್ಯ ಎಂದರು.

ಅಮ್ಯೂಸ್ಮೆಂಟ್ ಪಾರ್ಕ್ ನಿರ್ಮಾಣದಿಂದ ಕೆಆರ್‌ಎಸ್‌ನಲ್ಲಿ ಟ್ರಾಫಿಕ್ ಸಮಸ್ಯೆ ಎದುರಾಗಿ ಪ್ರವಾಸಿಗರು ಹೆಚ್ಚುತ್ತಾರೆ. ನೀರು ಕಲುಷಿತವಾಗಬಹುದು. ಕಲುಷಿತವಾದ ನೀರನ್ನು ಎಲ್ಲಿಗೆ ಬಿಡುತ್ತೀರಿ? ಡ್ಯಾಂ ಸುತ್ತಮುತ್ತ ರೈತರ ಭೂಮಿ ಇದೆ. ರೈತರು ಆತಂಕದಿಂದಿದ್ದಾರೆ. ಮೊದಲು ನಾಲೆಗಳ ಅಭಿವೃದ್ಧಿಗೆ ದುಡ್ಡು ಕೊಡಲಿ. ಜೊತೆಗೆ ಪಾರ್ಕ್ ನಿರ್ಮಾಣದಿಂದ ಸಾಕಷ್ಟು ಸಮಸ್ಯೆಗಳು ಉಂಟಾಗಬಹುದು. ಆ ಬಗ್ಗೆ ಚರ್ಚಿಸುವ ಅಗತ್ಯವಿದೆ ಎಂದು ಅಭಿಪ್ರಾಯಿಸಿದರು.

ಅಣ್ಣೂರು ಗ್ರಾಪಂ ಸಾಧನೆ 'ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್'ನಲ್ಲಿ ಸೇರ್ಪಡೆ

ಭಾರತೀನಗರ, ಜೂ.11– ರಾಷ್ಟ್ರೀಯ ಪಂಚಾಯತ್ ರಾಜ್ ದಿನದ ಅಂಗವಾಗಿ ಏಕಕಾಲದಲ್ಲಿ ಗರಿಷ್ಟ ಸಂಖ್ಯೆಯ ರಂಗೋಲಿಗಳನ್ನು ಬಿಡಿಸಿ ದಾಖಲೆ ನಿರ್ಮಿಸಿದ ಅಣ್ಣೂರು ಗ್ರಾಮ ಪಂಚಾಯತ್ 'ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್'ನಲ್ಲಿ ಸೇರ್ಪಡೆಯಾಗಿದೆ.

ಕರ್ನಾಟಕ ಸರ್ಕಾರದ ಸುತ್ತೋಲೆಯ ಪ್ರಕಾರ ಅಣ್ಣೂರು ಗ್ರಾ.ಪಂನಲ್ಲಿ ಮಾ.8 ರಿಂದ ಜೂ.30ರ ವರೆಗೆ ಮಹಿಳಾ ಸ್ನೇಹಿ ಗ್ರಾಪಂ ಅಭಿಯಾನವನ್ನು ಹಮ್ಮಿಕೊಳ್ಳಲಾಗಿತ್ತು. ಈ ಅಭಿಯಾನದ ಪ್ರಯುಕ್ತ ಏ.24 ರಂದು ರಾಷ್ಟ್ರೀಯ ಪಂಚಾಯತ್ ರಾಜ್ ದಿನದ ಅಂಗವಾಗಿ ವಿಶೇಷವಾಗಿ ಪ್ರತೀ ಮನೆಯಲ್ಲೂ ರಂಗೋಲಿ ಬಿಡುವ ಕಾರ್ಯಕ್ರಮವನ್ನು ಮಾಡಲಾಗಿತ್ತು. ರಂಗೋಲಿಯ ಜೊತೆಗೆ ಪಂಚಾಯತ್ ರಾಜ್ ದಿನದ ಶುಭಾಶಯಗಳು ಎಂದು ಅಣ್ಣೂರು, ಕಾರ್ಕಹಳ್ಳಿ, ಆಲಭುಜನಹಳ್ಳಿ ಗ್ರಾಮಗಳಿಂದ ಏಕಕಾಲದಲ್ಲಿ 1418 ರಂಗೋಲಿಗಳನ್ನು ಬಿಡಿಸಿ ಶುಭಾಶಯವನ್ನು ತಿಳಿಸಲು ಈ ಮೂರು ಗ್ರಾಮದ ಗ್ರಾಮಸ್ಥರು, ಮಹಿಳೆಯರು ಉತ್ತಮ ಸಹಕಾರ ನೀಡಿದ್ದರು.

ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಿಸುತ್ತಾ ಗಮನ ಸೆಳೆದಿರುವ ಅಣ್ಣೂರು ಗ್ರಾಮ ಪಂಚಾಯತ್ ಮುಕುಟಕ್ಕೆ ಈ ಮೂಲಕ ಮತ್ತೊಂದು ಗರಿ ಸೇರ್ಪಡೆ ಆಗಿದೆ.



ಮಹಿಳೆಯರ ಸಕ್ರಿಯ ಭಾಗವಹಿಸುವಿಕೆಯಿಂದ ಈ ಸಾಧನೆ ಆಗಿರುವುದಕ್ಕೆ ಹೆಚ್ಚು ಖುಷಿಯಾಗಿದೆ. ಇದಕ್ಕೆ ಹಿರಿಯ ಅಧಿಕಾರಿಗಳು, ಗ್ರಾಪಂ ಚುನಾಯಿತ ಸದಸ್ಯರು ಮತ್ತು ಆಡಳಿತ ಮಂಡಳಿ ಸಹಕಾರವೇ ಕಾರಣ. – ಎಂ.ಆರ್.ಅಶ್ವಿನಿ ಪಿಡಿಒ



ಗ್ರಾಮ ಪಂಚಾಯಿತಿ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ, ಸ್ಥಳೀಯ ಆಡಳಿತದಲ್ಲಿ ಮಹಿಳೆಯರ ಭಾಗವಹಿಸುವಿಕೆ ನಿರೀಕ್ಷಿತ ಮಟ್ಟದಲ್ಲಿ ಇರುವುದಿಲ್ಲ. ಆದರೆ, ಮಹಿಳೆಯರ ಭಾಗವಹಿಸುವಿಕೆಯಿಂದಲೇ ಈ ಸಾಧನೆ ಸಾಧ್ಯವಾಗಿದೆ. – ಶಿವಮ್ಮ, ಅಧ್ಯಕ್ಷರು

ಈ ಕಾರ್ಯಕ್ರಮದಲ್ಲಿ ಗ್ರಾಪಂ ವ್ಯಾಪ್ತಿಯ ಅಣ್ಣೂರು, ಆಲಭುಜನಹಳ್ಳಿ ಮತ್ತು ಕಾರ್ಕಹಳ್ಳಿ ಗ್ರಾಮಗಳಿಂದ ಒಟ್ಟು 1,544 ಮಂದಿ ಭಾಗವಹಿಸಿದ್ದರು. ಅಕ್ಕಿ ಹಿಟ್ಟು ಅರಿಶಿನ ಪುಡಿ ಮತ್ತು ಬಣ್ಣದ ಮರಳಿನಂತಹ ನೈಸರ್ಗಿಕ ವಸ್ತುಗಳನ್ನು ಬಳಸಿಕೊಂಡು ಒಟ್ಟಾರೆ 1,418 ರಂಗೋಲಿಗಳನ್ನು ರಚಿಸಿ ಗಮನ ಸೆಳೆದಿದ್ದರು.

ಒಂದನೇ ಪುಟದಿಂದ

ಇಡಿ ದಾಳಿ

ಕಂಪ್ಲಿ ಗಣೇಶ್ ಅವರ ನಿವಾಸದ ಮೇಲೆ ದಾಳಿ ನಡೆದಿದೆ. ಕರ್ನಾಟಕದಲ್ಲಿ 2024ರ ಲೋಕಸಭಾ ಚುನಾವಣೆಗೆ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಲಿಮಿಟೆಡ್‌ಗೆ ಹಂಚಿಕೆ ಮಾಡಿದ ಹಣವನ್ನು ದುರುಪಯೋಗ ಪಡಿಸಿಕೊಂಡ ಆರೋಪದ ಮೇಲೆ ಈ ದಾಳಿ ನಡೆಸಲಾಗಿದೆ. ಅಷ್ಟೇ ಅಲ್ಲದೆ ಕಳೆದ ತೆಲಂಗಾಣ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಈ ಹಣವನ್ನು ಬಳಸಲಾಗಿದೆ ಎಂಬ ಆರೋಪವೂ ಇದೆ. ವಿಧಾನಸೌಧದ ಬಳಿ ಇರುವ ಶಾಸಕರ ಭವನದ ಆವರಣದಲ್ಲಿರುವ ಮಾಜಿ ಸಚಿವ ಮತ್ತು ಬಳ್ಳಾರಿ ಗ್ರಾಮೀಣ ಶಾಸಕ ನಾಗೇಂದ್ರ ಅವರಿಗೆ ಸೇರಿದ ಕೋಣೆಯಲ್ಲಿ ಶೋಧ ಕಾರ್ಯಾಚರಣೆ ನಡೆಸಲಾಗಿದೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಮತ್ತು ಶಾಸಕ ಬಿ. ನಾಗೇಂದ್ರ ಈ ಹಿಂದೆ ಜೈಲಿಗೂ ಹೋಗಬೇಕಾಯಿತು. ಹಗರಣ ಬೆಳಕಿಗೆ ಬಂದ ನಂತರ ಅವರು ರಾಜೀನಾಮೆ ನೀಡಬೇಕಾಯಿತು. ನಾಗೇಂದ್ರ ಅವರನ್ನು ಮತ್ತೆ ಸೇರಿಸಿಕೊಳ್ಳುವ ವಿಷಯವನ್ನು ಪರಿಶೀಲಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದರು. ಎಸ್‌ಟಿ ಕಲ್ಯಾಣ ಇಲಾಖೆಯ ಮಾಜಿ ಸಚಿವ ನಾಗೇಂದ್ರ ಅವರನ್ನು 2024ರ ಜುಲೈ 12ರಂದು ಜಾರಿ ನಿರ್ದೇಶನಾಲಯ (ಇಡಿ) ಬಂಧಿಸಿತು. ನಂತರ ಅವರನ್ನು ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಯಿತು. ಮೂರು ತಿಂಗಳು ಜೈಲಿನಲ್ಲಿ ಕಳೆದ ನಂತರ ಜಾಮೀನಿನ ಮೇಲೆ ಬಿಡುಗಡೆ ಮಾಡಲಾಯಿತು. ಆದಾಗ್ಯೂ, ಕಾಂಗ್ರೆಸ್ ಸರ್ಕಾರ ರಚಿಸಿದ ವಿಶೇಷ ತನಿಖಾ ತಂಡ (ಎಸ್‌ಐಟಿ) ಹಗರಣದಲ್ಲಿ ನಾಗೇಂದ್ರ ಅವರಿಗೆ ಕ್ಲೀನ್ ಚಿಟ್ ನೀಡಿತ್ತು ಮತ್ತು ಚಾರ್ಜ್‌ಶೀಟ್‌ನಲ್ಲಿ ಅವರ ಹೆಸರನ್ನು ಉಲ್ಲೇಖಿಸಿರಲಿಲ್ಲ.

ಕರ್ನಾಟಕ ಪೊಲೀಸರು ಮತ್ತು ಸಿಬಿಐ ದಾಖಲಿಸಿದ ಎಫ್‌ಐಆರ್‌ಗಳ ಆಧಾರದ ಮೇಲೆ ಇಡಿ ತನಿಖೆಯನ್ನು ಪ್ರಾರಂಭಿಸಿತು. ಇದು ಆಂಧ್ರಪ್ರದೇಶ ಮತ್ತು ತೆಲಂಗಾಣದಾದ್ಯಂತ ನಿಗಮದ ಖಾತೆಗಳಿಂದ ಸುಮಾರು 89.62 ಕೋಟಿ ರೂ.ಗಳನ್ನು ಶೆಲ್ ಕಂಪನಿಗಳ ಮೂಲಕ ನಕಲಿ ಖಾತೆಗಳಿಗೆ ವರ್ಗಾಹಿಸಲಾಗಿದೆ ಎಂದು ಬಹಿರಂಗಪಡಿಸಿತು. ಗಿರಿಜನ ಕಲ್ಯಾಣ ಮಂಡಳಿಗೆ ಸೇರಿದ ಲೆಕ್ಕಪತ್ರ ಸೂಪರಿಂಟೆಂಡೆಂಟ್ ಪಿ. ಚಂದ್ರಶೇಖರನ್ (52) ಅವರ ಆತ್ಮಹತ್ಯೆ ಪ್ರಕರಣವು ಬಹುಕೋಟಿ ಬುಡಕಟ್ಟು ಕಲ್ಯಾಣ ಮಂಡಳಿ ಪ್ರಕರಣವನ್ನು ಬೆಳಕಿಗೆ ತಂದಿತ್ತು. ಆತ್ಮಹತ್ಯೆ ಪತ್ರದಲ್ಲಿ, ಅಧಿಕಾರಿ ಹಗರಣದ ಬಗ್ಗೆ ಮತ್ತು ರಾಜಕಾರಣಿಗಳು ಮತ್ತು ಹಿರಿಯ ಅಧಿಕಾರಿಗಳ ತೀವ್ರ ಒತ್ತಡದ ಬಗ್ಗೆ ಉಲ್ಲೇಖಿಸಿದ್ದರು. ಈ ಸಂಬಂಧ ಸಿಐಡಿ ವಿಶೇಷ ವಿಭಾಗದ 300 ಪುಟಗಳ ಚಾರ್ಜ್‌ಶೀಟ್ ಸಲ್ಲಿಸಿದ್ದು, ಆಡಳಿತಾರೂಢ ಕಾಂಗ್ರೆಸ್‌ನ ರಾಜಕಾರಣಿಗಳ ಹೆಸರುಗಳನ್ನು ಉಲ್ಲೇಖಿಸಲಾಗಿಲ್ಲ. ಆದಾಗ್ಯೂ, ಚಂದ್ರಶೇಖರನ್ ಅವರ ಡೆತ್ ನೋಟ್ ಬುಡಕಟ್ಟು ಕಲ್ಯಾಣ ಪ್ರಕರಣದಲ್ಲಿ ಕಾಂಗ್ರೆಸ್ ಸರ್ಕಾರದ ಸಚಿವರೊಬ್ಬರು ಭಾಗಿಯಾಗಿರುವುದನ್ನು ಸೂಚಿಸಿದ್ದು, ಅವರ ಸಾವಿಗೆ ಅವರನ್ನು ಹೊಣೆಗಾರರನ್ನಾಗಿ ಮಾಡಿದೆ.

ಜೈಲು ಶಿಕ್ಷೆಗೆ ತಾತ್ಕಾಲಿಕ ತಡೆ


ಸಂಬಂಧಿಸಿದ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಸಿಬಿಐ ನ್ಯಾಯಾಲಯವು ಅಂತಿಮ ತೀರ್ಪು ನೀಡಿ ಏಳು ವರ್ಷಗಳ ಶಿಕ್ಷೆ ವಿಧಿಸಿತ್ತು. ಜನಾರ್ದನ ರೆಡ್ಡಿ ಜತೆಗೆ, ಶ್ರೀನಿವಾಸ್ ರೆಡ್ಡಿ, ವಿ.ಡಿ.ರಾಜಗೋಪಾಲ್ ಮತ್ತು ಅಲಿ ಖಾನ್ ಕೂಡ ತಪ್ಪಿತಸ್ಥರೆಂದು ಸಾಬೀತಾಗಿತ್ತು. ತೀರ್ಪು ಪ್ರಶ್ನಿಸಿ ರೆಡ್ಡಿ ಹೈಕೋರ್ಟ್ ಮೊರೆ ಹೋಗಿದ್ದರು.

ಈ ಅರ್ಜಿಯ ವಾದಗಳನ್ನು ಮಂಗಳವಾರ ಆಲಿಸಿದ್ದ ಕೋರ್ಟ್ ತೀರ್ಪನ್ನು ಇಂದಿಗೆ ಕಾಯ್ದಿರಿಸಿತ್ತು. ನ್ಯಾಯಮೂರ್ತಿ ಕೆ.ಲಕ್ಷ್ಮಣ್ ಅವರು ಸಿಬಿಐ ನ್ಯಾಯಾಲಯದ ತೀರ್ಪನ್ನು ತಾತ್ಕಾಲಿಕವಾಗಿ ತಡೆಹಿಡಿದು ಗಾಲಿ ಜನಾರ್ದನ ರೆಡ್ಡಿಗೆ ಜಾಮೀನು ನೀಡಿ ತೀರ್ಪು ನೀಡಿದ್ದಾರೆ.

ಆಂಧ್ರ–ಕರ್ನಾಟಕದ ಗಡಿ ಭಾಗಕ್ಕೆ ಹೊಂದಿಕೊಂಡ ಹೀರೆಹಾಳ್–ಸಿದ್ದಾಪುರ ಬಳಿಯ ಓಬಳಾಪುರಂ ಬೆಟ್ಟದಲ್ಲಿ ನಡೆದಿದ್ದ ಅಕ್ರಮ ಗಣಿಕಾರಿಕೆಗೆ ಸಂಬಂಧಿಸಿದ ಪ್ರಕರಣ ಇದಾಗಿದೆ. ಓಎಂಸಿ ಕಂಪನಿಯ ವ್ಯವಸ್ಥಾಪಕ ನಿರ್ದೇಶಕ ಶ್ರೀನಿವಾಸರೆಡ್ಡಿ ಮತ್ತು ಜನಾರ್ದನರೆಡ್ಡಿ ಈ ಕಂಪನಿಯ ಮುಖ್ಯಸ್ಥರಾಗಿದ್ದರು. ಈ ಕಂಪನಿಗೆ ಗಣಿಗಾರಿಕೆ ಮಂಜೂರಾತಿ ನೀಡುವಲ್ಲಿ ಅರಣ್ಯ ಇಲಾಖೆ ಹಾಗೂ ಗಣಿ ಇಲಾಖೆಯಿಂದಲೂ ಅಕ್ರಮ ನಡೆದಿತ್ತು. ಇದರಲ್ಲಿ ರಾಜ್ಯದ 29 ಲಕ್ಷ ಟನ್ ಅದಿರನ್ನು ಲೂಟಿ ಮಾಡಿ 884 ಕೋಟಿ ರೂ. ಆದಾಯ ಪಡೆದಿದ್ದಾರೆ ಎನ್ನುವ ಆರೋಪವಿದೆ.

2009ರಲ್ಲಿ ಆಂಧ್ರದ ಅಂದಿನ ಮುಖ್ಯಮಂತ್ರಿ ಕಾಂಗ್ರೆಸ್‌ನ ರೋಷಯ್ಯ ಅವರು 2009ರಲ್ಲಿ ಈ ಪ್ರಕರಣವನ್ನು ಸಿಬಿಐ ತನಿಖೆಗೆ ನೀಡಿದ್ದರು. ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ 2011ರ ಸೆಪ್ಟೆಂಬರ್ 5ರಂದು ಜನಾರ್ಧನ ರೆಡ್ಡಿ, ಶ್ರೀನಿವಾಸರೆಡ್ಡಿ ಸಿಬಿಐನಿಂದ ಬಂಧಿತರಾಗಿ, ಮೂರುವರೆ ವರ್ಷಗಳ ಕಾಲ ಚಂಚಲಗುಡ ಮತ್ತು ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲುವಾಸ ಅನುಭವಿಸಿದ್ದರು.

2,000 ರೂ. ವಿಶೇಷ ದರ್ಶನ ಪ್ಯಾಕೇಜ್



ಮೈಸೂರಿನ ಜಿಲ್ಲಾ ಪಂಚಾಯ್ತಿ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಆಷಾಢ ಶುಕ್ರವಾರ ಸಂಬಂಧ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಪೂರ್ವಭಾವಿ ಸಭೆ ನಡೆಸಿದರು. ಶಾಸಕ ಜಿ.ಟಿ.ದೇವೇಗೌಡ, ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ, ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ, ನಗರಪಾಲಿಕೆ ಆಯುಕ್ತ ಶೇಕ್ ತನ್ವೀರ್ ಆಸಿಫ್, ನಗರ ಪೊಲೀಸ್ ಕಮಿಷ್ನರ್ ಸೀಮಾ ಲಾಟ್ಕರ್ ಇನ್ನಿತರರಿದ್ದಾರೆ.

ದರ್ಶನದ ಟಿಕೆಟ್ ಪಡೆದು ಬರುವ ಭಕ್ತರನ್ನು ಸಿಬ್ಬಂದಿ ಕರೆದೊಯ್ದು ದೇವರ ದರ್ಶನ ಮಾಡಿಸಿ ಸುರಕ್ಷಿತವಾಗಿ ಕರೆತರುವರಲ್ಲದೆ, ಅವರ ವಾಹನಗಳಿಗೂ ಪ್ರತ್ಯೇಕ ನಿಲುಗಡೆ ವ್ಯವಸ್ಥೆ ಮಾಡಲಾಗಿದೆ. ಆಷಾಢ ಶುಕ್ರವಾರದ ಹಿನ್ನೆಲೆಯಲ್ಲಿ ಭಕ್ತರಿಗಾಗಿ ಚಾಮುಂಡಿಬೆಟ್ಟದಲ್ಲಿ ಕುಡಿಯುವ ನೀರು, ಶೌಚಾಲಯ, ಪ್ರಸಾದ, ಸ್ವಚ್ಛತೆ ವ್ಯವಸ್ಥೆಯನ್ನು ಮಾಡಲಾಗಿದ್ದು, ವಿವಿಧ ಇಲಾಖೆಗಳ ಅಧಿಕಾರಿಗಳು ಸಮನ್ವಯ ಸಾಧಿಸಿ ಯಾವುದೇ ತೊಂದರೆ, ಗೊಂದಲ ಉಂಟಾಗದಂತೆ ಸರ್ವ ರೀತಿಯಲ್ಲಿ ಸೌಲಭ್ಯ ಕಲ್ಪಿಸಬೇಕೆಂದು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದ್ದು, ಭದ್ರತೆಗಾಗಿ ನಗರ ಪೊಲೀಸ್ ಘಟಕದ ವತಿಯಿಂದ ಹೆಚ್ಚುವರಿ ಪೊಲೀಸರನ್ನು ನಿಯೋಜಿಸಿ ಭಕ್ತರ ಸುರಕ್ಷತೆಗೆ ಆದ್ಯತೆ ನೀಡಲಾಗುವುದು ಎಂದು ಡಾ. ಹೆಚ್.ಸಿ. ಮಹದೇವಪ್ಪ ಇದೇ ವೇಳೆ ತಿಳಿಸಿದರು.

ಶ್ರೀ ಚಾಮುಂಡೇಶ್ವರಿ ದೇವಸ್ಥಾನದ ಅಭಿವೃದ್ಧಿ ಪ್ರಾಧಿಕಾರ, ಮೈಸೂರು ಮಹಾನಗರಪಾಲಿಕೆ, ನಿರ್ಮಿತಿ ಕೇಂದ್ರ, ಆರೋಗ್ಯ ಇಲಾಖೆ, ಅಗ್ನಿಶಾಮಕ ದಳ, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಕೆಎಸ್‌ಆರ್‌ಟಿಸಿ ಹಾಗೂ ಅರಣ್ಯ ಇಲಾಖೆ ಅಧಿಕಾರಿಗಳು ನಾಲ್ಕೂ ಆಷಾಢ ಶುಕ್ರವಾರಗಳಂದು ಹಾಜರಿದ್ದು, ಭಕ್ತರಿಗೆ ಸಕಲ ಸೌಲಭ್ಯಗಳನ್ನು ಒದಗಿಸುವಂತೆ ನಿರ್ದೇಶನ ನೀಡಲಾಗಿದ್ದು, ಬೆಟ್ಟಕ್ಕೆ ಆಗಮಿಸುವ ಭಕ್ತಾದಿಗಳ ಅನುಕೂಲಕ್ಕಾಗಿ ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಲ್ಲಿರುವ ಲಲಿತ ಮಹಲ್ ಹೆಲಿಪ್ಯಾಡ್ ಮೈದಾನದಿಂದ ಕೆಎಸ್‌ಆರ್‌ಟಿಸಿ ಬಸ್ಸುಗಳಲ್ಲಿ ಉಚಿತವಾಗಿ ತೆರಳಲು ವ್ಯವಸ್ಥೆ ಮಾಡಲಾಗಿದೆ ಎಂದರು. ಈ ಸಂಬಂಧ ಈಗಾಗಲೇ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಗಳನ್ನು ನಡೆಸಿ ಪೂರ್ವ ಸಿದ್ಧತೆ ಮಾಡಿಕೊಂಡಿದ್ದಾರೆ. ಭಕ್ತರು ಯಾವುದೇ ಗೊಂದಲ ಇಲ್ಲದಂತೆ ಶಾಂತಿಯಿಂದ ತಾಯಿ ಚಾಮುಂಡೇಶ್ವರಿ ದೇವಿಯ ದರ್ಶನ ಮಾಡುವಂತೆಯೂ ಅವರು ಇದೇ ಸಂದರ್ಭ ತಿಳಿಸಿದರು.

ಶಾಸಕ ಜಿ.ಟಿ.ದೇವೇಗೌಡ, ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ, ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ, ನಗರಪಾಲಿಕೆ ಆಯುಕ್ತ ಶೇಕ್ ತನ್ವೀರ್ ಆಸಿಫ್, ನಗರ ಪೊಲೀಸ್ ಕಮಿಷ್ನರ್ ಸೀಮಾ ಲಾಟ್ಕರ್, ಎಸ್ಪಿ ಎನ್.ವಿಷ್ಣುವರ್ಧನ, ಎಂಡಿಎ ಆಯುಕ್ತ ಕೆ.ಆರ್.ರಕ್ಷಿತ್, ಕಬಿನಿ ವೃತ್ತದ ಸೂಪರಿಂಟೆಂಡಿಂಗ್ ಇಂಜಿನಿಯರ್ ಕೆ.ಮಹೇಶ್, ಮೈಸೂರು ವೃತ್ತದ ಅರಣ್ಯ ಸಂರಕ್ಷಣಾಧಿಕಾರಿ (ಸಿಎಫ್) ಡಾ. ಮಾಲತಿಪ್ರಿಯ, ಎಐಎಡಿಬಿ ವಿಶೇಷ ಭೂ ಸ್ವಾಧೀನಾಧಿಕಾರಿ ಡಾ. ಎನ್.ಸಿ.ವೆಂಕಟರಾಜು, ಸೆಸ್ಕ್ ಸೂಪರಿಂಟೆಂಡಿಂಗ್ ಇಂಜಿನಿಯರ್ ಸುನಿಲ್, ತಹಸೀಲ್ದಾರ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ವಿಚಾರಣೆಗೆ ಹಾಜರಾಗುವಂತೆ ದಯಾನಂದ್‌ಗೆ ನೋಟಿಸ್

ಬಂದೋಬಸ್ತ್, ಭದ್ರತೆ ವಿಚಾರಗಳ ಕುರಿತು ಮಾಹಿತಿ ಪಡೆಯುವ ಸಲುವಾಗಿ ಬಿ.ದಯಾನಂದ್, ಪಶ್ಚಿಮ ವಿಭಾಗದ ಹೆಚ್ಚುವರಿ ಪೊಲೀಸ್ ಆಯುಕ್ತ ವಿಕಾಸ್ ಕುಮಾರ್, ಕೇಂದ್ರ ವಿಭಾಗದ ಡಿಸಿಪಿ ಅವರನ್ನು ವಿಚಾರಣೆಗೆ ಕರೆಯಲಾಗಿದೆ ಎಂದು ಮೂಲಗಳು ಹೇಳಿವೆ.

ಸಿಐಡಿ ತನಿಖೆಯೂ ಚುರುಕು: ಇನ್ನೊಂದೆಡೆ ತನಿಖೆ ಚುರುಕುಗೊಳಿಸಿರುವ ಸಿಐಡಿ ಅಧಿಕಾರಿಗಳು ಬುಧವಾರ ಕರ್ನಾಟಕ ರಾಜ್ಯ ಕ್ರಿಕೆಟ್ ಅಸೋಸಿಯೇಶನ್ (ಕೆಎಸ್‌ಸಿಎ) ಮಾಜಿ ಕಾರ್ಯದರ್ಶಿ ಎ.ಶಂಕರ್, ಖಜಾಂಚಿ ಇ.ಎಸ್. ಜಯರಾಮ್ ಅವರನ್ನು ವಿಚಾರಣೆಗೊಳಪಡಿಸಿದರು. ವಿಚಾರಣಾ ನೋಟಿಸ್ ಜಾರಿ ಹಿನ್ನೆಲೆಯಲ್ಲಿ ಸಿಐಡಿ ಕಚೇರಿಗೆ ಆಗಮಿಸಿದ್ದ ಇಬ್ಬರನ್ನೂ ಎಸ್‌ಪಿ ಶುಭನ್ವಿತಾ ನೇತೃತ್ವದ ತಂಡ ಹಲವು ತಾಸುಗಳ ಕಾಲ ವಿಚಾರಣೆ ನಡೆಸಿದೆ. ಆರ್‌ಸಿಬಿ ವಿಜಯೋತ್ಸವ ಆಚರಣೆ ಸಂಬಂಧ ಕೈಗೊಂಡ ನಿರ್ಧಾರಗಳು, ಪೊಲೀಸರಿಂದ ಪಡೆದ ಅನುಮತಿ ಹಾಗೂ ಕಾಲ್ತುಳಿತ ದುರಂತಕ್ಕೆ ಸಂಬಂಧಿಸಿ ಸರಣಿ ಪ್ರಶ್ನೆಗಳನ್ನು ಕೇಳಿ ಉತ್ತರ ಪಡೆದಿದ್ದಾರೆ. ಜತೆಗೆ, ವಿಜಯೋತ್ಸವಕ್ಕೂ ಮುನ್ನ ಕೆಎಸ್‌ಸಿಎ ವತಿಯಿಂದ ಕೈಗೊಂಡಿದ್ದ ಭದ್ರತಾ ಕ್ರಮಗಳೇನು? ಕಾಲ್ತುಳಿತದ ಬಳಿಕವೂ ಕಾರ್ಯಕ್ರಮ ನಡೆಸಿದ್ದರ ಕುರಿತು ಮಾಹಿತಿ ಪಡೆದಿದ್ದಾರೆ.

ತನಿಖೆಗೆ ಸಂಬಂಧಿಸಿ ಅಗತ್ಯಬಿದ್ದರೆ ಪುನಃ ವಿಚಾರಣೆಗೆ ಹಾಜರಾಗುವಂತೆ ಸೂಚಿಸಿ ಕಳುಹಿಸಲಾಗಿದೆ. ಹಾಗೆಯೇ, ಕೆಲವು ಲಿಖಿತ ದಾಖಲೆಗಳನ್ನು ಒದಗಿಸುವಂತೆ ಸೂಚಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ಇನ್ಸ್‌ಪೆಕ್ಟರ್ ವಿಚಾರಣೆ: ಕಬ್ಬನ್ ಪಾರ್ಕ್ ಠಾಣೆಯ ಈ ಹಿಂದಿನ ಇನ್ಸ್‌ಪೆಕ್ಟರ್ ಎ.ಕೆ.ಗಿರೀಶ್ ಅವರು ಕೂಡ ಬುಧವಾರ ಸಿಐಡಿ ವಿಚಾರಣೆ ಎದುರಿಸಿದರು.

ಕೆಎಸ್‌ಸಿಎ ವತಿಯಿಂದ ಆರ್‌ಸಿಬಿ ವಿಜಯೋತ್ಸವ ಆಚರಣೆ ಸಂಬಂಧ ಬಂದಿದ್ದ ಮನವಿ ಪತ್ರ, ಹಿರಿಯ ಅಧಿಕಾರಿಗಳಿಗೆ ಕಾರ್ಯಕ್ರಮದ ಕುರಿತು ಮಾಹಿತಿ ನೀಡಲಾಗಿತ್ತೇ ಎಂಬುದು ಸೇರಿದಂತೆ ಹಲವು ವಿಚಾರಗಳ ಬಗ್ಗೆ ಹೇಳಿಕೆ ದಾಖಲಿಸಿಕೊಳ್ಳಲಾಗಿದೆ ಎಂದು ಮೂಲಗಳು ಹೇಳಿವೆ. ಪ್ರಾಥಮಿಕ ತನಿಖೆ ಸಲುವಾಗಿ ಕೆಎಸ್‌ಸಿಎ ಹಾಗೂ ಪೊಲೀಸರ ವಿಚಾರಣೆ ನಡೆಸಲಾಗುತ್ತಿದೆ. ಬಳಿಕ ಗಾಯಾಳುಗಳನ್ನು ವಿಚಾರಣೆ ನಡೆಸಲಾಗುವುದು. ಕ್ರೀಡಾಂಗಣದ ಸಿಸಿಟಿವಿ ಪರಿಶೀಲನೆ ನಡೆಯುತ್ತಿದೆ ಎಂದು ಮೂಲಗಳು ತಿಳಿಸಿವೆ.

ಕೋವಿಡ್ ಪರಿಸ್ಥಿತಿ ಕುರಿತು ಸಿಎಂ ಸಭೆ

ಪ್ರಕರಣಗಳು ಪತ್ತೆಯಾಗಿವೆ. ಇದುವರೆಗೆ 11 ಸಾವು ಸಂಭವಿಸಿದೆ. ಆದರೂ ಇದರಲ್ಲಿ 10 ಪ್ರಕರಣಗಳಲ್ಲಿ ಕೋವಿಡ್ ಕಾರಣದಿಂದ ಸಾವು ಸಂಭವಿಸಿಲ್ಲ. ವಿವಿಧ ರೀತಿಯ ಅನಾರೋಗ್ಯಕ್ಕೆ ತುತ್ತಾಗಿದ್ದ ರೋಗಿಗಳು ಈ ಪ್ರಕರಣಗಳಲ್ಲಿ ಸಾವನ್ನಪ್ಪಿದ್ದಾರೆ. ಒಂದು ಪ್ರಕರಣದ ಆಡಿಟ್ ವರದಿ ಬರಬೇಕಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಕೋವಿಡ್ ಬಗ್ಗೆ ಯಾರೂ ಅನಗತ್ಯ ಗೊಂದಲ ಮೂಡಿಸಬಾರದು. ಸಾರ್ವಜನಿಕರು ಭಯಪಡುವ ಅಗತ್ಯವಿಲ್ಲ. ಎಲ್ಲಾ ಆಸ್ಪತ್ರೆಗಳಲ್ಲಿ ಕೋವಿಡ್ ಪ್ರಕರಣಗಳನ್ನು ನಿಭಾಯಿಸಲು ಸೂಕ್ತ ವ್ಯವಸ್ಥೆಯನ್ನು ಕೈಗೊಳ್ಳಬೇಕು. ಆರೋಗ್ಯ, ವೈದ್ಯಕೀಯ ಶಿಕ್ಷಣ ಇಲಾಖೆ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಖಾಸಗಿ ಆಸ್ಪತ್ರೆಗಳಲ್ಲಿ ಅನಗತ್ಯವಾಗಿ ಕೋವಿಡ್ ಪರೀಕ್ಷೆ ಹೆಸರಿನಲ್ಲಿ ದುಬಾರಿ ಶುಲ್ಕ ವಿಧಿಸುತ್ತಿರುವ ದೂರುಗಳ ಬಗ್ಗೆ ಪರಿಶೀಲನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸಿಎಂ ಸೂಚಿಸಿದರು.

ಹೈಕಮಾಂಡ್ ನಿರ್ಧಾರ

ಬಿಜೆಪಿ ಕಾನೂನು ದುರ್ಬಳಕೆ ಮಾಡಿಕೊಂಡು ಪ್ರತಿಪಕ್ಷಗಳನ್ನು ಹತ್ತಿಕ್ಕುವ ಕೆಲಸ ಮಾಡುತ್ತಿದೆ. ಕಾನೂನಾತ್ಮಕವಾಗಿ ಏನೇ ಕ್ರಮಕೈಗೊಂಡರೂ ನಮ್ಮ ವಿರೋಧ ಇಲ್ಲ ಎಂದು ಸ್ಪಷ್ಟಪಡಿಸಿದರು. ಬಿಜೆಪಿ ನಾಯಕರಿಗೆ ಸುಳ್ಳು ಹೇಳಿ ಜನರ ದಾರಿ ತಪ್ಪಿಸುವುದು, ರಾಜಕೀಯ ದೃಷ್ಟಿಯಿಂದ ರಾಜೀನಾಮೆ ಕೇಳುವುದು ಅಭ್ಯಾಸವಾಗಿದೆ. ಬಿಜೆಪಿ ಎಲ್ಲದರಲ್ಲೂ ರಾಜಕೀಯ ಮಾಡುತ್ತದೆ. ಕಾಲ್ತುಳಿತ ಪ್ರಕರಣದ ತನಿಖೆಗೆ ಏಕ ವ್ಯಕ್ತಿ ಆಯೋಗ ರಚನೆ ಮಾಡಿದ್ದು, 30 ದಿನಗಳಲ್ಲಿ ವರದಿ ಸಲ್ಲಿಸಲಿದೆ. ವಿಶ್ವವಿದ್ಯಾಲಯಗಳಲ್ಲಿನ ಖಾಲಿ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರ ನೇಮಕ ಮಾಡ ಲಾಗಿದೆ. ಇನ್ನು ಹೆಚ್ಚಿನ ಉಪನ್ಯಾಸಕರ ನೇಮಕ ಮಾಡಲಾಗುವುದು. ಅವರ ವೇತನ ಹೆಚ್ಚಿಸಿ, ಸೌಲಭ್ಯ ನೀಡಲಾಗಿದೆ. ಪ್ರಾಥಮಿಕ ಮತ್ತು ಪ್ರೌಢಶಿಕ್ಷಣಕ್ಕೆ ಸರ್ಕಾರ ಒತ್ತು ನೀಡಿದೆ ಎಂದರು.

ಮರು ಸಮೀಕ್ಷೆ ತೀರ್ಮಾನ ಕೈಗೊಳ್ಳಿ

ನಿಯೋಜಿಸಲಿದೆ ಎಂದು ಪ್ರಶ್ನಿಸಿದ್ದಾರೆ. ಈ ಸಂಬಂಧ ಟ್ವೀಟ್ ಮಾಡಿರುವ ಅವರು, ಆನ್‌ಲೈನ್ ಮೂಲಕ ಸಮೀಕ್ಷೆ ನಡೆಸುವ ಚಿಂತನೆ ಅವಿವೇಕದ ಕ್ರಮ. ಅನೇಕ ಅಕ್ಷರಸ್ಥರೇ ಇಂದಿಗೂ ಆನ್‌ಲೈನ್ ವ್ಯವಸ್ಥೆಯಿಂದ ದೂರ ಇರುವಾಗ ಮಾಹಿತಿಯ ನಿಖರತೆ ಮತ್ತು ಗುರುತು ಪತ್ತೆ ಹೇಗೆ ಸಾಧ್ಯವಾಗಲಿದೆ, ತಪ್ಪು ದಾಖಲಾತಿ ತಡೆಯಲು ಸರ್ಕಾರದ ಕ್ರಮ ಏನು. ಆದ್ದರಿಂದ ಸಮಗ್ರ ಸಿದ್ಧತೆ ಮುಗಿಸಿ ಪ್ರಸಕ್ತ ಶೈಕ್ಷಣಿಕ ವರ್ಷ ಮುಗಿದ ನಂತರವಷ್ಟೇ ಶಿಕ್ಷಕರನ್ನು ಬಳಸಿ ಜಾತಿ ಜನಗಣತಿ ಸಮೀಕ್ಷೆ ನಡೆಸಿ. ರಾಜ್ಯದ ಹಿತದೃಷ್ಟಿಯಿಂದಲೂ ಇದು ಅತಿ ಅವಶ್ಯಕ ಎಂದಿದ್ದಾರೆ. 10 ವರ್ಷಗಳ ಹಿಂದೆ ಕಾಂತರಾಜು ನಡೆಸಿದ ಜಾತಿ ಜನಗಣತಿ ವರದಿ ಹಾಗೂ ನಂತರ ಜಯಪ್ರಕಾಶ್ ಹೆಗ್ಡೆ ಸಲ್ಲಿಸಿದ 'ಚೌಚೌ ವರದಿ'ಗೆ ಎಳ್ಳು–ನೀರು ಬಿಟ್ಟಂತಾಗಿದೆ, ಈ ಕಾರ್ಯಕ್ಕೆ ತೆರಿಗೆದಾರರ 167 ಕೋಟಿ ರೂ. ವೆಚ್ಚವಾಗಿದ್ದು, ವರದಿ ಕೈಬಿಟ್ಟಿರುವುದರಿಂದ ಸಮೀಕ್ಷೆಗೆ ವೆಚ್ಚವಾದ ಹಣವನ್ನು ಯಾರಿಂದ ವಸೂಲಿ ಮಾಡುತ್ತೀರಿ. ಈಗಾಗಲೇ ವ್ಯರ್ಥವಾದ ಬೃಹತ್ ಮೊತ್ತಕ್ಕೆ ಯಾರು ಹೊಣೆ. ರಾಷ್ಟ್ರೀಯ ದಶವಾರ್ಷಿಕ ಜನಗಣತಿಯಲ್ಲಿ ಜಾತಿಗಣತಿ ವಿಷಯವನ್ನೂ ಸೇರಿಸಲು ಮೋದಿ ನೇತೃತ್ವದ ಕೇಂದ್ರದ ಎನ್‌ಡಿಎ ಸರ್ಕಾರ ಈಗಾಗಲೇ ನಿರ್ಧಾರ ಮಾಡಿದ್ದು, ಕರ್ನಾಟಕದಲ್ಲಿ ಮತ್ತೊಮ್ಮೆ ಜಾತಿಗಣತಿ ಹೆಸರಿನಲ್ಲಿ ವಿನಾಕಾರಣ ದುಂದು ವೆಚ್ಚ ಮಾಡಬೇಡಿ. ಇದೆಲ್ಲಕ್ಕಿಂತ ಐಪಿಎಲ್ ವಿಜಯೋತ್ಸವದ ದುರಂತ ಮರೆ ಮಾಚಲು, ಸಾರ್ವಜನಿಕರ ಗಮನ ಬೇರೆಡೆ ಸೆಳೆಯಲು ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಹೈಕಮಾಂಡ್ ಮಾಡುತ್ತಿರುವ ಮತ್ತೊಂದು ಬೃಹತ್ ನಾಟಕ ಎಂಬ ಅನುಮಾನಗಳು ದಟ್ಟವಾಗಿವೆ ಎಂದು ಟೀಕಿಸಿದ್ದಾರೆ.

ಇ–ಆಫೀಸ್ ಆರಂಭ

ಸಂಪತ್‌ಕುಮಾರ್ ಅವರನ್ನು ಇ–ಆಫೀಸ್ ನೋಡಲ್ ಅಧಿಕಾರಿಯಾಗಿ ನೇಮಕ ಮಾಡಲಾಗಿದ್ದು, ಹೊಸ ವ್ಯವಸ್ಥೆಯನ್ನು ಅಳವಡಿಸಿಕೊಳ್ಳಲು ನಿನ್ನೆ (ಜೂ.10)ಯಿಂದ ಕಚೇರಿಯಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ತರಬೇತಿ ನೀಡಲಾಗುತ್ತಿದೆ. ಕಚೇರಿಯ ನಗರ ಯೋಜನಾ, ಲೆಕ್ಕ, ನಿವೇಶನ, ಹರಾಜು, ಭೂಸ್ವಾಧೀನ, ಇಂಜಿನಿಯರಿಂಗ್, ಎಸ್ಟಾಬ್ಲಿಷ್‌ಮೆಂಟ್, ಸಿಎ ಸೈಟ್ ಸೇರಿದಂತೆ ಎಲ್ಲಾ ಶಾಖೆಗಳ ಕಚೇರಿಗಳಲ್ಲಿ ಇ–ಆಫೀಸ್ ವ್ಯವಸ್ಥೆ ಜಾರಿಗೆ ತಂದು ಆನ್‌ಲೈನ್ ಮೂಲಕ ಕಾರ್ಯನಿರ್ವಹಿಸುವಂತೆ ವ್ಯವಸ್ಥೆಯನ್ನು ಬದಲಾವಣೆ ಮಾಡಲಾಗುತ್ತಿದೆ. ಇದರಿಂದಾಗಿ ಸಾರ್ವಜನಿಕರು ಬೇರೆ ಬೇರೆ ಸೇವೆಗಳನ್ನು ಕೋರಿ ಸಲ್ಲಿಸಿದ ಅರ್ಜಿಗಳು ಯಾವ ಹಂತದಲ್ಲಿವೆ ಎಂಬುದನ್ನು ಅರ್ಜಿದಾರರೇ ತಿಳಿದುಕೊಳ್ಳಬಹುದಾಗಿದ್ದು, ಆನ್‌ಲೈನ್ ಮೂಲಕವೇ ಎಲ್ಲಾ ಪ್ರಕ್ರಿಯೆಗಳು ನಡೆಯಲಿವೆ. ಪರಿಣಾಮ ಅರ್ಜಿದಾರರು ಸೇವೆಗಳಿಗಾಗಿ ಪ್ರಾಧಿಕಾರದ ಕಚೇರಿಗಳಿಗೆ ಅಲೆದು ಸಿಬ್ಬಂದಿ ಹಾಗೂ ಅಧಿಕಾರಿಗಳ ಮುಂದೆ ನಿಲ್ಲುವುದು ತಪ್ಪುತ್ತದೆಯಲ್ಲದೇ, ಭ್ರಷ್ಟಾಚಾರ ಮತ್ತು ಲಂಚಗುಳಿತನಕ್ಕೂ ಈ ವ್ಯವಸ್ಥೆಯಿಂದ ಕಡಿವಾಣ ಹಾಕಬಹುದಾಗಿದೆ ಎಂಬುದನ್ನು ಈ ವ್ಯವಸ್ಥೆಯನ್ನು ಕಡ್ಡಾಯಗೊಳಿಸಿರುವ ಸರ್ಕಾರದ ಮುಖ್ಯ ಧ್ಯೇಯವಾಗಿದೆ.

ವಿಧಾನಸೌಧದಲ್ಲಿ ಆರ್‌ಸಿಬಿ ಆಟಗಾರರ ಸನ್ಮಾನಕ್ಕೆ ರಾಜ್ಯಪಾಲರನ್ನು ಆಹ್ವಾನಿಸಿದ್ದು ನಾನೇ

ಸಿಎಂ ಸಿದ್ದರಾಮಯ್ಯ ಸ್ಪಷ್ಟನೆ



ಗೌರಿಬಿದನೂರು, ಜೂ.11– ವಿಧಾನ ಸೌಧದ ಮೆಟ್ಟಿಲುಗಳ ಮೇಲೆ ಹಮ್ಮಿಕೊಂಡ ಆರ್‌ಸಿಬಿ ಆಟಗಾರರ ಅಭಿನಂದನಾ ಕಾರ್ಯಕ್ರಮಕ್ಕೆ ರಾಜ್ಯಪಾಲರು ಅವರಾಗೇ ಬರಲಿಲ್ಲ, ನಾನೇ ಆಹ್ವಾನಿಸಿದ್ದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ಗೌರಿಬಿದನೂರಿನಲ್ಲಿ ನಡೆಸಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ರಾಜ್ಯಪಾಲರು ತಾವಾಗಿಯೇ ಬರಲಿಲ್ಲ, ಆಹ್ವಾನ ನೀಡಲಾಗಿತ್ತು ಎಂದು ತಿಳಿಸಿದರು. ಜೂನ್ 4ರಂದು ಕರ್ನಾಟಕ ಕ್ರಿಕೆಟ್ ಸಂಸ್ಥೆ ಹಾಗೂ ಆರ್‌ಸಿಬಿ ವತಿಯಿಂದ ಆರ್‌ಸಿಬಿ ಆಟಗಾರರಿಗೆ ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು. ನನಗೆ ಅಂದು ಬೆಳಗ್ಗೆ 11.29ಕ್ಕೆ ಕೆಎಸ್‌ಸಿಎ ವತಿಯಿಂದ ಶಂಕರ್ ಮತ್ತು ಜಯರಾಮ್ ಆಹ್ವಾನ ನೀಡಿ ಮನವಿ ಮಾಡಿಕೊಂಡರು. ಇದಕ್ಕೆ ನಾನು ಒಪ್ಪಿಗೆ ನೀಡಿದೆ. ಬಳಿಕ ಅವರು ರಾಜ್ಯಪಾಲರನ್ನು ಆಹ್ವಾನ ಮಾಡಿರುವುದಾಗಿ ತಿಳಿಸಿದರು. ಪತ್ರಿಕೆಗಳಲ್ಲಿ ಹಾಗೂ ಮಾಧ್ಯಮಗಳಲ್ಲಿ ರಾಜ್ಯಪಾಲರು ಅವರಾಗಿಯೇ ಬಂದಿದ್ದರು ಎಂದು ಪ್ರಚಾರವಾಗಿರುವುದು ತಪ್ಪು ಎಂದರು.

ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಆಗಿದ್ದ ಗೋವಿಂದರಾಜು ರಾಜ್ಯಪಾಲರಿಗೆ ಕರೆ ಮಾಡಿ ಫೋನ್ ನನಗೆ ಕೊಟ್ಟರು. ಆಗ ನಾನು ಕೂಡ ಕಾರ್ಯಕ್ರಮಕ್ಕೆ ತೆರಳುತ್ತಿದ್ದು ನೀವು ಬನ್ನಿ ಎಂದು ಆಹ್ವಾನಿಸಿದೆ. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕೂಡ ಕಾರ್ಯಕ್ರಮಕ್ಕೆ ಆಗಮಿಸಿದರು. ಸನ್ಮಾನ ಕಾರ್ಯಕ್ರಮ 20 ನಿಮಿಷಗಳಲ್ಲಿ ಮುಗಿದು ಹೋಯಿತು ಎಂದು ತಿಳಿಸಿದರು. ಈ ಮೂಲಕ ಮಾಧ್ಯಮಗಳು ಹಾಗೂ ಸುದ್ದಿ ವಾಹಿನಿಗಳಲ್ಲಿ ರಾಜ್ಯಪಾಲರು ತಾವಾಗಿಯೇ ಬಂದಿದ್ದಾರೆ ಎಂದು ವರದಿಯಾದ್ದರಿಂದ ಸ್ಪಷ್ಟೀಕರಣ ನೀಡುತ್ತಿದ್ದೇನೆ ಎಂದು ಹೇಳಿದರು.

ರಾಜ್ಯಪಾಲರನ್ನೇ ಕೇಳಬೇಕು ಎಂದಿದ್ದ ಡಿಸಿಎಂ: ವಿಧಾನಸೌಧ ಮೆಟ್ಟಿಲ ಮೇಲೆ ಆಟಗಾರರನ್ನು ಸನ್ಮಾನಿಸುವ ಕಾರ್ಯಕ್ರಮಕ್ಕೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರನ್ನು ಆಹ್ವಾನಿಸಿದ್ದು ಯಾರು ಎಂಬ ಬಗ್ಗೆ ತಮಗೆ ಗೊತ್ತಿಲ್ಲ. ಈ ಬಗ್ಗೆ ರಾಜ್ಯಪಾಲರನ್ನೇ ಕೇಳಿ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದರು. ಡಿ.ಕೆ.ಶಿವಕುಮಾರ್ ಅವರ ಈ ಹೇಳಿಕೆ ಮಹತ್ವ ಪಡೆದುಕೊಂಡಿತ್ತು. ಇದೀಗ ರಾಜ್ಯಪಾಲರನ್ನು ಆಹ್ವಾನಿಸಿದ್ದು ನಾನೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ ನೀಡಿದ್ದಾರೆ.

ಕಾಲ್ತುಳಿತ ವೇಳೆ ಹಲ್ಲೆ ನಡೆಸಿದ ಕ್ರೀಡಾಂಗಣದ ಸಿಬ್ಬಂದಿ ಮೇಲೆ ಎಫ್‌ಐಆರ್ ದಾಖಲಿಸಲು ಆಗ್ರಹ


ಮೈಸೂರು, ಜೂ.11(ಜಿಎ)–ಆರ್‌ಸಿಬಿ ವಿಜಯೋತ್ಸವದ ಕಾಲ್ತುಳಿತ ಪ್ರಕರಣದಲ್ಲಿ ರಾಜ್ಯ ಸರ್ಕಾರ ತನ್ನ ವೈಫಲ್ಯವನ್ನು ಮರೆಮಾಚುವ ಉದ್ದೇಶದಿಂದ ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಿದೆ ಎಂದು ಆಪಾದಿಸಿದ ಹಿಂದೂಪರ ಸಂಘಟನೆಗಳ ಒಕ್ಕೂಟದ ಸಂಚಾಲಕ ಮೈ.ಕಾ. ಪ್ರೇಮ್‌ಕುಮಾರ್, ಕಾಲ್ತುಳಿತದ ವೇಳೆ ಬಡಿಗೆಯಿಂದ ಹಲ್ಲೆ ನಡೆಸಿದ ಕ್ರೀಡಾಂಗಣ ಸಿಬ್ಬಂದಿಗಳ ಮೇಲೆ ಎಫ್‌ಐಆರ್ ದಾಖಲಿಸಲು ಆಗ್ರಹಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕ್ರೀಡಾಂಗಣದಲ್ಲಿ ಕಾಲ್ತುಳಿತ ಆರಂಭವಾದಾಗ ಕ್ರೀಡಾಂಗಣದ ಸಿಬ್ಬಂದಿ ಸಾರ್ವಜನಿಕರಿಗೆ ಬಡಿಗೆಯಿಂದ ಬಡಿಯುತ್ತಿದ್ದ ದೃಶ್ಯವನ್ನು ಮಾಧ್ಯಮಗಳು ದಿನನಿತ್ಯ ತೋರಿಸುತ್ತಿವೆ. ಇವರ ವಿರುದ್ಧ ಇದುವರೆಗೂ ಕ್ರಮ ಕೈಗೊಂಡಿಲ್ಲ. ಸರ್ಕಾರ ಇನ್ನಾದರೂ ಎಚ್ಚೆತ್ತುಕೊಂಡು ಸಾರ್ವಜನಿಕರ ಮೇಲೆ ಹಲ್ಲೆ ಮಾಡಿದ ಕ್ರೀಡಾಂಗಣದ ಸಿಬ್ಬಂದಿಗಳ ವಿರುದ್ಧ ಎಫ್‌ಐಆರ್ ದಾಖಲಿಸಿ, ಕೂಡಲೇ ಬಂಧಿಸಬೇಕು ಎಂದು ಆಗ್ರಹಿಸಿದರು.

ಅಮಾನತುಗೊಂಡಿರುವ ಬೆಂಗಳೂರು ಪೊಲೀಸ್ ಆಯುಕ್ತ ಬಿ.ದಯಾನಂದ್ ಅವರು ಮೈಸೂರು ನಗರದಲ್ಲಿಯೂ ಕರ್ತವ್ಯ ನಿರ್ವಹಿಸಿದ್ದರು. ಮೈಸೂರಿನ ಕ್ಯಾತಮಾರನಹಳ್ಳಿಯ ಆರ್‌ಎಸ್‌ಎಸ್ ಕಾರ್ಯಕರ್ತ ರಾಜು ಪ್ರಕರಣದಲ್ಲಿ ಆರೋಪಿಗಳನ್ನು ಕಂಡುಹಿಡಿಯಲು ತುಂಬಾ ಶ್ರಮಿಸಿದ್ದರು. ರಾಜು ಹತ್ಯೆ ಬಳಿಕ ಮೈಸೂರಿನಲ್ಲಿ ಅಂತಹ ಕೋಮು ಸನ್ನಿವೇಶವನ್ನು ಸೂಕ್ತವಾಗಿ ನಿಭಾಯಿಸಿದ್ದರು. ಅಂದು ಸಹ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಅವರು ಬಿ.ದಯಾನಂದ್ ಅವರ ಕೆಲಸವನ್ನು ಗಮನಿಸಿ ಎರಡನೇ ಬಾರಿ ಮುಖ್ಯಮಂತ್ರಿಯಾದಾಗ ಅವರಿಗೆ ಬೆಂಗಳೂರಿನಲ್ಲಿ ಹೆಚ್ಚಿನ ಜವಾಬ್ದಾರಿ ನೀಡಿದ್ದರು ಎಂದರು.

ಸಿದ್ದರಾಮಯ್ಯ ಅವರು ಅಹಿಂದ ವರ್ಗಗಳ ಪರ ಎಂದು ಎಲ್ಲೆಡೆ ಹೇಳಿಕೊಳ್ಳುತ್ತಾರೆ. ಆದರೆ ತಮ್ಮ ಆಡಳಿತ ವೈಫಲ್ಯವನ್ನು ಮುಚ್ಚಿಕೊಳ್ಳಲು ಹಿಂದುಳಿದ ವರ್ಗದ ಅಧಿಕಾರಿಗಳನ್ನೇ ಅಮಾನತು ಮಾಡಿದ್ದಾರೆ. ಹಿಂದುಳಿದ ವರ್ಗಗಳ ಪರ ನಿಲ್ಲದ ಸಿದ್ದರಾಮಯ್ಯ ಅವರು ಒಂದು ದಿನದ ಮಟ್ಟಿಗಾದರೂ ರಾಜೀನಾಮೆ ನೀಡಿ, ರಾಜ್ಯ ಸರ್ಕಾರ ಪೊಲೀಸ್ ಅಧಿಕಾರಿಗಳ ಅಮಾನತು ಆದೇಶವನ್ನು ಕೂಡಲೇ ಹಿಂಪಡೆಯಬೇಕು ಮತ್ತು ದಕ್ಷ ಅಧಿಕಾರಿಗಳಿಗೆ ಉತ್ತಮವಾದ ಜವಾಬ್ದಾರಿ ನೀಡಬೇಕು ಎಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಹಿಂದೂಪರ ಸಂಘಟನೆಗಳ ಒಕ್ಕೂಟದ ಸಹ ಸಂಚಾಲಕರಾದ ಸಂಜಯ್, ರಾಕೇಶ್ ಭಟ್, ಎಸ್.ತ್ಯಾಗರಾಜ್ ಉಪಸ್ಥಿತರಿದ್ದರು.

ಸೌರಮಾನ ಶ್ರೀ ಲಕ್ಷ್ಮೀನರಸಿಂಹ ಜಯಂತಿ, ಸ್ವಾತಿ ಪೂಜೆ



ಮೈಸೂರು, ಜೂ.11–ಮೈಸೂರಿನ ಕಾಳಿದಾಸ ರಸ್ತೆಯಲ್ಲಿರುವ ಯದುಗಿರಿ ಯತಿರಾಜ ಶಾಖಾ ಮಠ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನದಲ್ಲಿ ಮಂಗಳವಾರ ಸೌರಮಾನ ಶ್ರೀ ಲಕ್ಷ್ಮೀನರಸಿಂಹ ಜಯಂತಿ ಹಾಗೂ ವಿಶೇಷ ಸ್ವಾತಿ ಪೂಜೆ ಆಯೋಜಿಸಲಾಗಿತ್ತು. ಪೂಜಾ ಕೈಂಕರ್ಯದಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ ಭಾಗವಹಿಸಿ ದೇವರ ಆಶೀರ್ವಾದ ಪಡೆದರು. ಬೆಳಗ್ಗೆಯಿಂದಲೇ ಸ್ವಾಮಿಗೆ ವಿಶೇಷ ಅಭಿಷೇಕ, ಅಲಂಕಾರ, ಮಹಾಮಂಗಳಾರತಿ, ಶಾತ್ತುಮೊರೈ, ತೀರ್ಥ ಪ್ರಸಾದವನ್ನು ಬಂದ ಭಕ್ತಾದಿಗಳಿಗೆ ವಿತರಿಸಲಾಯಿತು. ಸಂಜೆ ತಿರುವೀದಿ ಉತ್ಸವದಲ್ಲಿ ಅನೇಕ ಭಕ್ತಾದಿಗಳು ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ದೇವಸ್ಥಾನದ ಸಿಇಓ ಕೆ.ಆರ್. ಯೋಗಾನರಸಿಂಹನ್ (ಮುರುಳಿ ಅಯ್ಯಂಗಾರ್), ಪುರೋಹಿತ ವೀರರಾಘವನ್, ತಾತಾಚಾರ್, ರಾಘವ, ವಿಶ್ವನಾಥ್, ಬಾಲಾಜಿ, ಶಂಕರ ಇನ್ನಿತರರು ಉಪಸ್ಥಿತರಿದ್ದರು.

ಪಿಹೆಚ್.ಡಿ ಪದವಿ



ಮೈಸೂರು: ಡಾ.ಎಂ.ವಿ. ದಿನೇಶ ಅವರ ಮಾರ್ಗದರ್ಶನದಲ್ಲಿ ದಿವ್ಯಾಶ್ರೀ ಅರ್ಥಶಾಸ್ತ್ರ ವಿಷಯದಲ್ಲಿ ಸಂಶೋಧಿಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿವಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಎಸ್.ವಿ.ಗೌಡಪ್ಪ ದತ್ತಿ ಪ್ರಶಸ್ತಿ ಪ್ರದಾನ



ಮೈಸೂರಿನ ಹಿರಿಯ ನಾಗರಿಕರ ವಿಶ್ವಸ್ಥ ಮಂಡಳಿ, ಹಿರಿಯ ನಾಗರಿಕರ ಮಂಡಳಿ, ಕೃಷಿಕ ಫೌಂಡೇಷನ್ ಸಂಯುಕ್ತ ಆಶ್ರಯದಲ್ಲಿ ನಡೆದ ಎಸ್.ವಿ.ಗೌಡಪ್ಪ ಅವರ 93ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಗತಿಪರ ರೈತ ಬಿ.ಎ.ಪ್ರಕಾಶ್ ಬಸವನಹಳ್ಳಿ ಅವರಿಗೆ ಎಸ್.ವಿ.ಗೌಡಪ್ಪ ದತ್ತಿ ಪ್ರಶಸ್ತಿ ನೀಡಿ, ಗೌರವಿಸಲಾಯಿತು. ಈ ವೇಳೆ ನಿವೃತ್ತ ಕಾರ್ಯಪಾಲಕ ಅಭಿಯಂತರ ಎಸ್.ವಿ.ಗೌಡಪ್ಪ, ಹಿರಿಯ ನಾಗರಿಕರ ಮಂಡಳಿ ಅಧ್ಯಕ್ಷ ಡಾ.ಹೆಚ್.ಎಂ.ನಾಗರಾಜು, ಪ್ರೊ.ರಾಮಚಂದ್ರೇಗೌಡ ಮತ್ತಿತರರು ಉಪಸ್ಥಿತರಿದ್ದರು.

ಜಾತಿ ಜನಗಣತಿ ಮರು ಸಮೀಕ್ಷೆ ಹಾಸ್ಯಾಸ್ಪದ

ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಕಿಡಿ

- ಕೇಂದ್ರವೇ ಜಾತಿಗಣತಿ ಘೋಷಣೆ ಮಾಡಿರುವಾಗ ಹೊಸದಾಗಿ ಗಣತಿ ಮಾಡುವುದು ಸರಿಯಲ್ಲ
- ಅಭಿವೃದ್ಧಿಗಳಿಗೆ ಹಣ ಇಲ್ಲದಿರುವಾಗ ಮತ್ತೇ ಗಣತಿಗೆ ಜನರ ತೆರಿಗೆ ಹಣ ಪೋಲು ಮಾಡಲಾಗುತ್ತಿದೆ



ಮೈಸೂರಿನ ಬಿಜೆಪಿ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಸಂಸದ ಯದುವೀರ ಒಡೆಯರ್ ಮಾತನಾಡಿದರು. ನಗರಾಧ್ಯಕ್ಷ ಎಲ್.ನಾಗೇಂದ್ರ, ಮುಖಂಡರಾದ ಹೆಚ್.ಜಿ.ಗಿರಿಧರ್, ಕೇಬಲ್ ಮಹೇಶ್, ಮಹೇಶ್‌ರಾಜೇ ಅರಸ್ ಇತರರು ಚಿತ್ರದಲ್ಲಿದ್ದಾರೆ.

ಮೈಸೂರು,ಜೂ.11(ಎಂಟಿವೈ)– ಈ ಹಿಂದೆ ರಾಜ್ಯದಲ್ಲಿ 165.51 ಕೋಟಿ ರೂ. ವೆಚ್ಚ ಮಾಡಿ ನಡೆಸಿದ್ದ ಜಾತಿಗಣತಿ ವರದಿಯನ್ನು ಕಸದ ಬುಟ್ಟಿಗೆ ಹಾಕಿರುವ ರಾಜ್ಯ ಸರ್ಕಾರ, ಇದೀಗ ಮತ್ತೆ ಜಾತಿ ಗಣತಿ ನಡೆಸಲು ಮುಂದಾಗಿರುವುದು ಹಾಸ್ಯಾಸ್ಪದ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಇಂದಿಲ್ಲಿ ಕಿಡಿಕಾರಿದ್ದಾರೆ.

ಮೈಸೂರಿನ ಚಾಮರಾಜ ಮೊಹಲ್ಲಾದಲ್ಲಿರುವ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಈಗಾಗಲೇ ಹಣಕಾಸಿನ ಕೊರತೆ ಉಂಟಾಗಿದೆ. ಅಭಿವೃದ್ಧಿ ಕಾರ್ಯಗಳಿಗೆ ಅನುದಾನವೇ ಇಲ್ಲದಂತಾಗಿದೆ. ಇಂತಹ ಪರಿಸ್ಥಿತಿಯಲ್ಲಿ ಸಾರ್ವಜನಿಕರ ತೆರಿಗೆ ಹಣದಲ್ಲಿ ಮತ್ತೆ ಜಾತಿ ಗಣತಿ ಮಾಡಲು ಸರ್ಕಾರ ಮುಂದಾಗಿರುವುದು ಸರಿಯಲ್ಲ. ಈ ಹಿಂದೆ ಜಯಪ್ರಕಾಶ್ ಆಯೋಗ, ಕಾಂತರಾಜು ಆಯೋಗ ನಡೆಸಿದ ಜಾತಿ ಗಣತಿ ವರದಿಯನ್ನು ಸ್ವೀಕರಿಸಿ, ಅನುಷ್ಠಾನಗೊಳಿಸದೇ ಇದೀಗ ಆ ವರದಿಯನ್ನು ಕಸದ ಬುಟ್ಟಿಗೆ ಎಸೆದಿದ್ದಾರೆ. ಇದುವರೆಗೂ ರಾಜಕೀಯ ಲಾಭಕ್ಕಾಗಿ ಜಾತಿ ಜನಗಣತಿ ವರದಿ ಜಾರಿಗೊಳಿಸುವುದಾಗಿ ಹೇಳಿಕೊಂಡು ಬರುತ್ತಿದ್ದ ಮುಖ್ಯಮಂತ್ರಿಗಳು, ಪಕ್ಷದ ಹೈಕಮಾಂಡ್ ಸೂಚನೆ ನೀಡಿದೆ ಎಂದು, ಇದೀಗ ಹೊಸದಾಗಿ ಮತ್ತೆ ಜಾತಿ, ಜನಗಣತಿ ನಡೆಸಲು ಮುಂದಾಗಿದೆ ಎಂದು ಯದುವೀರ್ ಅಸಮಾಧಾನ ವ್ಯಕ್ತಪಡಿಸಿದರು.

ಜಾತಿ ಜನಗಣತಿ ವರದಿ ದೋಷಪೂರಿತವಾಗಿದೆ ಎಂದು ಬಿಜೆಪಿ ಈ ಹಿಂದೆ ಆರೋಪಿಸಿತ್ತು. ಆಗ ಕಾಂಗ್ರೆಸ್ ವರದಿಯನ್ನು ಸಮರ್ಥಿಸಿಕೊಂಡಿತ್ತು. ಆದರೆ, ಇದೀಗ ದೂರು ಬಂದ ಹಿನ್ನೆಲೆಯಲ್ಲಿ ಹಳೆ ವರದಿಯನ್ನು ಜಾರಿಗೊಳಿಸದೆ ಹೊಸದಾಗಿ ಗಣತಿ ನಡೆಸಲು ನಿರ್ಧರಿಸಿರುವುದು ರಾಜ್ಯ ಸರ್ಕಾರದ ನಡೆ ಹಾಸ್ಯಾಸ್ಪದವಾಗಿದೆ. ಈ ಹಿಂದೆ ಯಾವುದಾದರೂ ವಿವಾದ ಉಂಟಾದಾಗ ಜಾತಿ ಗಣತಿ ಎಂಬ ವರದಿಯ ಅಸ್ತ್ರವನ್ನು ಪ್ರಯೋಗಿಸುತ್ತಿದ್ದ ಮುಖ್ಯಮಂತ್ರಿಗಳು ಈ ಬಾರಿಯೂ ಆರ್‌ಸಿಬಿ ವಿಜಯೋತ್ಸವದ ಕಾಲ್ತುಳಿದ ಪ್ರಕರಣವನ್ನು ಮರೆಮಾಚಲು ಹೊಸದಾಗಿ ಜಾತಿ ಜನಗಣತಿ ಮಾಡುವ ಅಸ್ತ್ರ ಪ್ರಯೋಗಿಸಿದ್ದಾರೆ ಎಂದು ಹೇಳಿದರು.

ಕೇಂದ್ರ ಸರ್ಕಾರದಿಂದ ಗಣತಿ: ಈಗಾಗಲೇ ಕೇಂದ್ರ ಸರ್ಕಾರ ದೇಶದಾದ್ಯಂತ ಜಾತಿ ಜನಗಣತಿ ನಡೆಸಲು ಘೋಷಿಸಿ ಸಿದ್ಧತೆ ಮಾಡಿಕೊಳ್ಳುತ್ತಿದೆ. ಕೇಂದ್ರ ಸರ್ಕಾರವೇ ಗಣತಿಗೆ ಮುಂದಾಗಿರುವುದರಿಂದ ರಾಜ್ಯ ಸರ್ಕಾರ ಹೊಸದಾಗಿ ಜಾತಿ ಜನಗಣತಿ ನಡೆಸುವುದು ಸರಿಯಲ್ಲ. ಎರಡು ಬಾರಿ ನಡೆಸಿದ ಗಣತಿಯ ವರದಿ ಕಸದ ಬುಟ್ಟಿಗೆ ಹಾಕಿರುವುದರಿಂದ ಜಾತಿ ಗಣತಿಯ ಪ್ರಕ್ರಿಯೆ ನಡೆಸಲು ಕಾಂಗ್ರೆಸ್ ಸರ್ಕಾರಕ್ಕೆ ಯೋಗ್ಯತೆ ಹಾಗೂ ಸಾಮರ್ಥ್ಯವೂ ಇಲ್ಲ ಎನ್ನುವುದು ಸ್ಪಷ್ಟವಾಗಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಮೇಲೆ ಜನರಿಗೆ ವಿಶ್ವಾಸವಿದೆ. ಆ ಕಾರಣದಿಂದ ಕೇಂದ್ರ ನಡೆಸುವ ಜಾತಿ ಗಣತಿಯೊಂದೇ ಸಾಕು, ರಾಜ್ಯ ಸರ್ಕಾರ ನಡೆಸುವ ಗಣತಿ ಅವಶ್ಯತೆ ಇಲ್ಲ ಎಂದರು.

ರಾಜ್ಯದಲ್ಲಿ ಹೊಸದಾಗಿ ಜಾತಿಗಣತಿ ನಡೆಸುವ ತೀರ್ಮಾಣ ದೆಹಲಿಯಲ್ಲಾಗಿದೆ. ಕಾಂಗ್ರೆಸ್ ವರಿಷ್ಠರಾದ ರಾಹುಲ್ ಗಾಂಧಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ರಾಜ್ಯದಲ್ಲಿ ಜಾತಿ ಗಣತಿ ನಡೆಸುವುದನ್ನು ನಿರ್ಧರಿಸಿದ್ದಾರೆ. ಈ ಇಬ್ಬರಿಗೆ ಕರ್ನಾಟಕದ ಜನತೆ ಮತ ನೀಡಿ ಆಯ್ಕೆ ಮಾಡಿಲ್ಲ. ಆದರೂ, ಇವರಿಬ್ಬರು ರಾಜ್ಯ ಸರ್ಕಾರ ನಡೆಸುತ್ತಿರುವಂತೆ ಜಾತಿ ಗಣತಿ ಬಗ್ಗೆ ನಿರ್ಧಾರ ಪ್ರಕಟಿಸಿರುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು.

ರಾಜ್ಯ ಸರ್ಕಾರದಲ್ಲಿ ಹಣದ ಕೊರತೆ ಇದೆ. ಅಭಿವೃದ್ಧಿ ಕಾರ್ಯಕ್ಕೆ ಅನುದಾನ ನೀಡಲು ಆಗುತ್ತಿಲ್ಲ. ಮೈಸೂರಿನಲ್ಲಿ ಯಾವುದೇ ಅಭಿವೃದ್ಧಿ ಕಾಮಗಾರಿ ನಡೆಯುತ್ತಿಲ್ಲ. ಉಂಡುವಾಡಿ ಯೋಜನೆ ಆಗಿಲ್ಲ, ಬೆಳಗೊಳ–ಕುಶಾಲನಗರ ರೈಲ್ವೆ ಯೋಜನೆ ಸ್ಥಗಿತಗೊಂಡಿದೆ. ಮೈಸೂರು ವಿಮಾನ ನಿಲ್ದಾಣ ವಿಸ್ತರಣೆ ಸಂಬಂಧ ನೀರಾವರಿ ನಾಲೆ ಮತ್ತು ಹೈಟೆನ್ಷನ್ ವಿದ್ಯುತ್ ತಂತಿ ಸ್ಥಳಾಂತರಕ್ಕೆ 120 ಕೋಟಿ ರೂ. ಬೇಕಾಗಿದೆ. ಇದಕ್ಕೆ ಹಣ ನೀಡಲು ರಾಜ್ಯ ಸರ್ಕಾರದ ಬಳಿ ಹಣವಿಲ್ಲ ಎಂದು ಆರೋಪಿಸಿದರು.

ಬಿಜೆಪಿ ಹಿಂದುಳಿದ ಮೋರ್ಚಾ ರಾಜ್ಯಾಧ್ಯಕ್ಷ ರಘು ಆರ್.ಕೌಟಿಲ್ಯ ಮಾತನಾಡಿ, ಬೆಂಗಳೂರಲ್ಲಿ ಸಂಭವಿಸಿದ ಕಾಲ್ತುಳಿತ ಪ್ರಕರಣದಿಂದ ಜನರ ಗಮನ ಬೇರೆಡೆ ಸೆಳೆಯಲು ಮತ್ತೆ ಜಾತಿ ಜನಗಣತಿ ಮಾಡುವ ಅಸ್ತ್ರ ಪ್ರಯೋಗಿಸಲಾಗಿದೆ. ಈ ಪ್ರಕರಣದಲ್ಲಿ ಐವರು ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಿ, ಆರ್‌ಸಿಬಿ, ಕೆಎಸ್‌ಸಿಎ ವಿರುದ್ಧ ಗೂಬೆ ಕೂರಿಸಿ, ತಮ್ಮ ಮೇಲಿನ ಜವಾಬ್ದಾರಿಯಿಂದ ನುಣುಚಿಕೊಳ್ಳುವ ಪ್ರಯತ್ನ ಮಾಡಿದ್ದಾರೆ. ಕಾಲ್ತುಳಿತ ಪ್ರಕರಣದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಸರ್ಕಾರಕ್ಕೆ ದೊಡ್ಡ ಮಟ್ಟದಲ್ಲಿ ಮುಖಭಂಗವಾಗಿದೆ ಎಂದರು.

ಅಹಿಂದ ವರ್ಗಕ್ಕೆ ನ್ಯಾಯ ಒದಗಿಸಲು ಜಾತಿ ಜನಗಣತಿ ವರದಿ ಜಾರಿಗೊಳಿಸುವುದಾಗಿ ಹೇಳಿಕೊಂಡು ಬಂದಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇದೀಗ ಕಾಂತರಾಜು ಹಾಗೂ ಜಯಪ್ರಕಾಶ್ ಹೆಗ್ಡೆ ವರದಿಯನ್ನು ಬೀಸಾಡುವ ಮೂಲಕ ಅಹಿಂದ ವರ್ಗಕ್ಕೆ ಅನ್ಯಾಯ ಮಾಡಿದೆ. ರಾಜ್ಯ ಬಿಜೆಪಿ ವತಿಯಿಂದ ಈ ಹಿಂದೆ ರಾಜ್ಯ ಸರ್ಕಾರದ ಜಾತಿ, ಜನಗಣತಿ ವರದಿ ಅವೈಜ್ಞಾನಿಕವಾಗಿದೆ ಎಂದು ಪ್ರತಿಭಟನೆ ನಡೆಸಲಾಗಿತ್ತು. ದೋಷ ಸರಿಪಡಿಸುವಂತೆ ಆಗ್ರಹಿಸಲಾಗಿತ್ತು. ಆ ವೇಳೆ ಜಾತಿ ಜನಗಣತಿ ಸರಿಯಾಗಿದೆ, ಯಾವುದೇ ದೋಷವಿಲ್ಲ ಎಂದು ಕಾಂಗ್ರೆಸ್ ಪ್ರತಿಪಾದಿಸಿತ್ತು. ಆದರೆ ಇದೀಗ ರಾಜ್ಯ ಸರ್ಕಾರವೇ ವರದಿಯಲ್ಲಿ ದೋಷವಿದೆ ಎಂದು ಒಪ್ಪಿಕೊಂಡಿದೆ ಎಂದು ಕಿಡಿಕಾರಿದರು.

ರಾಜ್ಯದಲ್ಲಿ ಆರಂಭಿಸಿರುವ ಪರಿಶಿಷ್ಟ ಜಾತಿಯ ಸಮೀಕ್ಷೆ ಮುಗಿದಿಲ್ಲ. ಈಗಾಗಲೇ ಶಾಲಾ–ಕಾಲೇಜು ತರಗತಿ ಆರಂಭವಾಗಿದೆ. ಶಿಕ್ಷಕರು ಪಾಠ ಮಾಡಲು ಆರಂಭಿಸಿದ್ದಾರೆ. ಹೀಗಿರುವಾಗ ಮತ್ತೆ 95 ದಿನಗಳಲ್ಲಿ ಜಾತಿಗಣತಿ ಪೂರ್ಣಗೊಳಿಸಲು ಸಾಧ್ಯವೇ? ಮ್ಯಾಜಿಕ್ ಮಾಡಿ ಜಾತಿ ಜನಗಣತಿ ಮಾಡಲು ಸರ್ಕಾರ ಮುಂದಾಗಿದೆ ಎಂದು ಲೇವಡಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಮುಖಂಡರಾದ ಹೆಚ್.ಜಿ.ಗಿರಿಧರ್, ಕೇಬಲ್ ಮಹೇಶ್, ಮಹೇಶ್‌ರಾಜೇ ಅರಸ್ ಉಪಸ್ಥಿತರಿದ್ದರು.

ಸರೋದ್ ವಾದಕ ಪಂಡಿತ್ ರಾಜೀವ್ ತಾರಾನಾಥ್ ಮೊದಲ ವರ್ಷದ ಸ್ಮರಣಾರ್ಥ

ಮೈಸೂರಲ್ಲಿ 'ಸರೋದ್ ಸ್ವರಯಾನ' ಕೃತಿ ಲೋಕಾರ್ಪಣೆ



ಮೈಸೂರಿನ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾನಿಲಯದ ವತಿಯಿಂದ ವಿವಿಯ ಆವರಣದಲ್ಲಿರುವ ಕೆಎಸ್‌ಜಿಹೆಚ್ ಸಭಾಂಗಣದಲ್ಲಿ ಖ್ಯಾತ ಸರೋದ್ ವಾದಕ ಪಂಡಿತ್ ರಾಜೀವ್ ತಾರಾನಾಥ್ ಮೊದಲ ವರ್ಷದ ನೆನಪಿನಾರ್ಥ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಗಣೇಶ್ ಅಮೀನಗಡ, ರಘುಪತಿ ತಾಮ್ಹನ್‌ಕರ್ ಸಂಪಾದನೆಯ ಸರೋದ್ ಸ್ವರಯಾನ ಕೃತಿಯ ಮೂರನೇ ಮುದ್ರಣವನ್ನು ಸಿತಾರ್ ವಾದಕಿ ಸಿ.ಎಸ್.ಸರ್ವಮಂಗಳ ಲೋಕಾರ್ಪಣೆಗೊಳಿಸಿದರು.

ಮೈಸೂರು, ಜೂ.11(ಜಿಎ)–ಮೈಸೂರಿನ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾನಿಲಯದ ವತಿಯಿಂದ ವಿವಿಯ ಆವರಣದಲ್ಲಿರುವ ಕೆಎಸ್‌ಜಿಹೆಚ್ ಸಭಾಂಗಣದಲ್ಲಿ ಖ್ಯಾತ ಸರೋದ್ ವಾದಕ ಪಂಡಿತ್ ರಾಜೀವ್ ತಾರಾನಾಥ್ ಮೊದಲ ವರ್ಷದ ನೆನಪಿನಾರ್ಥ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಗಣೇಶ್ ಅಮೀನಗಡ, ರಘುಪತಿ ತಾಮ್ಹನ್‌ಕರ್ ಸಂಪಾದನೆಯ ಸರೋದ್ ಸ್ವರಯಾನ ಕೃತಿಯ ಮೂರನೆಯ ಮುದ್ರಣವನ್ನು ಸಿತಾರ್ ವಾದಕಿ ಸಿ.ಎಸ್. ಸರ್ವಮಂಗಳ ಲೋಕಾರ್ಪಣೆಗೊಳಿಸಿದರು.

ನಂತರ ಮಾತನಾಡಿದ ಅವರು, ಸಾಹಿತ್ಯ ಮತ್ತು ಸಂಗೀತಕ್ಕಾಗಿ ಪಂ.ರಾಜೀವ ತಾರಾನಾಥ್ ಅವರ ಮನಸ್ಸು ಸೇತುವೆ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿತ್ತು. ಸಂಗೀತದ ಸೂಕ್ಷ್ಮ ವಿಷಯಗಳನ್ನು ಗ್ರಹಿಸುವ ಮೂಲಕ ಸಂಗೀತವನ್ನು ಅನುಭವಿಸಿ ಸಾಹಿತ್ಯದ ಓದಿಗೆ ತೆರೆದುಕೊಂಡು ಪಂ.ರಾಜೀವ ತಾರಾನಾಥ ಅವರು ಸಂಗೀತವನ್ನೇ ಉಸಿರಾಗಿಸಿಕೊಂಡು ಬದುಕಿದರು ಎಂದು ತಿಳಿಸಿದರು.

ಪಂ.ರಾಜೀವ ತಾರಾನಾಥ ಸಂಗೀತವನ್ನು ಉಳಿಸಿ ಬೆಳೆಸಿ ಮುಂದಿನ ತಲೆಮಾರಿಗೂ ತಲುಪಿಸಬೇಕೆಂದು ಜೀವಿಸಿದವರು. ಇದಕ್ಕಾಗಿಯೇ ಜೀವನದ ಪ್ರತಿಕ್ಷಣವನ್ನು ಮುಡುಪಾಗಿಟ್ಟಿದ್ದರು. ಪಂ.ರಾಜೀವ ತಾರಾನಾಥ ಅವರ ಹತ್ತಿರವಿದ್ದವರು, ಅವರಿಂದ ಬೆಳೆದವರು ಹಾಗೂ ಅವರಿಂದ ಪ್ರಭಾವಿತರಾದವರು ಇಂದು ಖಾಲಿತನವನ್ನು ಅನುಭವಿಸುತ್ತಿದ್ದಾರೆ ಎಂದರು.

ಪಂ.ರಾಜೀವ ತಾರಾನಾಥ ಅವರ ಕಣ್ಮರೆಯಿಂದ ಮೈಸೂರಿನಲ್ಲಿ ದೊಡ್ಡ ಬೆಳಕು ಕಣ್ಮರೆಯಾದಂತಾಗಿದೆ. ಸಂಗೀತ ಲೋಕಕ್ಕೆ ದೊಡ್ಡ ನಷ್ಟವಾಗಿದೆ. ಕಾರಣ ನಮ್ಮ ಸುತ್ತಮುತ್ತ ನೋಡಿದಾಗಲೆಲ್ಲಾ ಅವ ರಂತಹ ಚಿಂತನ ಶೀಲಾ ಮನಸ್ಸಿನ ಸಂಗೀತದ ಗಣಿಯಾಗಿದ್ದರು. ಜನಪರವಾದ ಕಾಳಜಿಯನ್ನು ಇಟ್ಟುಕೊಂಡು ಜೀವಿಸುತ್ತಿರುವ ಕಲಾವಿದರಾಗಿದ್ದರು ಎಂದು ತಿಳಿಸಿದರು.

ಪಂಡಿತ್ ರಾಜೀವ ತಾರಾನಾಥ ಅವರ ಬಗ್ಗೆ ಬರುವ ಕೃತಿಗಳನ್ನು ತೆಗೆದುಕೊಂಡು ವಿದ್ಯಾರ್ಥಿಗಳು ಓದಬೇಕು. ಇದರಿಂದ ಅವರ ಬದುಕು, ವಿಚಾರಗಳನ್ನು ಹೊರತುಪಡಿಸಿ ಸಂಗೀತದ ಹಾಗೂ ಸಂಗೀತದ ಪರಂಪರೆ ಬಗ್ಗೆ ತಿಳಿದುಕೊಳ್ಳಬಹುದು. ಇದರಿಂದ ವಿದ್ಯಾರ್ಥಿಗಳ ಮುಂದಿನ ಸಂಗೀತದ ಪಯಣದಲ್ಲಿ ದೊಡ್ಡ ಬೆಳಕಿನ ಹಾದಿ ಸಿಗುವ ಸಾಧ್ಯತೆಗಳಿರುತ್ತದೆ ಎಂದರು.

ಪಂ.ರಾಜೀವ ತಾರಾನಾಥ ಅವರಿಗೆ ಬಾಲ್ಯದಿಂದಲೇ ಗಾಯನ ಪಾಠವಾಗಿತ್ತು. ಅವರು ಸರೋದ್ ವಾದಕರಾಗದಿದ್ದರೆ ದೊಡ್ಡ ಸಂಗೀತಗಾರರಾಗುತ್ತಿದ್ದರು. ಅವರು ತಬಲವನ್ನು ಕಲಿತಿದ್ದರು. ಹೀಗಾಗಿ ವಿದ್ಯಾರ್ಥಿಗಳು ಇವರ ಬಗ್ಗೆ ಹೆಚ್ಚು ಅಧ್ಯಯನ ಮಾಡಬೇಕು. ಇಂದಿಗೂ ಅವರನ್ನು ಯಾರೂ ಮರೆತಿಲ್ಲ. ಅವರ ವಿದ್ಯಾರ್ಥಿಗಳು, ಶಿಷ್ಯರು ಅವರನ್ನು ಇಂದಿಗೂ ಸ್ಮರಿಸುತ್ತಾರೆ ಎಂದರು.

ಕಾರ್ಯಕ್ರಮದಲ್ಲಿ ಹಿರಿಯ ರಂಗಕರ್ಮಿ ಕಪ್ಪಣ್ಣ, ಕೃತಿ ಸಂಪಾದಕರಾದ ಗಣೇಶ ಅಮೀನಗಡ, ರಘುಪತಿ ತಾಮ್ಹನ್‌ಕರ್, ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾನಿಲಯದ ಕುಲಪತಿ ಡಾ. ನಾಗೇಶ್ ವಿ.ಬೆಟ್ಟಕೋಟೆ, ಕುಲಸಚಿವ (ಮೌಲ್ಯಮಾಪನ) ಪ್ರೊ.ಎಂ.ಜಿ.ಮಂಜುನಾಥ್ ಇನ್ನಿತರರು ಉಪಸ್ಥಿತರಿದ್ದರು.

ದೇಶ – ವಿದೇಶ

ನಿರ್ಗಮನ ಪರವಾನಗಿ ಇಲ್ಲದೇ ಪ್ರಯಾಣ ನಿಷಿದ್ಧ; ವಲಸೆ ಕಾರ್ಮಿಕರಿಗಾಗಿ ಹೊಸ ನಿಯಮ ಜಾರಿ ಮಾಡಿದ ಕುವೈತ್



ಕುವೈತ್: ಮಹತ್ವದ ಬೆಳವಣಿಗೆಯೊಂದರಲ್ಲಿ ಖಾಸಗಿ ವಲಯದಲ್ಲಿರುವ ವಲಸಿಗ ಕಾರ್ಮಿಕರು ತಮ್ಮ ವಿದೇಶ ಪ್ರಯಾಣಕ್ಕೂ ಮೊದಲು ನೋಂದಾಯಿತ ಉದ್ಯೋಗದಾತರಿಂದ ಅಧಿಕೃತ ನಿರ್ಗಮನ ಪರವಾನಗಿಯನ್ನು ಪಡೆಯಬೇಕು ಎಂಬ ಹೊಸ ನಿಯಮವನ್ನು ಕುವೈತ್ ಸರ್ಕಾರ ಜಾರಿಗೊಳಿಸಿದೆ. ಮುಂದಿನ ತಿಂಗಳು ಅಂದರೆ ಜುಲೈ ಆರಂಭದಿಂದ ಈ ಹೊಸ ನಿಯಮ ಜಾರಿಗೆ ಬರಲಿದ್ದು, ಈ ಕ್ರಮವನ್ನು ಕಾರ್ಮಿಕರು ಮತ್ತು ಉದ್ಯೋಗದಾತರ ಹಕ್ಕುಗಳನ್ನು ರಕ್ಷಿಸುವಾಗ ವಲಸಿಗರ ಚಲನಶೀಲತೆಯ ಮೇಲ್ವಿಚಾರಣೆ ಬಲಪಡಿಸುವ ಪ್ರಯತ್ನಗಳ ಭಾಗ ಎಂದು ಕುವೈತ್ ಸರ್ಕಾರ ಹೇಳಿದೆ. ಈ ಕುರಿತು ಮಾಹಿತಿ ನೀಡಿರುವ ಕುವೈತ್ ಉಪ ಪ್ರಧಾನಿ ಮತ್ತು ಆಂತರಿಕ ಸಚಿವ ಶೇಖ್ ಫಹಾದ್ ಅಲ್–ಯೂಸೆಫ್, ಎಲ್ಲಾ ವಲಸಿಗ ಕಾರ್ಮಿಕರು ದೇಶವನ್ನು ತೊರೆಯುವ ಮೊದಲು ನಿರ್ಗಮನ ಪರವಾನಗಿಯನ್ನು ಪಡೆಯುವುದನ್ನು ಕಡ್ಡಾಯಗೊಳಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಪತ್ನಿ ಕೊಂದು, ಅದೇ ಚಾಕುವಿನಿಂದ ತಾನೇ ಚುಚ್ಚಿಕೊಂಡು ಪಾಕ್ ಪ್ರಜೆ ಸಾವು



ನವಿ ಮುಂಬೈ: 45 ವಯಸ್ಸಿನ ಪಾಕಿಸ್ತಾನಿ ಪ್ರಜೆಯೊಬ್ಬ ತನ್ನ 35 ವರ್ಷದ ಪತ್ನಿಯನ್ನು ಅಡುಗೆ ಮನೆಯಲ್ಲಿದ್ದ ಚಾಕುವಿನಿಂದ ಹಲವು ಬಾರಿ ಇರಿದು ಹತ್ಯೆ ಮಾಡಿದ್ದಾನೆ. ಬಳಿಕ ಅದೇ ಚಾಕುವಿನಿಂದ ತನ್ನ ಕುತ್ತಿಗೆಗೆ ತಾನೇ ಚುಚ್ಚಿಕೊಂಡು ಸಾವನ್ನಪ್ಪಿರುವ ಘಟನೆ ನವಿ ಮುಂಬೈನ ಖಾರ್ಘರ್ ನೋಡ್‌ನಲ್ಲಿರುವ ಫ್ಲಾಟ್‌ವೊಂದರಲ್ಲಿ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಮೃತಪಟ್ಟ ಪಾಕಿಸ್ತಾನಿ ದಂಪತಿಗಳನ್ನು ನೋಟಂದಾಸ್ ಅಲಿಯಾಸ್ ಸಂಜಯ್ ಸಚ್‌ದೇವ್ ಮತ್ತು ಅವರ ಪತ್ನಿ ಸಪ್ನಾ ನೋಟಂಡಾಸ್ ಎಂದು ಗುರುತಿಸಲಾಗಿದೆ. ಅವರಿಬ್ಬರೂ ದೀರ್ಘಾವಧಿಯ ವೀಸಾದಲ್ಲಿದ್ದರು ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಮೃತ ಮಹಿಳೆಯ ಸಹೋದರಿ ಸೋಮವಾರ ಫ್ಲಾಟ್‌ಗೆ ಭೇಟಿ ನೀಡಿದಾಗ ದಂಪತಿ ರಕ್ತದ ಮಡುವಿನಲ್ಲಿ ಬಿದ್ದಿರುವುದು ಕಂಡುಬಂದಿದೆ. ಸಪ್ನಾ ನೋಟಂಡಾಸ್ ಸ್ಥಳದಲ್ಲಿಯೇ ಮೃತಪಟ್ಟರೆ, ಆಕೆ ಪತಿಗೆ ಚಿಕಿತ್ಸೆ ನೀಡುವಾಗ ಮೃತಪಟ್ಟಿರುವುದಾಗಿ ವೈದ್ಯರು ಘೋಷಿಸಿದ್ದಾರೆ ಎಂದು ಉಪ ಪೊಲೀಸ್ ಆಯುಕ್ತ ಪ್ರಶಾಂತ್ ಮೋಹಿತೆ ತಿಳಿಸಿದ್ದಾರೆ.

ಚೀನಾ ಮೇಲಿನ ರಫ್ತು ನಿರ್ಬಂಧ ಹಿಂಪಡೆಯಲು ಅಮೆರಿಕ ಷರತ್ತುಬದ್ಧ ಒಪ್ಪಿಗೆ



ಲಂಡನ್: ಅಮೆರಿಕ ಮತ್ತು ಚೀನಾ ನಡುವಿನ ವಾಣಿಜ್ಯ ಮುಖಾಮುಖಿ ಬಿಸಿ ವಾತಾವರಣ ತಣ್ಣಗಾಗುವ ಲಕ್ಷಣ ಗೋಚರವಾಗುತ್ತಿದೆ. ಉಭಯ ರಾಷ್ಟ್ರಗಳ ವಾಣಿಜ್ಯ ಇಲಾಖೆ ಅಧಿಕಾರಿಗಳು ತಮ್ಮ ವ್ಯಾಪಾರ ಒಪ್ಪಂದವನ್ನು ಮತ್ತೆ ಹಳಿಗೆ ತರಲು ಒಪ್ಪಿಕೊಂಡಿದ್ದಾರೆ.

ಲಂಡನ್‌ನಲ್ಲಿ ಎರಡು ದಿನಗಳ ಕಾಲ ನಡೆದ ಅಮೆರಿಕ ಮತ್ತು ಚೀನಾ ವಾಣಿಜ್ಯ ಅಧಿಕಾರಿಗಳ ಸಭೆಯಲ್ಲಿ ಚೀನಾ ಮೇಲಿನ ರಫ್ತು ನಿರ್ಬಂಧಗಳನ್ನು ತೆಗೆದುಹಾಕಲು ಅಮೆರಿಕ ಷರತ್ತುಬದ್ಧ ಒಪ್ಪಿಗೆ ಸೂಚಿಸಿದೆ. ಈ ಕುರಿತು ಮಾಹಿತಿ ನೀಡಿರುವ ಅಮೆರಿಕದ ವಾಣಿಜ್ಯ ಕಾರ್ಯದರ್ಶಿ ಹೊವಾರ್ಡ್ ಲುಟ್ನಿಕ್, ಈ ಚೌಕಟ್ಟಿನ ಒಪ್ಪಂದವು ಕಳೆದ ತಿಂಗಳು ಜಿನೀವಾದಲ್ಲಿ ನಡೆದ ಒಪ್ಪಂದದ ಮುಂದುವರೆದ ಭಾಗವಾಗಿದೆ. ಇದು ಮೂರಂಕಿ ಮಟ್ಟವನ್ನು ತಲುಪಿದ್ದ ದ್ವಿಪಕ್ಷೀಯ ಪ್ರತೀಕಾರದ ಸುಂಕಗಳನ್ನು ಕಡಿತಗೊಳಿಸಲು ದಾರಿ ಮಾಡಿಕೊಟ್ಟಿದೆ ಎಂದು ಹೇಳಿದ್ದಾರೆ.

ಮಾಜಿ ಸಿಎಂ ದಿಗ್ವಿಜಯ್‌ಸಿಂಗ್ ಸಹೋದರ, ಲಕ್ಷ್ಮಣ್‌ಸಿಂಗ್ ಕಾಂಗ್ರೆಸ್‌ನಿಂದ ಉಚ್ಚಾಟನೆ



ನವದೆಹಲಿ: ಪಕ್ಷ ವಿರೋಧಿ ಚಟುವಟಿಕೆ ಆರೋಪದ ಮೇಲೆ ಮಧ್ಯಪ್ರದೇಶ ಮಾಜಿ ಶಾಸಕ ಲಕ್ಷ್ಮಣ್‌ಸಿಂಗ್ ಅವರನ್ನು ಕಾಂಗ್ರೆಸ್ ಆರು ವರ್ಷಗಳ ಕಾಲ ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ ಉಚ್ಚಾಟನೆ ಮಾಡಿದೆ. ಲಕ್ಷ್ಮಣ್ ಸಿಂಗ್ ಅವರು ಹಿರಿಯ ಕಾಂಗ್ರೆಸ್ ನಾಯಕ ಮತ್ತು ಮಧ್ಯಪ್ರದೇಶ ಮಾಜಿ ಮುಖ್ಯಮಂತ್ರಿ ದಿಗ್ವಿಜಯಸಿಂಗ್ ಅವರ ಸಹೋದರ. ಪಕ್ಷ ವಿರೋಧಿ ಚಟುವಟಿಕೆಗಳಿಂದಾಗಿ ತಕ್ಷಣದಿಂದ ಜಾರಿಗೆ ಬರುವಂತೆ ಮಧ್ಯಪ್ರದೇಶದ ಮಾಜಿ ಶಾಸಕ ಲಕ್ಷ್ಮಣ್ ಸಿಂಗ್ ಅವರನ್ನು ಕಾಂಗ್ರೆಸ್ ಅಧ್ಯಕ್ಷರು ಆರು ವರ್ಷಗಳ ಅವಧಿಗೆ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್‌ನ ಪ್ರಾಥಮಿಕ ಸದಸ್ಯತ್ವದಿಂದ ಉಚ್ಚಾಟನೆ ಮಾಡಿದ್ದಾರೆ ಎಂದು ಕಾಂಗ್ರೆಸ್ ಶಿಸ್ತು ಕ್ರಿಯಾ ಸಮಿತಿ ಸದಸ್ಯ ಕಾರ್ಯದರ್ಶಿ ತಾರಿಕ್ ಅನ್ವರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಪಕ್ಷ ವಿರೋಧಿ ಚಟುವಟಿಕೆಗಳಿಗಾಗಿ ಸಿಂಗ್ ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ರಾಜ್ಯ ಪಿಸಿಸಿ, ಕಾಂಗ್ರೆಸ್ ಹೈಕಮಾಂಡ್‌ಗೆ ಶಿಫಾರಸು ಮಾಡಿ, ಈ ವಿಷಯವನ್ನು ಎಐಸಿಸಿಯ ಶಿಸ್ತು ಕ್ರಿಯಾ ಸಮಿತಿಗೆ ಕಳುಹಿಸಿತ್ತು.

ಲಾಸ್ ಏಂಜಲಿಸ್ ಆಯ್ತು, ಈಗ ಶಿಕಾಗೋದಲ್ಲಿ ವಲಸೆ ಶೋಧ ಕಾರ್ಯ ವಿರೋಧಿ ಪ್ರತಿಭಟನೆ



ಶಿಕಾಗೋ: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ವಲಸೆ ನೀತಿ ಮತ್ತು ವಲಸೆ ಅಧಿಕಾರಿಗಳ ಶೋಧ ಕಾರ್ಯ ವಿರೋಧಿಸಿ, ಅಮೆರಿಕದ ಲಾಸ್ ಏಂಜಲಿಸ್‌ನಲ್ಲಿ ನಡೆಯುತ್ತಿರುವ ಹಿಂಸಾತ್ಮಕ ಪ್ರತಿಭಟನೆ 5ನೇ ದಿನಕ್ಕೆ ಕಾಲಿಟ್ಟಿದೆ. ಈ ಮಧ್ಯೆ ಶಿಕಾಗೋದಲ್ಲೂ ವಲಸೆ ಶೋಧಕಾರ್ಯ ವಿರೋಧಿಸಿ ಪ್ರತಿಭಟನೆಗಳು ಭುಗಿಲೆದ್ದಿವೆ. ಡೊನಾಲ್ಡ್ ಟ್ರಂಪ್ ಆಡಳಿತದ ಅಡಿಯಲ್ಲಿ ವಲಸೆ ದಾಳಿಗಳು ಮುಂದುವರೆದಂತೆ ಶಿಕಾಗೋ ಕೂಡ ಫೆಡರಲ್ ದಮನವನ್ನು ಪ್ರತಿಭಟಿಸುವ ನಗರಗಳ ಅಲೆಯನ್ನು ಸೇರಿಕೊಂಡಿದೆ. ನಿನ್ನೆ (ಜೂ.10) ICEಯ ರಾಷ್ಟ್ರವ್ಯಾಪಿ ಕ್ರಮಗಳನ್ನು ವಿರೋಧಿಸಲು, 1,000ಕ್ಕೂ ಹೆಚ್ಚು ಪ್ರತಿಭಟನಾಕಾರರು ಶಿಕಾಗೋದಲ್ಲಿ ಪ್ರದರ್ಶನ ನಡೆಸಿದ್ದಾರೆ. ಶಿಕಾಗೋ ನಗರದ ಪೂರ್ವ ಆಡಮ್ಸ್ ಸ್ಟ್ರೀಟ್‌ನಲ್ಲಿರುವ ವಲಸೆ ನ್ಯಾಯಾಲಯದ ಹೊರಗೆ ICE ದಾಳಿಗಳ ವಿರುದ್ಧ ಪ್ರತಿಭಟನೆ ಆರಂಭವಾಗಿದೆ. ಬಳಿಕ ಫೆಡರಲ್ ಪ್ಲಾಜಾದಲ್ಲಿ ಎರಡನೇಯ ಗುಂಪು ಪ್ರತಿಭಟನೆ ನಡೆಸಿದೆ. ನಂತರ ಎರಡೂ ಗುಂಪುಗಳು ಒಂದಾಗಿ, ನಗರದ ಮಧ್ಯಭಾಗದ ಮೂಲಕ ಮೆರವಣಿಗೆ ನಡೆಸಿ, ಲೇಕ್ ಶೋರ್ ಡ್ರೈವ್‌ನ ಕೆಲವು ಭಾಗಗಳನ್ನು ಬಂದ್ ಮಾಡಿ ಪ್ರತಿರೋಧದ ದಿಟ್ಟ ಪ್ರದರ್ಶನ ಹಮ್ಮಿಕೊಂಡವು.

ಹೊಸತನದತ್ತ ಕೊಂಡೊಯ್ಯುವುದೇ ವಿಕಸಿತ ಭಾರತದ ಪರಿಕಲ್ಪನೆ: ಯದುವೀರ್



ಸಂಸದ ಯದುವೀರ್ ಶಾಲಾ ವಿದ್ಯಾರ್ಥಿಗಳಿಗೆ ಪುಸ್ತಕಗಳನ್ನು ವಿತರಿಸಿದರು.

ಮಡಿಕೇರಿ, ಜೂ.11– ವಿಕಸಿತ ಭಾರತದ ಪರಿಕಲ್ಪನೆಯ ಸಾಕಾರಕ್ಕಾಗಿ ಶಿಕ್ಷಣ ಪದ್ಧತಿಯನ್ನು ಅಮೂಲಾಗ್ರವಾಗಿ ಹೊಸತನದತ್ತ ಕೊಂಡೊಯ್ಯುವುದು ನಮ್ಮ ಆದ್ಯತೆಯಾಗಿದೆ ಎಂದು ಸಂಸದ ಯದುವೀರ್ ಹೇಳಿದರು.

ಸ್ಥಳೀಯ ಸರ್ಕಾರಿ ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳ ಹಳೆಯ ವಿದ್ಯಾರ್ಥಿಗಳ ವತಿಯಿಂದ ಸುಂಟಿಕೊಪ್ಪದಲ್ಲಿ ಆಯೋಜಿಸಲಾಗಿದ್ದ ವ್ಯಕ್ತಿತ್ವ ವಿಕಸನ, ಗೌರವ ಸಮರ್ಪಣೆ ಹಾಗೂ ಪುಸ್ತಕ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರಸ್ತುತ ವಿದ್ಯಾರ್ಥಿಗಳು ಅಮೃತ ಕಾಲದ ಪೀಳಿಗೆಯವರಾಗಿದ್ದು ಹೊಸತನ ಮತ್ತು ಬದಲಾವಣೆಗಳಿಗೆ ತಮ್ಮನ್ನು ತೆರೆದುಕೊಂಡು ಶಿಕ್ಷಣ ವ್ಯವಸ್ಥೆಯನ್ನು ಸದುಪಯೋಗ ಪಡಿಸಿಕೊಂಡು ಭವ್ಯ ಭಾರತದ ಸತ್ಪ್ರಜೆಗಳಾಗಿ ಬಾಳಬೇಕೆಂದು ಕರೆ ನೀಡಿದರು.

ಪ್ರಸ್ತುತ ಶಾಲಾ ಮೈದಾನಕ್ಕೆ ಬೇಲಿ ಮತ್ತು ಕ್ರೀಡಾಂಗಣವನ್ನು ಸಂಪೂರ್ಣವಾಗಿ ದುರಸ್ತಿ ಗೊಳಿಸಬೇಕು. ಈ ಬಾರಿ ಬೇಲಿ ಅಥವಾ ಕ್ರೀಡಾಂಗಣ ಯಾವುದನ್ನು ಮೊದಲು ಮಾಡಬೇಕು ಎಂಬುದನ್ನು ನಿರ್ಧರಿಸಿದರೆ ಅನುದಾನ ಒದಗಿಸುವುದಾಗಿ ಭರವಸೆ ನೀಡಿದರು.

ಶಾಲಾ ಶಿಕ್ಷಣ ಇಲಾಖೆಯ ಜಿಲ್ಲಾ ಉಪ ನಿರ್ದೇಶಕ(ಅಭಿವೃದ್ಧಿ) ಸಿ.ರಂಗಧಾಮಪ್ಪ ಮಾತನಾಡಿದರು. ಹೆಸರಾಂತ ವಾಗ್ಮಿ ಬೆಂಗಳೂರಿನ ನಿಖಿತ್ ರಾಜ್ ಮೌರ್ಯ ಮಾತನಾಡಿ, ಬಡತನ, ಸಮಸ್ಯೆ ಎಷ್ಟೇ ಇದ್ದರೂ ಸಾಧನೆಯ ಕನಸು ಬಿಡಬಾರದು. ಪೋಷಕರು ಮತ್ತು ಶಿಕ್ಷಕರು ಮಕ್ಕಳಲ್ಲಿ ಆತ್ಮವಿಶ್ವಾಸ ಬೆಳೆಸಬೇಕಾಗಿದೆ ಎಂದರು.

ಇದೇ ವೇಳೆ ಸಂಸದರಾದ ಯದುವೀರ್ ಹಾಗೂ ಶಾಲೆಯ ಅಭಿವೃದ್ಧಿಗೆ ಸಹಕರಿಸಿದ ದಾನಿಗಳನ್ನು ಗೌರವಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸುಂಟಿಕೊಪ್ಪ ಗ್ರಾಪಂ ಅಧ್ಯಕ್ಷ ಪಿ.ಆರ್.ಸುನಿಲ್ ಕುಮಾರ್, ಗ್ರಾಪಂ ಉಪಾಧ್ಯಕ್ಷೆ ಶಿವಮ್ಮ, ಕಾಫಿ ಬೆಳೆಗಾರ ಆನಂದ ಬಸಪ್ಪ, ಎಸ್.ಎಲ್.ಎನ್ ಸಮೂಹ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಎನ್.ವಿಶ್ವನಾಥನ್, ಶಾಂತಿಗೇರಿ ತೋಟದ ಮಾಲೀಕ ಸುಂದರಂ ರಾಮಸ್ವಾಮಿ, ಮೋದೂರು ತೋಟದ ಮಾಲೀಕ ಬಿ.ಎಸ್. ನಕುಲ್ ಪೂಣಚ್ಚ, ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರ ಎ.ಲೋಕೇಶ್ ಕುಮಾರ್ ಮತ್ತಿತರರು ಹಾಜರಿದ್ದರು.

ಅಧಿಕಾರಿಗಳ ಭರವಸೆ : ಕಾರ್ಮಿಕರ ಸಂಘದ ಪ್ರತಿಭಟನೆ ಅಂತ್ಯ



46 ದಿನಗಳಿಂದ ನಡೆಯುತ್ತಿದ್ದ ಅಹೋರಾತ್ರಿ ಪ್ರತಿಭಟನೆ ಅಧಿಕಾರಿಗಳ ಭರವಸೆ ಮೇರೆಗೆ ಅಂತ್ಯಗೊಂಡಿದೆ.

ಸಿದ್ದಾಪುರ,ಜೂ.11– ಸೂರಿಗಾಗಿ ಆಗ್ರಹಿಸಿ ಬಹುಜನ ಕಾರ್ಮಿಕರ ಸಂಘ, ಭೂಮಿ ಮತ್ತು ವಸತಿ ಹೋರಾಟ ಸಮಿತಿ ನೇತೃತ್ವದಲ್ಲಿ ಅಮ್ಮತ್ತಿಯ ನಾಡ ಕಚೇರಿ ಮುಂಭಾಗ ಕಳೆದ 46 ದಿನಗಳಿಂದ ನಡೆಯುತ್ತಿದ್ದ ಅಹೋರಾತ್ರಿ ಪ್ರತಿಭಟನೆ ಅಧಿಕಾರಿಗಳ ಭರವಸೆ ಮೇರೆಗೆ ಅಂತ್ಯ ಕಂಡಿದೆ.

ವಿರಾಜಪೇಟೆ ತಾಲೂಕು ತಹಶೀಲ್ದಾರ್ ಅನಂತ ಶಂಕರ್ ಹಾಗೂ ತಾಪಂ ಕಾರ್ಯನಿರ್ವಹಣಾಧಿಕಾರಿ ಕೋಣಿಯಂಡ ಅಪ್ಪಣ್ಣ ಅವರುಗಳು ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ, ಧರಣಿ ನಿರತರ ಅಹವಾಲು ಆಲಿಸಿದರು. ಕೆದಮುಳ್ಳೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗುರುತಿಸಲ್ಪಟ್ಟ ಜಾಗದಲ್ಲಿ ಮೂಲ ಸೌಕರ್ಯಗಳು ಕಲ್ಪಿಸಿ ನಿವೇಶನ ಒದಗಿಸಬೇಕಿದ್ದು ಈ ಹಿನ್ನೆಲೆಯಲ್ಲಿ ಧರಣಿಯನ್ನು ಕೈಬಿಡುವಂತೆ ಮನವಿ ಮಾಡಿದರು. ಮೂರು ತಿಂಗಳ ಒಳಗೆ ನಿವೇಶನ ವಿತರಿಸುವ ಅಧಿಕಾರಿಗಳ ಭರವಸೆ ಮೇರೆಗೆ ಹೋರಾಟಗಾರರು ಪ್ರತಿಭಟನೆಯನ್ನು ಕೈಬಿಟ್ಟರು.

ಬಹುಜನ ಕಾರ್ಮಿಕ ಸಂಘಟನೆಯ ಜಿಲ್ಲಾಧ್ಯಕ್ಷ ಕೆ.ಮೊಣ್ಣಪ್ಪ ಮಾತನಾಡಿ ಕಾರ್ಯನಿರ್ವಹಣಾಧಿಕಾರಿ ಹಾಗೂ ತಹಶೀಲ್ದಾರ್ ಅವರ ಸಮ್ಮುಖದಲ್ಲಿ ಜಿಲ್ಲಾಧಿಕಾರಿಗಳು ಸಭೆ ನಡೆಸಿ ನಿರ್ದೇಶನ ನೀಡಿದ ಮೇರೆಗೆ ಪತ್ರದ ಮುಖಾಂತರ ಭರವಸೆಗಳನ್ನು ನೀಡಿದ್ದಾರೆ. ಮೂರು ತಿಂಗಳ ಕಾಲಮಿತಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಗುರುತಿಸಲ್ಪಟ್ಟ ಸ್ಥಳದಲ್ಲಿ ನಿವೇಶನ ನಿರ್ಮಿಸುವುದಾಗಿ ಭರವಸೆ ನೀಡಿದ ಹಿನ್ನೆಲೆಯಲ್ಲಿ ಪ್ರತಿಭಟನೆಯನ್ನು ಕೈಬಿಡಲಾಗಿದೆ ಎಂದರಲ್ಲದೇ, ತಪ್ಪಿದ್ದಲ್ಲಿ ಹೋರಾಟ ತೀವ್ರಗೊಳಿಸುವ ಎಚ್ಚರಿಕೆ ನೀಡಿದರು.

ಈ ಸಂದರ್ಭ ತಹಶೀಲ್ದಾರ್ ಅನಂತ ಶಂಕರ್ ಮಾತನಾಡಿ, ಕೆದಮುಳ್ಳೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸರ್ವೆ ನಂಬರ್ 350/1ರಲ್ಲಿ 5 ಎಕರೆ ತಾಲೂಕು ಪಂಚಾಯಿತಿ ಅಧೀನದಲ್ಲಿದೆ. ನಿವೇಶನ ರಹಿತರಿಗೆ ಸ್ಥಳ ಗುರುತಿಸಲು ಪಾರದರ್ಶಕವಾಗಿ ದಾಖಲಾತಿಗಳನ್ನು ಸಿದ್ಧಪಡಿಸಿ ಸ್ಥಳವನ್ನು ವಿಂಗಡಿಸಬೇಕಾಗಿದೆ. ಗುರುತಿಸಲ್ಪಟ್ಟ ಸ್ಥಳದಲ್ಲಿ ಮೂಲಭೂತ ಸೌಕರ್ಯಗಳು ಹಾಗೂ ಅಂಗನವಾಡಿ, ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ನಿರ್ಮಿಸಬೇಕಾಗಿದೆ. ಈ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿ ನಿವೇಶನ ನಿರ್ಮಿಸಿ ಕೊಡಬೇಕಾಗಿದೆ. ಆದ್ದರಿಂದ ಹೋರಾಟವನ್ನು ಕೈ ಬಿಟ್ಟು ಸಹಕರಿಸಬೇಕೆಂದು ಮನವಿ ಮಾಡಿದರು.

ಈ ಸಂದರ್ಭ ಬಹುಜನ ಕಾರ್ಮಿಕ ಸಂಘಟನೆಯ ಪದಾಧಿಕಾರಿ ಕಿರಣ್ ಜಗದೀಶ್, ಅಮ್ಮತ್ತಿ ಹೋರಾಟ ಸಮಿತಿಯ ಉಸ್ತುವಾರಿ ಮಾದೇಶ್, ಕಾರ್ಯದರ್ಶಿ ಹೊನ್ನಪ್ಪ, ಮತ್ತೆ ಹೋರಾಟ ಸಮಿತಿಯ ಅಧ್ಯಕ್ಷ ಪಾಪಣ್ಣ, ಕೊಡಗು ಜಿಲ್ಲಾ ಸಮಿತಿ ಸದಸ್ಯ ಎಚ್.ಜೆ. ಪ್ರಕಾಶ್, ಸಮಿತಿಯ ಉಪಾಧ್ಯಕ್ಷ ವಿಶ್ವ, ಸದಸ್ಯರಾದ ಯಶೋಧ, ಕುಸುಮ, ಗಣೇಶ್, ಕುಮಾರ್, ಭವ್ಯ, ಮಂಜುನಾಥ್, ಅಮ್ಮತ್ತಿ ಹೋಬಳಿಯ ಆರ್.ಐ ಅನಿಲ್ ಕುಮಾರ್ ಹಾಜರಿದ್ದರು.

ಮಕ್ಕಳ ಅಭಿವೃದ್ಧಿಗೆ ಉತ್ತಮ ಶಿಕ್ಷಣ ಅವಶ್ಯ : ಪೊನ್ನಣ್ಣ

ವಿರಾಜಪೇಟೆ, ಜೂ.11– ಅಂಗನವಾಡಿಯ ಪುಟ್ಟ ಮಕ್ಕಳ ಅಭಿವೃದ್ಧಿಗೆ ಉತ್ತಮ ಶಿಕ್ಷಣ ಅವಶ್ಯವಿದ್ದು, ಅಧಿಕಾರಿಗಳು ಶಿಕ್ಷಕರು ಕ್ರೀಡೆ ಮತ್ತು ಶಿಕ್ಷಣದ ಬಗ್ಗೆ ಹೆಚ್ಚು ಒತ್ತು ನೀಡುವಂತೆ ಶಾಸಕ ಎ.ಎಸ್.ಪೊನ್ನಣ್ಣ ಹೇಳಿದ್ದಾರೆ.

ಪಟ್ಟಣದ ಪಂಜರುಪೇಟೆಯಲ್ಲಿರುವ ಅಂಗನವಾಡಿ ಕೇಂದ್ರಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಪುಟ್ಟ ಮಕ್ಕಳ ಶಿಕ್ಷಣದ ಅಭಿವೃದ್ಧಿಗೆ 'ಎಲ್.ಕೆ.ಜಿ. ಮತ್ತು ಯು.ಕೆ.ಜಿ ಪ್ರಾರಂಭ'ದ ಉದ್ಘಾಟನಾ ಸಮಾರಂಭವನ್ನು ಉದ್ಘಾಟಿಸಿದ ಅವರು ಮಾತನಾಡಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಪುಟ್ಟ ಮಕ್ಕಳಿಗೆ ಅಂಗನವಾಡಿಯಲ್ಲಿಯೇ ಎಲ್.ಕೆ.ಜಿ. ಮತ್ತು ಯು.ಕೆ.ಜಿ ಕಲಿಸುವುದು ಉತ್ತಮವಾದ ಕಾರ್ಯ ಇದರಿಂದ ಮಕ್ಕಳ ತಿಳುವಳಿಕೆ ಹೆಚ್ಚಿಸುತ್ತದೆ ಹಾಗೂ ಮುಂದಿನ ಬೆಳವಣಿಗೆ ಅಭಿವೃದ್ಧಿಯತ್ತ ಸಾಗಲು ಅನುಕೂಲವಾಗುತ್ತದೆ ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಸಿ.ತಿಪ್ಪಣ್ಣ ಸಿರಸಗಿ ಮತ್ತು ಸಿಡಿಪಿಓ ಪೂಣಚ್ಚ ಸಭೆಯನ್ನುದ್ದೇಶಿಸಿ ಮಾತನಾಡಿದರು,.

ವೇದಿಕೆಯಲ್ಲಿ ಜಿಲ್ಲಾ ಕಾಂಗ್ರೆಸ್ ಮುಖಂಡರಾದ ಧರ್ಮಜ ಉತ್ತಪ್ಪ, ಪುರಸಭೆ ಅಧ್ಯಕ್ಷರಾದ ದೇಚಮ್ಮ ಕಾಳಪ್ಪ, ಮುಖ್ಯಾಧಿಕಾರಿ ಪಿ.ಕೆ.ನಾಚಪ್ಪ, ಸ್ಥಾಯಿ ಸಮಿತಿ ಅಧ್ಯಕ್ಷ ಎಂ.ಕೆ.ಅಬ್ದುಲ್ ಜಲೀಲ್, ಸದಸ್ಯರಾದ ಹೆಚ್.ಎಂ.ಪೂರ್ಣಿಮ ಎಸ್.ಹೆಚ್. ಮತೀನ್, ಡಿ.ಪಿ.ರಾಜೇಶ್, ವಿ.ಆರ್.ರಜನಿಕಾಂತ್, ಅಗಸ್ಟಿನ್ ಬೆನ್ನಿ, ಅನಿತಾ, ಸುಸ್ಮಿತ, ಅಂಗನವಾಡಿ ಕಾರ್ಯಕರ್ತೆ ಜೆ.ಬಿಂದು, ಯೂನಿಯನ್ ಅಧ್ಯಕ್ಷೆ ಸುವಿತ್ರ, ಕಾರ್ಯದರ್ಶಿ ಎ.ವಿ.ಶೀಲಾ, ಉಪಸ್ಥಿತರಿದ್ದರು. ಶಿಕ್ಷಕಿ ಗೀತಾ ಸ್ವಾಗತಿಸಿದರೆ, ಕೆ.ಎಂ.ಉಷಾ ನಿರೂಪಿಸಿದರು.



'ಎಲ್.ಕೆ.ಜಿ. ಮತ್ತು ಯು.ಕೆ.ಜಿ ಪ್ರಾರಂಭ'ದ ಉದ್ಘಾಟನೆಯನ್ನು ಶಾಸಕ ಪೊನ್ನಣ್ಣ ನೆರವೇರಿಸಿದರು.

ಅಬುದಾಬಿಯಲ್ಲಿ ಕಲಾವಿದ ಬಿ.ಕೆ.ಗಣೇಶ್ ರೈಗೆ 'ಸಂಸ್ಕೃತಿ ಶಿಲ್ಪಕಲಾ ರತ್ನ ಪ್ರಶಸ್ತಿ' ಪ್ರದಾನ



ಅಬುದಾಬಿಯಲ್ಲಿ ಕಲಾವಿದ ಬಿ.ಕೆ.ಗಣೇಶ್ ರೈ ಗೆ 'ಸಂಸ್ಕೃತಿ ಶಿಲ್ಪಕಲಾ ರತ್ನ ಪ್ರಶಸ್ತಿ' ಪ್ರದಾನ ಮಾಡಲಾಯಿತು

ಮಡಿಕೇರಿ: ಮಧ್ಯಪ್ರಾಚ್ಯದ ಇತಿಹಾಸದಲ್ಲಿ ಮೊದಲ ಬಾರಿಗೆ ಅರಬ್ ಸಂಯುಕ್ತ ಸಂಸ್ಥಾನದ ಅಬುದಾಬಿ ಬಿಎಪಿಎಸ್ ಹಿಂದೂ ದೇವಾಲಯದಲ್ಲಿ ಇತ್ತೀಚೆಗೆ ನಡೆದ ಗುರುವಂದನಾ ಸಂಸ್ಕೃತಿ ಸಿಂಚನ ಕಾರ್ಯಕ್ರಮದಲ್ಲಿ ಕೊಡಗಿನ ಚಿತ್ರಶಿಲ್ಪ ಕಲಾವಿದ ಬಿ.ಕೆ. ಗಣೇಶ್ ರೈ ಅವರಿಗೆ 'ಸಂಸ್ಕೃತಿ ಶಿಲ್ಪಕಲಾ ರತ್ನ ಪ್ರಶಸ್ತಿ' ಪ್ರದಾನ ಮಾಡಲಾಯಿತು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಸನಾತನ್ ವೇದಿಕ್ ಸಂಸ್ಥಾನದ ಗುರುಗಳಾದ ಶ್ರೀ ಪ್ರೊಫೆಸರ್ ಸ್ವಾಮಿ ಚೈತನ್ಯಾನಂದ ಸರಸ್ವತಿಯವರ ಸಮ್ಮುಖದಲ್ಲಿ ಕಲಾವಿದ ಬಿ.ಕೆ.ಗಣೇಶ್ ರೈ ಹಾಗೂ ಮಂಜುಳಾ ಗಣೇಶ್ ರೈ ದಂಪತಿಗೆ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ಹಿಂದೂ ಮಂದಿರದ ಆವರಣದಲ್ಲಿರುವ ಪ್ರಮುಖ್ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಅಬುದಾಬಿ ಹಿಂದೂ ಮಂದಿರದ ಮುಖ್ಯಸ್ಥ ಶ್ರೀ ಬ್ರಹ್ಮವಿಹಾರಿ ದಾಸ್ ಸ್ವಾಮೀಜಿ, ಬೆಳಗಾವಿ ನಿಡಸೊಸಿ ದುರುದುಂಡೇಶ್ವರ ಮಠದ ಶ್ರೀ ನಿಜಲಿಂಗೇಶ್ವರ ಸ್ವಾಮೀಜಿ, ಗೋವಾ ರಾಜ್ಯದ ಶ್ರೀ ದತ್ತ ಪದ್ಮನಾಭ ಪೀಠದ ಪದ್ಮಶ್ರೀ ಪುರಸ್ಕೃತ ಶ್ರೀ ಸದ್ಗುರು ಬ್ರಹ್ಮೇಶನಂದನಾಚಾರ್ಯ ಸ್ವಾಮೀಜಿ ಮತ್ತಿತರ ಪ್ರಮುಖರು ಉಪಸ್ಥಿತರಿದ್ದು ವಿವಿಧ ಕ್ಷೇತ್ರಗಳ ಸಾಧಕರನ್ನು ಸನ್ಮಾನಿಸಿದರು.

ಕಾಡಾನೆ ದಾಳಿ : ಮಹಿಳೆಗೆ ತೀವ್ರ ಗಾಯ

ಸಿದ್ದಾಪುರ: ಕಾಡಾನೆ ಕಾಡಿಗಟ್ಟುವ ಕಾರ್ಯಾಚರಣೆ ಸಂದರ್ಭದಲ್ಲೇ ಕಾಡಾನೆಯೊಂದು ಕಾಫಿ ತೋಟದ ಕೆಲಸ ಮುಗಿಸಿ ಮನೆಗೆ ಹಿಂತಿರುಗುತ್ತಿದ್ದ ಮಹಿಳೆಯ ಮೇಲೆ ದಾಳಿಗೆ ಯತ್ನಿಸಿದ ಘಟನೆ ಸಮೀಪದ ನಲ್ವತ್ತೆಕ್ರೆ ಬಳಿ ನಡೆದಿದೆ.



ಕಾಡಾನೆ ದಾಳಿಯಿಂದ ಬಿದ್ದು ಗಾಯಗೊಂಡ ಮಹಿಳೆ ಕವಿತಾ ಪ್ರಾಣಾಪಾಯದಿಂದ ಪಾರಾಗಿದ್ದು, ಸಿದ್ದಾಪುರ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ನೀಡಿದ ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಮಡಿಕೇರಿಯ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ. ನೆಲ್ಯಹುದಿಕೇರಿ, ಅತ್ತಿಮಂಗಲ, ನಲ್ವತ್ತೆಕ್ರೆ ಭಾಗದಲ್ಲಿ ಬೀಡು ಬಿಟ್ಟಿದ್ದ ಕಾಡಾನೆಗಳನ್ನು ಕಾಡಿಗಟ್ಟುವ ಕಾರ್ಯಾಚರಣೆಯಲ್ಲಿ ಬೆಳಗಿನಿಂದ ಹುಡುಕಾಟ ನಡೆಸಿದರೂ ಪತ್ತೆಯಾಗಿರಲಿಲ್ಲ. ಮಧ್ಯಾಹ್ನ ಕಾಫಿ ತೋಟವೊಂದರಲ್ಲಿ ಒಂಟಿ ಸಲಗ ಕಾಣಿಸಿಕೊಂಡಿದ್ದು, ಅರಣ್ಯ ಇಲಾಖೆ ಸಿಬ್ಬಂದಿಗಳು ಕಾಫಿ ತೋಟ ಮಾರ್ಗ ಮಧ್ಯದಿಂದ ಕಾಡಾನೆಯನ್ನು ಅರಣ್ಯಕ್ಕೆ ಅಟ್ಟಲು ಮುಂದಾಗಿದ್ದರು. ತೋಟದಿಂದ ತೋಟಕ್ಕೆ ಓಡಿ ಸಿಬ್ಬಂದಿಗಳಿಗೆ ಚಳ್ಳೆಹಣ್ಣು ತಿನ್ನಿಸುತ್ತಿದ್ದ ಕಾಡಾನೆ ಮನೆಯೊಂದರ ಸಮೀಪದ ಹಲಸಿನ ಮರದ ಬಳಿ ನಿಂತಿತ್ತು. ಸಮೀಪದ ತೋಟದಲ್ಲಿ ಕೆಲಸ ನಿರ್ವಹಿಸಿ ಮನೆಗೆ ವಾಪಸ್ ಬರುತ್ತಿದ್ದ ಮಹಿಳೆಯನ್ನು ಕಂಡ ಕಾಡಾನೆ ದಾಳಿಗೆ ಯತ್ನಿಸಿದೆ. ದಾಳಿಯಿಂದ ತಪ್ಪಿಸಿಕೊಳ್ಳಲು ಓಡಿದ ಕವಿತಾ ಬಿದ್ದು ಗಂಭೀರ ಗಾಯಗೊಂಡರು. ತಕ್ಷಣ ಸ್ಥಳಕ್ಕೆ ಆಗಮಿಸಿದ ಅರಣ್ಯ ಇಲಾಖೆ ಸಿಬ್ಬಂದಿಗಳು ಹಾಗೂ ಸ್ಥಳೀಯರು ಮಹಿಳೆಯನ್ನು ಸಿದ್ದಾಪುರ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆಗೆ ದಾಖಲಿಸಿದ್ದರು. ಸ್ಥಳಕ್ಕೆ ಅರಣ್ಯ ಇಲಾಖೆಯ ಆರ್‌ಎಫ್‌ಓ ರತನ್‌ಕುಮಾರ್ ಮತ್ತು ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಇಂದು ಅಂಗನವಾಡಿ ಕೇಂದ್ರಗಳಿಗೆ ರಜೆ

ಮಡಿಕೇರಿ, ಜೂ.11– ಜಿಲ್ಲೆಯಲ್ಲಿ ನಾಳೆ ಗುರುವಾರದಿಂದ ಭಾನುವಾರದವರೆಗೆ ರೆಡ್ ಅಲರ್ಟ್ ಘೋಷಿಸಲಾಗಿದೆ. ಈ ಹಿನ್ನೆಲೆಯಲ್ಲಿ ಮಕ್ಕಳ ಸುರಕ್ಷತೆಯ ಹಿತದೃಷ್ಟಿಯಿಂದ ಜಿಲ್ಲೆಯ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಮುಂಜಾಗ್ರತಾ ಕ್ರಮವಾಗಿ ಜೂ.12ರಂದು ಒಂದು ದಿನಕ್ಕೆ ಸೀಮಿತವಾಗಿ ಅಂಗನವಾಡಿ ಕೇಂದ್ರಗಳಿಗೆ ರಜೆ ಘೋಷಿಸಿ ಜಿಲ್ಲಾಧಿಕಾರಿ ವೆಂಕಟ್ ರಾಜಾ ಆದೇಶ ಹೊರಡಿಸಿದ್ದಾರೆ.

ನಿಯಮಬಾಹಿರ ವಿತರಣೆಯ ನಿವೇಶನಗಳ ರದ್ದು

ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್



ಪುರಸಭೆ ಅಕ್ರಮ ನಿವೇಶನ ಹಂಚಿಕೆ ಮಾಡಿರುವ ಬಗ್ಗೆ ಶಾಸಕ ಹೆಚ್.ಎಂ. ಗಣೇಶ್ ಪ್ರಸಾದ್ ದಾಖಲೆಗಳನ್ನು ಪ್ರದರ್ಶಿಸಿದರು.

ಗುಂಡ್ಲುಪೇಟೆ, ಜೂ–11 (ಸೋಮ್.ಜಿ) ಪಟ್ಟಣದ ಪುರಸಭೆಯು ನಿಯಮಬಾಹಿರವಾಗಿ ವಿತರಿಸಿರುವ ಎಲ್ಲಾ ನಿವೇಶನಗಳನ್ನು ಲೋಕಾಯುಕ್ತರು ರದ್ದುಗೊಳಿಸಿದ್ದು ಶೀಘ್ರ ಮತ್ತೊಮ್ಮೆ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು ಎಂದು ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್ ಹೇಳಿದರು.

ಮುಖ್ಯಮಂತ್ರಿಗಳ ನಗರ ಯೋಜನೆಯಲ್ಲಿ ನೀಡಲಾಗಿದ್ದ ನಿವೇಶನ ಹಂಚಿಕೆಯಲ್ಲಿ ವ್ಯಾಪಕ ಭ್ರಷ್ಟಾಚಾರ ಕಂಡುಬಂದ ಬೆನ್ನಲ್ಲೇ ಹಲವು ಪುರಸಭೆ ಸದಸ್ಯರು ಲೋಕಾಯುಕ್ತರಿಗೆ ದೂರು ಸಲ್ಲಿಸಿದ ಮೇರೆಗೆ ಮನೆಮನೆಗಳಿಗೆ ತೆರಳಿ ಪರಿಶೀಲಿಸಿದ ತನಿಖಾಧಿಕಾರಿಗಳು ನೈಜತೆಯನ್ನ ಬಹಿರಂಗಗೊಳಿಸಿದ್ದಾರೆ, ಅಂಗವಿಕಲರು, ಮಾಜಿ ಸೈನಿಕರು ಸೇರಿದಂತೆ ನಾನಾ ವರ್ಗಗಳ ಜನರಿಗೆ ಕಾನೂನುಬದ್ಧವಾಗಿ ಕೊಡಬೇಕಾಗಿದ್ದರೂ ಸಹ ನಿಯಮಬಾಹಿರವಾಗಿ 480 ಫಲಾನುಭವಿಗಳಿಗೆ ಅಕ್ರಮವಾಗಿ ನಿವೇಶನಗಳನ್ನು ವಿತರಣೆ ಮಾಡಲಾಗಿದೆ ಎಂದು ಸುದ್ದಿಗೋಷ್ಠಿಯಲ್ಲಿ ಆರೋಪಿಸಿದರು.

ನಿವೇಶನ ಹಕ್ಕುಪತ್ರ ವಿತರಣೆ ಆಯ್ಕೆ ಪ್ರಕ್ರಿಯೆಯಲ್ಲಿ ಸಾಮ್ಯತೆ ಕಂಡುಬಾರದ ಕಾರಣ ಅನರ್ಹರನ್ನ ರದ್ದುಪಡಿಸಿ ಅರ್ಹರಿಗೆ ನೀಡುವಂತೆ ಸೂಚಿಸಿದೆ. ಈ ಬಗ್ಗೆ ಮುಂದಿನ ದಿನಗಳಲ್ಲಿ ಅರ್ಜಿಸಲ್ಲಿಸಿದ್ದ ಫಲಾನುಭವಿಗಳಲ್ಲಿ ಅರ್ಹರನ್ನು ಆಯ್ಕೆ ಮಾಡಿ ವಿತರಣೆ ಮಾಡಲಾಗುವುದು. ಅಲ್ಲದೆ ಪುರಸಭೆ ವತಿಯಿಂದ ಚಿಕ್ಕತುಪ್ಪೂರು ಸಮೀಪದಲ್ಲಿ ಹೊಸದಾಗಿ 380 ನಿವೇಶನಗಳನ್ನು ವಿತರಣೆ ಮಾಡಲು ಅರ್ಜಿ ಕರೆಯಲಾಗುವುದು ಎಂದು ಹೇಳಿದರು.

ಶಾಸಕರಾದ ನಂತರ ವಿರೋಧ ಪಕ್ಷಗಳ ಟೀಕೆಗಳಿಗೆ ಪ್ರತಿಕ್ರಿಯಿಸದೆ 125 ಕೋಟಿ ಅನುದಾನ ತಂದು ಬೇಗೂರಿನ ಹತ್ತಿ ಮಾರುಕಟ್ಟೆ, ಬೊಮ್ಮನಹಳ್ಳಿ ಸಮೀಪ ವಸತಿ ಶಾಲೆ ಹದಗೆಟ್ಟ ರಸ್ತೆಗಳ ಅಭಿವೃದ್ಧಿ ಸೇರಿದಂತೆ ನಾನಾ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಸದ್ಯದಲ್ಲಿಯೇ ಸಾರಿಗೆ ಘಟಕಕ್ಕೆ 15 ಹೊಸ ಬಸ್ಸುಗಳನ್ನು ಮಂಜೂರು ಮಾಡಲಾಗುತ್ತಿದ್ದು ಸಾರ್ವಜನಿಕರ ಬಳಕೆಗೆ ಬರಲಿದೆ, ಪಟ್ಟಣದ ವಾಲ್ಮೀಕಿ ಭವನ ಮತ್ತು ಕನಕ ಭವನಕ್ಕೆ ತಲಾ 1 ಕೋಟಿ ಅನುದಾನ ನೀಡಲಾಗುವುದೆಂದರು.

ಚಾಮುಲ್ ನಿರ್ದೇಶಕ ಹೆಚ್.ಎಸ್.ನಂಜುಂಡ ಪ್ರಸಾದ್, ಪುರಸಭೆ ಅಧ್ಯಕ್ಷ ಜಿ.ಎಸ್.ಮಧುಸೂಧನ್, ಉಪಾಧ್ಯಕ್ಷ ಅಣ್ಣಯ್ಯಸ್ವಾಮಿ, ಸದಸ್ಯರಾದ ಶಶಿಧರ್‌ದೀಪು, ಕಪ್ಪಣ್ಣ, ಕಿರಣ್‌ಗೌಡ, ಕುಮಾರ್, ಅಲ್ಲಾಹು, ರಾಜಗೋಪಾಲ, ಕಾಡಾ ಮಾಜಿ ಅಧ್ಯಕ್ಷ ಹೆಚ್.ಎಸ್.ನಂಜಪ್ಪ, ಜಿಪಂ ಮಾಜಿ ಸದಸ್ಯ ಕೆ.ಎಸ್.ಮಹೇಶ್, ಮುಖಂಡರಾದ ನಾಜೀಮುದ್ದೀನ್, ಪಿ.ಬಿ.ರಾಜಶೇಖರ್, ದೊಡ್ಡಣ್ಣ, ಸುರೇಶ್ ಕಾರ್ಗಳ್ಳಿ, ಭಾಗ್ಯಮ್ಮ, ಹೊಸೂರು ಬಸವರಾಜು, ಅರುಣ್, ವಿಶ್ವಾಸ್, ದೀಪು ಮೊದಲಾದವರಿದ್ದರು.

ಆಕ್ಸಿಜನ್ ದುರಂತ ಪ್ರಕರಣ: ತಲಾ 25 ಲಕ್ಷ ರೂ. ಪರಿಹಾರಕ್ಕೆ ಆಗ್ರಹಿಸಿ ಹೋರಾಟಕ್ಕೆ ನಿರ್ಧಾರ



ಆಕ್ಸಿಜನ್ ದುರಂತದಲ್ಲಿ ಮೃತಪಟ್ಟ ಕುಟುಂಬಗಳಿಗೆ ನ್ಯಾಯ ದೊರಕಿಸಲು ಕೈಗೊಳ್ಳಬೇಕಾದ ಹೋರಾಟ ರೂಪಿಸಲು ಪ್ರಗತಿಪರ ಸಂಘಟನೆಗಳ ಒಕ್ಕೂಟದ ಸಭೆ ನಡೆಸಲಾಯಿತು.

ನಾಳೆ ಡಿ.ಸಿ ಕಚೇರಿ ಎದುರು ಪ್ರತಿಭಟನೆ

ಆಕ್ಸಿಜನ್ ದುರಂತದಲ್ಲಿ ಮಡಿದ ಕುಟುಂಬಗಳಿಗೆ 25 ಲಕ್ಷ ಪರಿಹಾರ ನೀಡಲು ಸರ್ಕಾರದ ಗಮನ ಸೆಳೆಯಲು ಹಂತ ಹಂತದ ಪ್ರತಿಭಟನೆ ನಡೆಸಲು ಸಭೆ ನಿರ್ಧರಿಸಿ, ಜೂ.13 ರಂದು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ಮಾಡಲು ತೀರ್ಮಾನಿಸಿತು. ನಂತರ ಶಾಸಕರ ಮನೆ ಮುತ್ತಿಗೆ, ಚಾಮರಾಜನಗರ ಬಂದ್ ನಡೆಸಲು ನಿರ್ಧರಿಸಲಾಯಿತು.

ಚಾಮರಾಜನಗರ, ಜೂ.11 – ಜಿಲ್ಲಾ ಕೋವಿಡ್ ಆಸ್ಪತ್ರೆಯಲ್ಲಿ 2021ರ ಮೇ 2ರ ಮಧ್ಯರಾತ್ರಿ ಆಕ್ಸಿಜನ್ ದೊರಕದೇ ಮೃತಪಟ್ಟ 36 ಜನರ ಕುಟುಂಬಗಳಿಗೂ, ಬೆಂಗಳೂರು ಕಾಲ್ತುಳಿತದಿಂದ ಮೃತಪಟ್ಟ ಕುಟುಂಬದವರಿಗೆ ನೀಡಿದಂತೆ ತಲಾ 25 ಲಕ್ಷ ರೂ. ಪರಿಹಾರ ನೀಡಬೇಕು. ಈ ಕುಟುಂಬದಲ್ಲಿ ಒಬ್ಬರಿಗೆ ಸರ್ಕಾರಿ ನೌಕರಿ ನೀಡಬೇಕು ಎಂದು ಒತ್ತಾಯಿಸಿ ಸರ್ಕಾರದ ವಿರುದ್ಧ ನಾನಾ ಹಂತದ ಪ್ರತಿಭಟನೆಗಳನ್ನು ಕೈಗೊಳ್ಳಲು ಮಂಗಳವಾರ ನಡೆದ ಪ್ರಗತಿ ಪರ ಒಕ್ಕೂಟದ ಮುಖಂಡರ ಸಭೆಯಲ್ಲಿ ನಿರ್ಧರಿಸಲಾಯಿತು.

ನಗರದ ಪ್ರವಾಸಿ ಮಂದಿರದಲ್ಲಿ ಮಂಗಳವಾರ ಪ್ರಗತಿ ಪರ ಸಂಘಟನೆಗಳ ಒಕ್ಕೂಟದಿಂದ ಆಕ್ಸಿಜನ್ ದುರಂತ ಸಂತ್ರಸ್ತರಿಗೆ ಪರಿಹಾರ ನೀಡದೆ ನಿರ್ಲಕ್ಷ್ಯ ವಹಿಸಿರುವ ರಾಜ್ಯ ಸರ್ಕಾರದ ವಿರುದ್ಧ ಮುಂದೆ ತೀವ್ರ ರೀತಿಯ ಹೋರಾಟಗಳನ್ನು ಹಮ್ಮಿಕೊಳ್ಳುವ ಸಲುವಾಗಿ ವಿವಿಧ ಸಂಘಟನೆಗಳ ಸಭೆ ಕರೆಯಲಾಗಿತ್ತು. ಸಭೆಯಲ್ಲಿ ದಲಿತ ಸಂಘಟನೆಗಳು, ರೈತ ಸಂಘಟನೆಗಳು, ಕನ್ನಡಪರ ಸಂಘಟನೆಗಳು ಪಾಲ್ಗೊಂಡಿದ್ದವು.

ಪ್ರಗತಿ ಪರ ಸಂಘಟನೆಗಳ ಒಕ್ಕೂಟದ ಸಂಚಾಲಕ ಸಿ.ಎಂ.ಕೃಷ್ಣಮೂರ್ತಿ ಮಾತನಾಡಿ, ಈ ದುರಂತಗಳಿಂದ 36 ಕುಟುಂಬಗಳು ಬೀದಿ ಪಾಲಾಗಿವೆ. ಸರ್ಕಾರ ಎಲ್ಲರನ್ನೂ ಒಂದೇ ಸಮನಾಗಿ ನೋಡಬೇಕು. ಮಾನವೀಯತೆ ದೃಷ್ಟಿಯಿಂದ ಇವರಿಗೆಲ್ಲ ತಲಾ 25 ಲಕ್ಷ ರೂ. ಪರಿಹಾರ ನೀಡಬೇಕು. ಇದಕ್ಕಾಗಿ ಸರ್ಕಾರವನ್ನು ಒತ್ತಾಯ ಮಾಡಲು ವಿವಿಧ ಹಂತಗಳಲ್ಲಿ ಹೋರಾಟ ರೂಪುಗೊಳಿಸಬೇಕಾಗಿದೆ ಎಂದರು.

ಕರ್ನಾಟಕ ಸೇನಾ ಪಡೆಯ ಅಧ್ಯಕ್ಷ ಚಾ.ರಂ. ಶ್ರೀನಿವಾಸಗೌಡ ಮಾತನಾಡಿ, ಆಕ್ಸಿಜನ್ ದುರಂತದಲ್ಲಿ ಮಡಿದವರ ಕುಟುಂಬಗಳಿಗೆ ನಾಲ್ಕು ವರ್ಷಗಳಿಂದಲೂ ನ್ಯಾಯ ದೊರಕಿಲ್ಲ. ಹೀಗಾಗಿ ಚಾಮರಾಜನಗರ ಬಂದ್ ನಡೆಸುವ ಮೂಲಕ ಸರ್ಕಾರದ ಗಮನಕ್ಕೆ ತರಬೇಕಾಗಿದೆ ಎಂದರು.

ರೈತ ಸಂಘದ ರಾಜ್ಯ ಸಂಚಾಲಕ ಗುರುಪ್ರಸಾದ್, ದುರಂತದಲ್ಲಿ ತನ್ನ ಪತಿಯನ್ನು ಕಳೆದುಕೊಂಡಿರುವ ಸಂತ್ರಸ್ತೆ ನಾಗರತ್ನ, ರಂಗಕರ್ಮಿ ಕೆ.ವೆಂಕಟರಾಜು ಮಾತನಾಡಿ, ನ್ಯಾಯಮೂರ್ತಿ ವೇಣುಗೋಪಾಲ್ ಸಮಿತಿ ನೀಡಿರುವ ವರದಿಯಂತೆ 37 ಜನರಿಗೂ ತಲಾ 25 ಲಕ್ಷ ರೂ. ಪರಿಹಾರ ನೀಡಬೇಕೆಂದು ಆಗ್ರಹಿಸಿದರು.

ಸಭೆಯಲ್ಲಿ ಎಸ್‌ಡಿಪಿಐ ರಾಜ್ಯ ಸಮಿತಿ ಸದಸ್ಯ ಅಬ್ರಾರ್ ಅಹಮದ್, ಅಧ್ಯಕ್ಷ ಖಲೀಲ್‌ಉಲ್ಲಾ, ಗಾಳಿಪುರ ಮಹೇಶ್, ನಯಾಜುಲ್ಲಾ, ನಸ್ರುಲ್ಲಾ ವಿವಿಧ ಸಂಘಟನೆಗಳ ಮುಖಂಡರಾದ ಸುರೇಶ್ ವಾಜಪೇಯಿ, ಆಟೋ ಮಹದೇವಸ್ವಾಮಿ, ಇಂಡಯ್ಯ, ಸಿ.ಎನ್. ಗೋವಿಂದರಾಜು, ಬ್ರಿಜೇಶ್‌ಒಲಿವೆರಾ, ಬಂಗಾರಸ್ವಾಮಿ, ಅಮಚವಾಡಿ ಶಿವಣ್ಣ, ದೊಡ್ಡರಾಯಪೇಟೆ ಮಹೇಶ್, ಅರುಣ್‌ಕುಮಾರ್ ಗೌಡ ಹಾಗೂ ದುರಂತ ಸಂತ್ರಸ್ತರ ಕುಟುಂಬದವರು ಭಾಗವಹಿಸಿದ್ದರು.

ಮಲೆ ಮಹದೇಶ್ವರಬೆಟ್ಟ ಸಮಗ್ರ ಗ್ರಾಮಾಭಿವೃದ್ಧಿ: ಎಸ್‌ವಿವೈಎಂ ಒಪ್ಪಂದಕ್ಕೆ ಸಹಿ



ಎಸ್‌ವಿವೈಎಂನ ಆಶಾ ಯೋಜನೆಯ ಸಮಗ್ರ ಗ್ರಾಮಾಭಿವೃದ್ಧಿ ಕಾರ್ಯಕ್ರಮಕ್ಕಾಗಿ ಜಿಲ್ಲಾಧಿಕಾರಿ ಶಿಲ್ಪಾನಾಗ್ ಹಾಗೂ ಜಿಪಂ ಸಿಇಓ ಮೋನಾ ರೋತ್ ಮತ್ತು ಎಸ್‌ವೈಎಂ ಸಿಇಓ ಸವಿತಾ ಸುಲುಗೋಡು ಸಮ್ಮುಖದಲ್ಲಿ ಒಪ್ಪಂದಕ್ಕೆ (ಎಂಓಯು) ಸಹಿ ಹಾಕಲಾಯಿತು.

ಚಾಮರಾಜನಗರ: ಎಸ್‌ವಿವೈಎಂನ ಆಶಾ ಯೋಜನೆಯ ಸಮಗ್ರ ಗ್ರಾಮಾಭಿವೃದ್ಧಿ ಕಾರ್ಯಕ್ರಮಕ್ಕಾಗಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮೋನಾ ರೋತ್ ಮತ್ತು ಎಸ್‌ವೈಎಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸವಿತಾ ಸುಲುಗೋಡು ಸಮ್ಮುಖದಲ್ಲಿ ಒಪ್ಪಂದಕ್ಕೆ (ಎಂಓಯು) ಸಹಿ ಹಾಕಲಾಯಿತು.

ಜಿಲ್ಲಾಧಿಕಾರಿಯವರು ಚರ್ಚೆಯ ಸಂದರ್ಭದಲ್ಲಿ ಸಹಯೋಗದ ಮೂಲಕ ಒಪ್ಪಂದದಂತೆ ಸಂಬಂಧಿತ ಕ್ಷೇತ್ರಗಳಲ್ಲಿ ಉತ್ತಮ ಗುಣಮಟ್ಟದ ಫಲಿತಾಂಶ ಖಚಿತ ಪಡಿಸಿಕೊಳ್ಳುವ ಆಸಕ್ತಿಯನ್ನು ವ್ಯಕ್ತಪಡಿಸಿದ್ದಾರೆ. ಸವಿತಾ ಸುಲುಗೋಡು ಸಮುದಾಯ–ಆಧಾರಿತ ಅಭಿವೃದ್ಧಿಯಲ್ಲಿ ಎಸ್‌ವಿವೈಎಂನ 41 ವರ್ಷಗಳ ಅನುಭವವನ್ನು ಹೊಂದಿದ್ದು, ಸರ್ಕಾರದೊಂದಿಗೆ ಸಹಭಾಗಿತ್ವದಲ್ಲಿ ಕಾರ್ಯನಿರ್ವಹಿಸುವುದರಿಂದ ಅರ್ಥಪೂರ್ಣ ಬದಲಾವಣೆಯನ್ನು ಸಮುದಾಯದಲ್ಲಿ ಕಾಣಬಹುದು ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಸರ್ಕಾರ ಹಾಗೂ ಸಮುದಾಯದೊಂದಿಗೆ ದೀರ್ಘಕಾಲಿಕ ಸಹಭಾಗಿತ್ವ ಹಾಗೂ ಪಾಲುದಾರಿಕೆಯ ಮೂಲಕ ಕಾರ್ಯನಿರ್ವಹಿಸಿದರೆ ಸಮಗ್ರ ಗ್ರಾಮೀಣಾಭಿವೃದ್ಧಿ ಗುರಿಯನ್ನು ಹೊಂದಲು ಈ ಒಪ್ಪಂದವು (ಎಂಓಯು) ಉತ್ತಮ ಅಡಿಪಾಯವಾಗಿರುತ್ತದೆ.

ಮಲೆ ಮಹದೇಶ್ವರ ವನ್ಯಜೀವಿ ವಿಭಾಗದ ನಿರ್ದೇಶಕ ಚಕ್ರಪಾಣಿ, ಮಲೆ ಮಹದೇಶ್ವರ ವನ್ಯಜೀವಿ ವಿಭಾಗದ ಎ.ಸಿ.ಎಫ್ ಸ್ವಪ್ನಲ್ ಅಹಿರೆ, ಜಂಟಿ ಕೃಷಿ ನಿರ್ದೇಶಕ ಎಸ್.ಎಸ್. ಅಬಿದ್, ತೋಟಗಾರಿಕೆ ಉಪನಿರ್ದೇಶಕ ಬಿ.ಎಲ್.ಶಿವಪ್ರಸಾದ್, ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವೆಯ ಉಪ ನಿರ್ದೇಶಕ ಡಾ. ಎಲ್.ಹನುಮೇಗೌಡ, ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಪ್ರಭಾರ ಉಪನಿರ್ದೇಶಕ ಎಚ್.ಎಸ್.ಬಿಂದ್ಯ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ರಾಮಚಂದ್ರ ರಾಜೇ ಅರಸ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್.ಚಿದಂಬರ ಹಾಗೂ ಎಸ್‌ವೈಎಂ ಆಶಾ ಯೋಜನೆ ನಿರ್ದೇಶಕಿ ಡಾ.ಪುಷ್ಪಲತಾ ಈ ಸಹಭಾಗಿತ್ವದ ಪ್ರಯತ್ನವನ್ನು ಬಲಪಡಿಸುವ ಸಭೆಯಲ್ಲಿ ಭಾಗವಹಿಸಿದ್ದರು.

ನಾಗಮ್ಮ ನಿಧನ

ಚಾಮರಾಜನಗರ,ಜೂ.11–ತಾಲೂಕಿನ ಕಾಳನಹುಂಡಿ ಗ್ರಾಮದ ದಿ.ಛೇ. ರಾಮಣ್ಣ ಅವರ ಪತ್ನಿ ನಾಗಮ್ಮ (87) ನಿಧನರಾದರು.



ಮೃತರಿಗೆ ಹಿರಿಯ ವಕೀಲ ವಿರೂಪಾಕ್ಷ ಸೇರಿದಂತೆ ಓರ್ವ ಪುತ್ರಿ ಇದ್ದಾರೆ. ಇವರ ಅಂತ್ಯಕ್ರಿಯೆಯು ಬುಧವಾರ ಕಾಳನಹುಂಡಿ ಗ್ರಾಮದ ಜಮೀನಿನಲ್ಲಿ ನೆರವೇರಿತು.

ದೊಡ್ಡಿಂದುವಾಡಿ ಗ್ರಾಮದಲ್ಲಿ ಇಂದು ಅಂಗನವಾಡಿ ಕೇಂದ್ರ ಉದ್ಘಾಟನೆ

ಚಾಮರಾಜನಗರ: ಅಮಿಗ ಫೌಂಡೇಶನ್ ಟ್ರಸ್ಟ್ ವತಿಯಿಂದ ಸಾಮಾಜಿಕ ಹೊಣೆಗಾರಿಕೆ ಯೋಜನೆಯಡಿ (ಸಿಎಸ್‌ಆರ್) ಕೊಳ್ಳೇಗಾಲ ತಾಲೂಕಿನ ದೊಡ್ಡಿಂದುವಾಡಿ ಗ್ರಾಮದಲ್ಲಿ ನಿರ್ಮಿಸಲಾಗಿರುವ ಹೊಸ ಅಂಗನವಾಡಿ ಕೇಂದ್ರದ ಉದ್ಘಾಟನೆ ಜೂ.12ರ ಬೆಳಿಗ್ಗೆ 10 ಗಂಟೆಗೆ ನೆರವೇರಲಿದೆ. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಮುಖ್ಯ ಅತಿಥಿಯಾಗಿ ಭಾಗವಹಿಸುವರು.

ಬೋಧಕೇತರರ ವರ್ಗಾವಣೆ ಇಂದಿನಿಂದ ಕೌನ್ಸಿಲಿಂಗ್

ಚಾಮರಾಜನಗರ: ಶಾಲಾ ಶಿಕ್ಷಣ ಇಲಾಖೆಯಿಂದ ಬೋಧಕೇತರ ವೃಂದದ ಪ್ರಥಮ ದರ್ಜೆ ಸಹಾಯಕರು, ದ್ವಿತೀಯ ದರ್ಜೆ ಸಹಾಯಕರು ಮತ್ತು ಗ್ರೂಪ್ ಡಿ ನೌಕರರ ವರ್ಗಾವಣೆ ಕೌನ್ಸಲಿಂಗ್ ಪ್ರಕ್ರಿಯೆಯು ಜೂ.12 ರಿಂದ 23ರವರೆಗೆ ಬೆಳಗ್ಗೆ 10 ಗಂಟೆಯಿಂದ ನಗರದ ಜಿಲ್ಲಾಡಳಿತ ಭವನದಲ್ಲಿರುವ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಚೇರಿಯಲ್ಲಿ ನಡೆಯಲಿದೆ.

ಅಂತಿಮ ಪಟ್ಟಿಯಲ್ಲಿರುವ ನೌಕರರು ನಿಗದಿತ ಸಮಯಕ್ಕೆ ಕಡ್ಡಾಯವಾಗಿ ಹಾಜರಾಗಿ ಆನ್‌ಲೈನ್ ಕೌನ್ಸಲಿಂಗ್ ನಲ್ಲಿ ಖಾಲಿ ಹುದ್ದೆಗಳನ್ನು ಸ್ವಇಚ್ಛೆಯಿಂದ ಆಯ್ಕೆಮಾಡಿಕೊಂಡು ವರ್ಗಾವಣಾ ಕೌನ್ಸಲಿಂಗ್ ಪ್ರಕ್ರಿಯೆಯನ್ನು ಯಶಸ್ವಿಗೊಳಿಸಬೇಕು. ಮಾಹಿತಿಗಾಗಿ ದೂ.ಸಂ.08226–222406, ಮೊ.9986298892 ಸಂಪರ್ಕಿಸಿ.

ಮಾನಸ ಸಂಸ್ಥೆಯಲ್ಲಿ ಶಾಸ್ತ್ರೋಕ್ತವಾಗಿ ಅಕ್ಷರಾಭ್ಯಾಸ



ಮಾನಸ ಶಿಕ್ಷಣ ಸಂಸ್ಥೆಯ ಅಂಗ ಸಂಸ್ಥೆ ನಿಸರ್ಗ ವಿದ್ಯಾನಿಕೇತನ ಶಾಲೆಯಲ್ಲಿ ಪ್ರಿ–ಕೆಜಿ ಹಾಗೂ ಎಲ್ ಕೆಜಿ ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಿಸಿದರು.

ಕೊಳ್ಳೇಗಾಲ, ಜೂ.11– ಮಕ್ಕಳಿಗೆ ಮೊಬೈಲ್ ಗೀಳು ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ತೊಡಕಾಗಲಿದ್ದು ಪೋಷಕರು ಮಕ್ಕಳನ್ನು ಸಂಸ್ಕಾರವಂತರನ್ನಾಗಿಸುವ ನಿಟ್ಟಿನಲ್ಲಿ ಮುಂದಾಗುವಂತೆ ಮಾನಸ ಶಿಕ್ಷಣ ಸಂಸ್ಥೆಗಳ ವಿಶೇಷಾಧಿಕಾರಿ ನಾಗಭೂಷಣ್ ತಿಳಿಸಿದ್ದಾರೆ

ಮಾನಸ ಶಿಕ್ಷಣ ಸಂಸ್ಥೆಯ ಅಂಗ ಸಂಸ್ಥೆ ನಿಸರ್ಗ ವಿದ್ಯಾನಿಕೇತನ ಶಾಲೆ ಆಯೋಜಿಸಿದ್ದ ಪ್ರಿ–ಕೆಜಿ ಹಾಗೂ ಎಲ್ ಕೆಜಿ ಮಕ್ಕಳಿಗೆ ಅಕ್ಷರಾಭ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿ, ಮಕ್ಕಳ ಕಲಿಕೆಯಲ್ಲಿ ಶಿಕ್ಷಕರಷ್ಟೆ ಪೋಷಕರ ಪಾತ್ರವೂ ಅತಿಮುಖ್ಯ ಎಂದರು

ಪ್ರಾಂಶುಪಾಲರಾದ ನಯನ ಮಾತನಾಡಿ, ಕಲಿಕೆಗೆ ಶಿಕ್ಷಕರೊಡನೆ ಪೋಷಕರು ಕೈಜೋಡಿಸಿದಾಗ ಮಾತ್ರ ಪುಟ್ಟ ಮಕ್ಕಳಿಗೆ ಸ್ಪಷ್ಟ ಕಲಿಕೆ, ಓದು ಸಾಧ್ಯವಾಗಲಿದ್ದು ಮಾನಸ ಸಂಸ್ಥೆ ಮೌಲ್ಯಯುತ ಕಲಿಕೆಗೆ ಹೆಚ್ಚು ಒತ್ತು ನೀಡುತ್ತಿದೆ ಎಂದರು.

ಮುಖ್ಯ ಶಿಕ್ಷಕ ಶಂಕರ್ ಮಾತನಾಡಿದರು. ಇದೇ ವೇಳೆ ಹಾಜರಿದ್ದ ಮಕ್ಕಳಿಗೆ ಶಾಸ್ತ್ರೋಕ್ತವಾಗಿ ಅಕ್ಷರಾಭ್ಯಾಸದಲ್ಲಿ ಮೊದಲಿಗೆ ಓಂಕಾರ ಬರೆಸಲಾಯಿತು. ಇದಕ್ಕೂ ಮುನ್ನ ಹಿಂದೂ ಸಂಪ್ರದಾಯದಂತೆ ಸರಸ್ವತಿ, ಪೂಜೆ ನೆರವೇರಿಸಲಾಯಿತು. ಸಂಸ್ಥೆಯ ಅಧ್ಯಕ್ಷ ನಾಗರಾಜು, ಸಹ ಮುಖ್ಯ ಶಿಕ್ಷಕ ಗಿರಿಜಾ ಲಕ್ಷ್ಮಿ, ಪ್ರಾಂಶುಪಾಲ ಧನಂಜಯ್, ಡಾ. ಚನ್ನಶೆಟ್ಟಿ, ಸಹ ಶಿಕ್ಷಕಿ ಶ್ರೀಮತಿ ಪ್ರಿಯಾ, ಸಂಸ್ಥೆಯ ವಕ್ತಾರ ಬಾಬು ಇನ್ನಿತರಿದ್ದರು.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ

ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

ಬೇಕಾಗಿದ್ದಾರೆ
ತೋಟದ ಕೆಲಸ ಮಾಡಲು ಕುಟುಂಬ ಸಮೇತ ಕೆಲಸಕ್ಕೆ ಬೇಕಾಗಿದ್ದಾರೆ ಉತ್ತಮ ಸಂಬಳ ವಸತಿ ಸೌಲಭ್ಯಗಳನ್ನು ನೀಡಲಾಗುತ್ತದೆ ಸ್ಥಳ : ರಾಜಘಟ್ಟ, ಕೆ ಆರ್ ಪೇಟೆ. ಸಂಪರ್ಕಿಸಿ
9740345547 / 8762919647

WALK IN INTERVIEW
* Trained Montessori Teachers
Qualified with NTT/NST training
* Office Staff (Male) :
Any degree with computer knowledge.
SLD EXCELLENT PUBLIC SCHOOL
Yelwala, Mysore
7204284724 / 8722963130

ಬೇಕಾಗಿದ್ದಾರೆ
ರೂಪಾನಗರದಲ್ಲಿರುವ 4 ಸದಸ್ಯರ ಸಸ್ಯಹಾರಿ ಕುಟುಂಬಕ್ಕೆ
ಸಸ್ಯಹಾರಿ ಅಡಿಗೆ ಭಟ್ಟರು ಬೇಕಾಗಿದ್ದಾರೆ.
ಸೂಕ್ತ ವೇತನ ನೀಡಲಾಗುವುದು. ಸಂಪರ್ಕಿಸಿ:
9986079832

WANTED
COMPUTER TYPIST (Male / Female) FOR ADVOCATE OFFICE
Qualification: Typing - English & Kannada (Kan - Nudi / Baraha) in M.S. Word & Excel / Page Maker
9.30 am to 2 pm. Part time Salary Rs. 10,000. (Sunday: 10.30 to 3 pm) per month. For evening: (Male only). 7.00 pm to 11.30 pm. Salary: Rs. 10,000/- per month.
7349337469, 9448525072

DTCP SITES FOR SALE
ಹುಣಸೂರಿನ ಕೋಟೆ ರಸ್ತೆಯ "VCR ದೇವಗಿರಿ" ಬಡಾವಣೆ ನಿವೇಶನಗಳು ಮಾರಾಟಕ್ಕಿವೆ.
9886048471, 9036291192

WANTED
ಫರ್ನಿಷಿಂಗ್ ಅಂಗಡಿಯಲ್ಲಿ ಅಕೌಂಟೆಂಟ್ ಕೆಲಸಕ್ಕೆ
1 Year Experience ಇರುವವರು ಬೇಕಾಗಿದ್ದಾರೆ
Near Ashoka Road
Ph: 9916514950

ಬೇಕಾಗಿದ್ದಾರೆ
ಮೊಬೈಲ್ ಫೋನ್ ಶೋರೂಮ್‌ಗೆ ಕೆಲಸಕ್ಕೆ ಬೇಕಾಗಿದ್ದಾರೆ.
ಪಾರ್ಟ್ ಟೈಂ/ ಫುಲ್ ಟೈಂ
ಸಂಪರ್ಕಿಸಿ
9886409722

ತಕ್ಷಣ ಬೇಕಾಗಿದ್ದಾರೆ
ಸೆಕ್ಯೂರಿಟಿ ಗಾರ್ಡ್ಸ್ 15,000
12 ಗಂಟೆ ಪಾಳಿ ESI, PF
ಮೇಟಗಳ್ಳಿ ಇಂಡಸ್ಟ್ರಿಯಲ್ ಏರಿಯ. ಸಂಪರ್ಕಿಸಿ:
9035367083
6361548626

JKV LIFE FURNITURES
Manufacturers
WARDROBES
* Steel Almirahs
* Office Tables, Cots
* School Furnitures
50 / 40% LESSER THAN WOOD
J. Vijaykumar
Cell : 93433 74669
Off : 93792 24669

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 8660486818

ಬೋಳು ತಲೆಯ ಸಮಸ್ಯೆಯೇ?

ಕಿಮೊತೆರಪಿ ಚಿಕಿತ್ಸೆಗೆ ಒಳಪಡುತ್ತಿರುವ ರೋಗಿಗಳಿಗೆ ಪ್ರಥಾತ್ಮಕ ಬೆಲೆಯಲ್ಲಿ ಹೇರ್ ವಿಗ್‌ಗಳು ದೊರೆಯುತ್ತವೆ.
SMART HAIR FIXING
574, 9th Cross, Anikethana Road, kuvempunagar, Mysuru
MYSURU 9611028523 MANGALURU 9343142258

WANTED
• SALES REPRESENTAITVE
Male (3 Nos.)
Compulsory 2 wheeler with DL
• ACCOUNTANT - Female (1 No.)
Tally ERP 9, Freshers can apply
SAPTHAGIRI ENTERPRISES
Hootagalli Industrial area, Mysore
Mob : 96869 26448

NEWS JOB'S
Age (18-24) 10th PUC, BBM ಆದ Earn (10500/- ರಿಂದ 20000/-) PM, ವಿವಿಧ ವಿಭಾಗಕ್ಕೆ ಯಾವುದೇ ಶುಲ್ಕವಿರುವುದಿಲ್ಲ
Only Freshers, Mysore
(11AM to 3PM). Call:
ಅನು: 9342827788
9342238667

ಬೇಕಾಗಿದ್ದಾರೆ
ಅಶೋಕ ರಸ್ತೆ, ಗಾಂಧಿ ಚೌಕದ ಬಳಿಯಿರುವ ಹಾರ್ಡ್‌ವೇರ್ ಅಂಗಡಿಗೆ ಎರಡು ಪಾಳಿಯಲ್ಲಿ ಕೆಲಸ ಮಾಡಲು
ಕ್ಯಾಷಿಯರ್ ಬೇಕಾಗಿದ್ದಾರೆ
ಬೆಳಗ್ಗೆ 9.00 ರಿಂದ 2.00 ಮತ್ತು ಮಧ್ಯಾಹ್ನ 2.00 ರಿಂದ 8.00 ರವರೆಗೆ ನಿವೃತ್ತ ವ್ಯಕ್ತಿಗಳಿಗೆ ಆದ್ಯತೆ ಭಾನುವಾರ ರಜೆ. ಉತ್ತಮ ಸಂಬಳ.
ಸಂಪರ್ಕಿಸಿ: 91483 71092

HIRINGS
Oceanfin Chit Fund Pvt Ltd
* Accountant
* Sales Manager
* Business Development Officer
* Graphic Designer
Minimum 1 to 2 years Experience.
Mob: 9632806699

ಬೇಕಾಗಿದ್ದಾರೆ
ಮೈಸೂರಿನ ಪ್ರತಿಷ್ಠಿತ ಕಾರ್ಪೊರೇಟ್ ಕಂಪನಿಯಲ್ಲಿ ಕೆಲಸ ಮಾಡಲು ಹೌಸ್‌ಕೀಪಿಂಗ್, ರೆಸೆಪ್ಷನಿಸ್ಟ್ ಮತ್ತು ಡ್ರೈವರ್ ಬೇಕಾಗಿದ್ದಾರೆ.
Mob: 9632806699

V-GUARD

10 ವರ್ಷಗಳ ವಾರೆಂಟಿ
Solar Water Heater SALES & SERVICE
BAJAJ FINSERV
SUNZONE SOLAR SYSTEM
VM Double Road, Kuvempunagar, Mysuru
9845175443

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 7204494854

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

ಬೇಕಾಗಿದ್ದಾರೆ
ಪೆಟ್ರೋಲ್ ಬಂಕ್‌ನಲ್ಲಿ ಹೆಲ್ಪರ್ ಮತ್ತು ಕ್ಯಾಷಿಯರ್ ಕೆಲಸ ಮಾಡಲು ಹುಡುಗರು ಮತ್ತು ಹುಡುಗಿಯರು ಬೇಕಾಗಿದ್ದಾರೆ.
ಸ್ಥಳ: ವಿಜಯನಗರ ವಾಟರ್ ಟ್ಯಾಂಕ್ ಹತ್ತಿರ, ಮೈಸೂರು ನಗರ
6364748485

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 8618373596

HOUSE FOR SALE
Newly built 3 BHK independent house
East face @ Lalithadri Nagar (South), near Ring Road, behind Indian Oil Petrol Bunk
9206666888, 9663452259

Construction Work
* No. 1 Construction Company now in Mysore.
* Total transparency, financial security.
* Residential / commercial.
* Book a free consultation.
Call: 9110861343

SITE FOR SALE
40x60
RESIDENTIAL SITE
Vijaya Nagar 4th Stage
Adiswar Nagar
East Facing, 60 Ft Road
88845 51387

ತಕ್ಷಣ ಬೇಕಾಗಿದ್ದಾರೆ
ಪ್ರತಿಷ್ಠಿತ PU ಕಾಲೇಜಿಗೆ
Part Time Lectures ಬೇಕಾಗಿದ್ದಾರೆ
English - 1, Computer Science - 1
ಅನುಭವ ಇರುವವರಿಗೆ ಆದ್ಯತೆ ಮತ್ತು ಆಕರ್ಷಕ ವೇತನ ನೀಡಲಾಗುವುದು.
7019012485

VEHICLE FOR SALE
Eicher 6 - Wheeler
24 Ft Container
ONLY 80,000 KMS DRIVEN
COMPANY MAINTAINED VEHICLE
EXCELLENT CONDITION
SERIOUS BUYERS ONLY
88845 51387

WANTED
Receptionist for a Real Estate Company
(ONLY FEMALES)
Qualification: Degree with good fluency in Kannada and English
8861989545

ಸೈಟು ಮಾರಾಟಕ್ಕಿದೆ
30x50 N/F
KBL SILICON CITY PHASE-2
BEML ಹತ್ತಿರ, KRS Road
9243536373

ಕಳೆದಿದೆ
#940, ಕಸಬಾ ಹೋಬಳಿ, ಬೋಗಾದಿ, ಮೈಸೂರು ಇದರ ತಿಳುವಳಿಕೆ ಪತ್ರ, ಹಕ್ಕುಪತ್ರ, ಅಲಾಟ್‌ಮೆಂಟ್ ಲೆಟರ್, ಮ್ಯಾನುಯಲ್ ಖಾತಾ, ಸಬ್‌ರಿಜಿಸ್ಟರ್ ಪತ್ರ ಕಳೆದಿದೆ. ಯಾರಿಗಾದರೂ ಸಿಕ್ಕಲ್ಲಿ ಸಂಪರ್ಕಿಸಿ:
Mob: 9036453423

ಬೇಕಾಗಿದ್ದಾರೆ
* ಅಡುಗೆ ಮಾಡಲು
* ತಿಂಡಿಗಳನ್ನು ತಯಾರಿಸಲು ಹೆಲ್ಪರ್ಸ್
* ಸ್ಟೋರ್ ಕೀಪರ್
* ಪಾತ್ರೆ ತೊಳೆಯಲು
* ಡೆಲಿವರಿ ಬಾಯ್ಸ್
* ಕೌಂಟರ್ ಸೇಲ್ಸ್
* ಡ್ರೈವರ್ ಬೇಕಾಗಿದ್ದಾರೆ ಸಂಪರ್ಕಿಸಿ
Mob: 9606116663 / 4

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 6360485921

SBIT TRAVELS
Fixed Departure
ODISHA 5 DAYS
July 18th
Air tickets |Meals | Hotel | Sightseeing |All tours and transfers
9343524127
(Saraswathipuram, Mysuru)

ಸೋಲಾರ್ ವಾಟರ್ ಹೀಟರ್
Solar Water Heater

ಸೇಲ್ಸ್, ಸರ್ವೀಸ್ ರಿಪೇರಿ, ಎಕ್ಸ್‌ಚೇಂಜ್ ಹಾಗೂ ಬಿಡಿ ಭಾಗಗಳಿಗಾಗಿ ಸಂಪರ್ಕಿಸಿ
Vinaykrishna
9611648636

Govt. Job ಇರುವ ವಿಚ್ಛೇದಿತೆಗೆ 2ನೇ ಸಂಬಂಧಕ್ಕೆ ವರ ಬೇಕಾಗಿದ್ದಾರೆ.
Beautiful kurubas, age 41 / 5.5 / BE / AEE, Govt. Engineer. Salary: 85,000 & well settled independent ಇರುವಂತಹ ವಿಚ್ಛೇದಿತೆಗೆ ಯಾವುದೇ ಜಾತಿಯ ಅಭ್ಯಂತರವಿಲ್ಲದೆ 2ನೇ ಸಂಬಂಧಕ್ಕೆ ವಿಧುರ / ವಿಚ್ಛೇದಿತ / ವ್ಯಾಪಾರಸ್ಥ / ನೌಕರಸ್ಥ / ವಿದ್ಯಾವಂತ ವರ ಬೇಕಾಗಿದ್ದಾರೆ. (ಮಕ್ಕಳಿದ್ದರೂ ಪರವಾಗಿಲ್ಲ). ಮೈಸೂರು.
Mob: 9742458242

ತಕ್ಷಣ ಬೇಕಾಗಿದ್ದಾರೆ
ಬೋಗಾದಿ ಪೆಟ್ರೋಲ್ ಬಂಕ್ ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡುಗಳು ಬೇಕಾಗಿದ್ದಾರೆ.
ವಿದ್ಯಾರ್ಹತೆ: SSLC ಮತ್ತು ಮೇಲ್ಪಟ್ಟು
ಸಂಬಳ: 18,000 + W/o. ಸಂಪರ್ಕಿಸಿ:
9880727819, 9620777819

RCC HOUSE FOR SALE
40x100 at Chandramouleshwara Road (C.M. Road), K.R. Nagar Town, North facing.
Price: Rs. 1.50 Cr. (slightly negotiable).
9886637597, 7259018457

ಬೇಕಾಗಿದ್ದಾರೆ
ಮೈಸೂರಿನಲ್ಲಿರುವ ಹೆಸರಾಂತ ದ್ವಿಚಕ್ರ ವಾಹನದ ಶೋರೂಂಗೆ ಕೂಡಲೇ ಬೇಕಾಗಿದ್ದಾರೆ.
Mysore/Nanjangud/Hunsur.
* Marketing sales Executive.
(Qualification-Any degree-fresher or experienced)
ನಿಮ್ಮ ಅರ್ಜಿಗಳನ್ನು ಶೀಘ್ರವೇ ಕಳಿಸಿ. ಮೇಲ್ ಐಡಿ:– d11263.sales@baldealer.com
ಕರೆ ಮಾಡಿ:– 9743647484

JOB VACANCY
CUREHOOD LIFE SCIENCES COMPANY, HQ:- MYSORE,
MANDYA & HASSAN REQUIRES, MEDICAL REPRESENTATIVE
AGE: 35 YEARS & BELOW
Qualification: any degree, both freshers & experienced are preferable
Contact: ADARSH- 7259762385

ಡ್ರೈವರ್‌ಗಳು ಬೇಕಾಗಿದ್ದಾರೆ
ಲಘು ವಾಣಿಜ್ಯ ವಾಹನಗಳು (LCV) ಹೂಟಗಳ್ಳಿ, ಮೈಸೂರು. ಸಂಪರ್ಕಿಸಿ:
Mob: 8548880033

ಬೇಕಾಗಿದ್ದಾರೆ
ಮೈಸೂರಿನ ಕಾವೇರಿ ಸಮೂಹ ವಿದ್ಯಾಸಂಸ್ಥೆಯ ಹಾಸ್ಟೆಲ್‌ಗಳ ಮೇಲ್ವಿಚಾರಣೆಗಾಗಿ ಎರಡು ಪುರುಷ ಮತ್ತು ಎರಡು ಮಹಿಳಾ ವಾರ್ಡನ್‌ಗಳ ಅವಶ್ಯಕತೆ ಇದೆ. ವಿದ್ಯಾರ್ಹತೆ: ಪಿಯುಸಿ. ಅನುಭವ: ಕನಿಷ್ಠ 03 ವರ್ಷ. ಸಂಪರ್ಕಿಸಿ:
Mob: 9901270428

ಸಸ್ಯಹಾರಿಗಳಿಗೆ ಮಾತ್ರ
1 ರೂಂ, ದೊಡ್ಡ ಹಾಲ್, ಅಡುಗೆ ಮನೆ, ದೇವರ ಮನೆ, ಬಾತ್‌ರೂಂ ಮತ್ತು ಇಂಡಿಯನ್ ಟಾಯ್ಲೆಟ್ ಮತ್ತು ಪಾರ್ಕಿಂಗ್ ವ್ಯವಸ್ಥೆ ಇರುವ ಮನೆ ಜೆ.ಪಿ. ನಗರ ಪೊಲೀಸ್ ಬೂತ್ ಹತ್ತಿರ, ನಂ. 442, (ಗ್ರೌಂಡ್ ಫ್ಲೋರ್) 23ನೇ ಕ್ರಾಸ್‌ನಲ್ಲಿ ಬಾಡಿಗೆಗೆ ಇದೆ. ಸಂಪರ್ಕಿಸಿ:
Mob: 9448342593

ಸೂರ್ಯ ಜ್ಯೋತಿ ಯೋಗ ಪ್ರತಿಷ್ಠಾನ
ಆರೋಗ್ಯ, ವ್ಯಾಪಾರ, ಮದುವೆ, ನೌಕರಿ ಹಾಗೂ ಇತರೆ ಸಮಸ್ಯೆಯೇ ನಾವು ಹೇಳಿದ ಸಮಯದಲ್ಲಿ ಪರಿಹಾರವಾಗದಿದ್ದಲ್ಲಿ ನಿಮ್ಮ ಹಣ ವಾಪಸ್ಸು ಮಾಡಲಾಗುವುದು. ಮತ್ತು ಕೆಲಸಕ್ಕೆ ಹುಡುಗ, ಹುಡುಗಿ ಬೇಕಾಗಿದ್ದಾರೆ.
Whatsapp 9482906377

SITES FOR SALE
(40x60)
* @ Jayanagara
* Kuvempunagar
Mob: 93421-25252

ಸೈಟು ಮಾರಾಟಕ್ಕಿದೆ
30x40 ಮುಡಾ ಸೈಟು, ಸಾತಗಳ್ಳಿ 'B' ಜೋನ್, ಮೈಸೂರು. ಸಂಪರ್ಕಿಸಿ:
Mob: 9343748715

BLUE SKY HOLIDAYS
Thailand Package
4N 5D 45,000+
Include Flight, Stay, Food, Sight Seeing.
8722620344
8722848005

COMMERCIAL SITE FOR SALE
60x50, Main Road
Vidyaranyapuram, Mysore.
8970057592
8618513849

ಬೇಕಾಗಿದ್ದಾರೆ
ಜೆಎಲ್‌ಬಿ ರೋಡ್‌ನಲ್ಲಿರುವ HPCL ಪೆಟ್ರೋಲ್ ಬಂಕ್‌ಗೆ ಕೆಲಸಕ್ಕೆ ಹುಡುಗರು ಬೇಕಾಗಿದ್ದಾರೆ.
ಸಂಪರ್ಕಿಸಿ: ಮಹೇಶ್
Mob: 8971538250

ಬ್ರಾಹ್ಮಣ ವರ ಬೇಕಾಗಿದೆ
ಶೀಘ್ರ ವಿವಾಹಕ್ಕಾಗಿ ಎಲ್ಲಾ ಜಾತಿಯ ವಧು-ವರರಿಗಾಗಿ ಸಂಪರ್ಕಿಸಿ. ಬ್ರಾಹ್ಮಣ ಕನ್ಯೆ (ವಧುವಿನ) ವಯಸ್ಸು 22, PUC ಕಲಿತಿರುವ / ವಯಸ್ಸು 25, MBA / ವಯಸ್ಸು 28, SSLC / ವಯಸ್ಸು 33, PUC / ವಯಸ್ಸು 38, ಎಸ್‌ಎಸ್‌ಎಲ್‌ಸಿ / ವಯಸ್ಸು 30, BE ಇಂಜಿನಿಯರ್ ವಧುವಿಗೆ ಸೂಕ್ತವಾದ ಸದ್ಗುಣವಂತ ವರ ಬೇಕಾಗಿದೆ. ವಧುಗಳಿಗೆ ಮಾತ್ರ ಉಚಿತ ನೊಂದಾವಣೆ.
(ವಧು–ವರಾನ್ವೇಷಣ ಕೇಂದ್ರ)
Mob: 8904834199

ತಕ್ಷಣ ಬೇಕಾಗಿದ್ದಾರೆ
ನಾನ್ ವೆಜ್ ಭಟ್ಟರು–1, ಕ್ಯಾಪ್ಟನ್–3, ಕ್ಲೀನಿಂಗ್ ಲೇಡೀಸ್–6 ದೋಸೆ ಭಟ್ಟರು–2, ಕ್ಯಾಷಿಯರ್–2 ರೆಸ್ಟೋರೆಂಟ್ ಮ್ಯಾನೇಜರ್–1
ಕೂಡಲೇ ಸಂಪರ್ಕಿಸಿ:
9901506954

SITES WANTED
@ Nagawala, Yelawala, Anandsagara, Nithyanandasagara & Mysrore surroundings.
Quick Regn.
Mob: 95388-39926

ಬೇಕಾಗಿದ್ದಾರೆ
ಹಿನಕಲ್‌ನ ಮೈಸೂರು ಹುಣಸೂರು ರಸ್ತೆಯಲ್ಲಿನ ವಾಣಿಜ್ಯ ಕೇಂದ್ರಕ್ಕೆ ಟಾಟಾ ಏಸ್‌ಗೆ ಡ್ರೈವರ್ ಬೇಕಾಗಿದ್ದಾರೆ.
Mob: 9342118940

ಬೇಕಾಗಿದ್ದಾರೆ
ಹನುಮಂತು ಹೋಟೆಲ್‌ಗೆ ಹುಡುಗರು ಬೇಕಾಗಿದ್ದಾರೆ
ಸಂಬಳ: 12000 ದಿಂದ 14000
ಬಿ.ಎನ್. ಸ್ಟ್ರೀಟ್, ಮಾರ್ಕೆಟ್ ಬಿಲ್ಡಿಂಗ್, ಮಂಡಿಮೊಹಲ್ಲಾ, ಮೈಸೂರು ಸಂದರ್ಶನಕ್ಕೆ ಸಂಪರ್ಕಿಸಿ:
9611431188

SITE FOR SALE
30x40, S/F, MUDA, Title Deed, Corporation Khatha, Yashodara Nagara Telecom Layout, Bogadi. Price: 1.05 Cr
Contact: 7019769205

ಹೆಲ್ತ್‌ಕೇರ್ ತರಬೇತಿ
SSLC/PUC ಆದವರಿಗೆ ಡಿಪ್ಲೊಮಾ ಇನ್ ಹೆಲ್ತ್‌ಕೇರ್ ತರಬೇತಿ ಕೊಡಲಾಗುತ್ತದೆ. ತರಬೇತಿ ಪಡೆದವರು ಉತ್ತಮ ಆಸ್ಪತ್ರೆಗಳಲ್ಲಿ ಕೆಲಸ ಮಾಡುತ್ತಿದ್ದಾರೆ.
ಸೆಂಟ್ ಮೇರೀಸ್ ಆಸ್ಪತ್ರೆ, ಸಿಲ್ಕ್ ಫ್ಯಾಕ್ಟರಿ ಸರ್ಕಲ್, NIE ಕಾಲೇಜ್ ಪಕ್ಕ, ಮೈಸೂರು
Mob: 9916908454

ವುಡನ್ ರ್ಯಾಕ್ಸ್ ಮಾರಾಟಕ್ಕಿದೆ [20 No]
ಬಟ್ಟೆ ಅಂಗಡಿ, ಮೊಬೈಲ್ ಅಂಗಡಿ ಮತ್ತು ದಿನಸಿ ಅಂಗಡಿಗೆ ಉಪಯುಕ್ತ. ಸಂಪರ್ಕಿಸಿ:
9902843908
9606276345

ಬೇಕಾಗಿದ್ದಾರೆ
TATA Ace company attached vehicle ಚಲಾಯಿಸಲು Valid Badge ಹೊಂದಿರುವ ಡ್ರೈವರ್ ಬೇಕಾಗಿದ್ದಾರೆ.
ಸ್ಯಾಲರಿ: 20 K CTC
ಟೈಮಿಂಗ್: 9AM to 9PM
Place: ಬೆಳವಾಡಿ. Contact:
8105357262

ಕಟ್ಟಡ ಸೆಂಟ್ರಿಂಗ್ ಸಾಮಗ್ರಿಗಳು ಬಾಡಿಗೆಗೆ ದೊರೆಯುತ್ತದೆ
MS Sheet (3'x2')
Jack / Props,
Acrospan, C-Clamp
Mob: 8660560083
www.uniqbuilders.com

ದಾಖಲಾತಿ ಕಳೆದಿದೆ
ಬಿ. ಯಶೋಧ, #29, ರಾಜೇಂದ್ರ ನಗರ, ಮೈಸೂರು, ನನಗೆ ಸೇರಿದ ಮೈಸೂರು ನಗರ ಎನ್.ಆರ್. ಮೊಹಲ್ಲಾ, ರಾಜೇಂದ್ರ ನಗರ ಮುಖ್ಯ ರಸ್ತೆ, ನಿವೇಶನ ನಂ. 72 (ನಗರ ಪಾಲಿಕೆಯಿಂದ ನೀಡಿರುವ ಮನೆ ನಂ. 28) ಇದೆ ಅಳತೆ 72x47 ಅಡಿಯುಳ್ಳ ನಿವೇಶನದ ಮಂಜೂರಾತಿ ಪತ್ರ, ಸ್ವಾಧೀನ ಪತ್ರ ಮತ್ತು ವರ್ಗಾವಣೆ ಪತ್ರ ಕಳೆದುಹೋಗಿದೆ. ಸಿಕ್ಕಿದವರು ಸಂಪರ್ಕಿಸಿ:
Mob: 9964889988

ದಟ್ಟಗಳ್ಳಿ, ಕುವೆಂಪುನಗರ, ಸರಸ್ವತಿಪುರಂ, ರಾಮಕೃಷ್ಣ ನಗರ. ಸೈಟ್ ಮನೆ ಜಮೀನು ಮಾರುವವರು ಕೊಳ್ಳುವವರು ಸಂಪರ್ಕಿಸಿ:
Mob: 9844351921

FOR SALE
1. 20x30 G+1, M Block, Kuvempunagar
2. 20x30 Rajarajeshwari Ngr
3. 27x60 & 30x45 Commercial present Old House @ Jayanagar
4. 20x30 G+1 @ Giridharshini Lyt
5. 80x78 Krishnamurthy Puram
6. 30x40 Sites Near RT Nagar @ Just 20 Lakhs
PRAKRUTHI PROPERTIES
95386 90359, 90359 90359

ಹೊಸ ಮನೆ ಮಾರಾಟಕ್ಕಿದೆ
ಹುಣಸೂರಿನ ಸೋಮನಹಳ್ಳಿಯ ಹೊಸ ಬಡಾವಣೆಯಲ್ಲಿ 2 BHK ಹೊಸ ಮನೆ ಮಾರಾಟಕ್ಕಿದೆ. ಸಂಪರ್ಕಿಸಿ:
Mob: 8971015729

BECOME A TEACHER
NURSERY TEACHERS TRAINING
PRIMARY TEACHERS TRAINING
(Recognised by M H R D New Delhi)
S S L C PASS , PUC FAIL/ PASS, ANY DEGREE, GET CERTIFIED DIPLOMA HOLDER .
Start earning from next year
Jnana gangothri Convent
WatsApp/call 9113980741

SITES FOR SALE
30x50 E/F
30x50 W/F
30x40 S/F
Suvarnanagara, Bogadi.
9742421313, 9945779947

ಬೇಕಾಗಿದ್ದಾರೆ
ಸೆಕ್ಯೂರಿಟಿ ಗಾರ್ಡುಗಳು
ಸ್ಥಳ: 1) ಮೊಗರಹಳ್ಳಿ (ಮಂಟಿ), (2) ಪಂಪ್‌ಹೌಸ್, (3) ಹೆಬ್ಬಾಳು ಇಂಡಸ್ಟ್ರಿಯಲ್ ಏರಿಯಾ, (4) ಹರ್ಷ ರೋಡ್, ಮೈಸೂರು ಸಿಟಿ.
9686422400, 9242406261

ಸೈಟು ಬೇಕಾಗಿದೆ
ಲಾಲ್ ಬಹದ್ದೂರ್ ಶಾಸ್ತ್ರಿ ನಗರ / ವಸಂತ ನಗರ / ಶಾಂತವೇರಿ ಗೋಪಾಲಗೌಡ ನಗರ
20x30, 30x40
Mob: 9164560494

ತಕ್ಷಣ ಬೇಕಾಗಿದ್ದಾರೆ
ಹುಟಗಳ್ಳಿ ಮತ್ತು ಮೇಟಗಳ್ಳಿ ಇಂಡಸ್ಟ್ರಿಯಲ್ ಏರಿಯಾದಲ್ಲಿ ಕೆಲಸ ಮಾಡಲು ಹುಡುಗರು ಮತ್ತು ಹುಡುಗಿಯರು ಬೇಕಾಗಿದ್ದಾರೆ.
JK Tyre - SSLC pass only (ಮುಟ, ಹೆಲ್ಪರ್, ಸೂಪರ್‌ವೈಸರ್ ಕೆಲಸ ಕೊಡಲು ಮಾತ್ರ) ಹುಡುಗರು ಮತ್ತು ಹುಡುಗಿಯರು.
6362491336, 8105651601
Automotive Axle Ltd. and Kirloskar Company (SSLC and ITI pass only) ಹುಡುಗರಿಗೆ ಮಾತ್ರ
Age limit: 18-30 or 35. ಸೌಲಭ್ಯ: ESI, PF, Canteen, Room ಕಲ್ಪಿಸಲಾಗುತ್ತದೆ
7019380847, 9148335918

ಕೆಲಸಕ್ಕೆ ಬೇಕಾಗಿದ್ದಾರೆ
ಸೆಕ್ಯೂರಿಟಿ ಗಾರ್ಡ್ (ಪುರುಷರು):
ಅನ್ನೋನ್ ಹತ್ತಿರ, ಹೆಬ್ಬಾಳ ಇಂಡಸ್ಟ್ರಿಯಲ್ ಏರಿಯಾ, ದಟ್ಟಗಳ್ಳಿ, ಚಾಮುಂಡಿ ಬೆಟ್ಟ ಹತ್ತಿರ, ಜೆ.ಪಿ. ನಗರ, ಮೇಟಗಳ್ಳಿ ಇಂಡಸ್ಟ್ರಿಯಲ್ ಏರಿಯಾ, ಬೋಗಾದಿ ಹತ್ತಿರ, ಬೋಗಾದಿ ರಿಂಗ್ ರೋಡ್, ಬನ್ನಿಮಂಟಪ, ಬೇಂದ್ರೆ ನಗರ, ವಿಜಯನಗರ 1st, ವಿಜಯನಗರ 4th stage, Jaylaksskshmi puram, KD. Circle, ಬಂಟಿಕೊಪ್ಪಲ್. T.K ಲೇಔಟ್.
Contact : 9606808975

ಬೇಕಾಗಿದ್ದಾರೆ
ಮೈಸೂರಿನ ದಟ್ಟಗಳ್ಳಿ ಸುತ್ತಮುತ್ತ ಕಾರ್ಯನಿರ್ವಹಿಸಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ. ವಯಸ್ಸು: 18–45. ESI and PF ಸೌಲಭ್ಯವಿರುತ್ತದೆ.
ನಿಮಿಷಾಂಬ ಸೆಕ್ಯೂರಿಟಿ ಬ್ಯೂರೋ ಮತ್ತು ಯುಟಿಲಿಟಿ ಸರ್ವೀಸಸ್,
#380/ಎ, 2ನೇ ಮಹಡಿ, ಕೃಷ್ಣ ವಿಲಾಸ ರಸ್ತೆ, ಮೈಸೂರು
Mob: 9606023463

ತಕ್ಷಣ ಬೇಕಾಗಿದ್ದಾರೆ
ಮಂಡ್ಯ ಹಾಗೂ ಮೈಸೂರು ಜಿಲ್ಲೆಯಲ್ಲಿರುವ ಪ್ರಸಿದ್ಧ ಸಂಸ್ಥೆಯಲ್ಲಿ Data Entry Operators ಹುದ್ದೆಗೆ ಕೆಲಸ ಖಾಲಿ ಇದೆ. ಖಾಲಿ ಇರುವ ಸಂಖ್ಯೆ– 30 Nos. ವಿದ್ಯಾರ್ಹತೆ: 2nd PUC, Degree, Master Degree. ಹೊಸಬರು ಅರ್ಜಿ ಸಲ್ಲಿಸಬಹುದು. ಇಂದೇ ಸಂಪರ್ಕಿಸಿ:
ಮಂಡ್ಯ 9606827667
ಮೈಸೂರು 9606822012

ತಕ್ಷಣ ಬೇಕಾಗಿದ್ದಾರೆ
ಸೆಕ್ಯೂರಿಟಿ ಗಾರ್ಡ್ಸ್ 55 ವರ್ಷದೊಳಗಿನ ಪುರುಷರು ಬೇಕಾಗಿದ್ದಾರೆ. SSLC ವಿದ್ಯಾರ್ಹತೆ ಇರಬೇಕು. ವಿಜಯನಗರ, ಹಿನಕಲ್, ಬೋಗಾದಿ, ಟಿ.ಕೆ. ಲೇಔಟ್, ಶಾರದಾದೇವಿನಗರ, ಗೋಕುಲಂ, ವಿಜಯಶ್ರೀಪುರ ಹಾಗೂ ಸುತ್ತಮುತ್ತಲಿನವರು ಸಂಪರ್ಕಿಸಿ:
Mob: 7259598615

WANTED TEACHERS
for reputed CBSE School in Mysuru city. MA, B.Ed. English with good communication skill, computer teacher must have SATS and UDISE knowledge. Contact:
Mob: 8495983613

ಮನೆ ಮಾರಾಟಕ್ಕಿದೆ
40x50, 2 BHK, RBI ರಸ್ತೆ, ಬೆಲವತ್ತ, ಮೈಸೂರು.
Mob: 9844666003
(ಮಧ್ಯವರ್ತಿಗಳಿಗೆ ಅವಕಾಶವಿಲ್ಲ)

HOUSE FOR RENT
3 BHK all attached bath, 1st Floor Vijayanagar 2nd Stage, near K.D. Circle.
Single room for rent.
Mob: 9945516373

HOUSE FOR LEASE
3 BHK with garden and parking behind SV Residency Garden Bite road ring road Vijayanagar 2nd Stage, Hinkal, Mysore.
MoB: 7760011155
Lease amount 25 Lakhs (slightly negotiable.)

ಸೈಟು ಬೇಕಾಗಿದೆ
ವಿಜಯನಗರ 4ನೇ ಹಂತ, 2ನೇ ಫೇಸ್, 30x40 ಅಳತೆಯ ಸೈಟು ಬೇಕಾಗಿದೆ. ಆಸಕ್ತರು ಸಂಪರ್ಕಿಸಿ:
Mob: 8095184599

ಮೈಸೂರು ಮಿತ್ರ 46 – ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 10 ರಲ್ಲಿ

ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಿ, ಸಮಸ್ಯೆಗೆ ಸ್ಪಂದಿಸಿ

ಅಧಿಕಾರಿಗಳಿಗೆ ಜಿಲ್ಲಾ ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ಟಿ.ಜೆ.ಉದೇಶ್ ಸೂಚನೆ

ಕೆ.ಆರ್.ನಗರ, ಜೂ.11– ಸರ್ಕಾರಿ ಕಚೇರಿಗಳಿಗೆ ಕೆಲಸಕ್ಕಾಗಿ ಆಗಮಿಸುವ ಸಾರ್ವಜನಿಕರೊಂದಿಗೆ ಅಧಿಕಾರಿಗಳು ಸೌಜನ್ಯದಿಂದ ವರ್ತಿಸಿ ಅವರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಜಿಲ್ಲಾ ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ಟಿ.ಜೆ.ಉದೇಶ್ ಸೂಚಿಸಿದರು.

ಪಟ್ಟಣದ ಆಡಳಿತಸೌಧದ ಕೃಷ್ಣ ರಾಜೇಂದ್ರ ಸಭಾಂಗಣದಲ್ಲಿ ಬುಧವಾರ ನಡೆದ ಸಾರ್ವಜನಿಕ ಕುಂದುಕೊರತೆ ದೂರು ಸ್ವೀಕಾರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ನಿಯಮಾನುಸಾರ ಕೆಲಸ ಮಾಡಲು ನಿಮಗೆ ಸಾಧ್ಯವಾಗದಿದ್ದರೆ ಅಂತಹ ದೂರುಗಳಿಗೆ ಹಿಂಬರಹವನ್ನು ಕಡ್ಡಾಯವಾಗಿ ನೀಡಬೇಕು ಎಂದು ತಿಳಿಸಿದರು.


ಜಿಲ್ಲಾ ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ಟಿ.ಜೆ.ಉದೇಶ್ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು.

ಕೆ.ಆರ್.ನಗರ ತಾಲೂಕು ವ್ಯಾಪ್ತಿಯ ಸರ್ಕಾರಿ ಕಚೇರಿಗಳಿಗೆ ಅಧಿಕಾರಿಗಳು ನಿಗದಿತ ಸಮಯಕ್ಕೆ ಬರುವುದಿಲ್ಲ. ಬಂದರೂ ಕೆಲವರು ಟೀ ಮತ್ತು ಕಾಫಿ ನೆಪ ಹೇಳಿಕೊಂಡು ಸರಿಯಾಗಿ ಕರ್ತವ್ಯ ನಿರ್ವಹಿಸದೆ ಜನರಿಗೆ ಅನಾನುಕೂಲ ಮಾಡುತ್ತಿದ್ದಾರೆ ಎಂದು ವ್ಯಾಪಕ ದೂರುಗಳು ಕೇಳಿ ಬರುತ್ತಿದ್ದು ಇದು ಪುನರಾವರ್ತನೆಯಾದರೆ ಕಠಿಣ ಕ್ರಮ ಕೈಗೊಳ್ಳುವ ಎಚ್ಚರಿಕೆ ನೀಡಿದರು.

ಮುಂದಿನ ದಿನಗಳಲ್ಲಿ ಕಚೇರಿಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲಿಸುವುದರ ಜೊತೆಗೆ ತಾಲೂಕು ಕೇಂದ್ರದಲ್ಲಿ ಅಹವಾಲು ಆಲಿಸಿದ ಸಮಯದಲ್ಲಿ ನೀಡಿದ ದೂರುಗಳನ್ನು, ಜನರು ನೀಡಿದ ಅರ್ಜಿಗಳ ವಿಲೇವಾರಿ ಬಗ್ಗೆಯೂ ಪರಿಶೀಲನೆ ನಡೆಸಲಿದ್ದು ಸಮಸ್ಯೆಗಳ ಪರಿಹಾರಕ್ಕೆ ಮುಂದಾಗದ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡುವುದಾಗಿ ತಿಳಿಸಿದರು.

ನಿತ್ಯ ಕಚೇರಿಗೆ ಆಗಮಿಸುವ ಸಂದರ್ಭ ಕಡ್ಡಾಯವಾಗಿ ಹಾಜರಾತಿಗೆ ಸಹಿ ಹಾಕುವುದರೊಂದಿಗೆ ಚಲನವಲನ ವಹಿ ದಾಖಲಿಸಿ ಸರ್ಕಾರದ ನಿರ್ದೇಶನದಂತೆ ಗುರುತಿನ ಚೀಟಿ ಧರಿಸಿಕೊಂಡು ಕೆಲಸ ನಿರ್ವಹಿಸಬೇಕು. ಸರ್ಕಾರದ ಸವಲತ್ತುಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸಲು ಕೆಲಸ ಮಾಡಿ ಎಂದು ಕಿವಿಮಾತು ಹೇಳಿದರು.

ಇಂದಿನ ಕುಂದುಕೊರತೆ ಸಭೆಯಲ್ಲಿ ಇಲಾಖೆಗಳ ವಿರುದ್ಧ 30 ದೂರುಗಳು ಬಂದಿದ್ದು, ಆ ಪೈಕಿ ಕೆ.ಆರ್.ನಗರ 21 ಮತ್ತು ಸಾಲಿಗ್ರಾಮದಿಂದ 9 ದೂರುಗಳು ಬಂದಿವೆ. ಕಳೆದ ಬಾರಿಗೆ ಹೋಲಿಸಿದರೆ ಈ ಬಾರಿ 11 ಹೆಚ್ಚುವರಿ ದೂರುಗಳು ಬಂದಿವೆ. ಇದು ಅಧಿಕಾರಿಗಳ ಕಾರ್ಯ ಕ್ಷಮತೆಯನ್ನು ಪ್ರಶ್ನಿಸುವಂತಾಗಿದ್ದು ಭವಿಷ್ಯದಲ್ಲಿ ಇಂತಹ ದೂರು ಮತ್ತೆ ಬಾರದಂತೆ ನೋಡಿಕೊಳ್ಳಬೇಕು ಎಂದರು.

ಲೋಕಾಯುಕ್ತ ಡಿವೈಎಸ್‌ಪಿಗಳಾದ ಮ್ಯಾಥ್ಯು ಥಾಮಸ್, ವೆಂಕಟೇಶ್, ಇನ್ಸ್‌ಪೆಕ್ಟರ್‌ಗಳಾದ ರವಿಕುಮಾರ್, ಪಿ.ಉಮೇಶ್, ತಹಸೀಲ್ದಾರ್ ಜಿ.ಸುರೇಂದ್ರ ಮೂರ್ತಿ, ತಾಪಂ ಇಓ ವಿ.ಪಿ.ಕುಲದೀಪ್, ಪುರಸಭೆ ಮುಖ್ಯಾಧಿಕಾರಿ ಬಿ.ವಿ.ವೆಂಕಟೇಶ್, ತಾಲೂಕು ಆರೋಗ್ಯಾಧಿಕಾರಿ ಡಾ.ಡಿ.ನಟರಾಜು, ಸಹಾಯಕ ಕೃಷಿ ನಿರ್ದೇಶಕ ಕೆ.ಜೆ.ಮಲ್ಲಿಕಾರ್ಜುನ್, ಸೆಸ್ಕಾಂ ಎಇಇ ಅರ್ಕೇಶ್ವರಮೂರ್ತಿ, ಎಸ್‌ಐ ಆರ್.ಸ್ವಾಮಿಗೌಡ, ಸಿಡಿಪಿಓ ಸಿ.ಎಂ.ಅಣ್ಣಯ್ಯ, ಶಿರಸ್ತೇದಾರ್ ಅಸ್ಲಾಂಬಾಷ, ಎಡಿಎಲ್‌ಆರ್ ಶ್ರೀಕಂಠಶರ್ಮಾ, ಜನಸಂಪನ್ಮೂಲ ಇಲಾಖೆಯ ಆಯಾಜ್ ಪಾಷಾ, ಆದರ್ಶ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ದೂರುದಾರರು ಹಾಜರಿದ್ದರು.

ಹುಣ್ಣಿಮೆ: ಶ್ರೀಕಂಠೇಶ್ವರ ದೇವಾಲಯದಲ್ಲಿ ಭಕ್ತಸಾಗರ

ನಂಜನಗೂಡು, ಜೂ.11– ಪುರಾಣ ಪ್ರಸಿದ್ಧ ದಕ್ಷಿಣಕಾಶಿ ನಂಜನಗೂಡಿನ ಶ್ರೀಕಂಠೇಶ್ವರ ದೇವಾಲಯಕ್ಕೆ ಹುಣ್ಣಿಮೆ ಪ್ರಯುಕ್ತ ಸಾವಿರಾರು ಭಕ್ತರು ಆಗಮಿಸಿ ವಿಶೇಷ ಪೂಜೆ ಸಲ್ಲಿಸಿ ದೇವರ ದರ್ಶನ ಪಡೆದು ಪುನೀತರಾದರು.



ಮಂಗಳವಾರ ಸಂಜೆಯಿಂದಲೇ ರಾಜ್ಯದ ವಿವಿದೆಡೆಗಳಿಂದ ಆಗಮಿಸಿದ ಭಕ್ತರು, ಬುಧವಾರ ಮುಂಜಾನೆ 4 ಗಂಟೆಯಿಂದಲೇ ಕಪಿಲಾ ನದಿಯಲ್ಲಿ ಮಿಂದು, ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದರು. ಬಳಿಕ ತೂಕದ ತುಲಾಭಾರ, ಉರುಳುಸೇವೆ, ಈಡು ಗಾಯಿ ಸೇವೆ, ಧೂಪದ ಸೇವೆ ದೇವಿಗೆ ಕುಂಕುಮಾರ್ಚನೆ, ಶ್ರೀಕಂಠೇಶ್ವರಸ್ವಾಮಿಗೆ ಬೆಳ್ಳಿ ಅಂಗಾಂಗಳ ಹರಕೆಯನ್ನು ಹುಂಡಿಗೆ ಹಾಕಿ ಶ್ರದ್ಧಾಭಕ್ತಿಯಿಂದ ಸೇವೆ ಸಲ್ಲಿಸಿ ಭಕ್ತಿ ಮೆರೆದರು.

ಶ್ರೀಕಂಠೇಶ್ವರಸ್ವಾಮಿ ಅವರಿಗೆ ಚಿನ್ನದ ಕೊಳಗ ತೊಡಿಸಿ, ವಿವಿಧ ಪುಷ್ಪಗಳಿಂದ ಅಲಂಕರಿಸಲಾಗಿತ್ತು. ಅಲ್ಲದೇ ಸ್ವಾಮಿಗೆ ಪಂಚತೀರ್ಥಗಳ ಅಭಿಷೇಕ, ಬಿಲ್ವಾರ್ಚನೆ, ಪಂಚಾಮೃತ ಅಭಿಷೇಕ, ಕ್ಷೀರಾಭಿಷೇಕ, ಶಾಲಾನ್ನ ಅರ್ಪಣೆ, ಕಲ್ಲು ಸಕ್ಕರೆ ಪೂಜೆಗಳನ್ನು ಸಾಂಗೋಪವಾಗಿ ನೆರವೇರಿಸಲಾಯಿತು. ನಂತರ ಮಹಾಮಂಗಳಾರತಿ ಮಾಡಿ ಭಕ್ತರಿಗೆ ದರ್ಶನಕ್ಕೆ ಅನುವು ಮಾಡಿಕೊಡಲಾಯಿತು. ದೇವಾಲಯಕ್ಕೆ ಆಗಮಿಸಿದ್ದ ಭಕ್ತರಿಗೆ ವಿಶೇಷವಾಗಿ ಅನ್ನ, ಸಾಂಬಾರ್, ಪಾಯಸ, ಪಲ್ಯದ ಭೋಜನದ ವ್ಯವಸ್ಥೆ ಮಾಡಲಾಗಿತ್ತು.

ವಿದ್ಯಾರ್ಥಿಗಳಿಗೆ ಶರಣ ಸಾಹಿತ್ಯದ ಅರಿವು ಅಗತ್ಯ

ಜಿಲ್ಲಾ ಶರಣ ಸಾಹಿತ್ಯ ಪರಿಷತ್ ನಿಕಟಪೂರ್ವ ಅಧ್ಯಕ್ಷ ಎಂ.ಚಂದ್ರಶೇಖರ್


ಸರಗೂರಲ್ಲಿ ನಡೆದ ದತ್ತಿ ಉಪನ್ಯಾಸ ಸಮಾರಂಭವನ್ನು ಗಣ್ಯರು ಉದ್ಘಾಟಿಸಿದರು.

ಸರಗೂರು, ಜೂ.11– ಶರಣರ ತತ್ವ, ಸಂದೇಶ ಸಾರುವ ದತ್ತಿ ಕಾರ್ಯಕ್ರಮಕ್ಕೆ ಸಾರ್ವಜನಿಕರ ಸಹಕಾರ ಅವಶ್ಯಕವಾಗಿದ್ದು, ಶರಣ ಸಾಹಿತ್ಯದ ಸಾರವನ್ನು ವಿದ್ಯಾರ್ಥಿಗಳು ಅರಿಯಬೇಕು ಎಂದು ಜಿಲ್ಲಾ ಶರಣ ಸಾಹಿತ್ಯ ಪರಿಷತ್ ನಿಕಟಪೂರ್ವ ಅಧ್ಯಕ್ಷ ಎಂ.ಚಂದ್ರಶೇಖರ್ ತಿಳಿಸಿದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಮೈಸೂರು, ಪಡುವಲು ಶ್ರೀವಿರಕ್ತಮಠ ಬಿಡಗಲು, ತಾಲೂಕು ಶರಣ ಸಾಹಿತ್ಯ ಪರಿಷತ್ತು ಸರಗೂರು ಇವರ ಸಂಯುಕ್ತಾಶ್ರಯದಲ್ಲಿ ಬುಧವಾರ ಪಟ್ಟಣದ ಪಡುವಲು ಶ್ರೀವಿರಕ್ತಮಠ ಬಿಡಗಲುವಿನಲ್ಲಿ ಶ್ರೀಮಠದ ಮಹದೇವ ಸ್ವಾಮೀಜಿ ಅವರ ಸಾನಿಧ್ಯದಲ್ಲಿ ನಡೆದ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, 12ನೇ ಶತಮಾನದ ಶರಣರ ವಚನಗಳು 21ನೇ ಶತಮಾನಕ್ಕೂ ಪ್ರಸ್ತುತವಾಗಿವೆ. ಹೀಗಾಗಿ ಶರಣರ ಸಂದೇಶಗಳ ಬಗ್ಗೆ ತಿಳಿದುಕೊಳ್ಳುವ ಮೂಲಕ ಯುವ ಪೀಳಿಗೆ ಅವರ ಆದರ್ಶಗಳನ್ನು ಅಳವಡಿಸಿಕೊಳ್ಳಬೇಕು. ಶರಣರ ಚಿಂತನೆಗಳನ್ನು ಉಳಿಸಿ, ಬೆಳೆಸಲು ಮುಂದಾಗಬೇಕು ಎಂದು ಕಿವಿಮಾತು ಹೇಳಿದರು.

ಚಾಮರಾಜನಗರ ಜಿಲ್ಲಾ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಎಂ.ಎನ್.ನಂದೀಶ್ ಕುಮಾರ್ ಮಾತನಾಡಿ, ಮೊದಲು ವೀರಶೈವ ಲಿಂಗಾಯತ ಸಮಾಜ ಒಗ್ಗೂಡಬೇಕು. ಆಗ ಮಾತ್ರ ಏನು ಬೇಕಾದರೂ ಸಾಧಿಸಬಹುದು. ವಿಶ್ವಗುರು ಬಸವಣ್ಣನವರಂತೆ ನಮ್ಮ ಸಮಾಜವು ವಿಶ್ವಕ್ಕೆ ಮಾದರಿಯಾಗಿದೆ. ಹೀಗಾಗಿ ಸಮಾಜದ ಬಂಧುಗಳು ಈ ಬಗ್ಗೆ ಚಿಂತಿಸಬೇಕು. ಜನಮುಖಿ, ಸಮಾಜಮುಖಿ ಚಿಂತನೆ, ಕೆಲಸಗಳನ್ನು ಮಾಡಿದ ರಾಜೇಂದ್ರ ಶ್ರೀಗಳನ್ನು ನಿತ್ಯ ಸ್ಮರಣೆ ಮಾಡಲಾಗುತ್ತಿದೆ ಎಂದರು.

ಜೆಎಸ್‌ಎಸ್ ಮಹಾವಿದ್ಯಾಪೀಠ ನಿರ್ದೇಶಕ ಪ್ರೊ.ಮೊರಬದ ಮಲ್ಲಿಕಾರ್ಜುನ, ಜಿಲ್ಲಾ ಶರಣ ಸಾಹಿತ್ಯ ಪರಿಷತ್‌ನ ಸಿದ್ದಪ್ಪ ಮಾತನಾಡಿದರು. ಈ ವೇಳೆ ನಂಜನಗೂಡಿನ ಕುರಹಟ್ಟಿ ಶ್ರೀಗುರುಮಲ್ಲೇಶ್ವರ ದಾಸೋಹ ಮಠದ ಮಾದಪ್ಪ ಸ್ವಾಮೀಜಿ, ಭುಜಗಯ್ಯನ ಹುಂಡಿ ಶ್ರೀಗುರುಮಲ್ಲೇಶ್ವರ ದಾಸೋಹ ಮಠದ ಶಿವಲಿಂಗೇಂದ್ರ ಸ್ವಾಮೀಜಿ ಆಶೀರ್ವಚನ ನೀಡಿದರು. ಶ್ರೀಮಠದ ಶ್ರೀಕಾಳವಡೆಯ ಗುರುಗಳ ಗದ್ದಿಗೆ ಹಾಗೂ ಶ್ರೀವೀರಭದ್ರೇಶ್ವರಸ್ವಾಮಿ ದೇವಾಲಯದಲ್ಲಿ ಹುಣ್ಣಿಮೆ ಪೂಜೆ ನಡೆದು ದಾಸೋಹ ಏರ್ಪಡಿಸಲಾಗಿತ್ತು.

ದತ್ತಿ ಉಪನ್ಯಾಸವನ್ನು ದಿ.ಸುಮಂಗಳಮ್ಮ ಸಿದ್ದಲಿಂಗಸ್ವಾಮಿ ದತ್ತಿ, ಕೆಂಪಮ್ಮ, ಎ.ಬಸಪ್ಪನವರ ದತ್ತಿ, ಜಗದ್ಗುರು ಡಾ.ರಾಜೇಂದ್ರ ಸ್ವಾಮೀಜಿಗಳ ಹೆಸರಿನಲ್ಲಿ ನಡೆಸಲಾಯಿತು. ಜಿಲ್ಲಾ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಯುವಘಟಕ ಅಧ್ಯಕ್ಷ ಸಿ.ಎಸ್.ಅರ್ಜುನ್, ತಾಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಗುರುಸ್ವಾಮಿ, ಕೆಂಪಣ್ಣ ಸೇರಿದಂತೆ ಇತರರಿದ್ದರು.

ನಿವೃತ್ತ ದೈಹಿಕ ಶಿಕ್ಷಣ ಪರಿವೀಕ್ಷಕರಿಗೆ ಬೀಳ್ಕೊಡುಗೆ


ದೈಹಿಕ ಶಿಕ್ಷಣ ಪರಿವೀಕ್ಷಕ ಹೆಚ್.ಎಸ್.ಲೋಕೇಶ್ ಅವರನ್ನು ಸನ್ಮಾನಿಸಿ ಬೀಳ್ಕೊಡಲಾಯಿತು.

ಹುಣಸೂರು, ಜೂ.11– ಒಬ್ಬ ಉತ್ತಮ ಶಿಕ್ಷಕ ಸಾವಿರಾರು ಪ್ರಜ್ಞಾವಂತ ಉತ್ತಮ ವಿದ್ಯಾರ್ಥಿಗಳನ್ನು ಸಮಾಜಕ್ಕೆ ಕಾಣಿಕೆ ನೀಡಬಲ್ಲರು ಎಂದು ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಎನ್.ಮಹದೇವ್ ತಿಳಿಸಿದರು.

ನಗರದ ಶಿಕ್ಷಕರ ಭವನದಲ್ಲಿ ನಡೆದ ನಿವೃತ್ತ ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಹೆಚ್.ಎಸ್.ಲೋಕೇಶ್ ಅವರ ಬೀಳ್ಕೊಡುಗೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸೇವೆ ಮಾನವನ ಅಂತಃಕರಣದ ಪರಿಶುದ್ಧತೆಗೆ ಪೂರಕವಾಗಿದ್ದು, ಯಾವುದೇ ಪ್ರತಿಫಲಾಪೇಕ್ಷೆ ಇಲ್ಲದೇ ಶುದ್ಧ ಮನಸ್ಸಿನಿಂದ ಸೇವೆ ಮಾಡುವ ಶಿಕ್ಷಕರು ಸಮಾಜದಲ್ಲಿ ವಿದ್ಯಾರ್ಥಿಗಳ ಹಾಗೂ ಪೋಷಕರ ಹೃದಯದಲ್ಲಿ ಶಾಶ್ವತವಾಗಿ ಉಳಿಯುತ್ತಾರೆ. ಅಂತಹ ಉತ್ತಮ ಗುಣಗಳನ್ನು ಹೊಂದಿರುವ ಶಿಕ್ಷಕ ಲೋಕೇಶ್ ಅವರ ಸೇವೆ ಸಾರ್ಥಕವಾಗಿದೆ ಇವರ ನಡೆ ನುಡಿ ಎಲ್ಲರಿಗೂ ಮಾದರಿ ಎಂದರು.

ತಾಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಮಹೇಶಾರಾಧ್ಯ ಮಾತನಾಡಿದರು. ಕ್ಷೇತ್ರ ಶಿಕ್ಷಣ ಸಮನ್ವಯಾಧಿಕಾರಿ ಹೇಮಲತಾ, ತಾಲೂಕು ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ಜಯರಾಂ, ಜಗದೀಶ್, ಉಪನ್ಯಾಸಕ ಬಿ.ಸಿ.ಚನ್ನೇಗೌಡ, ಪಿರಿಯಾಪಟ್ಟಣ ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರಾದ ರಮೇಶ್, ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಕುಮಾರಸ್ವಾಮಿ, ಜಿಲ್ಲಾ ದೈಹಿಕ ಶಿಕ್ಷಣ ಪರಿವೀಕ್ಷಕ ಪ್ರಭುಸ್ವಾಮಿ, ಸೋಮಶೇಖರ್, ಮುಖ್ಯ ಶಿಕ್ಷಕ ಆರ್.ಕೃಷ್ಣ, ರುಕ್ಮಿಣಿ, ಜನಾರ್ಧನ್, ಡಾ.ಚಂದ್ರು, ಜಯರಾಂ, ಮಂಜುನಾಥ್, ಕರಿಮುನ್ನೀಸಾ, ಡಿಸೋಜಾ, ಪುಟ್ಟಣ್ಣಯ್ಯ ಇತರರಿದ್ದರು.

ಸಾಲಬಾಧೆ: ರೈತ ಆತ್ಮಹತ್ಯೆ

ಹೆಚ್.ಡಿ.ಕೋಟೆ, ಜೂ.11– ಸಾಲಬಾಧೆ ತಾಳಲಾರದೇ ರೈತನೋರ್ವ ಕ್ರಿಮಿನಾಶಕ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ಯಲಮತ್ತೂರು ಗ್ರಾಮದಲ್ಲಿ ನಡೆದಿದೆ.




ಗ್ರಾಮದ ನಿವಾಸಿ ಮಾದಪ್ಪ(57) ಆತ್ಮಹತ್ಯೆ ಮಾಡಿಕೊಂಡವರು. ಈತ ತನ್ನ 2 ಎಕರೆ ಜಮೀನಿನಲ್ಲಿ ಹತ್ತಿ, ಜೋಳ ಬೆಳೆದಿದ್ದರು. ಅಲ್ಲದೆ 2 ಎಕರೆ ಭೂಮಿಯನ್ನು ಗುತ್ತಿಗೆ ಪಡೆದು ಬಾಳೆ ಬೆಳೆದಿದ್ದರು. ವ್ಯವಸಾಯ ಮಾಡಲು ಪಟ್ಟಣದ ಉಜ್ಜೀವನ್ ಬ್ಯಾಂಕ್, ಬೀಚನಹಳ್ಳಿಯ ಕಾವೇರಿ ಗ್ರಾಮೀಣ ಬ್ಯಾಂಕ್, ಕೈಸಾಲ ಸೇರಿದಂತೆ 10 ಲಕ್ಷ ಮಾಡಿದ್ದರು. ಆದರೆ ಸಾಲ ಮರು ಪಾವತಿಸಲು ಸಾಧ್ಯವಾಗದೇ ಖಿನ್ನತೆಗೆ ಒಳಗಾಗಿದ್ದರು.

ಬುಧವಾರ ಬೆಳಗ್ಗೆ ಸ್ವಗ್ರಾಮದಿಂದ ಹ್ಯಾಂಡ್ ಪೋಸ್ಟ್‌ಗೆ ಆಗಮಿಸಿದ ಮಾದಪ್ಪ ರಸಗೊಬ್ಬರ ಅಂಗಡಿಯಲ್ಲಿ ಬೆಳೆಗೆ ಸಿಂಡಿಸಲು ಕೀಟನಾಶಕ ಖರೀದಿಸಿದ್ದು, ಬಳಿಕ ಅರಣ್ಯ ವಸತಿ ಗೃಹದ ಸಮೀಪ ಸೇವಿಸಿ ರಸ್ತೆಯಲ್ಲಿ ಬಿದ್ದು ಒದ್ದಾಡುತ್ತಿದ್ದನ್ನು ಗಮನಿಸಿದ ಸಾರ್ವಜನಿಕರು ತಕ್ಷಣ ಆಂಬುಲೆನ್ಸ್ ಕರೆಸಿ ಆಸ್ಪತ್ರೆಗೆ ಕರೆದೊಯ್ಯುವ ಮಾರ್ಗ ಮಧ್ಯೆ ಸಾವನ್ನಪ್ಪಿದ್ದಾರೆ. ಬಳಿಕ ಶವದ ಮರಣೋತ್ತರ ಪರೀಕ್ಷೆ ನಡೆಸಿ ವಾರಸುದಾರರಿಗೆ ಒಪ್ಪಿಸಲಾಯಿತು. ಈ ಸಂಬಂಧ ಹೆಚ್.ಡಿ.ಕೋಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವಿಷಯ ತಿಳಿದು ಆಸ್ಪತ್ರೆಗೆ ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಜಯರಾಮ್, ಅಂತರಸಂತೆ ಉಪ ತಹಸೀಲ್ದಾರ್ ತನುರಾಜ್ ಭೇಟಿ ನೀಡಿ ಸರ್ಕಾರದಿಂದ ಪರಿಹಾರ ಕೊಡಿಸುವ ಭರವಸೆ ನೀಡಿದರು.

ರಸ್ತೆ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿ ಪೂಜೆ


ತಿ.ನರಸೀಪುರ ತಾಲೂಕಿನ ಯಾಚೇನಹಳ್ಳಿ ಗ್ರಾಮದ ಸುಲ್ತಾನ್ ರಸ್ತೆಯಿಂದ ನೇರಳಕೆರೆ ಮುಖ್ಯ ರಸ್ತೆವರೆಗಿನ 1.5 ಕೋಟಿ ರೂ. ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ರಮೇಶ್‌ಬಾಬು ಬಂಡಿಸಿದ್ದೇಗೌಡ ಗುದ್ದಲಿ ಪೂಜೆ ನೆರವೇರಿಸಿದರು.

ಗೋರಹಳ್ಳಿ ಡೈರಿ ಉಪಾಧ್ಯಕ್ಷೆ, ನಿರ್ದೇಶಕರಿಗೆ ಸನ್ಮಾನ

ಬೆಟ್ಟದಪುರ, ಜೂ.11– ಇಲ್ಲಿಗೆ ಸಮೀಪದ ಗೋರಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಉಪಾಧ್ಯಕ್ಷೆ ಯಶೋಧಮ್ಮ ಹಾಗೂ ನಿರ್ದೇಶಕರಾದ ಮಲ್ಲೇಶ್ ಹಾಗೂ ನಾಗರಾಜ್ ಅವರನ್ನು ಪಿರಿಯಾಪಟ್ಟಣ ತಾಲೂಕು ವೀರಶೈವ ಲಿಂಗಾಯತ ಸಮಾಜ ಹಾಗೂ ಬೆಟ್ಟದಪುರದ ಶರಣ ಸಾಹಿತ್ಯ ಪರಿಷತ್ ಮತ್ತು ಬೆಟ್ಟದಪುರದ ಸ್ವರ್ಣಂಬ ಚಿಟ್ಸ್ ಪ್ರೈ. ಲಿಮಿಟೆಡ್ ಸಹಯೋಗದಲ್ಲಿ ಸನ್ಮಾನಿಸಲಾಯಿತು. ಬೆಟ್ಟದಪುರ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೂರ್ಗಲ್ ಶಿವಕುಮಾರ್ ಮಾತನಾಡಿ, ಸಂಘ ಸಂಸ್ಥೆಗಳು ಸಾರ್ವಜನಿಕರ ಸ್ವತ್ತಾಗಿದ್ದು ಅವುಗಳನ್ನು ಅಭಿವೃದ್ಧಿಪಡಿಸಬೇಕು. ಎಲ್ಲರ ಸಹಕಾರದಿಂದ ಸಹಕಾರ ಸಂಘಗಳು ಅಭಿವೃದ್ಧಿ ಹೊಂದಿದ್ದರೆ ಗ್ರಾಮದಲ್ಲಿ ರೈತರು ಆರ್ಥಿಕವಾಗಿ ಮುಂದೆ ಬರಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.



ಗ್ರಾಮದ ಮುಖಂಡ ಮಹದೇವಪ್ಪ ಮಾತನಾಡಿದರು. ಕಾರ್ಯಕ್ರಮದಲ್ಲಿ ಮುಖಂಡರಾದ ಜಗದೀಶ್, ಮಲ್ಲಪ್ಪ, ಕುಮಾರಪ್ಪ ಗಣೇಶ್, ಬಸವರಾಜ್, ಬೆಟ್ಟದಪುರದ ಶಿವದೇವ್, ಬಿ.ಸಿ.ರಾಜೇಂದ್ರ, ಬಿ.ಎಸ್.ಮಹದೇವಪ್ಪ, ಕೂರ್ಗಲ್ ಶಿವಶಂಕರ್, ಗ್ರಾಮದ ಮುಖಂಡರು ಸೇರಿದಂತೆ ಇತರರಿದ್ದರು.

ಅಣ್ಣೂರು ಗ್ರಾಮ ಪಂಚಾಯಿತಿ ಜಿಲ್ಲೆಗೆ ಮಾದರಿ

ಹೆಚ್.ಡಿ.ಕೋಟೆ, ಜೂ.11– ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳ ನಡುವೆ ಸಮನ್ವಯತೆ ಇದ್ದರೆ ನೂರರಷ್ಟು ಅಭಿವೃದ್ಧಿ ಸಾಧ್ಯ ಎಂಬುದಕ್ಕೆ ಅಣ್ಣೂರು ಗ್ರಾಪಂ ಜಿಲ್ಲೆಗೆ ಮಾದರಿಯಾಗಿದೆ ಎಂದು ಜಿಪಂ ಉಪಕಾರ್ಯದರ್ಶಿ ಡಾ.ಕೃಷ್ಣರಾಜ್ ತಿಳಿಸಿದರು.


ಕೆಡಿಪಿ ಸಭೆಯಲ್ಲಿ ಫಲಾನುಭವಿಗಳಿಗೆ ಆದೇಶ ಪತ್ರ ವಿತರಣೆ ಮಾಡಲಾಯಿತು.

ತಾಲೂಕಿನ ಅಣ್ಣೂರು ಗ್ರಾಪಂನಲ್ಲಿ ನಡೆದ ಕೆಡಿಪಿ ಸಭೆ ಮತ್ತು ಫಲಾನುಭವಿಗಳಿಗೆ ಆದೇಶ ಪತ್ರ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಮೊದಲ ಬಾರಿಗೆ ಗ್ರಾಪಂ ಮಟ್ಟದಲ್ಲಿ ಕೆಡಿಪಿ ಸಭೆ ನಡೆಸುತ್ತಿರುವುದು ಶ್ಲಾಘನೀಯ ವಿಚಾರ. ಜನಪ್ರತಿನಿಧಿಗಳು, ಅಧಿಕಾರಿಗಳ ಹೊಂದಾಣಿಕೆಯಿಂದ ಈ ಪಂಚಾಯಿತಿ ಹೆಚ್ಚು ಅಭಿವೃದ್ಧಿ ಕಾಣುತ್ತಿದೆ. ಪಂಚಾಯ್ತಿಯಲ್ಲಿ ನಡೆದಿರುವ ನರೇಗಾ, ವಸತಿ, ಸ್ವಚ್ಛತಾ ಮತ್ತು ಮತ್ತಿತರ ಕೆಲಸಗಳಲ್ಲಿ ನೂರರಷ್ಟು ಸಾಧನೆ ಹೆಮ್ಮೆಯ ವಿಷಯ ಎಂದರು.

ಗ್ರಾಪಂ ಉಪಾಧ್ಯಕ್ಷ ಮಹೇಶ್ ಮಾತನಾಡಿ, ಸರ್ಕಾರದ ಆದೇಶವಿದ್ದರೂ ಗ್ರಾಪಂಗಳಲ್ಲಿ ಕೆಡಿಪಿ ಸಭೆಗಳನ್ನು ಮಾಡುತ್ತಿಲ್ಲ. ಏಕೆಂದರೆ ಅಧಿಕಾರಿಗಳಿಗೆ ಮಾಹಿತಿ ಕೊರತೆ ಇದೆ ಆದರೆ ನಾವು ಗ್ರಾಪಂ ಸದಸ್ಯರೆಲ್ಲಾ ತೀರ್ಮಾನಿಸಿ ತಾಲೂಕು ಮಟ್ಟದ ಅಧಿಕಾರಿಗಳನ್ನು ಕರೆದು ಕೆಡಿಪಿ ಸಭೆ ಮಾಡುತ್ತಿದ್ದೇವೆ ಎಂದರು.

ಈ ವೇಳೆ ವಿವಿಧ ವಸತಿ ಯೋಜನೆಯಡಿ 210 ಫಲಾನುಭವಿಗಳ ಪೈಕಿ 87 ಫಲಾನುಭವಿಗಳಿಗೆ ಸಾಂಕೇತಿಕವಾಗಿ ಕಾಮಗಾರಿ ಆದೇಶ ಪತ್ರ ವಿತರಿಸಲಾಯಿತು. ಸಭೆಯಲ್ಲಿ ಗ್ರಾಪಂ ಅಧ್ಯಕ್ಷೆ ಜಯಮ್ಮ, ಇಓ ಧರಣೇಶ್, ಸ್ಥಾಯಿ ಸಮಿತಿ ಅಧ್ಯಕ್ಷ ಮಹೇಶ್, ಸದಸ್ಯ ಸ್ವಾಮಿ, ಪಿಡಿಓ ಸಂತೋಷ ನಾಗ್, ಕಾರ್ಯದರ್ಶಿ ಮೋಹನ್, ನರೇಗಾ ಅಧಿಕಾರಿ ಅಶಿಷ್ ಶೆಟ್ಟಿ, ಗ್ರಾಪಂ ಸದಸ್ಯರಾದ ಸ್ವಾಮಿ, ಜಯಮ್ಮ, ಸರಸ್ವತಿ, ಸಿದ್ದಮ್ಮ, ರಾಜೇಶ್, ಶಿವಮ್ಮ, ಶಶಿಕುಮಾರ್, ಜಯಲಕ್ಷ್ಮಿ, ರಾಜು ಇದ್ದರು.


ಕೊಲೆ ಆರೋಪಿಗೆ ಜೀವಾವಧಿ ಶಿಕ್ಷೆ

ಹುಣಸೂರು, ಜೂ.11– ಹಳೇ ವೈಷಮ್ಯ ಹಾಗೂ ಹಣಕಾಸಿನ ವಿಚಾರಕ್ಕೆ ಸಂಬಂಧಿಸಿದಂತೆ ವ್ಯಕ್ತಿಯೋರ್ವನನ್ನು ಹತ್ಯೆ ಮಾಡಿದ್ದ ಆರೋಪಿಗೆ 8ನೇ ಅಧಿಕ ಜಿಲ್ಲಾ ಸತ್ರ ನ್ಯಾಯಾಧೀಶ ಟಿ.ಗೋವಿಂದಯ್ಯ ಅವರು 30 ಸಾವಿರ ದಂಡ, ಜೀವಾವಧಿ ಶಿಕ್ಷೆ ವಿಧಿಸಿದ್ದಾರೆ.

ತಾಲೂಕಿನ ಧರ್ಮಾಪುರ ಗ್ರಾಮದ ರಾಜನಾಯಕ(52) ಹತ್ಯೆಯಾದವರಾಗಿದ್ದು, ಅದೇ ಗ್ರಾಮದ ಕೆಂಡನಾಯಕ (48) ಜೀವಾವಧಿ ಶಿಕ್ಷೆಗೆ ಗುರಿಯಾದವರು. ಕಳೆದ ಏಳೆಂಟು ವರ್ಷಗಳ ಹಿಂದೆ ಮೃತ ರಾಜನಾಯಕ ಕೆಂಡನಾಯಕನಿಗೆ 50 ಸಾವಿರ ಸಾಲ ನೀಡಿದ್ದರು. ಹಣದ ವಿಚಾರವಾಗಿ ಇವರಿಬ್ಬರ ನಡುವೆ ಆಗಾಗ್ಗೆ ಜಗಳ ನಡೆಯುತ್ತಿತ್ತು ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ 2021ರ ಸೆ.17ರಂದು ರಾತ್ರಿ ರಾಜನಾಯಕ ತನ್ನ ಮನೆಗೆ ಹೋಗುವಾಗ ಕೆಂಡನಾಯಕ ಮನೆ ಮುಂದೆಯೇ ಹೋಗಬೇಕಾಗಿದ್ದು, ಈ ವೇಳೆ ಹೋಗುವಾಗ ಹಿಂದಿನಿಂದ ಬಂದ ಕೆಂಡನಾಯಕ ರಾಜನಾಯಕನ ಮೇಲೆ ಮಚ್ಚಿನಿಂದ ಹಲ್ಲೆ ನಡೆಸಿ ಕೊಲೆ ಮಾಡಿದ್ದ. ಈ ಸಂಬಂಧ ಬಿಳಿಕೆರೆ ಠಾಣೆಯಲ್ಲಿ ಪ್ರಕರಣ ದಾಖಲಾಗಿ ಪೊಲೀಸರು ಆರೋಪಿಯನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದರು.

ಪ್ರಕರಣ ಸಂಬಂಧ ತನಿಖೆ ನಡೆದು ಕೊಲೆ ಮಾಡಿರುವುದು ಸಾಬೀತಾದ ಕಾರಣ ಆರೋಪಿ ವಿರುದ್ಧ ಬಿಳಿಕೆರೆ ಠಾಣೆಯ ಹಿಂದಿನ ನಿರೀಕ್ಷಕ ಎಂ.ರವಿಕುಮಾರ್ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ಹುಣಸೂರು ನ್ಯಾಯಾಲಯದ ನ್ಯಾಯಾಧೀಶ ಟಿ.ಗೋವಿಂದಯ್ಯ ಆರೋಪಿಗೆ ಜೀವಾವಧಿ ಶಿಕ್ಷೆ ವಿಧಿಸಿ ತೀರ್ಪು ನೀಡಿದ್ದಾರೆ. ಸರ್ಕಾರದ ಪರವಾಗಿ ಕೆ.ಎಂ.ಸಿ.ಶಿವಶಂಕರಮೂರ್ತಿ ವಾದ ಮಂಡಿಸಿದರು.

ವ್ಯಕ್ತಿ ನಾಪತ್ತೆ



ಬೆಟ್ಟದಪುರ, ಜೂ.11– ಪಿರಿಯಾಪಟ್ಟಣ ತಾಲೂಕಿನ ಭುವನಹಳ್ಳಿ ಗ್ರಾಮದ ರಾಜಶೆಟ್ಟಿ(35) ನಾಪತ್ತೆಯಾಗಿದ್ದು, ಈ ಸಂಬಂಧ ಬೆಟ್ಟದಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಇವರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಹತ್ತಿರದ ಪೊಲೀಸ್ ಠಾಣೆ ಹಾಗೂ ಬೆಟ್ಟದಪುರ ಠಾಣಾಧಿಕಾರಿ 9480805060 ಅವರನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

ಹೆಚ್ಚಿನ ವರ್ಗೀಕೃತ ಜಾಹೀರಾತು ಪುಟ 9ರಲ್ಲಿ

LOST CERTIFICATE NOTICE

I, K.C. Jeevan Yadav, S/o K. Chandrashekar, residing at #108, 7th Cross, Raghavendra Badavane, Mysore-570 019 have lost my original Diploma certificate issued by Vidya Vardhaka Polytechnic, Mysore bearing 488CE17015 and passing year 2020. Please do contact if found.

Mob: 6360941310

HOUSE FOR RENT

2 Bedroom house for rent at 1st Floor, 55, 6th Cross, 1st Stage, Gokulam near Nirmala Convent. Contact:

9986589770 / 9986724216

ಬೇಕಾಗಿದ್ದಾರೆ

ಪೆಟ್ರೋಲ್ ಬಂಕ್‌ನಲ್ಲಿ ಕೆಲಸ ಮಾಡಲು ಏರ್ ಮ್ಯಾನ್ ಬೇಕಾಗಿದ್ದಾರೆ. ಸಂಬಳ: 12,000.

Mob: 7899754149

WANTED

1) Helpers
2) ITI Fitters, turners, mechatronics
3) Office assistant, office accountants (12th Commerce pass, B.Com.)

Mob: 0821-2582668, 7204445679

Address: Mystech Machines, #Q113, 4th Cross, 8th Main, Hebbal Industrial Estate, Mysore-570 016

Email: mystechmachines@gmail.com

ಕಳೆದಿದೆ

ನಾಗರಾಜಪ್ಪ, ಓ, ನಂ. 2623, 6ನೇ ಕ್ರಾಸ್, ಹೊಸಬಂಡಿಕೇರಿ, ಕೆ.ಆರ್. ಮೊಹಲ್ಲಾ, ಮೈಸೂರು, ಇಲ್ಲಿ ವಾಸವಿದ್ದು, ಇವರಿಗೆ ಸೇರಿದ ಚಾಮರಾಜನಗರ ತಾಲ್ಲೂಕು, ಹರವೆ ಹೋಬಳಿ, ವೀರನಪುರ ಗ್ರಾಮದಲ್ಲಿರುವ ಸರ್ವೆ ನಂ. 87/2 ಮತ್ತು 87/3ಬಿ ಜಮೀನಿನ ಎಲ್ಲಾ ಮೂಲ ದಾಖಲಾತಿಗಳು ಕಳೆದುಹೋಗಿದ್ದು, ಸಿಕ್ಕಿದವರು ಸಂಪರ್ಕಿಸಿ: Mob: 9620945088

COMMERCIAL SITE FOR SALE

40x55

Bogadi-Gaddige Road, Deepa Nagar.

Call: 9880273834

ಕೃಷಿ ಸಂಕಲ್ಪ ಅಭಿಯಾನದ ವೈಜ್ಞಾನಿಕ ವಿಚಾರ ಗಮನದಲ್ಲಿಟ್ಟುಕೊಂಡು

ರೈತರು ಮುಂಗಾರಿಗೆ ಸನ್ನದ್ಧರಾಗಬೇಕು: ಡಾ.ಎಂ.ಚಂದ್ರೇಗೌಡ

ತಿ.ನರಸೀಪುರ, ಜೂ.11– ಕೃಷಿ ಸಂಕಲ್ಪ ಅಭಿಯಾನದಿಂದ ದೊರೆಯುವ ವೈಜ್ಞಾನಿಕ ವಿಚಾರ ಮತ್ತು ಆಯಾಮಗಳನ್ನು ರೈತರು ಗಮನದಲ್ಲಿಟ್ಟುಕೊಂಡು ಮುಂಗಾರಿಗೆ ಸನ್ನದ್ಧರಾಗಬೇಕು ಎಂದು ಬೆಂಗಳೂರಿನ ಐಸಿಎಆರ್ ಕೃಷಿ ಅಳವಡಿಕೆ ಸಂಶೋಧನಾ ಸಂಸ್ಥೆ ಪ್ರಧಾನ ವಿಜ್ಞಾನಿ ಡಾ.ಎಂ.ಚಂದ್ರೇಗೌಡ ತಿಳಿಸಿದರು.

ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯ, ಸುತ್ತೂರಿನ ಐಸಿಎಆರ್, ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರ, ಕೃಷಿ, ತೋಟಗಾರಿಕೆ, ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಗಳು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಂಯುಕ್ತಾಶ್ರಯದಲ್ಲಿ ಪಟ್ಟಣದ ಜೆಎಸ್‌ಎಸ್ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಉದ್ಘಾಟಿಸಿ ಅವರು ಮಾತನಾಡಿದರು.


ವಿಕಸಿತ ಕೃಷಿ ಸಂಕಲ್ಪ ಅಭಿಯಾನವನ್ನು ವಿಜ್ಞಾನಿ ಡಾ.ಎಂ.ಚಂದ್ರೇಗೌಡ ಉದ್ಘಾಟಿಸಿದರು.

ರೈತಪರ ಯೋಜನೆಗಳಾದ ಕೃಷಿ ಭಾಗ್ಯ, ರಾಷ್ಟ್ರೀಯ ಆಹಾರ ಮತ್ತು ಪೌಷ್ಟಿಕ ಸುಭದ್ರತೆ ಯೋಜನೆ, ಕೃಷಿ ಸಂಸ್ಕರಣೆ, ಕೃಷಿ ಯಾಂತ್ರೀಕರಣ ನೈಸರ್ಗಿಕ ಕೃಷಿ ಯೋಜನೆ, ಪಿಎಂ ಕಿಸಾನ್ ಯೋಜನೆಗಳ ಬಗ್ಗೆ ವಿವರಣೆ ನೀಡಿದ ಅವರು ರೈತರು ಉತ್ತಮ ಇಳುವರಿ ಪಡೆಯಲು 17 ಸಸ್ಯ ಪೋಷಕಾಂಶಗಳು ಬೇಕಿವೆ. ರಸಗೊಬ್ಬರ, ಸಸ್ಯ ಪೋಷಕಾಂಶಗಳನ್ನು ಸಕಾಲದಲ್ಲಿ ಪೂರೈಸುವುದರಿಂದ ಉತ್ತಮ ಇಳುವರಿ ಪಡೆಯಬಹುದು. ಸಾರಜನಕ, ರಂಜಕ, ಪೊಟ್ಯಾಶ್ ಸೇರಿದಂತೆ ಅಗತ್ಯ ಪೋಷಕಾಂಶಗಳನ್ನು ರೈತರು ಸಸ್ಯಗಳಿಗೆ ಒದಗಿಸಬೇಕು. ಮಣ್ಣಿನ ಸಾರ ಕಾಪಾಡಿ ಉತ್ತಮ ಗುಣಮಟ್ಟದ ಬಿತ್ತನೆ ಬೀಜದ ಬಳಸಬೇಕು ಎಂದರು.

ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಮಂಜುನಾಥ ಅಂಗಡಿ ಮಾತನಾಡಿ, ಸಾವಯವ, ನೈಸರ್ಗಿಕ ಕೃಷಿಯಲ್ಲಿ ಮಣ್ಣಿನ ಫಲವತ್ತತೆ ಕಾಪಾಡುವಲ್ಲಿ ಎರೆಹುಳುಗಳು ಪ್ರಮುಖ ಪಾತ್ರವಹಿಸುತ್ತವೆ. ರೈತರು ಮಣ್ಣಿನ ಫಲವತ್ತತೆ ಕಾಪಾಡಿಕೊಳ್ಳಬೇಕು ಎಂದರು.

ತಾಳೆ ಕೃಷಿ ಉತ್ತೇಜಿಸಲು ಕೃಷಿ ಇಲಾಖೆ ಹಲವು ಕ್ರಮ ಕೈಗೊಳ್ಳುತ್ತಿದೆ. ಬೆಳೆ ಮಾಹಿತಿ, ನಿರ್ವಹಣೆ, ಮಾರುಕಟ್ಟೆ, ತಾಂತ್ರಿಕ ಸಲಹೆ, ಗಿಡ ನೆಡಲು ಮಾರ್ಗದರ್ಶನ, ತಾಂತ್ರಿಕ ಮಾಹಿತಿ ನೀಡುತ್ತಿದೆ. ರೈತರಿಂದ 15 ದಿನಕ್ಕೊಮ್ಮೆ ಗೊನೆ ಖರೀದಿಸಲಾಗುತ್ತಿದ್ದು, ವರ್ಷವಿಡಿ ಆದಾಯ ತಂದುಕೊಡುತ್ತಿದೆ. ತಾಲೂಕಿನಲ್ಲಿ ನೂರಾರು ರೈತರು ನೂರಾರು ಎಕರೆ ಪ್ರದೇಶದಲ್ಲಿ ತಾಳೆ ಬೆಳೆಯುತ್ತಿದ್ದು, ಉತ್ತಮ ಲಾಭ ಗಳಿಸುತ್ತಿದ್ದಾರೆ ಎಂದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಾ.ಕೆ.ಹೆಚ್.ರವಿ ಮಾತನಾಡಿದರು. ಅಭಿಯಾನದಲ್ಲಿ ವಿವಿಧ ತಂತ್ರಜ್ಞಾನಗಳಾದ ಬೀಜೋಪಚಾರ, ಸುಧಾರಿತ ತಳಿಗಳು, ತೋಟಗಾರಿಕೆ ಬೆಳೆಗಳು, ವಾಣಿಜ್ಯ ಬೆಳೆಗಳು, ಎಣ್ಣೆಕಾಳು ಬೆಳೆಗಳು, ದ್ವಿದಳ ಬೆಳೆಗಳು, ಏಕದಳ ಬೆಳೆಗಳು, ಸಿರಿಧಾನ್ಯ, ಅವುಗಳ ಮಹತ್ವ ಹಾಗೂ ಸಮಗ್ರ ಕೃಷಿ ಪದ್ಧತಿಗಳ ಬಗ್ಗೆ ತರಬೇತಿ ನೀಡಲಾಯಿತು.

ತಾಲೂಕು ಕೃಷಿಕ ಸಮಾಜದ ಅಧ್ಯಕ್ಷ ಬಿ.ಎಂ.ಶಿವಮಲ್ಲಪ್ಪ, ಕಿಸಾನ್ ಸಂಘದ ಅಧ್ಯಕ್ಷ ನಾಗಲಗೆರೆ ಶಿವಕುಮಾರ್, ಕಬ್ಬು ಬೆಳೆಗಾರರ ಸಂಘದ ತಾಲೂಕು ಅಧ್ಯಕ್ಷ ಸಿದ್ದೇಶ್, ಪ್ರಗತಿಪರ ರೈತ ಮಹಿಳೆ ಮಹದೇವಮ್ಮ, ಕಿರಗಸೂರು ಶಂಕರ್, ಕೆಬ್ಬೆಹುಂಡಿ ಶಿವಕುಮಾರ್, ಕೃಷಿ ಇಲಾಖೆ ಸಹಾಯಕ ನಿರ್ದೇಶಕಿ ಕೆ.ಎಸ್.ಸುಹಾಸಿನಿ, ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕಿ ಶಾಂತ, ಕೃಷಿ ಇಲಾಖೆ ಶಿವಣ್ಣ, ರಾಘವೇಂದ್ರ ಜೆಎಸ್‌ಎಸ್ ಯೋಗೇಶ್, ಕುರುಬೂರು ಶಿವು, ಗೌರಿಶಂಕರ್, ಆಡಿಟರ್ ಮಂಜುನಾಥ್, ಆಲಗೂಡು ಸುಂದರ್, ಸುತ್ತೂರು ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು ಮತ್ತು ಕೆವಿಕೆ ಸಿಬ್ಬಂದಿ ವರ್ಗ, ತಾಲೂಕಿನ ರೈತರು, ಪ್ರಗತಿಪರ ರೈತರು ಹಾಗೂ ರೈತ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

ಮೈಸೂರು ಮಿತ್ರ

ಚಾಮುಂಡಿಬೆಟ್ಟದಲ್ಲಿ ಪರಿಸರ ಸಂರಕ್ಷಣೆ ಕುರಿತ ಅರಣ್ಯ ಇಲಾಖೆಯ ನವೀಕೃತ ಮಾಹಿತಿ ಕೇಂದ್ರ ಉದ್ಘಾಟನೆ



ಚಾಮುಂಡಿಬೆಟದಲ್ಲಿ ಅರಣ್ಯ ಇಲಾಖೆ ನಿರ್ಮಿಸಿರುವ ಪರಿಸರ ಮಾಹಿತಿ ಕುರಿತ ನವೀಕೃತ ಕೇಂದ್ರವನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಉದ್ಘಾಟಿಸಿದರು.

ಮೈಸೂರು,ಜೂ.11(ಎಂಟಿವೈ)– ಚಾಮುಂಡಿಬೆಟ್ಟದಲ್ಲಿ ಭಕ್ತರು, ಪ್ರವಾಸಿಗರು ಹಾಗೂ ಸಾರ್ವಜನಿಕರಿಗೆ ಪರಿಸರ ಸಂರಕ್ಷಣೆ ಕುರಿತಂತೆ ಜಾಗೃತಿ ಮೂಡಿಸಲು ಅರಣ್ಯ ಇಲಾಖೆ ನಿರ್ಮಿಸಿರುವ ನವೀಕೃತ ಮಾಹಿತಿ ಕೇಂದ್ರವನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಪ್ರವಾಸಿಗರ ವೀಕ್ಷಣೆಗೆ ಲೋಕಾರ್ಪಣೆ ಗೊಳಿಸಿದರು.

ಚಾಮುಂಡಿಬೆಟ್ಟದ ಮಹಿಷಾಸುರ ಪ್ರತಿಮೆ ಬಳಿ ಕೆಲ ವರ್ಷಗಳ ಹಿಂದೆಯೇ ನಿರ್ಮಿಸಿದ್ದ ಮಾಹಿತಿ ಕೇಂದ್ರವನ್ನು ನವೀಕರಿಸಲಾಗಿದ್ದು, ಅರಣ್ಯ, ವನ್ಯಜೀವಿಗಳ ಸಂರಕ್ಷಣೆ, ವನ ಮಹೋತ್ಸವ, ಕೃಷಿ ಅರಣ್ಯ ಯೋಜನೆ, ಗಿಡ ವಿತರಣೆ, ಮಾನವ– ವನ್ಯ ಜೀವಿ ಸಂಘರ್ಷ ನಿಯಂತ್ರಣ, ಶ್ರೀಗಂಧ ಕೃಷಿ, ಅರಣ್ಯ ಹುತಾತ್ಮರ ಬಗ್ಗೆ ಮಾಹಿತಿ ಸೇರಿದಂತೆ ವಿವಿಧ ಯೋಜನೆಗಳ ಬಗ್ಗೆ ಜನರಿಗೆ ಮಾಹಿತಿ ನೀಡಲು ಪರಿಸರ ಮಾಹಿತಿ ಕೇಂದ್ರ ನಿರ್ಮಿಸಲಾಗಿದೆ. ಬುಧವಾರ ಬೆಳಗ್ಗೆ ಅರಣ್ಯ ಇಲಾಖೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಮಾಹಿತಿ ಕೇಂದ್ರ ಉದ್ಘಾಟಿಸಿ, ಗಿಡ ನೆಟ್ಟರು.

ಈ ವೇಳೆ ಮಾತನಾಡಿದ ಅವರು, ಪರಿಸರ ಚೆನ್ನಾಗಿದ್ದರೆ, ನಾವೆಲ್ಲರೂ ಚೆನ್ನಾಗಿರುತ್ತೇವೆ. ಸ್ವಲ್ಪ ಪ್ರಮಾಣದ ಏರು ಪೇರಾದರೂ ಸಮಸ್ಯೆ ಬಿಗಡಾಯಿಸುತ್ತದೆ. ಈಗಾಗಲೇ ಜಾಗತಿಕ ತಾಪಮಾನ ಹೆಚ್ಚಾಗಿ, ವಿವಿಧ ಸಮಸ್ಯೆಗಳನ್ನು ಸೃಷ್ಟಿಸಿದೆ. ಅರಣ್ಯ, ವನ್ಯ ಜೀವಿಗಳ ಸಂರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಜಾಗೃತಿ ಮೂಡಿಸಲು ಈ ಮಾಹಿತಿ ಕೇಂದ್ರ ನೆರವಾಗಲಿದೆ ಎಂದರು.

ವಾತಾವರಣದಲ್ಲಿ ಶೇ.21ರಷ್ಟು ಆಮ್ಲಜನಕ, ಶೇ.78ರಷ್ಟು ನೈಟ್ರೋಜನ್, ಶೇ.0.04 ಕಾರ್ಬನ್ ಡೈಯಾಕ್ಸಿಡ್ ಇದ್ದರೆ ಮಾತ್ರ ಉತ್ತಮವಾದ ಗಾಳಿಯಾಗುತ್ತದೆ. ಹೀಗಾಗಿ ಸಮತೋಲನ ಕಾಪಾಡಿಕೊಂಡರೆ ಆರೋಗ್ಯಕರವಾಗಿ ನಾವು ಜೀವಿಸಬಹುದು. ಅದಕ್ಕಾಗಿ ಅರಣ್ಯ ಸಂರಕ್ಷಣೆಯೊಂದಿಗೆ ವನ್ಯಜೀವಿಗಳ ರಕ್ಷಣೆಯಲ್ಲೂ ತೊಡಗಿಸಿಕೊಳ್ಳಬೇಕು ಎಂದು ತಿಳಿಸಿದರು.

ಚಾಮುಂಡಿವನವನ್ನು ಮಾದರಿ ವೃಕ್ಷೋದ್ಯಾನವನ್ನಾಗಿ ಅಭಿವೃದ್ಧಿ ಪಡಿಸಲಾಗುವುದು. ಜತೆಗೆ ಮಕ್ಕಳ ಉದ್ಯಾನ, ಪವಿತ್ರವನ ನಕ್ಷತ್ರವನ, ರಾಶಿವನ, ಪರೋಗೊಲ ಮೊದಲಾದ ಅಭಿವೃದ್ಧಿ ಕಾರ್ಯ ನಡೆಸಲಾಗುವುದು. ಚಾಮುಂಡಿ ಬೆಟ್ಟ ಪ್ರದೇಶ ಮೀಸಲು ಅರಣ್ಯ ಪ್ರದೇಶವಾಗಿರುವುದರಿಂದ ವಾಹನಗಳ ವೇಗ ಮಿತಿಯ ಬಗ್ಗೆ ಪೊಲೀಸ್ ಅಧಿಕಾರಿಗಳಿಗೆ ಅಗತ್ಯ ಕ್ರಮ ವಹಿಸುವಂತೆ ಸೂಚನೆ ನೀಡಲಾಗುವುದು. ಶೀಘ್ರದಲ್ಲಿಯೇ ಕಳೆದ ವರ್ಷದ ದಸರಾ ಮಹೋತ್ಸವದ ಲೆಕ್ಕ ಪತ್ರವನ್ನು ಬಿಡುಗಡೆ ಮಾಡಲು ಜಿಲ್ಲಾಡಳಿತಕ್ಕೆ ತಿಳಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಶಾಸಕ ಜಿ.ಟಿ.ದೇವೇಗೌಡ, ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ, ಮೈಸೂರು ವೃತ್ತದ ಅರಣ್ಯ ಸಂರಕ್ಷಣಾಧಿಕಾರಿ ಡಾ.ಎಂ.ಮಾಲತಿ ಪ್ರಿಯ, ಡಿಸಿಎಫ್ ಡಾ.ಕೆ.ಎನ್. ಬಸವರಾಜ, ಎಸಿಎಫ್ ಜಿ.ರವೀಂದ್ರ, ಆರ್‌ಎಫ್‌ಓ ಡಿ.ಶ್ರೀನಿವಾಸ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಖಾಸಗಿ ವ್ಯಕ್ತಿಗಳು ಹಕ್ಕು ಪ್ರತಿಪಾದಿಸಿದ್ದ 20 ಎಕರೆ ಭೂಮಿ ಅರಣ್ಯ ಇಲಾಖೆ ವಶಕ್ಕೆ

ಮೈಸೂರು,ಜೂ.11(ಎಂಟಿವೈ)– ಚಾಮುಂಡಿಬೆಟ್ಟದಲ್ಲಿ ಖಾಸಗಿ ವ್ಯಕ್ತಿಗಳು ಹಕ್ಕು ಪ್ರತಿಪಾದಿಸಿದ್ದ ಅರಣ್ಯ ಇಲಾಖೆಗೆ ಸೇರಿದ್ದ 20 ಎಕರೆ ಅರಣ್ಯ ಪ್ರದೇಶ ಮತ್ತೆ ಈಗ ಅರಣ್ಯ ಇಲಾಖೆಯ ಸುಪರ್ದಿಗೆ ತೆಗೆದುಕೊಳ್ಳಲಾಗಿದೆ ಎಂದು ಡಿಸಿಎಫ್ ಡಾ.ಕೆ.ಎನ್.ಬಸವರಾಜ್ ತಿಳಿಸಿದ್ದಾರೆ.

ಬೆಟ್ಟದಲ್ಲಿ ಮಹಿಷಾಸುರ ಪ್ರತಿಮೆ ಇರುವ ಸ್ಥಳದ ಬಳಿ ನಿರ್ಮಿಸಿರುವ ಚಾಮುಂಡಿ ವನದ ಮಾಹಿತಿ ಕೇಂದ್ರ ಸೇರಿದಂತೆ ಬೆಟ್ಟದ ಗ್ರಾಮದ ವ್ಯಾಪ್ತಿಯಲ್ಲಿನ 13 ವಿವಿಧ ಸರ್ವೆ ನಂಬರ್‌ಗಳಲ್ಲಿ ಇದ್ದ ಒಟ್ಟು 20 ಎಕರೆ 18 ಗುಂಟೆ ಅರಣ್ಯ ಪ್ರದೇಶ ಖಾಸಗಿ ಸ್ವತ್ತು ಎಂದು ಕೆಲವರು ಕೋರ್ಟ್ ಮೊರೆ ಹೋಗಿದ್ದರು. ಇದರಿಂದ ಅರಣ್ಯ ಇಲಾಖೆಗೆ ಹಿನ್ನಡೆಯಾಗಿ ಮಾಹಿತಿ ಕೇಂದ್ರವನ್ನು ಮುಚ್ಚಲಾಗಿತ್ತು. ಜಿಲ್ಲಾ ನ್ಯಾಯಾಲಯದ ಆದೇಶದ ವಿರುದ್ಧ ಅರಣ್ಯ ಇಲಾಖೆಯು 2011ರಲ್ಲಿ ಹೈಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿತ್ತು. ಖಾಸಗಿಯವರಿಂದ ಅರಣ್ಯ ಇಲಾಖೆಗೆ ಭೂ ಸ್ವಾಧೀನವಾಗಿರುವ ಬಗ್ಗೆ ಸರ್ಕಾರಿ ಆದೇಶಗಳನ್ನು ಕಲೆ ಹಾಕಿದ ಅರಣ್ಯ ಇಲಾಖೆಯ ಅಧಿಕಾರಿಗಳು, ಹೈಕೋರ್ಟ್‌ನಲ್ಲಿ ವಿವಾದಿತ ಜಮೀನು ತಮ್ಮ ಮಾಲೀಕತ್ವಕ್ಕೆ ಸೇರಿದ್ದು ಎಂದು ವಾದ ಮಂಡಿಸಿದ್ದರು ಎಂದರು.

1940 ಮತ್ತು 1947ರ ಭೂ ಸ್ವಾಧೀನ ಸರ್ಕಾರಿ ಆದೇಶ ಸಂಬಂಧ ರಾಜ್ಯ ಪತ್ರಾಗಾರದಲ್ಲಿ ಪ್ರಕಟವಾಗಿದ್ದ ಆದೇಶಗಳನ್ನು ಶೋಧನೆ ಮಾಡಿ ಹೈಕೋರ್ಟ್‌ಗೆ ಸಲ್ಲಿಸಲಾಗಿತ್ತು. ಇದಕ್ಕೆ ಪೂರಕವಾಗಿ ಹೈಕೋರ್ಟ್ ಜಿಲ್ಲಾಧಿಕಾರಿಗಳಿಗೆ ಸ್ಥಳೀಯವಾಗಿ ಸಮೀಕ್ಷೆ ನಡೆಸಿ ವರದಿ ನೀಡುವಂತೆ ಆದೇಶ ನೀಡಿತ್ತು. ಕೂಡಲೇ ಕಾರ್ಯ ಪ್ರವೃತ್ತರಾದ ಜಿಲ್ಲಾಧಿಕಾರಿಗಳು ಉಪವಿಭಾಗಾಧಿಕಾರಿ ಮೂಲಕ ಸ್ಥಳ ಸಮೀಕ್ಷೆ ನಡೆಸಿ ವಾಟ್ಸಾಪ್ ಮೂಲಕ ವಾಸ್ತವ್ಯದ ಮಾಹಿತಿ ನೀಡಿದ್ದರು. 2024ರ ಜು.30ರಂದು ಹೈಕೋರ್ಟ್ ಐತಿಹಾಸಿಕ ತೀರ್ಪು ನೀಡಿ, 'ಒಂದು ಬಾರಿ ಅರಣ್ಯ ಎಂದು ಘೋಷಿಸಿದ್ದರೆ ಅದು ಎಂದೆಂದು ಅರಣ್ಯವೇ' ಎಂದು ಆದೇಶಿಸಿದೆ. ಈ ಹಿನ್ನೆಲೆಯಲ್ಲಿ ಇದೀಗ ಹೈಕೋರ್ಟ್ ಆದೇಶದಿಂದ ವಿವಾದಿತ ಜಾಗ ಮತ್ತೆ ಅರಣ್ಯ ಇಲಾಖೆಗೆ ಸೇರಿದೆ ಎಂದು ತಿಳಿಸಿದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಮಾಮನ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಮಾದೇವ (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಹೌಸ್‌ಫುಲ್–5 (ಹಿಂ)	4 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಕಾಲೇಜ್ ಕಲಾವಿದ (ಕ) + ನೀತಿ (ಕ)	2+2 ಪ್ರದರ್ಶನಗಳು
ಗಾಯಿತ್ರಿ	
ಟಕೀಲಾ (ಕ)	4 ಪ್ರದರ್ಶನಗಳು
ರಾಜಕಮಲ್	
ಮದ್ರಾಸ್ ಮ್ಯಾಟಿನಿ (ತ)	4 ಪ್ರದರ್ಶನಗಳು
ಸಂಗಂ	
ಹೌಸ್‌ಫುಲ್–5 (ಹಿಂ)	4 ಪ್ರದರ್ಶನಗಳು
ಲಿಡೋ	
ಅಪ್ಪು (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ರೆಟ್ರೋ (ತ): ಬೆ.9.40ಕ್ಕೆ, ಮ.1ಕ್ಕೆ, ರಾ.7ಕ್ಕೆ, ಥಂಡರ್‌ಬೋಲ್ಟ್ಸ್ (3ಡಿ)(ಇಂ): ಸಂ.4.20ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 2	ಥಂಡರ್‌ಬೋಲ್ಟ್ಸ್ (3ಡಿ)(ಇಂ): ಬೆ.10.25ಕ್ಕೆ, ಯುದ್ಧಕಾಂಡ 2 (ಕ): ಮ.1.05ಕ್ಕೆ, ಸಂ.4.05ಕ್ಕೆ, ತುಡಾರಂ (ಮ): ರಾ.7ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 3	ಹಿಟ್ ದಿ ಥರ್ಡ್ ಕೇಸ್ (ತೆ): ಬೆ.10ಕ್ಕೆ, ಮ.3.55ಕ್ಕೆ, ರಾ.7.05ಕ್ಕೆ, ರಾ.10.15ಕ್ಕೆ, ಟೂರಿಸ್ಟ್ ಫ್ಯಾಮಿಲಿ (ತ): ಮ.1.10ಕ್ಕೆ.
ಸ್ಕ್ರೀನ್ 4	ಪಪ್ಪಿ (ಕ): ಬೆ.10.30ಕ್ಕೆ, ರೈಡ್ 2 (ಹಿಂ): ಮ.1ಕ್ಕೆ, ರಾ.7.25ಕ್ಕೆ, ರಾ.10.25ಕ್ಕೆ, ರೆಟ್ರೋ (ತ): ಸಂ.4.05ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಪ್ರೀತಿಯ ಹುಚ್ಚ (ಕ): ಬೆ.11ಕ್ಕೆ, ರಿಕ್ಷಾ ಚಾಲಕ (ಕ): ಮ.1.35ಕ್ಕೆ, ಕೋರ (ಕ): ಸಂ.6.35ಕ್ಕೆ, ಖದೀಮ (ಕ): ಸಂ.6.35ಕ್ಕೆ, ಟೆನ್ ಅವರ್ಸ್ (ತ): ರಾ.9.15ಕ್ಕೆ.
ಸ್ಕ್ರೀನ್ 2	ಯುದ್ಧಕಾಂಡ 2 (ಕ): ಮ.1ಕ್ಕೆ, ಸಂ.6.35ಕ್ಕೆ, ಒಡೆಲ್ಲಾ (ತೆ): ಮ.3.45ಕ್ಕೆ, ರಾ.9.20ಕ್ಕೆ.
ಸ್ಕ್ರೀನ್ 3	ವೀರ ಚಂದ್ರಹಾಸ (ಕ): ಮ.1ಕ್ಕೆ, ಮ.3.55ಕ್ಕೆ, ಗುಡ್ ಬ್ಯಾಡ್ ಅಗ್ಲಿ (ತ): ಸಂ.6.50ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಯುದ್ಧಕಾಂಡ 2 (ಕ): ಬೆ.10.50ಕ್ಕೆ, ವಾಮನ (ಕ): ಮ.1.35ಕ್ಕೆ, ಸಂ.4.10ಕ್ಕೆ, ಅರ್ಜುನ್ s/o ವೈಜಯಂತಿ (ತೆ): ಸಂ.6.45ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ಸಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ವರ್ಷದ ರಂಗಶಿಕ್ಷಣ ತರಬೇತಿಗೆ ಅರ್ಜಿ ಆಹ್ವಾನ

ಮೈಸೂರು, ಜೂ.11– ಮೈಸೂರಿನಲ್ಲಿ ರಂಗಾಯಣ ರೆಪರ್ಟರಿಯು ಕಳೆದ 16 ವರ್ಷಗಳ ಹಿಂದೆ ಸ್ಥಾಪಿಸಿದ ಭಾರತೀಯ ರಂಗಶಿಕ್ಷಣ ಕೇಂದ್ರ ಪ್ರಸ್ತುತ 2025–26ನೇ ಸಾಲಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಿದೆ.

ಕೇಂದ್ರಕ್ಕೆ ಸೇರಬಯಸುವ ವಿದ್ಯಾರ್ಥಿಗಳು ಜೂ.10ರಿಂದ ರಂಗಾಯಣದ ವೆಬ್‌ಸೈಟ್ <http://rangayanamysore.karnataka.gov.in> ನಲ್ಲಿ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಂಡು ಅಥವಾ ರಂಗಾಯಣದ ಕಚೇರಿ ಅವಧಿಯಲ್ಲಿ ಖುದ್ದಾಗಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಅರ್ಜಿ ಶುಲ್ಕದ ಡಿ.ಡಿ.ಯನ್ನು ಉಪ ನಿರ್ದೇಶಕರು, ರಂಗಾಯಣ, ಮೈಸೂರು (Deputy Director, Rangayana, Mysore) ಇವರ ಹೆಸರಿನಲ್ಲಿ ಪಡೆದು ರಂಗಾಯಣದ ವಿಳಾಸಕ್ಕೆ ಜೂನ್ 30ರ ಸಂಜೆ 5.30ರೊಳಗೆ ತಲುಪುವಂತೆ ಅಂಚೆಯ ಮೂಲಕ ಕಳುಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 0821–2512639, ಮೊ: 9449630465 ಅನ್ನು ಸಂಪರ್ಕಿಸಬಹುದು ಎಂದು ರಂಗಾಯಣದ ನಿರ್ದೇಶಕರಾದ ಸತೀಶ್ ತಿಪಟೂರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವ್ಯಕ್ತಿ ನಾಪತ್ತೆ



ಮೈಸೂರು, ಜೂ.11– ವ್ಯಕ್ತಿಯೋರ್ವ ನಾಪತ್ತೆಯಾಗಿರುವ ಬಗ್ಗೆ ಇಲವಾಲ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಇಲವಾಲ ಗ್ರಾಮದ ಅಂಬರಾವ್ (36) ಎಂಬಾತ ಜೂ. 2ರಂದು ಬೆಳಗ್ಗೆ 7.30ರ ಸುಮಾರಿನಲ್ಲಿ ಮನೆಯಿಂದ ಹೊರ ಹೋಗಿದ್ದು, ಈವರೆಗೆ ವಾಪಸಾಗಿಲ್ಲ ಎಂದು ಪೊಲೀಸರಿಗೆ ನೀಡಿದ ದೂರಿನಲ್ಲಿ ತಿಳಿಸಲಾಗಿದೆ. ಈತನ ಬಗ್ಗೆ ಮಾಹಿತಿ ಇರುವವರು ಇಲವಾಲ ಠಾಣೆ ದೂರವಾಣಿ ಸಂಖ್ಯೆ ಅಥವಾ ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಂ ಸಂಖ್ಯೆ 0821–2444800 ಅನ್ನು ಸಂಪರ್ಕಿಸುವಂತೆ ಪೊಲೀಸ್ ಪ್ರಕಟಣೆ ಕೋರಿದೆ.

ನೇರ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗೆ ಅರ್ಜಿ ಆಹ್ವಾನ

ಮೈಸೂರು, ಜೂ.11– ಶಾಲಾ ಶಿಕ್ಷಣ ಇಲಾಖೆಯ ಸಮಗ್ರ ಶಿಕ್ಷಣ ಕರ್ನಾಟಕ ಕಾರ್ಯಕ್ರಮದಲ್ಲಿ ಸಮನ್ವಯ ಶಿಕ್ಷಣ ಚಟುವಟಿಕೆಯ ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ ಬ್ಲಾಕ್ ಹಂತದಲ್ಲಿ ಖಾಲಿ ಇರುವ ಬಿ.ಐ.ಇ.ಆರ್.ಟಿ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿಭಾಗ ಹುದ್ದೆಗಳಿಗೆ ವಿಶೇಷ ಚೇತನ ಮಕ್ಕಳ ಶಿಕ್ಷಣಕ್ಕೆ ಸಂಬಂಧಿಸಿದ ಆರ್.ಸಿ.ಐ ನಿಯಮದಂತೆ ವಿಶೇಷ ಶಿಕ್ಷಣದಲ್ಲಿ ವಿಶೇಷ ಡಿ.ಇಡಿ ಹಾಗೂ ವಿಶೇಷ ಬಿ.ಇಡಿ ವಿದ್ಯಾರ್ಹತೆ ಹೊಂದಿ ಆರ್‌ಸಿಐ ನೋಂದಣಿಯಾಗಿರುವ ಅಭ್ಯರ್ಥಿಗಳಿಂದ ತಾತ್ಕಾಲಿಕವಾಗಿ 2025–26ನೇ ಸಾಲಿಗೆ ನೇರ ಗುತ್ತಿಗೆ ಮೂಲಕ ತಾತ್ಕಾಲಿಕವಾಗಿ ಅರ್ಜಿ ಆಹ್ವಾನಿಸಲಾಗಿದೆ

ಖಾಲಿ ಹುದ್ದೆಗಳ ಸಂಖ್ಯೆ: 11 ಪ್ರೌಢ ವಿಭಾಗ, 03 ಪ್ರಾಥಮಿಕ ವಿಭಾಗ ಆಸಕ್ತ ಅಭ್ಯರ್ಥಿಗಳು ವಿದ್ಯಾರ್ಹತೆಯ ಎಲ್ಲಾ ಅಂಕಪಟ್ಟಿಗಳು ಮತ್ತು ಪ್ರಮಾಣ ಪತ್ರಗಳು ಮತ್ತು ಆರ್‌ಸಿಐ ನೋಂದಣಿ ಪ್ರಮಾಣ ಪತ್ರದೊಂದಿಗೆ ಸ್ವವಿವರವುಳ್ಳ ಮಾಹಿತಿಯನ್ನು ಜೂ.20ರಂದು ಸಂಜೆ 5 ಗಂಟೆಯೊಳಗೆ ಅಂಚೆ ಅಥವಾ ಮುದ್ದಾಂ ಮೂಲಕ ಉಪನಿರ್ದೇಶಕರು (ಆಡಳಿತ) ಹಾಗೂ ಜಿಲ್ಲಾ ಯೋಜನಾ, ಯೋಜನಾ ಸಮನ್ವಯಾಧಿಕಾರಿಗಳ ಕಾರ್ಯಾಲಯ, ಸಮಗ್ರ ಶಿಕ್ಷಣ ಕರ್ನಾಟಕ, ಶಾಲಾ ಶಿಕ್ಷಣ ಇಲಾಖೆ, ಡಿ ಸುಬ್ಬಯ್ಯ ರಸ್ತೆ, ಜಂಟಿ ನಿರ್ದೇಶಕರ ಕಛೇರಿ ಆವರಣ ಮೈಸೂರು–570004 ಈ ವಿಳಾಸಕ್ಕೆ ತಲುಪಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 0821–2496686 / 9916612195 ನ್ನು ಸಂಪರ್ಕಿಸಬಹುದು ಎಂದು ಸಮಗ್ರ ಶಿಕ್ಷಣ ಕರ್ನಾಟಕ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು (ಆಡಳಿತ) ಹಾಗೂ ಪದ ನಿಮಿತ್ತ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಥೆ ಕೇಳೋಣ ಬನ್ನಿ ಕಾರ್ಯಕ್ರಮ

ಮೈಸೂರು, ಜೂ. 11– ಮೈಸೂರಿನ ಕುವೆಂಪುನಗರದ ಸುರುಚಿ ರಂಗ ಮನೆಯಲ್ಲಿ ಜೂ. 14 ರಂದು ಸಂಜೆ 4.30 ರಿಂದ 5.30 ರವರೆಗೆ ಕಥೆ ಕೇಳೋಣ ಬನ್ನಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಥೆ ಹೇಳುವವರು ಯುವರಾಜ ಕಾಲೇಜು ಆಂಗ್ಲ ಭಾಷಾ ಉಪನ್ಯಾಸಕರು ಹಾಗೂ ಅಂಕಣಕಾರರಾದ ಶ್ರೀಮತಿ ನಿವೇದಿತಾ. ಹೆಚ್ಚಿನ ಮಾಹಿತಿಗಾಗಿ 9243581097, 9945943115 ಸಂಪರ್ಕಿಸಬಹುದು.

ಜೂ.20ರಂದು ಪತ್ರಕರ್ತರಿಗೆ ಉಚಿತ ಹೃದ್ರೋಗ ತಪಾಸಣೆ

ಮೈಸೂರು, ಜೂ.11(ಪಿಎಂ)– ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ವತಿಯಿಂದ ಜೂ.20ರಂದು ಬೆಳಗ್ಗೆ 9 ಗಂಟೆಗೆ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯಲ್ಲಿ ಪತ್ರಕರ್ತರಿಗೆ ಹೃದ್ರೋಗ ಉಚಿತ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಅಂತರರಾಷ್ಟ್ರೀಯ ಕ್ರೀಡಾ ದಿನಾಚರಣೆ




ಸುತ್ತೂರಿನ ಜೆಎಸ್‌ಎಸ್ ವಸತಿ ಶಾಲೆಯಲ್ಲಿ ಬುಧವಾರ ಅಂತರರಾಷ್ಟ್ರೀಯ ಕ್ರೀಡಾ ದಿನವನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯಸ್ಥರುಗಳು ಹಾಗೂ ದೈಹಿಕ ಶಿಕ್ಷಣ ಶಿಕ್ಷಕರು ಸಹಸ್ರಾರು ಮಕ್ಕಳು ಭಾಗವಹಿಸಿದ್ದರು.

ಪ್ರವಾಸೋದ್ಯಮ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ

ಮೈಸೂರು, ಜೂ.11– ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಎಸ್.ಸಿ.ಎಸ್.ಪಿ./ಟಿ.ಎಸ್.ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ/ಆತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ರಾಜ್ಯ ಹಾಗೂ ಕೇಂದ್ರ ಸರ್ಕಾರದ ಆತಿಥ್ಯ ಕ್ಷೇತ್ರದ ಸಂಸ್ಥೆಗಳಾದ Food Craft Institue (FCI), Mysore ಹಾಗೂ Institute of Hotel Management (IHM) ಬೆಂಗಳೂರು ಮೂಲಕ ವಸತಿ ಸಹಿತ ತರಬೇತಿ ಕಾರ್ಯಕ್ರಮವನ್ನು ಆಯೋಜಿಸುವ ಉದ್ದೇಶದಿಂದ ಅರ್ಹ ವ್ಯಕ್ತಿಗಳಿಂದ ಅರ್ಜಿ ಆಹ್ವಾನಿಲಾಗಿದೆ.

ಕಾರ್ಯಕ್ರಮದ ವಿವರ Food & Beverage Service Steward, ಪರಿಶಿಷ್ಟ ಜಾತಿಗೆ 3, ಪರಿಶಿಷ್ಟ ಪಂಗಡಕ್ಕೆ 2, Room Attendant, ಪರಿಶಿಷ್ಟ ಜಾತಿಗೆ/ ಪರಿಶಿಷ್ಟ ಪಂಗಡಕ್ಕೆ 1, Front Office Associate ಪರಿಶಿಷ್ಟ ಜಾತಿಗೆ/ ಪರಿಶಿಷ್ಟ ಪಂಗಡಕ್ಕೆ 1, Multi Cuisine Cook ಪರಿಶಿಷ್ಟ ಜಾತಿಗೆ/ ಪರಿಶಿಷ್ಟ ಪಂಗಡಕ್ಕೆ 5 ಗುರಿಯನ್ನು ನಿಗದಿಪಡಿಸಿದೆ. ಆಸಕ್ತ ಅಭ್ಯರ್ಥಿಗಳು ವೆಬ್ ಸೈಟ್ <https://karnatakatourism.org/> ಮೂಲಕ ಅರ್ಜಿ ಸಲ್ಲಿಸಲು ಜೂನ್ 13 ಕೊನೆಯ ದಿನಾಂಕವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಅಂತರ್ಜಾಲ ತಾಣದಲ್ಲಿ <https://mysurutourism.in/notification/>ªÀÄvÀÄÛ<https://mysore.nic.in/en/notifications/> ಮೂಲಕ ಹಾಗೂ ಇ–ಮೇಲ್ visitmysurutourism@gmail.com <mailto:visitmysuru tourism@gmail.com>, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ ದೂ.ಸಂ: 0821–2422096 ನ್ನು ಸಂಪರ್ಕಿಸಬಹುದು.

ಬಿಸಿಎಂ ಹಾಸ್ಟೆಲ್‌ಗೆ ಆಯುಕ್ತ ಕೆ.ಎ.ದಯಾನಂದ್ ಭೇಟಿ



ರಾಜ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತ ದಯಾನಂದ ಬಿಸಿಎಂ ಹಾಸ್ಟೆಲ್‌ಗೆ ಬೇಟಿ ನೀಡಿ ಪರಿಶೀಲನೆ ನಡೆಸಿದರು.

ಮೈಸೂರು, ಜೂ.11– ರಾಜ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರಾದ ಕೆ.ಎ.ದಯಾನಂದ, ಕುವೆಂಪುನಗರದಲ್ಲಿರುವ ಬಿಸಿಎಂ ಹಾಸ್ಟೆಲ್‌ಗೆ ಮಂಗಳವಾರ ಭೇಟಿ ನೀಡಿ ಪರಿಶೀಲಿಸಿದರು. ಕಾರ್ಯನಿಮಿತ್ತ ಮೈಸೂರಿಗೆ ಆಗಮಿಸಿದ್ದ ಅವರು ಹಾಸ್ಟೆಲ್‌ಗೆ ಭೇಟಿ ನೀಡಿ ಉಗ್ರಾಣ, ಅಡುಗೆ ಮನೆ, ಕೊಠಡಿಗಳು ಶೌಚಾಲಯಗಳನ್ನು ಪರಿಶೀಲಿಸಿ ಹಾಸ್ಟೆಲ್‌ನಲ್ಲಿಯೇ ಊಟ ಮಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಿಂದುಳಿದ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಹೆಚ್ಚು ಪ್ರೋತ್ಸಾಹ ನೀಡುತ್ತಿದ್ದು, ರಾಜ್ಯದಲ್ಲಿ ಹೊಸದಾಗಿ 150 ಹಾಸ್ಟೆಲ್‌ಗಳನ್ನು ಮಂಜೂರು ಮಾಡುವುದರೊಂದಿಗೆ ತಮ್ಮ ಜಿಲ್ಲೆಗೆ 14 ಹಾಸ್ಟೆಲ್‌ಗಳನ್ನು ಮಂಜೂರು ಮಾಡಿರುವುದರಿಂದ ರಾಜ್ಯದ ಮೂಲೆ ಮೂಲೆಗಳಿಂದ ವಿದ್ಯಾಭ್ಯಾಸಕ್ಕಾಗಿ ಮೈಸೂರಿಗೆ ಬರುವ ವಿದ್ಯಾರ್ಥಿಗಳಿಗೆ ಅನುಕೂಲ ವಾಗಿದೆ. ನಿಲಯಪಾಲಕರು ವಿದ್ಯಾರ್ಥಿಗಳಿಗೆ ಗುಣಮಟ್ಟದ ಆಹಾರ ನೀಡುವುದರೊಂದಿಗೆ ಹಾಸ್ಟೆಲ್‌ಗಳಲ್ಲಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು, ಗ್ರಾಮೀಣ ಭಾಗದ ರೈತರ ಮಕ್ಕಳೆ ಹಾಸ್ಟೆಲ್‌ಗಳಿಗೆ ಹೆಚ್ಚಾಗಿ ಬರುವುದರಿಂದ ಓದಲು ತೊಂದರೆ ಆಗದಂತೆ ಪೂರಕ ವಾದ ವಾತಾವರಣ ನಿರ್ಮಾಣ ಮಾಡಿಕೊಡಬೇಕು, ಸ್ಪರ್ಧಾತ್ಮಕ ಪರೀಕ್ಷೆಗಳನ್ನು ತೆಗೆದುಕೊಳ್ಳಲು ಪ್ರೋತ್ಸಾಹಿಸಬೇಕು ಎಂದರು.

ಈ ಸಂದರ್ಭದಲ್ಲಿ ನಗರಪಾಲಿಕೆಯ ಉಪ ಆಯುಕ್ತ ಜಿ.ಎಸ್.ಸೋಮ ಶೇಖರ್, ಬಿಸಿಎಂ ಜಿಲ್ಲಾ ಅಧಿಕಾರಿ ರಾಘವೇಂದ್ರ, ತಾಲೂಕು ಕಲ್ಯಾಣಾಧಿಕಾರಿ ಚಂದ್ರಕಲಾ, ನಿಲಯ ಪಾಲಕರಾದ ಜಗದೀಶ್, ಜಿ. ಕೋರಿ ನಾಗರಾಜ್, ವಡ್ಗಲ್ ಬೀರೇಗೌಡ ಇದ್ದರು.

ಅಕ್ರಮ ಸಂಬಂಧಕ್ಕಾಗಿ ಗಂಡ, ಮಕ್ಕಳು ಸೇರಿ ಇಡೀ ಕುಟುಂಬಕ್ಕೆ ವಿಷ ಹಾಕಿದ್ದ ಮಹಿಳೆ ಕೊನೆಗೂ ಬಂಧನ

ಹಾಸನ, ಜೂ.11– ಪರ ಪುರುಷನೊಂದಿಗೆ ಸರಸಕ್ಕೆ ಅಡ್ಡಿಯಾಗಿದ್ದಾರೆಂಬ ಕಾರಣಕ್ಕೆ ಗಂಡ, ಮಕ್ಕಳು ಸೇರಿದಂತೆ ಇಡೀ ಕುಟುಂಬಕ್ಕೆ ವಿಷ ಹಾಕಿದ್ದ ಮಹಿಳೆಯನ್ನು ಕೊನೆಗೂ ಹಾಸನ ಪೊಲೀಸರು ಬಂಧಿಸಿದ್ದಾರೆ.

ಹಾಸನ ಜಿಲ್ಲೆಯ ಬೇಲೂರು ತಾಲೂಕಿನ ಕೆರಳೂರು ಗ್ರಾಮದಲ್ಲಿ ಪತ್ನಿ ತನ್ನ ಪತಿ, ಮಕ್ಕಳು, ಅತ್ತೆ ಮತ್ತು ಮಾವರಿಗೆ ವಿಷ ಹಾಕಿ ಕೊಲೆ ಮಾಡಲು ಯತ್ನಿಸಿರುವ ಘಟನೆ ನಡೆದಿದ್ದು, ಇದೀಗ ಹಾಸನ ಜಿಲ್ಲೆಯ ಬೇಲೂರು ಠಾಣೆ ಪೊಲೀಸರು ಆರೋಪಿ ಚೈತ್ರಾ (33)ಳನ್ನು ಬಂಧಿಸಿದ್ದಾರೆ. ಈಕೆ ಕೆರಳೂರು ಗ್ರಾಮದ ಗಜೇಂದ್ರ ಅವರನ್ನು 10 ವರ್ಷದ ಹಿಂದೆ ಮದುವೆಯಾಗಿದ್ದು, ದಂಪತಿಗೆ ಇಬ್ಬರು ಮುದ್ದಾದ ಮಕ್ಕಳು ಕೂಡ ಇದ್ದಾರೆ.

ಫೋನ್‌ನಿಂದ ವಿಚಾರ ಬೆಳಕಿಗೆ: ಕಳೆದ ಮೂರು ವರ್ಷಗಳಿಂದ ಸಣ್ಣ–ಪುಟ್ಟ ವಿಚಾರಕ್ಕೂ ಚೈತ್ರಾ ಗಂಡನೊಂದಿಗೆ ಜಗಳವಾಡುತ್ತಿದ್ದಳು. ಇತ್ತೀಚೆಗೆ ಪತ್ನಿ ಚೈತ್ರಾ ಅತಿಯಾಗಿ ಫೋನ್‌ನಲ್ಲಿ ಮಾತನಾಡುವುದು ಪತಿ ಗಜೇಂದ್ರರಿಗೆ ಅನುಮಾನ ತರಿಸಿತ್ತು. ಬಳಿಕ ಗಜೇಂದ್ರ ಈ ಬಗ್ಗೆ ಗಮನ ಹರಿಸಿದಾಗ ಚೈತ್ರ ಯುವಕನೊಂದಿಗೆ ಸಂಬಂಧ ಹೊಂದಿರುವುದು ತಿಳಿದು ಬಂದಿತ್ತು.



ಪುನೀತ್ ಎಂಬಾತನ ಜೊತೆ ಚೈತ್ರಾ ಅಕ್ರಮ ಸಂಬಂಧ ಹೊಂದಿದ್ದಳು. ಕೂಡಲೆ ಎಚ್ಚೆತ್ತ ಗಜೇಂದ್ರ, ಚೈತ್ರಾ ತವರು ಮನೆಯವರಿಗೆ ವಿಚಾರ ತಿಳಿಸಿದ್ದಾರೆ. ರಾಜಿ ಸಂಧಾನಕ್ಕೆ ಕೂತಾಗ, ನಾನು ತಪ್ಪು ಮಾಡಿದೆ. ಇನ್ಮುಂದೆ ಹೀಗಾಗಲ್ಲ'ಎಂದು ಚೈತ್ರಾ ಬೇಡಿಕೊಂಡಿದ್ದಾಳೆ. ಆಗ, ಗಜೇಂದ್ರ ಮಕ್ಕಳಿಗಾಗಿ ಮತ್ತೆ ಪತ್ನಿ ಚೈತ್ರಾ ಜೊತೆ ಸಂಸಾರ ಆರಂಭಿಸಿದ್ದಾರೆ.

ಮತ್ತೋರ್ವ ಯುವಕನೊಂದಿಗೆ ಪರಸಂಗ: ಇದಾದ ಕೆಲ ತಿಂಗಳ ನಂತರ ಚೈತ್ರಾ ಪಕ್ಕದ ಮನೆಯ ಶಿವು ಎಂಬುವನ ಜೊತೆ ಗೆಳೆತನ ಮಾಡಿದ್ದಾಳೆ. ವಿಚಾರ ಗೊತ್ತಾಗಿ ಪ್ರಶ್ನೆ ಮಾಡಿದಾಗ, ಚೈತ್ರಾ ಮನೆಯಲ್ಲಿ ಗಲಾಟೆ ಮಾಡಿದ್ದಾಳೆ. ಅಲ್ಲದೆ, ಶಿವು ಮತ್ತು ಚೈತ್ರಾ ಒಟ್ಟಿಗೆ ಸೇರಿ ಗಜೇಂದ್ರ ಅವರ ವಿರುದ್ಧ ಕಳೆದ ವರ್ಷ ದೂರು ನೀಡಿ ಜೈಲಿಗೆ ಹೋಗುವ ಹಾಗೆ ಮಾಡಿದ್ದರು.

ಆದರೆ, ಎಲ್ಲವನ್ನೂ ಸಹಿಸಿಕೊಂಡು ಜೀವನ ಸಾಗಿಸುತ್ತಿದ್ದ ಗಜೇಂದ್ರ ಅವರಿಗೆ ದಿಢೀರ್‌ನೆ ಆರೋಗ್ಯ ಕೈ ಕೊಡಲು ಶುರುವಾಗಿದೆ. ಬಳಲಿಕೆ, ಸುಸ್ತು, ನಿತ್ರಾಣ, ಅತಿಯಾದ ನಿದ್ರೆ ಹೀಗೆ ಹತ್ತಾರು ಸಮಸ್ಯೆ ಶುರುವಾಗಿದೆ. ಏನಾಯಿತು ಅಂತ ಗಜೇಂದ್ರ ಆತಂಕದಲ್ಲಿರುವಾಗಲೇ, ಚೈತ್ರಾ ಮನೆಯಲ್ಲಿ ಜಗಳ ತೆಗೆದು ತವರು ಮನೆಗೆ ಹೊರಡಲು ಮುಂದಾಗಿದ್ದಾಳೆ.

ಚೈತ್ರಾ ಬ್ಯಾಗ್‌ನಲ್ಲಿ ನಿದ್ರೆ ಮಾತ್ರೆಗಳು ಪತ್ತೆ: ಈ ಜಗಳದ ವೇಳೆ ಚೈತ್ರಾಳ ಬ್ಯಾಗ್ ಪರಿಶೀಲನೆ ನಡೆಸಿದಾಗ ಸತ್ಯ ಬಯಲಾಗಿದ್ದು, ಕದ್ದು ಮುಚ್ಚಿ ಮಾತನಾಡಲು ಮೊಬೈಲ್, ಬ್ಯಾಗ್ ಒಳಗೆ ಮಾತ್ರೆಗಳು ಸಿಕ್ಕಿವೆ. ಇವೆಲ್ಲವನ್ನೂ ತೆಗೆದುಕೊಂಡು ಗಜೇಂದ್ರ, ಪತ್ನಿ ಚೈತ್ರಾಳನ್ನು ಬಿಟ್ಟು ಒಬ್ಬರೇ ವೈದ್ಯರ ಬಳಿಗೆ ಹೋಗಿದ್ದಾರೆ. ಈ ಮಾತ್ರೆಗಳು ಆರೋಗ್ಯವಂತರು ಬಳಸುವುದಲ್ಲ ಎಂದು ವೈದ್ಯರು ಹೇಳಿದ್ದಾರೆ.

ಈ ಮಾತ್ರೆಗಳನ್ನು ತಿಂಗಳುಗಳಿಂದ ಸ್ವಲ್ಪ ಸ್ವಲ್ಪವೇ ಗಂಡ, ಮಕ್ಕಳು, ಅತ್ತೆ ಮತ್ತು ಮಾವನಿಗೆ ನೀಡಿದ್ದ ಚೈತ್ರಾ ಐದೂ ಜನರನ್ನು ಮುಗಿಸುವ ಪ್ಲಾನ್ ಮಾಡಿದ್ದಳು ಎಂಬ ಭಯಾನಕ ಸತ್ಯ ಗಜೇಂದ್ರ ಅವರ ಅರಿವಿಗೆ ಬಂದಿದೆ. ಕೂಡಲೆ ಹಾಸನದ ಜಿಲ್ಲಾಸ್ಪತ್ರೆಗೆ ದಾಖಲಾದ ಗಜೇಂದ್ರ, ಇತನ ಮಕ್ಕಳು ಚಿಕಿತ್ಸೆ ಪಡೆದು ಹೊರ ಬಂದಿದ್ದಾರೆ. ಈ ಪ್ರಕರಣ ಸಂಬಂಧ ಹಾಸನದ ಬೇಲೂರು ಠಾಣೆಯಲ್ಲಿ ದೂರು ದಾಖಲಾಗಿದ್ದು ಕೊಲೆ ಯತ್ನ ಕೇಸ್‌ನಲ್ಲಿ ಚೈತ್ರಾ ಜೈಲು ಪಾಲಾಗಿದ್ದಾಳೆ. ಚೈತ್ರಾ ಪ್ರಿಯಕರನ ವಿರುದ್ಧವೂ ಕೇಸ್ ದಾಖಲಾಗಿದ್ದು, ಪೊಲೀಸರು ಬಂಧನಕ್ಕೆ ಬಲೆ ಬೀಸಿದ್ದಾರೆ.

70ನೇ ವರ್ಷದ ವಿವಾಹ ವಾರ್ಷಿಕೋತ್ಸವದ ಶುಭಾಶಯಗಳು



ಶ್ರೀಮತಿ ಅನುಸೂಯಮ್ಮ ಮತ್ತು ಶ್ರೀ ಆರ್.ರಂಗರಾಜು

ಶುಭಕೋರುವವರು:
ಹೆಚ್.ವಿ.ಎಸ್ ಕುಟುಂಬದವರು



Are you looking for...
EDUCATION LOAN

- Study in **India / Abroad.**
- **100%** finance.
- Loan upto **2.50 Cr.**
- Tenure upto **15 years.**
- Collateral / Non Collateral.
- **Attractive** Interest rate.
- **No** Foreclosure charges.
- **Quick & Simple** process with **Doorstep** services.

For more Details Contact :
9071777739 | 9739733358
#2899/3, 1st Flr, Pampapati Rd, Beside TTL College Canteen, Saraswathipuram, Mysuru



ನಗರಸಭಾ ಕಾರ್ಯಾಲಯ, ಮಂಡ್ಯ–571401
ದೂ:08232–226749, ಟಾಲ್ ಫ್ರೀ ನಂ : 1800–4253795
ಫ್ಯಾಕ್ಸ್ : 08232–221617
Website : www.mandyacity.mrc.gov.in
E-mail :itstaff_ulb_mandya@yahoo.co.in
ಸಂಖ್ಯೆ:ನಸಮಂ/ಕಂ.ಶಾ/ವಾ.ಮ/ಇ–ಹ/ಸಿ.ಆರ್–04/2025–26
ದಿ:09.06.2025

ವಾಣಿಜ್ಯ ಮಳಿಗೆಗಳ ಸಾರ್ವಜನಿಕ ಇ–ಹರಾಜು ಪ್ರಕಟಣೆ

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ ಮಾನ್ಯ ಜಿಲ್ಲಾಧಿಕಾರಿಗಳ ಕಛೇರಿ ಅಧಿಕೃತ ಜ್ಞಾಪನ ಸಂಖ್ಯೆ:ಎಂಯುಎನ್(1)ವಿವ.166/2023–24 ದಿ:25.01.2024 ರಂತೆ ಆದೇಶದಂತೆ ಹಾಗೂ ಮಾನ್ಯ ಆಡಳಿತಾಧಿಕಾರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:14–08–2023 ಮತ್ತು ದಿನಾಂಕ:22–12–2023 ರಂದು ನಡೆದ ಸಾಮಾನ್ಯ ಸಭೆ ನಿರ್ಣಯದಂತೆ ಐಡಿಎಸ್ಎಂಟಿ ಯೋಜನೆಯ ಮಂಡ್ಯ ನಗರಸಭಾ ವ್ಯಾಪ್ತಿಯ ಗಾಂಧಿನಗರದ ಪಂಪ್ ಹೌಸ್ ನಲ್ಲಿರುವ ಮಳಿಗೆ ಸಂಖ್ಯೆ 2.3.4.5 ಮತ್ತು 6 ಮಳಿಗೆಗಳನ್ನು ದಿನಾಂಕ: 20–06–2025ರ ಶುಕ್ರವಾರದಂದು ಇ–ಪ್ರಕ್ಯೂರ್‌ಮೆಂಟ್ ಮೂಲಕ ಇ–ಹರಾಜು ಮಾಡಲಾಗುತ್ತಿದ್ದು, ಇ–ಹರಾಜಿನಲ್ಲಿ ಭಾಗವಹಿಸುವವರು ಮಳಿಗೆ ಒಂದಕ್ಕೆ 20.000–00 ರೂಗಳ ಮುಂಗಡ ಠೇವಣಿಯುನ್ನು ದಿನಾಂಕ:19.06.2025ರ ಸಂಜೆ 5 ಗಂಟೆಯೊಳಗೆ ಆನ್ ಲೈನ್ ಮೂಲಕ ಪೌರಾಯುಕ್ತರು ನಗರಸಭೆ, ಮಂಡ್ಯರವರ ಹೆಸರಿನಲ್ಲಿ ಪಾವತಿಸಿ ದಿನಾಂಕ: 20.06.2025ರಂದು ನಡೆಯುವ ಇ–ಹರಾಜಿನಲ್ಲಿ ಭಾಗವಹಿಸಿ ಮಾಸಿಕ ಬಾಡಿಗೆ ಮೇಲೆ ಬಿಡ್ ಮಾಡಬಹುದಾಗಿರುತ್ತದೆ, ಹೆಚ್ಚಿನ ವಿವರಗಳಿಗೆ ಕಛೇರಿಯ ಕೆಲಸದ ವೇಳೆಯಲ್ಲಿ ತಿಳಿಯಬಹುದಾಗಿರುತ್ತದೆ. https://kppp.karnataka.gov.in ನಲ್ಲಿ ಲಾಗಿನ್ ಆಗಿ ಇ–ಹರಜು ಸಂಖ್ಯೆ DMA/2025-26/AUCTION3380 ನೋಡಿಕೊಳ್ಳಬಹುದಾಗಿದೆ.

ಸಹಿ/–ಪೌರಾಯುಕ್ತರು,
ನಗರಸಭೆ, ಮಂಡ್ಯ.

ವಾಸಾಸಂಇ/ಸನಿ–ಮಂ/ಕೆಎಸ್ಎಂಸಿ&ಎ/178/2025–26

PUBLIC NOTICE

NOTICE is hereby given to the general public that our client is intending to purchase the below mentioned schedule property from its owner Sri. Kumara S/o K.Kotegowda @Kotaiah, R/at Mandakalli Village, Basaveshwara Temple Road Kasaba Hobli, Mysore Taluk & District.

All person/s having any claim against or in respect of schedule property mentioned hereunder are any part thereof by way of sale, exchange, gift, mortgage (equitable/registered or otherwise), Trust, in heritance, family arrangement, maintenance, bequest, partnership, possession, lease, sub-lease, tenancy, license, lien, charge, pledge, easement or otherwise howsoever are hereby requested to notify the same in writing to us with supporting documentary evidence at the address mentioned hereunder within 07 days from the date hereon, failing which the claim/s, if any, of such person/s will be considered to have been waived and or abandoned and our client shall proceed to purchase the schedule property.

DESCRIPTION OF SCHEDULE PROPERTY :All that piece and parcel of the Agricultural Land bearing Survey No.286/1, measuring 00Acre 13guntas, Situated at Mandakalli Village, Kasaba Hobli, Mysore Taluk, Mysore District bounded on; East by : Sy no.286/6, West by : Sy.no.285, North by : Road, South by : Sy.no.286/2

Sd/- H. P. Darshan Shetty
H. P. Gagan Shetty
Prabhu Associates Advocates,
Office :1533, 1" Floor, Navagraha
Temple Street, K.R.Mohalla,
Mysuru - 570024
+91 95908 07007 | +91 89040 40406
Place : Mysuru

PUBLIC NOTICE

NOTICE is hereby given to the general public that our client is intending to purchase the below mentioned schedule property from its owner Smt.Leelavathi @Jyothi, D/o Late Marikotegowda and W/o K.Mallu R/at Mandakalli Village, Basaveshwara road, Kasaba Hobli, Mysore Taluk & District.

All person/s having any claim against or in respect of schedule property mentioned hereunder are any part thereof by way of sale, exchange, gift, mortgage (equitable/registered or otherwise), Trust, in heritance, family arrangement, maintenance, bequest, partnership, possession, lease, sub-lease, tenancy, license, lien, charge, pledge, easement or otherwise howsoever are hereby requested to notify the same in writing to us with supporting documentary evidence at the address mentioned hereunder within 07 days from the date hereon, failing which the claim/s, if any, of such person/s will be considered to have been waived and or abandoned and our client shall proceed to purchase the schedule property.

DESCRIPTION OF SCHEDULE PROPERTY

All that piece and parcel of the Agricultural Land bearing Survey No.286/6, measuring 00Acre 13guntas, Situated at Mandakalli Village, Kasaba Hobli, Mysore Taluk, Mysore District bounded on; East by : Sy no.286/5 ,West by : Sy.no.286/1,North by : Road, South by : Sy.no.286/2

Sd/- H. P. Darshan Shetty
H. P. Gagan Shetty
Prabhu Associates Advocates,
Office :1533, 1" Floor, Navagraha
Temple Street , K.R.Mohalla,
Mysuru - 570024
+91 95908 07007 | +91 89040 40406
Place : Mysuru

ನೋಟರಿ ಆಫೀಸ್ ಕೆಲಸಕ್ಕೆ ಕನ್ನಡ ಮತ್ತು ಇಂಗ್ಲೀಷ್ ಟೈಪಿಂಗ್ ಅನುಭವವುಳ್ಳವರು ಮಹಿಳೆ ಮತ್ತು ಪುರುಷರು ಕೆಲಸಕ್ಕೆ ಬೇಕಾಗಿದ್ದಾರೆ

9008810004

ದಾಖಲಾತಿ ಕಳೆದಿದೆ

ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಮೈಸೂರು-570003 ಕಸಬಾ ಹೋಬಳಿ, ನಾಗನಹಳ್ಳಿ ಪೋಸ್ಟ್, ಕಳಸ್ತವಾಡಿ ಮನೆ ನಂ. 171ರಲ್ಲಿ ವಾಸವಿರುವ ಶ್ರೀ ಗಾಯತ್ರಿ ಆದ ನನಗೆ ಸೇರಿದ್ದ ಸ್ವತ್ತಿನ ಮೂಲ ಕ್ರಯಪತ್ರ ನಂ. 3183/98-99, ದಿನಾಂಕ 10-2-2024ರಂದು ಕಳೆದುಹೋಗಿರುತ್ತದೆ. ಇದರ ಸಂಬಂಧ ದಿನಾಂಕ 13-5-2025 ರಂದು ಮೈಸೂರಿನ ಪೊಲೀಸ್ ಠಾಣೆಗೆ ದೂರಿನ ಸಂಖ್ಯೆ 1605036 / 2025ರಂತೆ ದೂರನ್ನು ದಾಖಲಿಸಿರುತ್ತೇನೆ. ಸದರಿ ಕ್ರಯಪತ್ರ ಯಾರಿಗಾದರೂ ದೊರಕಿದಲ್ಲಿ ಈ ಕೆಳಗೆ ನಮೂದಿಸಿರುವ ವಿಳಾಸಕ್ಕೆ ತಲುಪಿಸತಕ್ಕದ್ದು. ಒಂದೊಮ್ಮೆ ಯಾವುದೇ ವ್ಯಕ್ತಿ / ವ್ಯಕ್ತಿಗಳು ಸದರಿ ಕ್ರಯಪತ್ರವನ್ನು ದುರುಪಯೋಗಪಡಿಸಿಕೊಂಡಲ್ಲಿ ಸದರಿ ವ್ಯಕ್ತಿಗಳೇ ಹೊಣೆಗಾರರಾಗುತ್ತಾರೆ. ಹೊರತು ನಾನು ಬಾಧ್ಯನಾಗುವುದಿಲ್ಲ ಎಂದು ಈ ಮೂಲಕ ತಿಳಿಯಪಡಿಸಲಾಗಿದೆ.

ಗಾಯಿತ್ರಿ, ಮೊ. 9902742546
ಸ್ಥಳ: ಮೈಸೂರು, ದಿನಾಂಕ: 12-6-2025

ನಮೂನೆ ಸಂಖ್ಯೆ - ಐಎನ್‌ಸಿ - 25ಎ

ಸಾರ್ವಜನಿಕ ಕಂಪನಿಯನ್ನು ಖಾಸಗಿ ಕಂಪನಿಯಾಗಿ ಪರಿವರ್ತಿಸಲು ನೀಡಬೇಕಾದ ಪತ್ರಿಕಾ ಜಾಹಿರಾತು

ಮಾನ್ಯ ಪ್ರಾದೇಶಿಕ ನಿರ್ದೇಶಕರು, ಆಗ್ನೇಯ ಪ್ರದೇಶ. ಕಾರ್ಪೊರೇಟ್ ವ್ಯವಹಾರಗಳ ಸಚಿವಾಲಯ ಇವರ ಮುಂದೆ

ಕಂಪನಿಗಳ ಕಾಯ್ದೆ, 2013, ಕಲಂ 14 ಕಂಪನಿಗಳ ಕಾಯ್ದೆ, 2013, ಕಂಪನಿಗಳ (ಸಂಯೋಜನೆ) ನಿಯಮಗಳು, 2014, ನಿಯಮ 41ರ ವಿಚಾರದಲ್ಲಿ

ಮತ್ತು

ಮೈಸೂರು - 570 016, ಮೇಟಗಳ್ಳಿ, ಕೆ.ಆರ್.ಎಸ್. ರಸ್ತೆಯಲ್ಲಿ, ನೋಂದಾಯಿತ ಕಛೇರಿ ಹೊಂದಿರುವ ಮೈಸೂರು ಸ್ಟೀಲ್ಸ್ (ನಿಯಮಿತ) ರವರ ವಿಚಾರದಲ್ಲಿ

(ಅರ್ಜಿದಾರರು)

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವುದೇನೆಂದರೆ, ಸದರಿ ಕಂಪನಿಯು ಕಲಂ 14 ಕಂಪನಿಗಳ ಕಾಯ್ದೆ 2013 ಮತ್ತು ಮೇಲೆ ಕಾಣಿಸಿದ ನಿಯಮಗಳಡಿಯಲ್ಲಿ ಕೇಂದ್ರ ಸರ್ಕಾರಕ್ಕೆ ಅರ್ಜಿ ಸಲ್ಲಿಸಿ, ಮಾರ್ಚ್ 29, 2025 ರಂದು ನಡೆದ ವಿಶೇಷ ಸಾಮಾನ್ಯ ಸಭೆಯಲ್ಲಿ ಹೂಡಿಸಿದ ವಿಶೇಷ ನಿರ್ಣಯದಡಿ ಖಾಸಗಿ ಕಂಪನಿಯಾಗಿ ಪರಿವರ್ತನೆಗೊಳ್ಳುವ ಇರಾದೆಯನ್ನು ಹೊಂದಿದ್ದು, ಸದರಿ ಪರಿವರ್ತನೆಗೆ ಕಾರ್ಯರೂಪಕ್ಕೆ ತರಲಿದೆ.


ಸದರಿ ಕಂಪನಿಯ ಉದ್ದೇಶಿತ ಪರಿವರ್ತನೆಯಿಂದ ಯಾರಾದರೂ ವ್ಯಕ್ತಿಯ ಆಸಕ್ತಿಗೆ ದಕ್ಕೆ ಉಂಟು ಆಗುವಲ್ಲಿ, ಅಂತ ವ್ಯಕ್ತಿಗಳು, ತಮ್ಮ ಆಕ್ಷೇಪಣೆಗಳ ವಿವರವನ್ನು ಸೂಕ್ತ ಸಬೂಬುಗಳೊಡನೆ, ಪ್ರಮಾಣ ಪತ್ರದೊಂದಿಗೆ ಲಿಖಿತ ರೂಪದಲ್ಲಿ 'ಪ್ರಾದೇಶಿಕ ನಿರ್ದೇಶಕರು, ದಕ್ಷಿಣ ಪ್ರಾಂತ್ಯ, 3 ನೇ ಮಹಡಿ, ಕಾರ್ಪೊರೇಟ್ ಭವನ್, ಬಂಡ್ಲಾಗುಡ, ನಗೋಳೀ, ತಟ್ಟಿನರಾಂ ಗ್ರಾಮ, ಹಯಾತ್ನಗರ್ಮಂಡಲ್, ರಂಗಾರೆಡ್ಡಿ ಜಿಲ್ಲೆ, ಹೈದೆರಾಬಾದ್ 500 068, ತೆಲಂಗಾಣ' ಕ್ಕೆ ಈ ಪ್ರಕಟಣೆಯ 14 ದಿನಗಳೊಳಗೆ ಸಲ್ಲಿಸತಕ್ಕದ್ದು. ಹಾಗೆಯೇ ಒಂದು ನಕಲನ್ನು ಅರ್ಜಿದಾರ ಕಂಪನಿಯ ಕೆಳಕಂಡ ವಿಳಾಸಕ್ಕೆ ಸಲ್ಲಿಸತಕ್ಕದ್ದು : ಮೈಸೂರ್‌ಸ್ಟೀಲ್ಸ್, ಕೆ. ಆರ್. ಎಸ್. ರಸ್ತೆ, ಮೇಟಗಳ್ಳಿ, ಮೈಸೂರು 570016, ಕರ್ನಾಟಕ

ದಿನಾಂಕ: ಜೂನ್ 11, 2025	ಸಹಿ/–
ಸ್ಥಳ : ಮೈಸೂರು	ರಲ್ಲಪಲ್ಲಿಕರ್ಣಂ ನಾಗಾರ್ಜುನ್
ಇಂದ ಮತ್ತು ಪರವಾಗಿ	ನಿರ್ದೇಶಕರು,
ಮೈಸೂರು ಸ್ಟೀಲ್ಸ್ ಪ್ರೈ ಲಿಮಿಟೆಡ್	ಡಿಐಎನ್‌ಸಂಖ್ಯೆ : 07357814



NOT GETTING YOUR STAR OF MYSORE & ಮೈಸೂರು ಮಿತ್ರ
Call: 98452-96447 / 99003-82840

ಮೊದಲ ವರ್ಷದ ಪುಣ್ಯಸ್ಮರಣೆ



ಗಂಗಾಧರ್.ಕೆ.ಆರ್
ಸದಾ ನಿಮ್ಮ ನೆನಪಿನಲ್ಲಿರುವ
ದುಃಖತಪ್ತರು: ಪತ್ನಿ-ಪುಷ್ಪ.ಕೆ.ಪಿ ಮತ್ತು ಮಕ್ಕಳು

10ನೇ ವರ್ಷದ ಸವಿನೆನಪು



ನೀವು ನಮ್ಮನ್ನಗಲಿ ಇಂದಿಗೆ 10 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ, ತಾಯಿ ನಾಗಮ್ಮ, ತಂದೆ ಎಂ.ಟಿ.ರಾಜು, ತಂಗಿ ಚೈತ್ರ ಆರ್. ಬಾವ ಲೋಕೇಶ್, ಪತ್ನಿ ರೇಖಾ ಹಾಗೂ ಮಕ್ಕಳು ದೀಪು, ಚಂದನ, ಅಕ್ಷತ

R.ಗುರುಪ್ರಸಾದ್
ಮಾಲೀಕರು ಚೈತ್ರ ಲೈಟಿಂಗ್ಸ್ & ಸೌಂಡ್ಸ್, ಯಾದವಗಿರಿ

ಮೈಸೂರು ಮಿತ್ರ 46
ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ವೈಕುಂಠ ಸಮಾರಾಧನೆ ಆಹ್ವಾನ ಪತ್ರಿಕೆ



ಶ್ರೀ ಕೆ. ವಿಷಕಂಠ (ಒಂಟಿಕೊಪ್ಪಲ್)

ನಂ. 2558, 4ನೇ ಮುಖ್ಯ ರಸ್ತೆ, 3ನೇ ತಿರುವು, ವಿ.ವಿ. ಮೊಹಲ್ಲಾ, ಮೈಸೂರು ಇಲ್ಲಿ ವಾಸವಾಗಿರುವ (ಲೇಟ್ ಶ್ರೀಮತಿ ಪುಟ್ಟಮ್ಮ ಮತ್ತು ಲೇಟ್ ಶ್ರೀ ಕಪನಯ್ಯರವರ ಕುಟುಂಬ) ಇವರ ಸೊಸೆ **ಶ್ರೀಮತಿ ಲಲಿತಾ** ಮಾಡುವ ವಿಜ್ಞಾಪನೆಗಳು ತಾ|| 31-05-2025 ಶನಿವಾರ ನನ್ನ ಪೂಜ್ಯ ಪತಿಯವರಾದ

ಶ್ರೀ ಕೆ. ವಿಷಕಂಠ ರವರು (ಒಂಟಿಕೊಪ್ಪಲ್)

ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಇದರ ತತ್ಸಂಬಂಧವಾಗಿ ದಿ|| 12-06-2025ನೇ ಗುರುವಾರ ಬೆಳಗ್ಗೆ 10.00 ಗಂಟೆಗೆ ವೈಕುಂಠ ಸಮಾರಾಧನೆ ಕಾರ್ಯವನ್ನು ಶ್ರೀ ರಾಮ ಕಲ್ಯಾಣ ಮಂದಿರ ಒಂಟಿಕೊಪ್ಪಲ್ (ಚಲುವಾಂಬ ಪಾರ್ಕ್ ಹತ್ತಿರ), ಮೈಸೂರು ಇಲ್ಲಿ ಏರ್ಪಡಿಸಲಾಗಿದೆ. ಆಹ್ವಾನ ಪತ್ರಿಕೆ ತಲುಪದವರು ಇದನ್ನೇ ಆಹ್ವಾನವೆಂದು ತಿಳಿದು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿಸುತ್ತೇವೆ.

ಇಂತಿ ದುಃಖತಪ್ತರು : ಪತ್ನಿ ಶ್ರೀಮತಿ ಲಲಿತಾ ಮತ್ತು ಮಕ್ಕಳಾದ ಮಂಜು, ಭವ್ಯ, ಅಳಿಯಂದಿರು, ಸಹೋದರರಾದ, ಕೆ.ಮಹದೇವಾ ಕೆಇಬಿ
ಪೈ.ಚಿಕ್ಕಪುಟ್ಟಿ, ಮಾಜಿ ಉಪಾಧ್ಯಕ್ಷರು, ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್
ಕೆ.ಮಾದೇಶ್, ಮುಡಾ ಮಾಜಿ ಸದಸ್ಯರು, ಮಾಜಿ ಉಪಾಧ್ಯಕ್ಷರು, ಮೈಸೂರು, ಚಾಮರಾಜನಗರ ಜಿಲ್ಲಾ ಒಕ್ಕಲಿಗರ ಸಂಘ, ಜಿಲ್ಲಾ ಅಧ್ಯಕ್ಷರು, ಕರ್ನಾಟಕ ರಕ್ಷಣಾ ವೇದಿಕೆ
ಸಹೋದರಿಯರು, ಭಾವಂದಿರು, ಮೊಮ್ಮಕ್ಕಳು, ಸೊಸೆಯಂದಿರು ಹಾಗೂ ಕುಟುಂಬವರ್ಗದವರು

ಭೋಜನ : ಮಧ್ಯಾಹ್ನ 12.00 ಗಂಟೆಗೆ

ಭಾರತೀಯ ಭಾಷಾ ಸಂಸ್ಥಾನ
ಉನ್ನತ ಶಿಕ್ಷಣ ಇಲಾಖೆ, ಶಿಕ್ಷಣ ಸಚಿವಾಲಯ, ಭಾರತ ಸರ್ಕಾರ
ಮಾನಸಗಂಗೋತ್ರಿ, ಮೈಸೂರು-570006
भारतीय भाषा संस्थान
उच्चतर शिक्षा विभाग, शिक्षा मंत्रालय, भारत सरकार
मानसगंगोत्री, मैसूरु-570006
CENTRAL INSTITUTE OF INDIAN LANGUAGES
Department of Higher Education, Ministry of Education, Govt. of India
Manasagangotri, Mysuru - 570 006

F.No.46-1/2024-25/Scrap 11.06.2025

ಟೆಂಡರ್ ಪ್ರಕಟಣೆ / निविदा सूचना / TENDER NOTICE

ವಿಷಯ: ಮೈಸೂರಿನ ಭಾರತೀಯ ಭಾಷಾ ಸಂಸ್ಥಾನದ ಆವರಣದಲ್ಲಿರುವ ಸ್ಕ್ರ್ಯಾಪ್ ಸಾಮಗ್ರಿಗಳ ಖರೀದಿಗೆ ಟೆಂಡರ್

विषय : सीआईआईएल, मैसूरु की कबाड़ सामग्री की बिक्री हेतु निविदा।

Sub: Tender for the Purchase of Junk Materials of CIIL, Mysuru

ಭಾರತೀಯ ಭಾಷಾ ಸಂಸ್ಥಾನವು ಎರಡು/ದ್ವಿಮುಖಿ ಬಿಡ್ ವ್ಯವಸ್ಥೆಗಳಡಿಯಲ್ಲಿ (ತಾಂತ್ರಿಕ ಬಿಡ್ ಮತ್ತು ಹಣಕಾಸು ಬಿಡ್) ಪ್ರಸಿದ್ಧ ಸ್ಕ್ರ್ಯಾಪ್ ಸಾಮಗ್ರಿಗಳ ಮಾರಾಟಗಾರರಿಂದ ಮೊಹರು ಮಾಡಲಾದ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ.

ಭಾರತೀಯ ಭಾಷಾ ಸಂಸ್ಥಾನದ ಅಧಿಕೃತ ವೆಬ್‌ಸೈಟ್‌ನಿಂದ ಆಸಕ್ತರು ಟೆಂಡರ್ ದಾಖಲೆಗಳನ್ನು ಪಡೆಯಬಹುದು ಹಾಗೂ ಡೌನ್‌ಲೋಡ್ ಮಾಡಬಹುದು. ಪೂರ್ಣಗೊಂಡ/ಭರ್ತಿ ಮಾಡಿದ ಟೆಂಡರನ್ನು ಸಲ್ಲಿಸಲು 02.07.2025 (ಸಂಜೆ 5:00 ಗಂಟೆ) ಕೊನೆಯ ದಿನಾಂಕವಾಗಿರುತ್ತದೆ. ಸಂಪೂರ್ಣ ನಿಯಮಗಳು ಮತ್ತು ಷರತ್ತುಗಳೊಂದಿಗೆ ಟೆಂಡರ್ ದಾಖಲೆಗಳ ವಿವರಗಳು ಸಂಸ್ಥೆಯ ವೆಬ್‌ಸೈಟ್: www.ciil.org ಮತ್ತು http://eprocureundere-publish ನಲ್ಲಿ ಲಭ್ಯವಿರುತ್ತದೆ.

ಅಧಿಕೃತ ಸಹಿದಾರರು
ಸಹಾಯಕ ನಿರ್ದೇಶಕರು (ಆಡಳಿತ)

भारतीय भाषा संस्थान, मैसूरु द्वारा दो/ द्वैध बोली प्रणाली (तकनीकी बोली एवं वित्तीय बोली) के अंतर्गत कबाड़ समाग्री हेतु प्रतिष्ठित विक्रेताओं से सीलबंद निविदाएँ आमंत्रित की जाती हैं।

इच्छुक जन निविदा दस्तावेजों को भारतीय भाषा संस्थान, मैसूरु की वेबसाइट से डाउनलोड कर सकते हैं। पूर्ण रुपेण भरी हुई निविदा जमा करने की अंतिम तारीख 02.07.2025 को शाम के 05:00 बजे तक है। निविदा दस्तावेजों तथा नियमों एवं शर्तें से संबंधित विस्तृत जानकारी भी संस्थान की वेबसाइटों-www.ciil.org and http://eprocureundere-publish पर उपलब्ध है।

अधिकृत हस्ताक्षरी
सहायक निदेशक (प्रशा.)

The Central Institute of Indian Languages Mysore invites sealed tenders under two/dual bid systems (Technical bid and financial bid) from the reputed Vendors for Scrap Materials.

Interested parties may obtain the tender documents which can be downloaded from the official website of the Central Institute of Indian Languages, Mysore. The last date to submit the completed/filled tender is on **02.07.2025 latest by 5.00 p.m.** Detail of tender documents with complete terms and conditions are also available on Institute Website: **www.ciil.org and http://eprocureundere-publish**

Sd/- Authorised Signatory
Assistant Director (admin)